ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 3 ಸೋಮವಾರ 2025

ಸಂಪುಟ: 46 | ಸಂಚಿಕೆ: 195 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಯಾವಾಗ, ಏನು ಮಾಡಬೇಕೊ ಅದನ್ನು ಹೈಕಮಾಂಡ್ ಮಾಡುತ್ತದೆ

ನವೆಂಬರ್ ಕ್ರಾಂತಿ ಬಗ್ಗೆ ಡಾ.ಮಹದೇವಪ್ಪ ಪ್ರತಿಕ್ರಿಯೆ


ಮೈಸೂರು, ನ.2(ಬಿಎಲ್‌ಯು)– ಯಾವಾಗ, ಏನು ಮಾಡಬೇಕೊ ಅದನ್ನು ಹೈಕಮಾಂಡ್ ಮಾಡುತ್ತದೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪ್ರತಿಕ್ರಿಯಿಸಿದರು.



ಮೈಸೂರು ವಿಶ್ವವಿದ್ಯಾನಿಲಯದ ಓವಲ್ ಮೈದಾನದಲ್ಲಿ ಶನಿವಾರ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ನವೆಂಬರ್ ಕ್ರಾಂತಿಯೂ ಇಲ್ಲ, ಭ್ರಾಂತಿಯೂ ಇಲ್ಲ. ಮುಖ್ಯಮಂತ್ರಿ ಸ್ಥಾನದಲ್ಲಿ ಸಿದ್ದರಾಮಯ್ಯ ಇದ್ದಾರೆ, ಇರುತ್ತಾರೆ. ಆದರೆ ಸಂಪುಟ ಪುನಾರಚನೆಯಾದರೆ ತಮಗೂ ಸಚಿವ ಸ್ಥಾನ ದೊರೆಯುತ್ತದೆ ಎಂದು ಬಹಳಷ್ಟು ಶಾಸಕರು ಆಸೆ ತೋಡಿಕೊಂಡಿದ್ದಾರೆ. ಇದು ತಪ್ಪು ಎಂದು ನಾನು ಹೇಳುವುದಿಲ್ಲ. ಆದರೆ, ಈ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ಸ್ಪಷ್ಟಪಡಿಸಿದರು.

ಸಚಿವ ಸಂಪುಟ ಸಭೆಯಲ್ಲಿ ಇಂಧನ ಸಚಿವ ಕೆ.ಜೆ.ಜಾರ್ಜ್ ಜೊತೆ ಮಾತಿನ ಚಕಮಕಿ ನಡೆಸಿದ ಬಗ್ಗೆ ಪ್ರತಿಕ್ರಿಯೆ ನೀಡಿದ ಡಾ.ಮಹದೇವಪ್ಪ ಅವರು, ಹಲವು ವಿಚಾರಗಳ ಬಗ್ಗೆ ಚರ್ಚೆ ಮಾಡಲೆಂದೆ ಸಂಪುಟ ಸಭೆ ಸೇರಲಾಗುತ್ತದೆ. ಅಂದು ಚರ್ಚೆಯಾಗಿತ್ತೆ ಹೊರತು, ಗಲಾಟೆಯಲ್ಲ. ಒಂದು ವಿಷಯದ ಬಗ್ಗೆ ಚರ್ಚೆ ಮಾಡಿದ್ದೇವೆ. ನಂತರ ಅದಕ್ಕೆ ಪರಿಹಾರ ದೊರೆತ ಹಿನ್ನೆಲೆಯಲ್ಲಿ ಆ ವಿಷಯ ಅಲ್ಲಿಗೆ ಮುಗಿಯಿತು. ನಾಡಗೀತೆಯಲ್ಲಿ ಬೌದ್ಧ ಪದ ಸೇರ್ಪಡೆ ಮಾಡುವಂತೆ ಬೌದ್ಧ ಸಮ್ಮೇಳನ ಆಗ್ರಹ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಈ ವಿಚಾರದ ಬಗ್ಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪರಿಶೀಲನೆ ನಡೆಸುತ್ತಿದೆ ಎಂದರು.

ಅಭಿನಂದನೆ...



ಬೆಂಗಳೂರು ವೈಟ್‌ಫೀಲ್ಡ್‌ನ ಡೀನ್ಸ್ ಸ್ವಿಮ್ ಅಕಾಡೆಮಿಯಲ್ಲಿ ನಡೆದ ರಾಜ್ಯ ಪ್ಯಾರಾ ಈಜು ಚಾಂಪಿಯನ್‌ಶಿಪ್‌ನಲ್ಲಿ ಮೈಸೂರು ವಿವಿ ಈಜುಗಾರ ಕೆ.ಮುಖೇಶ್, 100 ಮೀ. ಫ್ರೀ ಸ್ಟೈಲ್ ಮತ್ತು 100 ಮೀ. ಬಟರ್‌ಫ್ಲೈನಲ್ಲಿ 2 ಚಿನ್ನದ ಪದಕ, 50 ಮೀ ಬ್ಯಾಕ್ ಸ್ಟ್ರೋಕ್‌ನಲ್ಲಿ ಬೆಳ್ಳಿ ಪದಕ ಪಡೆದಿದ್ದಾರೆ. ಇವರನ್ನು ಪ್ರಶಿಕ್ಷಕರಾದ ಮನೋಜ್, ರವೀಶ್ ಅಭಿನಂದಿಸಿದರು.

ಇಂದಿನಿಂದ ರಂಗ ತಂಡಗಳ ಭಿತ್ತಿಚಿತ್ರ ಪ್ರದರ್ಶನ

ಮೈಸೂರು,ನ.2(ಜಿಎ)–ತಾವು ಸಂಗ್ರಹಿಸಿರುವ ರಂಗ ತಂಡಗಳ ಭಿತ್ತಿಚಿತ್ರ ಪ್ರದರ್ಶನವನ್ನು ನ.3ರಿಂದ ನ.9ರವರೆಗೆ ವಿಜಯನಗರ 2ನೇ ಹಂತದ ಶ್ರೀ ಕಲಾನಿಕೇತನ ಮಹಾ ವಿದ್ಯಾಲಯದಲ್ಲಿ ಆಯೋಜಿಸಲಾಗಿದೆ ಎಂದು ಹಿರಿಯ ರಂಗ ಕರ್ಮಿ ರಾಜಶೇಖರ ಕದಂಬ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.3ರಂದು ಬೆಳಗ್ಗೆ 11ಗಂಟೆಗೆ ರಂಗಾಯಣ ಮಾಜಿ ನಿರ್ದೇಶಕ ಡಾ.ಸಿ.ಬಸವಲಿಂಗಯ್ಯ ಪ್ರದರ್ಶನ ಉದ್ಘಾಟಿಸುವರು. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕಲಾನಿಕೇತನದ ಕಾರ್ಯದರ್ಶಿ ಬಾಬುರಾವ್, ಪ್ರಾಂಶುಪಾಲ ಕೆ.ಸಿ.ಮಹದೇವಶೆಟ್ಟಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ಪ್ರದರ್ಶನದಲ್ಲಿ ರಂಗಾಯಣ, ನಟನ, ಕದಂಬ ರಂಗವೇದಿಕೆ, ಸಮತೆಂತೋ, ಕಲಾಸುರುಚಿ, ಅಮರಕಲಾ ಸಂಘ, ಕಲಾಪ್ರಿಯ, ನಿರಂತರ, ರಂಗವಲ್ಲಿ, ಅಪ್ರಮರಂಬೆ, ಪರಿವರ್ತನ ಮೊದಲಾದ 300ಕ್ಕೂ ಹೆಚ್ಚು ರಂಗ ತಂಡ, ಕಂಪನಿಗಳು ತಮ್ಮ ನಾಟಕಗಳಿಗಾಗಿ ಪ್ರದರ್ಶಿಸಿದ, ಸಿದ್ಧಪಡಿಸಿದ ಭಿತ್ತಿಚಿತ್ರಗಳು ಇವಾಗಿವೆ. ಸಾಕಷ್ಟು ಮಂದಿ ಬಳಿ ಇವು ಈಗ ಇಲ್ಲ. ಆದರೆ ತಾವು ಶ್ರಮಪಟ್ಟು ಸಂಗ್ರಹಿಸಿರುವ ಕಾರಣ ಉತ್ತಮ ದಾಖಲೆಗಳಾಗಿವೆ ಎಂದರು. ಗೋಷ್ಠಿಯಲ್ಲಿ ಯು.ಎಸ್.ರಾಮಣ್ಣ, ಅಶ್ವತ್ ಕದಂಬ, ಮದನ್‌ಕುಮಾರ್, ವಸಂತ ಶಾಸ್ತ್ರಿ, ಡಿ.ತಿಪ್ಪಣ್ಣ ಪಾಲ್ ಉಪಸ್ಥಿತರಿದ್ದರು.

ಮೈಸೂರಲ್ಲಿ ತುಳಸಿ ಹಬ್ಬ ಆಚರಣೆ




ಮೈಸೂರು, ನ.2(ಎಂಕೆ)– ಮೈಸೂರಿನ ಇರ್ವಿನ್ ರಸ್ತೆಯಲ್ಲಿರುವ ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ನೂರಾರು ಭಕ್ತಾದಿಗಳ ಸಮ್ಮುಖದಲ್ಲಿ ತುಳಸಿ ಹಬ್ಬ ಆಚರಿಸಲಾಯಿತು.

ಕಾರ್ತಿಕ ಮಾಸದಲ್ಲಿ ಆಚರಿಸುವ ತುಳಸಿ ಹಬ್ಬದ ಹಿನ್ನಲೆ ದೇವಸ್ಥಾನದ ಆವರಣದಲ್ಲಿದ್ದ ತುಳಸಿ ಕಟ್ಟೆಗೆ ಹೂವುಗಳಿಂದ ಅಲಂಕರಿಸಿ, ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ತುಳಸಿ ಗಿಡಗಳನ್ನು ವಿತರಣೆ ಮಾಡಲಾಯಿತು.

ಈ ವೇಳೆ ದೇವಸ್ಥಾನದ ಅರ್ಚಕ ಎಸ್.ಕೃಷ್ಣಮೂರ್ತಿ ಮಾತನಾಡಿ, ತುಳಸಿ ಗಿಡವು ಹಿಂದೂ ಧರ್ಮದ ಅವಿಭಾಜ್ಯವಾಗಿದೆ. ಪ್ರತೀ ಮನೆಯಲ್ಲಿ ತುಳಸಿ ಗಿಡ ಬಳಸಿದರೆ ವಿವಿಧ ಕಾಯಿಲೆಗಳು ಬರುವುದಿಲ್ಲ. ಹಾಗೆಯೇ ತುಳಸಿ ಗಿಡದಿಂದ ಸಾಕಷ್ಟು ಅನುಕೂಲಗಳಿವೆ ಎಂದರು. ಜೆಡಿಎಸ್ ಮುಖಂಡ ಪ್ರಕಾಶ್ ಪ್ರಿಯದರ್ಶನ್, ಜೀವದಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಜಿ.ರಾಘವೇಂದ್ರ, ಎಸ್.ಎನ್.ರಾಜೇಶ್ ಮತ್ತಿತರರಿದ್ದರು.

ನವ ವಿವಾಹಿತೆ ನಾಪತ್ತೆ



ಮೈಸೂರು,ನ.2–ನವ ವಿವಾಹಿತೆ ಕಾಣೆಯಾಗಿರುವ ಬಗ್ಗೆ ಮೇಟಗಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೈಸೂರಿನ ಬೆಲವತ್ತ ಗ್ರಾಮದಲ್ಲಿ ಬಾಡಿಗೆ ಮನೆಯಲ್ಲಿ ವಾಸವಿದ್ದ ವಿಜಯ್ ಕುಮಾರ್ ಎಂಬಾತನೊಂದಿಗೆ ಕೆಲ ತಿಂಗಳ ಹಿಂದೆಯಷ್ಟೇ ಪ್ರೀತಿಸಿ ಮದುವೆಯಾಗಿದ್ದ ಸುಚಿತ್ರ(23), ಅ.9ರಂದು ಮನೆಯಿಂದ ಹೊರಹೋದವರು ಈವರೆಗೆ ವಾಪಸ್ಸಾಗಿಲ್ಲ ಎಂದು ಸುಚಿತ್ರ ಪತಿ ವಿಜಯ್‌ಕುಮಾರ್ ಠಾಣೆಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಕಾಣೆಯಾಗಿರುವ ಸುಚಿತ್ರ ಯಾರಿಗಾದರು ಕಂಡುಬಂದಲ್ಲಿ ಕೂಡಲೇ ಪೊಲೀಸ್ ಠಾಣೆ ದೂ.ಸಂ.0821–2418339/2148315/2148115ಗೆ ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

ನಿಧನ



ಜಯಮ್ಮ

ಮೈಸೂರು, ನ.2– ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಚಿಕ್ಕಯ್ಯನಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಬಂಚಳ್ಳಿ ಹುಂಡಿ ಗ್ರಾಮದ ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ತಾಂಡವಪುರ ಪಿಎಸಿಸಿ ಬ್ಯಾಂಕಿನ ಮಾಜಿ ಅಧ್ಯಕ್ಷ ಬಿ.ಎಂ.ನಾಗರಾಜು(ಧಣಿ) ಅವರ ಅತ್ತಿಗೆ ಜಯಮ್ಮ (74) ಭಾನುವಾರ ನಿಧನರಾದರು.

ಮೃತರು ಪತಿ ಬಸವರಾಜು, ಮೂವರು ಪುತ್ರರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಇವರ ನಿಧನಕ್ಕೆ ಜನಪ್ರತಿನಿಧಿಗಳು, ಗ್ರಾಮದ ಮುಖಂಡರು, ಗ್ರಾಪಂ ಸದಸ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಅಂತ್ಯಕ್ರಿಯೆ ಭಾನುವಾರ ಸಂಜೆ ಅವರ ತೋಟದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಲ್ಲಿ ರಾಷ್ಟ್ರೀಯ ಮಹಿಳಾ ಉಡಾನ್ 2.0 ಸಮಾವೇಶ





ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಜಿತೋ ಮಹಿಳಾ ಘಟಕದಿಂದ ಆಯೋಜಿಸಿರುವ ರಾಷ್ಟ್ರೀಯ ಮಹಿಳಾ ಉಡಾನ್ 2.0 ಸಮಾವೇಶಕ್ಕೆ ನಟರಾದ ಸೋನು ಸೂದ್, ನಟ ಡಾಲಿ ಧನಂಜಯ್, ನಟಿ ಸಪ್ತಮಿಗೌಡ ಚಾಲನೆ ನೀಡಿದರು. ಬಲಚಿತ್ರದಲ್ಲಿ ನಟಿ ಶಿಲ್ಪಶೆಟ್ಟಿ ವಿಶೇಷ ಅತಿಥಿಯಾಗಿ ಪಾಲ್ಗೊಂಡಿರುವುದನ್ನು ಕಾಣಬಹುದು.

ಮೈಸೂರು,ನ.2(ಜಿಎ)–ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಜಿತೋ ಮಹಿಳಾ ಘಟಕದಿಂದ ಆಯೋಜಿಸಿರುವ ಎರಡು ದಿನಗಳ ರಾಷ್ಟ್ರೀಯ ಮಹಿಳಾ ಉಡಾನ್ 2.0 ಸಮಾವೇಶಕ್ಕೆ ನಟರಾದ ಸೋನು ಸೂದ್, ಡಾಲಿ ಧನಂಜಯ್, ನಟಿ ಸಪ್ತಮಿಗೌಡ ಚಾಲನೆ ನೀಡಿದರು.

ನಂತರ ನಟ ಸೋನು ಸೂದ್ ಕೋವಿಡ್ ಸಂದರ್ಭದಲ್ಲಿ ಮಾಡಿದ ಸೇವೆ ಹಾಗೂ ಅವರ ಸಮಾಜಸೇವೆ ಬಗ್ಗೆ ವಿಶೇಷ ಗೋಷ್ಠಿ ನಡೆಸಲಾಯಿತು.

ಈ ವೇಳೆ ಮಾತನಾಡಿದ ಸೋನು ಸೂದ್, ಸಮಾಜಕ್ಕೆ ಏನಾದರೂ ಮಾಡಬೇಕಾದರೆ ರಸ್ತೆಯಲ್ಲಿ ಹೇಗೆ ಸ್ಪೀಡ್ ಬ್ರೇಕರ್ ಬರುತ್ತದೆಯೋ ಹಾಗೇ ಸಾಕಷ್ಟು ಸವಾಲುಗಳು ಎದುರಾಗುತ್ತವೆ. ಅವುಗಳನ್ನು ನಾವು ಎದುರಿಸಬೇಕು ಆಗ ಮಾತ್ರ ಸಮಾಜಕ್ಕೆ ನಾವು ಏನಾದರೂ ಕೊಡಗೆ ನೀಡಬಹುದು ಎಂದರು.

ಜಿತೋ ಕಾರ್ಯಕ್ರಮಗಳಿಗೆ ನಾನು ಸಾಕಷ್ಟು ಭಾರಿ ಭಾಗವಹಿಸಿದ್ದೇನೆ. ಪ್ರತಿ ಬಾರಿಯೂ ಅವರಿಂದ ಕಲಿತುಕೊಂಡಿದ್ದೇನೆ. ಸರ್ಕಾರಗಳು ಕೆಲಸಗಳು ಮಾಡಿಲ್ಲ ಎಂದು ನಾವು ದೂಷಿಸುತ್ತೇವೆ. ಅದರೆ ಜಿತೋ ಜನಪ್ರತಿನಿಧಿಯಂತೆ ಸಮಾಜ ಸೇವೆ ಮಾಡುತ್ತಿದೆ. ಮತ್ತಷ್ಟು ಉತ್ತಮ ಕೆಲಸ ಮಾಡಿಲಿ ಎಂದು ಹಾರೈಸಿದರು.

ಮಹಿಳಾ ಉದ್ಯೋಗಿಗಳಲ್ಲಿ ಪುರುಷರಿಗಿಂತ ಹೆಚ್ಚು ಕ್ರಿಯಾಶೀಲತೆ ಇದ್ದು, ಎಲ್ಲರಿಗೂ ಸ್ಫೂರ್ತಿದಾಯಕರಾಗಿದ್ದಾರೆ. ಅವರೇ ಸಮಾಜದ ನಿಜವಾದ ಹೀರೋಗಳು ಎಂದು ತಿಳಿಸಿದರು.

ಇಂದು (ನ.2) ಬೆಳಗ್ಗೆ ನಡೆದ ಕಾರ್ಯಕ್ರಮದಲ್ಲಿ ನಟಿ ಶಿಲ್ಪಾ ಶೆಟ್ಟಿ ಭಾಗವಹಿಸಿ, ವಿಶೇಷ ಗೋಷ್ಠಿಯಲ್ಲಿ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಆರೋಗ್ಯಕರ ಜೀವನಕ್ಕಾಗಿ ಉತ್ತಮ ಜೀವನ ಶೈಲಿ, ಆಹಾರ ಶೈಲಿ ಅನುಸರಿಸಬೇಕು. ಎಲ್ಲರೂ ಯಾವುದಾರೂ ಒಂದು ವ್ಯಾಯಾಮ ಮಾಡಿ ಎಂದು ಸಲಹೆ ನೀಡಿದರು.

ಯೋಗ, ಧ್ಯಾನದಿಂದ ಜೀವನವನ್ನು ನಿಯಂತ್ರಿಸುತ್ತೇನೆ. ವಾರದ 6 ದಿನ ಶಿಸ್ತಿನಿಂದ ದೇಹವನ್ನು ಕಾಪಾಡಿಕೊಳ್ಳುತ್ತೇನೆ. ಆದರೆ, ಕೊನೆ ದಿನ ಸಂಭ್ರಮದಿಂದ ಕಳೆಯುತ್ತೇನೆ. ಹೀಗೆ ನೀವು ಉತ್ತಮ ಜೀವನ ಶೈಲಿಯನ್ನು ರೂಢಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಸಮಾವೇಶದ ಆವರಣದಲ್ಲಿ ವಸ್ತ್ರ, ಆಭರಣ, ಗೃಹೋಪಯೋಗಿ ವಸ್ತು, ಚಿನ್ನಾಭರಣ, ಮಕ್ಕಳ ಆಟಿಕೆ, ಸ್ಟೇಷನರಿ ವಸ್ತುಗಳು, ತಿಂಡಿ–ತಿನಿಸು ಸೇರಿದಂತೆ 150ಕ್ಕೂ ಹೆಚ್ಚು ವಿವಿಧ ಮಳಿಗೆಗಳು ಎಲ್ಲರನ್ನು ಆಕರ್ಷಿಸಿತು. ವಿಶೇಷ ಗೋಷ್ಠಿಗಳು, ಸಂಗೀತ ಕಾರ್ಯಕ್ರಮ ಮತ್ತು ಮ್ಯಾಜಿಕ್ ಶೋನಿಂದ ಸಮ್ಮೇಳನ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಜಿತೋ ಮೈಸೂರು ಮಹಿಳಾ ವಿಭಾಗದ ಅಧ್ಯಕ್ಷೆ ಮೋನಾ ಭತೇಮ್, ಕಾರ್ಯದರ್ಶಿ ರಜಿನಿ ದಗಲಿಯ, ಜಿತೋ ಕೆಜಿಜಿ ವಲಯದ ಅಧ್ಯಕ್ಷ ಪ್ರವೀಣ್ ಬ್ರಿಫಿ, ಕಾರ್ಯದರ್ಶಿ ದಿಲೀಪ್ ಜೈನ್, ಸಂಚಾಲಕಿ ಪಿಂಕಿ ಜೈನ್, ಜಿತೋ ಮೈಸೂರು ಘಟಕದ ಅಧ್ಯಕ್ಷ ವಿನೋದ್ ಬಾಳ್ತಿವಾಳ್, ಕಾರ್ಯದರ್ಶಿ ಗೌತಮ್ ಸಲೇಚಾ, ಜಿತೋ ಮೈಸೂರು ಯುವ ವಿಭಾಗದ ಕಾರ್ಯದರ್ಶಿ ಸಿದ್ಧರಾಜ್ ಜುಗಾಪುಣೆ, ಇತರರು ಉಪಸ್ಥಿತರಿದ್ದರು.



ವಿಕಲಚೇತನರಿಗೆ ಸಾಧನಾ ಸಲಕರಣೆಗಳ ವಿತರಣೆ

ತಾಮರ ಇನ್ಸಿಟ್ಯೂಷನ್ ಆಫ್ ಎಜುಕೇಶನ್ ಅಂಡ್ ವಾಲೆಂಟರಿ ಸರ್ವಿಸ್ ಟ್ರಸ್ಟ್ ವತಿಯಿಂದ ಹಲವಾರು ವಿಕಲಚೇತನರಿಗೆ ಸಾಧನಾ ಸಲಕರಣೆಗಳ ವಿತರಣೆಯನ್ನು ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು ಹಾಗೂ ಮೈಸೂರು ಜಿಲ್ಲಾ ವಿಕಲಚೇತನ ಸಂಘಟನೆ ಅಧ್ಯಕ್ಷ ದೀಕ್ಷಿತ್ ಅವರು ವಿತರಿಸಿದರು. ಈ ಸಂದರ್ಭದಲ್ಲಿ ಟ್ರಸ್ಟ್‌ನ ವ್ಯವಸ್ಥಾಪಕ ನಿರ್ದೇಶಕರಾದ ಅರ್ಜುನ್, ರಾಚುಯ್ಯ, ಸಂಸ್ಥಾಪಕರಾದ ಮಂದಣ್ಣ ಕೆಬಿ, ಸಹ ಸಂಸ್ಥಾಪಕರಾದ ಶ್ರೀಮತಿ ಅಶೀಕ್, ಗೋಲ್ಡ್ ಸುರೇಶ್ ಚಂಗಪ್ಪ ಇನ್ನಿತರರು ಉಪಸ್ಥಿತರಿದ್ದರು

ಹೆಚ್‌ಆರ್ಸ್ ಸ್ವಚ್ಛ ಮೈಸೂರು ಮಿಷನ್ ಅಭಿಯಾನಕ್ಕೆ ಚಾಲನೆ



'ಹೆಚ್‌ಆರ್ಸ್ ಸ್ವಚ್ಛ ಮೈಸೂರು ಮಿಷನ್–2025' ಅಭಿಯಾನಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಚಾಲನೆ ನೀಡಿದರು.

ಮೈಸೂರು,ನ.2(ಎಂಕೆ)–ಮೈಸೂರನ್ನು ಮತ್ತೊಮ್ಮೆ ದೇಶದ ಸ್ವಚ್ಛ ನಗರ ವನ್ನಾಗಿಸುವ ಗುರಿ ನಮ್ಮೆಲ್ಲರದ್ದಾಗಿದ್ದು, ಈ ನಿಟ್ಟಿನಲ್ಲಿ ನಗರಪಾಲಿಕೆಯೊಂದಿಗೆ ವಿವಿಧ ಸಂಘ–ಸಂಸ್ಥೆಗಳು ಕೈಜೋಡಿಸುವಂತೆ ಶಾಸಕ ಟಿ.ಎಸ್.ಶ್ರೀವತ್ಸ ಕರೆ ನೀಡಿದರು.

ಮೈಸೂರು ಅರಮನೆ ಉತ್ತರದ್ವಾರದಲ್ಲಿ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ನಗರಪಾಲಿಕೆ ಸಹಯೋಗದೊಂದಿಗೆ ಸಿಹೆಚ್‌ಆರ್‌ಓ ವೇದಿಕೆ, ಎನ್‌ಐಪಿಎಂ ಮೈಸೂರು ಚಾಪ್ಟರ್, ಎಡಿನ್ ಫೌಂಡೇಶನ್, ಅಪೋಲೊ ಆಸ್ಪತ್ರೆ ಎನ್‌ಐಇ ಕಾಲೇಜು ವತಿಯಿಂದ ಆಯೋಜಿಸಿದ್ದ 'ಹೆಚ್‌ಆರ್ಸ್ ಸ್ವಚ್ಛ ಮೈಸೂರು ಮಿಷನ್–2025' ಅಭಿಯಾನಕ್ಕೆ ಚಾಲನೆ ನೀಡಿ ಮಾತ ನಾಡಿದ ಅವರು, ದೇಶದ ಸ್ವಚ್ಛ ನಗರಗಳ ಸಾಲಿನಲ್ಲಿ ಸಾಂಸ್ಕೃತಿಕ ನಗರಿ ಮೈಸೂರು ಮತ್ತೊಮ್ಮೆ ಮೊದಲ ಸ್ಥಾನ ಪಡೆಯಬೇಕು. ಈ ನಿಟ್ಟಿನಲ್ಲಿ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಬಳಿಕ ಅರಮನೆಯ ಬಲರಾಮ ಗೇಟ್, ಕೆ.ಆರ್.ವೃತ್ತ, ಡಾ.ರಾಜ್‌ಕುಮಾರ್ ಪಾರ್ಕ್, ಡಾ.ವಿಷ್ಣುವರ್ಧನ್ ಪಾರ್ಕ್‌ನ ಸುತ್ತಲು ಕಸ ಬಿಸಾಡುವ ಸ್ಥಳಗಳನ್ನು ಗುರ್ತಿಸಿ, ಸ್ವಚ್ಛಗೊಳಿಸಲಾಯಿತು. ಸ್ವಚ್ಛ ಮತ್ತು ಆರೋಗ್ಯ ಮೈಸೂರು ನಿರ್ಮಾಣಕ್ಕೆ ವಿವಿಧ ಸಂಸ್ಥೆಗಳ ಮುಖ್ಯಸ್ಥರು, 250ಕ್ಕೂ ಹೆಚ್ಚು ಮಂದಿ ಸ್ವಯಂ ಸೇವಕರು ಅಭಿಯಾನದಲ್ಲಿ ಭಾಗವಹಿಸಿದ್ದರು. ಅಪೋಲೋ ಆಸ್ಪತ್ರೆ ಘಟಕದ ಮುಖ್ಯಸ್ಥ ಎನ್.ಜಿ.ಭರತೀಶ್‌ರೆಡ್ಡಿ, ಎನ್‌ಐಇ ಕಾಲೇಜು ಉಪಪ್ರಾಂಶುಪಾಲ ಡಾ.ಕೆ.ಸಿ.ಮಂಜುನಾಥ್, ಮೈಸೂರು ಸಿಎಚ್‌ಆರ್‌ಒ ವೇದಿಕೆ ಅಧ್ಯಕ್ಷ ಬಿ.ಎಂ.ಗೌತಮ್, ಎನ್‌ಐಪಿಎಂ ಮೈಸೂರು ಚಾಪ್ಟರ್ ಕಾರ್ಯದರ್ಶಿ ಎನ್.ದೇವರಾಜ, ಎನ್.ಕಿರಣ್ ಕುಮಾರ್, ರಶ್ಮಿ ಶರ್ಮಾ, ಕುಶಾಲ್ ರಾವ್, ಬಿಂದು, ಹರ್ಷಿತ್ ದಿವಾಕರ್ ಆರ್ಯನ್, ಹರ್ಷಿತಾ, ಕುಮಾರ್, ಆರ್.ನಿತೇಶ್, ಸಾಗರ್, ಶರತ್ ಚಂದ್ರ, ಡಿ.ರಾಘವೇಂದ್ರ, ಜನವಿ, ಅಕ್ಷತಾ, ಸುವರ್ಷಗೌಡ, ದಿವ್ಯಾ ಮತ್ತಿತರರಿದ್ದರು.

ನ.8ಕ್ಕೆ ರೋಟರಿ ರಸಪ್ರಶ್ನೆ ಸ್ಪರ್ಧೆ

ಮೈಸೂರು,ನ.2(ಎಂಟಿವೈ)–ಮೈಸೂರಿನ ರೋಟರಿ ಸಭಾಂಗಣದಲ್ಲಿ ನ.8ರಂದು ಮಧ್ಯಾಹ್ನ 2 ಗಂಟೆಗೆ ಮಕ್ಕಳಿಗಾಗಿ ದೇಶದ ಪರಂಪರೆ ಮತ್ತು ಮೈಸೂರು ದಸರಾ ಸಂಪ್ರದಾಯ ಸೇರಿದಂತೆ ನಾಡಿನ ಕಲೆ ಸಂಸ್ಕೃತಿ ಕುರಿತ ರೋಟರಿ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ ಎಂದು ರೋಟರಿ ಮೈಸೂರು ಚಿಲ್ಡ್ರನ್ಸ್ ಲೈಬ್ರರಿ ಸಂಸ್ಥೆಯ ಅಧ್ಯಕ್ಷ ಮುಬೀನ್ ಸೇಠ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೋಟರಿ ಮೈಸೂರು ಚಿಲ್ಡ್ರನ್ಸ್ ಲೈಬ್ರರಿ ವತಿಯಿಂದ ರಸಪ್ರಶ್ನೆ ಆಯೋಜಿಸಲಾಗಿದೆ. ಸ್ಪರ್ಧೆ ಅಂಗವಾಗಿ ನ.5ರಂದು ಸಂಜೆ 6ರಿಂದ 7 ಗಂಟೆಯೊಳಗೆ ಆನ್‌ಲೈನ್ ಮೂಲಕ ಮೊದಲ ಹಾಗೂ ಎರಡನೇ ಸುತ್ತಿನ ಸ್ಪರ್ಧೆ ನಡೆಯಲಿದೆ. ಇದರಲ್ಲಿ ಆಯ್ಕೆಯಾದವರು ನ.8ರಂದು ಮಧ್ಯಾಹ್ನ 2ಕ್ಕೆ ರೋಟರಿ ಸಭಾಂಗಣದಲ್ಲಿ ನಡೆಯುವ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದಾಗಿದೆ. ಮೊದಲನೆ ಬಹುಮಾನ 10 ಸಾವಿರ ರೂ., 2ನೇ ಬಹುಮಾನ 8 ಸಾವಿರ ರೂ., 3ನೇ ಬಹುಮಾನವಾಗಿ 6 ಸಾವಿರ ರೂ. ನೀಡಲಾಗುವುದು. ಮಾಹಿತಿಗೆ ಮೊ.ಸಂಖ್ಯೆ 99868 59236 ಅನ್ನು ಸಂಪರ್ಕಿಸಬಹುದಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ರೋಟರಿ ಮೈಸೂರು ಚಿಲ್ಡ್ರನ್ಸ್ ಲೈಬ್ರರಿ ಸಂಸ್ಥೆಯ ರೂಪಾ ಮತ್ತು ವೆಂಕಟೇಶ್ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

3.11.2025 ಸೋಮವಾರ, ಮಳೆ ನಕ್ಷತ್ರ: ಸ್ವಾತಿ 24.10.2025ರಿಂದ 05.11.2025
ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಶುಕ್ಲ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಉಭಾ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಶ್ರೀ ವೀರಭದ್ರೇಶ್ವರ ಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ ಟ್ರಸ್ಟ್:** ಬೆಳಗ್ಗೆ 7 ಗಂಟೆಗೆ ಏಕಾದಶಿವಾರ ರುದ್ರಾಭಿಷೇಕ, ಶ್ರೀ ವೀರಭದ್ರೇಶ್ವರ ಹಾಗೂ ಶ್ರೀ ಚಾಮರಾಜೇಶ್ವರ ಸ್ವಾಮಿಗೆ ತೈಲಾಭಿಷೇಕ, ಪಂಚಾಮೃತ ಅಭಿಷೇಕ, ಮಹಾ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ, ಮಧ್ಯಾಹ್ನ 12 ಗಂಟೆಗೆ ಪ್ರಾಕಾರೋತ್ಸವ, ಪ್ರಸಾದ ವಿನಿಯೋಗ, ಸಂಜೆ 7 ಗಂಟೆಗೆ ಪ್ರಮುಖ ರಾಜಬೀದಿಗಳಲ್ಲಿ ಉತ್ಸವ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ. ಬನುಮಯ್ಯ ರಸ್ತೆ, ಕೆ.ಆರ್. ಮೊಹಲ್ಲಾ.

■ **ಶ್ರೀ ಶ್ರೀ ಆವನಿ ಶೃಂಗೇರಿ ಜಗದ್ಗುರು ಶಂಕರಾಚಾರ್ಯ ಮಹಾಸಂಸ್ಥಾನಂ (ಶ್ರೀ ಆವನಿ ಶೃಂಗೇರಿ ಮಠ, ಮೈಸೂರು ಶಾಖೆ):** ಶ್ರೀ ವಿಶ್ವಾವಸು ನಾಮಸಂವತ್ಸರ–2025, ಕಾರ್ತಿಕ ಮಾಸದ ವಿಶೇಷ ಪೂಜೆ, ಬೆಳಗ್ಗೆ 8ಕ್ಕೆ ಮಹಾಸಂಕಲ್ಪ, ಅಭಿಷೇಕ, ವಿಶೇಷ ಪೂಜೆ, ಮಹಾಮಂಗಳಾರತಿ, ಸಂಜೆ 6.30ಕ್ಕೆ ದೇವರಾಜ ಸರ್ಕಾರಿ ಕಾಲೇಜಿನ ನಿವೃತ್ತ ಉಪನ್ಯಾಸಕರಾದ ಡಾ. ವಿ. ಶ್ರೀಮತಿ ಅವರಿಂದ ಉಪನ್ಯಾಸ, ವಿಷಯ: 'ಕಾರ್ತಿಕ ಮಹಾತ್ಮೆ' ರಾತ್ರಿ 8.15ಕ್ಕೆ ದೀಪಾರಾಧನೆ, ಮಹಾಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ಮಠದ ಆವರಣ, ವಿದ್ಯಾರಣ್ಯಪುರಂ.


■ **ದಿ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯಗಳ ಅಂತರ ಕಾಲೇಜು:** ಮೈಸೂರು ವಿಭಾಗದ ಪುರುಷರ ಬ್ಯಾಸ್ಕೆಟ್‌ಬಾಲ್ ಪಂದ್ಯಾವಳಿ, ಸ್ಥಳ: ಎನ್‌ಐಇ ಡೈಮಂಡ್ ಜುಬಿಲಿ ಒಳಾಂಗಣ ಕ್ರೀಡಾ ಸಂಕೀರ್ಣ, ಮಾನಂದವಾಡಿ ರಸ್ತೆ, ಬೆಳಗ್ಗೆ 9.30ಕ್ಕೆ.

■ **ಶ್ರೀ ಮಲೆಮಹದೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್:** 48ನೇ ವರ್ಷದ ಕಾರ್ತಿಕ ಮಾಸದ ಶ್ರೀ ಮಲೆಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ, 27ನೇ ವರ್ಷದ ಮಹಾಕುಂಭಾಭಿಷೇಕ, 11ನೇ ವರ್ಷದ ಹಾಲರವಿ ಉತ್ಸವ, ಬೆಳಗ್ಗೆ 6 ಗಂಟೆಗೆ ಶ್ರೀ ಸ್ವಾಮಿಯವರಿಗೆ ಮಹಾರುದ್ರಾಭಿಷೇಕ, ವಿಶೇಷ ಪೂಜೆ, ಬೆಳಗ್ಗೆ 10 ಗಂಟೆಗೆ ರಾಜ ಬೀದಿಗಳಲ್ಲಿ ಮೆರವಣಿಗೆ, ಡೊಳ್ಳು ಕುಣಿತ, ಗೊರವರ ಕುಣಿತ, ಸ್ಥಳ: ದೇವಸ್ಥಾನದ ಪ್ರಾಂಗಣ, ಗರಡಿಕೇರಿ, ಲಷ್ಕರ್ ಮೊಹಲ್ಲಾ.

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಗರ್ಭ ಸಂಸ್ಕಾರ, ಒಣ ಕಣ್ಣಿನ ಆರೋಗ್ಯ ಶಿಬಿರ ಮತ್ತು ತಪಾಸಣೆ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ–ಮುನಿರಾಜ ರೆಂಜಾಳ, 6.15–ಗೀತಾರಾಧನ, 6.35 ಮತ್ತು ಸಂಜೆ 6.10: ಸಸ್ಯ ಸಿರಿ ಮನೆಯಂಗಳದಲ್ಲಿರುವ ಔಷಧೀಯ ಸಸ್ಯಗಳು, ಪ್ರಸ್ತುತಿ: ಡಾ.ಟಿ.ಶಿವಕುಮಾರ್ 6.40–ಅರಿವಿನ ಶಿಖರ, ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಜಿ.ಪುಷ್ಪಲತಾ, ವ್ಯಾಖ್ಯಾನ–ಡಾ.ಜ್ಯೋತಿ ಶಂಕರ್, 6.50–ರೈತರಿಗೆ ಸಲಹೆ, 7.15–ಭಾವಗೀತೆಗಳು, 7.45–ಚಿತ್ರಗೀತೆಗಳು, 8.30–ಚಿತ್ರಗೀತೆಗಳು, 9.10–ನೆನಪಿನಂಗಳ –ಧ್ವನಿ ಮುದ್ರಣ ಭಂಡಾರದಿಂದ ಆಯ್ದ ಕಾರ್ಯಕ್ರಮ, ಚಲನಚಿತ್ರಾಂಗದ ಭೀಷ್ಮ ಜಿ.ವಿ.ಅಯ್ಯರ್ ಅವರೊಂದಿಗೆ ಎಂ.ಶಂಕರಪ್ಪ ಹಾಗೂ ಜಯಶ್ರೀ ಶಾನಭಾಗ್ ಅವರು ನಡೆಸಿದ್ದ ಸಂವಾದ. 10.00–ಕರ್ನಾಟಕ ಶಾಸ್ತ್ರೀಯ ಸಂಗೀತ–ಅರುಣಾ ಸಾಯಿರಾಂ–ಹಾಡುಗಾರಿಕೆ, 10.30–ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಗೇಮ್ ಷೋ, ಪ್ರಸ್ತುತಿ: ದಿಗ್ವಿಜಯ್.ಬಿ, **ಮಧ್ಯಾಹ್ನ** 12.05 ವನಿತಾ ವಿಹಾರ–ಕನ್ನಡ ನಾಡು ನುಡಿ ಈ ಕುರಿತು ಧಾರವಾಡದ ಮೈತ್ರಿ ಮಹಿಳಾ ಮಂಡಳದ ಸದಸ್ಯೆಯರಿಂದ ಕಾರ್ಯಕ್ರಮ ವೈವಿಧ್ಯ ಪ್ರಸ್ತುತಿ: ಮಂಜುಳಾ ಪುರಾಣಿಕ. 12.35–ದೇವರನಾಮ, 12.45 ನಮ್ಮ ಆರೋಗ್ಯ–ರಾಷ್ಟ್ರೀಯ ಕ್ಯಾನ್ಸರ್ ಜಾಗೃತಿ ದಿನಾಚರಣೆಯ ಸಂಬಂಧವಾಗಿ ವಿಶೇಷ ಕಾರ್ಯಕ್ರಮ, ಕ್ಯಾನ್ಸರ್ ಲಕ್ಷಣಗಳು ಮತ್ತು ಚಿಕಿತ್ಸೆ ಕುರಿತು ಮೈಸೂರಿನ ಕನ್ಸಲ್ಟೆಂಟ್ ಸರ್ಜಿಕಲ್ ಆಂಕಾಲಜಿಸ್ಟ್ ಡಾ.ಗಿರೀಶ್.ಎಂ.ಎಸ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ, 1.00–ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ–ಪ್ರಧಾನಮಂತ್ರಿಗಳ ಕೌಶಲ್ಯ ವಿಕಾಸ್ ಯೋಜನೆ, 1.20–ಭಾವಗೀತೆಗಳು, 2.30–ಪ್ರದೇಶ ಸಮಾಚಾರ, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಆಲತ್ತೂರ್ ಸಹೋದರರ ಹಾಡುಗಾರಿಕೆ, 4.00 ಮಹಿಳಾರಂಗ –ನನ್ನ ಹಕ್ಕು ನನ್ನ ಜವಾಬ್ದಾರಿ–ಮಹಿಳಾ ಕಾನೂನು ಜಾಗೃತಿ ಕಾರ್ಯಕ್ರಮ, ಭಾಗವಹಿಸುತ್ತಾರೆ–ಮಹಿಳಾ ಮತ್ತು ಮಕ್ಕಳ ಹಕ್ಕುಗಳ ವಕೀಲರಾದ ಅಂಜಲಿ ರಾಮಣ್ಣ. ಪ್ರಸ್ತುತಿ: ಸಹನಾ, 4.30–ಹಿಂದಿ ಚಿತ್ರಗೀತೆಗಳು, 4.45–ಹಿಂದಿ ಪಾಠ, 5.00–ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ: ಕೃಷಿ ದೀವಿಗೆ ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ ಕುರಿತ ಬಾನುಲಿ ಸರಣಿ ಕಾರ್ಯಕ್ರಮ. ಕೃಷಿಯಲ್ಲಿ ಯಾಂತ್ರೀಕರಣದ ಪ್ರಾಮುಖ್ಯತೆ ಕುರಿತು ಸಂವಾದ. ಭಾಗವಹಿಸುತ್ತಾರೆ –ಮಂಡ್ಯದ ವಿ.ಸಿ.ಫಾರಂ ಕೃಷಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ.ಪಿ.ಪ್ರವೀಣ್ ಮತ್ತು ವಲಯ ಕೃಷಿ ಸಂಶೋಧನಾ ಕೇಂದ್ರದ ಸಹಪ್ರಾಧ್ಯಾಪಕರಾದ ಡಾ.ಎಂ.ಎಸ್.ಶ್ರೀದೇವಿ, ಪ್ರಸ್ತುತಿ–ಎನ್.ಕೇಶವಮೂರ್ತಿ, 7.45–ಕನ್ನಡ ಚಿತ್ರಗೀತೆಗಳು, 8.00–ಯುವವಾಣಿ: ಮೈಸೂರಿನ ಸವಿಗಾನ ಸಂಗೀತ ಶಾಲೆಯ ವಿದ್ಯಾರ್ಥಿಗಳಿಂದ ಕನ್ನಡ ರಾಜ್ಯೋತ್ಸವ ಕುರಿತ ಕಾರ್ಯಕ್ರಮ. 8.30–ಹಿಂದಿ ಚಿತ್ರಗೀತೆಗಳು, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ಎ.ವಿ. ಪ್ರಕಾಶ್ –ವೇಣುವಾದನ, 10.00 ನಿನಾದ : ವೈಣಿಕ ವಾಗ್ಗೇಯ ವಾಹಿನಿ. 10.30 ಸವಿನೆನಪು.

■ **ಕದಂಬ ರಂಗವೇದಿಕೆ, ಮೈಸೂರು, ಶ್ರೀ ಕಲಾನಿಕೇತನ ದೃಶ್ಯಕಲಾ ಮಹಾ ವಿದ್ಯಾಲಯ:** ಹಿರಿಯ ರಂಗಕರ್ಮಿ ರಾಜಶೇಖರ ಕದಂಬ ಸಂಗ್ರಹಿಸಿರುವ ಮೈಸೂರು ರಂಗ ತಂಡಗಳ ಭಿತ್ತಿಪತ್ರಗಳ ಪ್ರದರ್ಶನ, ಕದಂಬ ರಂಗವೇದಿಕೆ ಇಣುಕು ನೋಟ, ಉದ್ಘಾಟನೆ: ರಂಗಾಯಣ ಮಾಜಿ ನಿರ್ದೇಶಕ ಡಾ.ಸಿ.ಬಸವಲಿಂಗಯ್ಯ, ಸ್ಥಳ: ಶ್ರೀ ಕಲಾನಿಕೇತನ ದೃಶ್ಯಕಲಾ ಮಹಾವಿದ್ಯಾಲಯ, ವಿಜಯನಗರ 2ನೇ ಹಂತ, ಬೆಳಗ್ಗೆ 11ಕ್ಕೆ

■ **ಭಾರತೀಯ ಸ್ಟೇಟ್ ಬ್ಯಾಂಕ್, ಮೈಸೂರು ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್:** ಹಣಕಾಸು ವಲಯದಲ್ಲಿ ಕ್ಲೈಮ್ ಸ್ವತ್ತುಗಳ ತ್ವರಿತ ಮತ್ತು ದಕ್ಷ ಇತ್ಯರ್ಥಕ್ಕಾಗಿ ಅಭಿಯಾನ, ಸ್ಥಳ: ಜಿಪಂ ಸಭಾಂಗಣ, ಬೆಳಗ್ಗೆ 11ಕ್ಕೆ

■ **ಶ್ರೀ ಸಂಗಮೇಶ್ವರ ದೇವಸ್ಥಾನ, ಹೊಸಮಠ, ಮೈಸೂರು:** ಕಾರ್ತಿಕ ಮಾಸ–ಸೋಮವಾರಗಳಂದು ವಿಶೇಷ ಪೂಜಾ ಮಹೋತ್ಸವ, ಶರಣ ಚಿಂತನೆ, ದಿವ್ಯ ಸಾನ್ನಿಧ್ಯ: ಶ್ರೀ ಕುದೇರುಮಠದ ಶ್ರೀ ಗುರುಶಾಂತಸ್ವಾಮೀಜಿ, ಉದ್ಘಾಟನೆ: ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಪ್ರೊ.ಉಷಾದೇವಿ, ಅಕ್ಕನ ಆಧ್ಯಾತ್ಮ ಚಿಂತನೆ ಕುರಿತು ಉಪನ್ಯಾಸ, ಸ್ಥಳ: ನಟರಾಜ ಸಭಾಂಗಣ, ಶ್ರೀ ಹೊಸಮಠ, ಉಪನ್ಯಾಸ: ಸಂಜೆ 7ಕ್ಕೆ, ಮಹಾಪ್ರಸಾದ ರಾತ್ರಿ 8ಕ್ಕೆ.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ನವೆಂಬರ್ 3 ಸೋಮವಾರ 2025



ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 195 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಭಾರತ ವನಿತೆಯರಿಗೆ ಚೊಚ್ಚಲ ಐಸಿಸಿ ವಿಶ್ವಕಪ್ ಕಿರೀಟ

ನವಿ ಮುಂಬೈ, ನ.2(ಏಜೆನ್ಸಿ)– ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಪಂದ್ಯಾವಳಿಯಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಮಣಿಸಿದ ಭಾರತ ಚೊಚ್ಚಲ ಪ್ರಶಸ್ತಿ ಮುಡಿಗೇರಿಸಿಕೊಂಡಿತು. ಆ ಮೂಲಕ ಹರ್ಮನ್ ಪ್ರೀತ್ ನೇತೃತ್ವದ ಮಹಿಳಾ ತಂಡ ಮೊದಲ ಐಸಿಸಿ ಟ್ರೋಫಿಗೆ ಮುತ್ತಿಕ್ಕಿತು.

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಣ ಮಹಿಳಾ ಏಕದಿನ ವಿಶ್ವಕಪ್ ಫೈನಲ್ಸ್ ಪಂದ್ಯದ ರೋಚಕ ಹಣಾಹಣಿಗೆ ವೇದಿಕೆಯಾಗಿದ್ದ ಇಲ್ಲಿನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಪಂದ್ಯದಲ್ಲಿ ಸಂಘಟಿತ ಬ್ಯಾಟಿಂಗ್ ಮತ್ತು ಬಿಗಿ ಬೌಲಿಂಗ್ ದಾಳಿ ನಡೆಸಿದ ಭಾರತ, ದಕ್ಷಿಣ ಆಫ್ರಿಕಾ ತಂಡವನ್ನು 52 ರನ್‌ಗಳಿಂದ ಮಣಿಸಿ, ಚಾಂಪಿಯನ್ ಆಗಿ ಹೊರಹೊಮ್ಮಿತು. ಇತ್ತ ಭಾರತ ವಿರುದ್ಧ ಸೋತ ದ.ಆಫ್ರಿಕಾ ರನ್ನರ್‌ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು.



ಸರಣಿ ಶ್ರೇಷ್ಠ: ದೀಪ್ತಿ ಶರ್ಮಾ



ಫೈನಲ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತಕ್ಕೆ ಉತ್ತಮ ಆರಂಭ ಸಿಕ್ಕಿತು. ಭಾರತ ತಂಡದ ಯುವ ಪ್ರತಿಭೆ ಶಫಾಲಿ ವರ್ಮಾ ಅವರ ಅಮೋಘ ಅರ್ಧ ಶತಕದಾಟ ತಂಡದ ಮೊತ್ತ ಹೆಚ್ಚಿಸುವಲ್ಲಿ ಸಫಲವಾಯಿತು. ಮೊದಲ ವಿಕೆಟ್‌ಗೆ ಆರಂಭಿಕರಾದ ಸ್ಮೃತಿ ಹಾಗೂ ಶಫಾಲಿ 105 ರನ್‌ಗಳ ಜತೆಯಾಟ ನೀಡಿದರು. ಈ ವೇಳೆ ಸ್ಮೃತಿ 45 ರನ್ ಬಾರಿಸಿ ಔಟಾಗುವ ಮೂಲಕ ಈ ಜೊತೆಯಾಟ ಮುರಿದು ಬಿತ್ತು. ಸೆಮಿಫೈನಲ್‌ನಲ್ಲಿ ಶತಕ ಬಾರಿಸಿದ್ದ ಜೆಮಿಮಾ ರೊಡ್ರಿಗಸ್, ಫೈನಲ್ ಪಂದ್ಯದಲ್ಲಿ 24 ರನ್ ಕಲೆ ಹಾಕಲಷ್ಟೇ ಶಕ್ತರಾದರು. ಸಫಾಲಿ ವರ್ಮಾ 78 ಎಸೆತಗಳಲ್ಲಿ 7 ಬೌಂಡರಿ, 2 ಸಿಕ್ಸರ್ ಸಹಿತ 87 ರನ್ ಗಳಿಸಿ ಔಟಾದರು.



ಪಂದ್ಯ ಶ್ರೇಷ್ಠ: ಶಫಾಲಿ ವರ್ಮಾ

ಉಳಿದಂತೆ ನಾಯಕಿ ಹರ್ಮನ್‌ಪ್ರೀತ್ ಕೌರ್ 20 ರನ್ ಗಳಿಸಿ ಔಟಾದರು. ಅಮಂಜೋತ್ ಕೌರ್ 12 ರನ್‌ಗಳಿಗೆ ಸುಸ್ತಾದರು. ಕೊನೆಯಲ್ಲಿ ಅಬ್ಬರಿಸಿದ ದೀಪ್ತಿ ಶರ್ಮಾ 58 ಎಸೆತಗಳಲ್ಲಿ 58 ರನ್ ಗಳಿಸಿ ಅರ್ಧ ಶತಕ ಬಾರಿಸಿದರು. ಇವರಿಗೆ ಸಾಥ್ ನೀಡಿದ ರಿಚಾ ಘೋಷ್ 24 ಎಸೆತಗಳಲ್ಲಿ 34 ರನ್‌ಗಳ ಬಿರುಗಾಳಿಯ ಇನ್ನಿಂಗ್ಸ್ ಆಡಿದರು. ರಾಧಾ ಯಾದವ್ ಔಟಾಗದೇ 3 ರನ್ ಗಳಿಸಿದರು. ಆ ಮೂಲಕ ಭಾರತ 50 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 298 ರನ್ ಗಳಿಸಿತು. ದಕ್ಷಿಣ ಆಫ್ರಿಕಾ ಪರ ■ 6ನೇ ಪುಟಕ್ಕೆ

ನಾಯಕತ್ವ ಬದಲಾವಣೆ ಬಗ್ಗೆ ನಾನು, ಸಿಎಂ ಮಾತಿನಂತೆ ನಡೆದುಕೊಳ್ಳುತ್ತೇವೆ

ಪವರ್ ಶೇರಿಂಗ್ ಸುಳಿವು ಕೊಟ್ಟ ಡಿಸಿಎಂ ಡಿಕೆಶಿ

ನಮ್ಮಿಬ್ಬರ ಬಿಟ್ಟು ಬೇರೆಯವರು ಮಾತನಾಡಿದರೆ ಅದಕ್ಕೆ ಬೆಲೆ ಇಲ್ಲ

ಬೆಂಗಳೂರು, ನ.2– ನಾನು ಮತ್ತು ಸಿಎಂ ಏನು ಮಾತನಾಡಿಕೊಂಡಿದ್ದೇವೆಯೋ ಅದರಂತೆ ನಡೆದುಕೊಳ್ಳುತ್ತೇವೆ. ನಾಯಕತ್ವ ಬದಲಾವಣೆ ವಿಚಾರವಾಗಿ ಯಾರು ದಣಿವಾಗುವುದು ಬೇಡ. ಕ್ರಾಂತಿ ಬಗ್ಗೆ ತಾವು ಹಾಗೂ ಸಿಎಂ ಮಾತಾಡಿದರಷ್ಟೇ ಅಧಿಕೃತ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುಡುಗಿದ್ದಾರೆ.



ಡಿಕೆಶಿ ಅವರ ಈ ಸಂದೇಶವೂ ಪವರ್ ಶೇರಿಂಗ್ ಬಗ್ಗೆ ಮಹತ್ವದ ಸುಳಿವು ಕೊಟ್ಟ ಹಾಗಿದೆ. ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಚಾರ ಸಾಕಷ್ಟು ಚರ್ಚೆಗೆ ಎಡೆಮಾಡಿಕೊಟ್ಟಿದೆ. ಕಳೆದ ಕೆಲ ದಿನಗಳಿಂದ ಸಚಿವರು, ಶಾಸಕರು ಹಲವು ರೀತಿಯಲ್ಲಿ ಹೇಳಿಕೆ ಕೊಡುತ್ತಿದ್ದಾರೆ. ಪಕ್ಷದ ನಾಯಕತ್ವ ಬಗ್ಗೆ ಹೇಳಿಕೆ ಕೊಡುತ್ತಿರುವವರಿಗೆ ಡಿಸಿಎಂ ಡಿಕೆಶಿ ವಾರ್ನಿಂಗ್ ಕೊಟ್ಟಿದ್ದಾರೆ.

ಡಿಕೆಶಿ ಅವರ ಈ ಹೇಳಿಕೆ ಈಗ ಸದ್ದು ಮಾಡುತ್ತಿದೆ. ಹೇಳಿಕೆ ವೀರರಿಗೆ ವಾರ್ನ್ ಮಾಡಲು ಹೋಗಿ ಡಿಕೆಶಿ ಅಧಿಕಾರ ಒಪ್ಪಂದದ ಬಗ್ಗೆ ಮಹತ್ವದ ಸುಳಿವು ಬಿಟ್ಟುಕೊಟ್ಟಿದ್ದಾರೆ ಎಂದ ರಾಜಕೀಯ ಪಂಡಿತರು ವಿಶ್ಲೇಷಿಸಿದ್ದಾರೆ. ಈ ನಡುವೆ ಕಾಂಗ್ರೆಸ್‌ನಲ್ಲಿ ಬೆಳವಣಿಗೆ ಚುರುಕು ಪಡೆದುಕೊಂಡಿದೆ. ನಾಯಕರ ದೆಹಲಿ ಭೇಟಿ ಪರ್ವ ಮುಂದುವರೆದಿದೆ. ಡಿಕೆಶಿ, ಕೃಷ್ಣಬೈರೇಗೌಡ, ದಿನೇಶ್ ಗುಂಡೂರಾವ್ ದೆಹಲಿ ಭೇಟಿ ಬೆನ್ನಲ್ಲೇ ಸಚಿವ ಸತೀಶ್ ಜಾರಕಿಹೊಳಿಯವರೂ ದೆಹಲಿ ಫ್ಲೈಟ್ ಹತ್ತುತ್ತಿದ್ದಾರೆ.

ನಾಳೆ ಬೆಳಗ್ಗೆ ದೆಹಲಿಗೆ ತೆರಳಲಿರುವ ಸತೀಶ್ ಜಾರಕಿಹೊಳಿ, ಮಲ್ಲಿಕಾರ್ಜುನ ಖರ್ಗೆಯವರನ್ನು ಭೇಟಿ ಮಾಡಲಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಸ್ಥಾನದ ಬದಲಾವಣೆ, ಪಕ್ಷದ ವಿದ್ಯಮಾನಗಳ ಕುರಿತು ಅವರು ಖರ್ಗೆಯವರ ಜೊತೆ ಚರ್ಚೆ ಮಾಡಲಿದ್ದಾರೆ ಎನ್ನಲಾಗಿದೆ. ಸತೀಶ್ ಜಾರಕಿಹೊಳಿ ತಮ್ಮೊದಿಗೆ ಕೆಲ ಆಪ್ತಶಾಸಕರು, ಮಾಜಿ ಶಾಸಕರನ್ನೂ ಕರೆದೊಯ್ಯುತ್ತಿರೋದು ಕುತೂಹಲ ಮೂಡಿಸಿದೆ. ■ 6ನೇ ಪುಟಕ್ಕೆ

ಟ್ರೇಡಿಂಗ್‌ನಲ್ಲಿ ಅಧಿಕ ಲಾಭದ ಆಸೆ ತೋರಿಸಿ

125 ಮಂದಿಗೆ ಸುಮಾರು 80 ಕೋಟಿ ರೂ. ಪಂಗನಾಮ

ಮೈಸೂರು, ನ.2(ಆರ್‌ಕೆ)– ಷೇರು ಮಾರುಕಟ್ಟೆ ಟ್ರೇಡಿಂಗ್‌ನಲ್ಲಿ ಅಧಿಕ ಲಾಭಾಂಶ ಕೊಡಿಸುತ್ತೇವೆಂದು ಆಸೆ ತೋರಿಸಿ ಮೈಸೂರಿನ ಸುಮಾರು 125 ಕ್ಕೂ ಹೆಚ್ಚು ಅಮಾಯಕರಿಂದ 80 ಕೋಟಿಗೂ ಅಧಿಕ ಹಣ ಪಡೆದು ಪಂಗನಾಮ ಹಾಕಿರುವ ಪ್ರಕರಣ ಇದೀಗ ತಡವಾಗಿ ಬೆಳಕಿಗೆ ಬಂದಿದೆ.

ಮೂಲತಃ ಬೆಂಗಳೂರಿನ ಅಪಾರ್ಟ್‌ಮೆಂಟ್ ಒಂದರ ನಿವಾಸಿಯಾದ ಎಸ್. ಶೃತಿ, ಮೈಸೂರಿನ ಕೃಷ್ಣಮೂರ್ತಿಪುರಂ ನಿವಾಸಿಯಾದ ಪುರೋಹಿತ ರಾಮಚಂದ್ರ ಹೆಗಡೆ ಹಾಗೂ ಬಲ್ಲಾಳ ಸರ್ಕಲ್ ಬಳಿಯ ನಿವಾಸಿ ರಾಜಕುಮಾರ್ ಟ್ರೇಡಿಂಗ್ ನೆಪದಲ್ಲಿ ಕೋಟ್ಯಾಂತರ ರೂ. ವಂಚಿಸಿರುವ ಆರೋಪಿಗಳು. ಪ್ರಕರಣ ದಾಖಲಿಸಿಕೊಂಡಿರುವ ಮೈಸೂರು ಜಿಲ್ಲಾ ಸೆನ್ ಠಾಣೆ ಇನ್ಸ್‌ಪೆಕ್ಟರ್ ಸುನಿಲ್ ಅವರು ಶೃತಿ ಮತ್ತು ರಾಮಚಂದ್ರ ಹೆಗಡೆಯನ್ನು ಬಂಧಿಸಿದ್ದರಾದರೂ ಅವರು ಜಾಮೀನಿನ ಮೇಲೆ ಹೊರಗೆ ಬಂದಿದ್ದರೆ, ಮತ್ತೋರ್ವ ಆರೋಪಿ ರಾಜಕುಮಾರ್ ನಿರೀಕ್ಷಣಾ ಜಾಮೀನು ಪಡೆದಿದ್ದಾರೆ.

ಹೂಟಗಳ್ಳಿಯಲ್ಲಿ ಕಛೇರಿಯೊಂದನ್ನು ತೆರೆದಿದ್ದ ಶೃತಿ ಮತ್ತು ಇತರರು ಅಮಾಯಕರನ್ನು ಸಂಪರ್ಕಿಸಿ, ತಾವು ಷೇರು ಮಾರ್ಕೆಟಿಂಗ್‌ನಲ್ಲಿ ಅಧಿಕ ಲಾಭ ಪಡೆಯುತ್ತಿದ್ದು, ಧಿಡೀರ್ ಶ್ರೀಮಂತರಾಗಿದ್ದೇವೆ. ನೀವು ಸಹ ಹಣ ತೊಡಗಿಸಿದ್ದಲ್ಲಿ

ಮಹಿಳೆ ಸೇರಿ ಮೂವರ ಬಂಧನ, ಜಾಮೀನಿನ ಮೇಲೆ ಬಿಡುಗಡೆ

> ಟ್ರೇಡಿಂಗ್‌ನಲ್ಲಿ ಲಾಭಾಂಶ ಕೊಡಿಸುವ ಆಮಿಷವೊಡ್ಡಿ ಮೈಸೂರು ಮತ್ತು ಸುತ್ತಮುತ್ತಲಿನ ಹಲವರಿಂದ ಕೋಟ್ಯಾಂತರ ರೂ. ಪಡೆದು ವಂಚಿಸಿರುವ ಪ್ರಕರಣ ಸಂಬಂಧ ಸೆನ್ ಠಾಣೆ ಪೋಲಿಸರು ಆರೋಪಿಗಳನ್ನು ಬಂಧಿಸಿ, ತನಿಖೆ ನಡೆಸುತ್ತಿದ್ದಾರೆ. ಸಾರ್ವಜನಿಕರು ಆನ್‌ಲೈನ್ ವಂಚನೆ ಬಗ್ಗೆ ಎಚ್ಚರಿಕೆಯಿಂದಿರುವುದು ಒಳಿತು.?
>
> 
>
> -ಎನ್. ವಿಷ್ಣುವರ್ಧನ, ಮೈಸೂರು ಎಸ್ಪಿ.

ನಿಮ್ಮ ನಿರೀಕ್ಷೆಗೂ ಮೀರಿ ಲಾಭಾಂಶ ಬರುತ್ತದೆ ಎಂದು ಆಸೆ ತೋರಿಸಿ, ಮೈಸೂರು, ಮಂಡ್ಯ, ಚನ್ನಪಟ್ಟಣ, ಚಾಮರಾಜನಗರ, ಚಿಕ್ಕಮಂಗಳೂರು, ಹಾಸನ ಹಾಗೂ ಬೆಂಗಳೂರು ಸೇರಿದಂತೆ ವಿವಿಧೆಡೆಯ 125ಕ್ಕೂ ಹೆಚ್ಚು ಮಂದಿ ಲಾಭದ ಆಸೆಗಾಗಿ ಇವರಲ್ಲಿ ಹಣ ತೊಡಗಿಸಿದ್ದಾರೆ.

ಅವರು ಹಣ ಪಡೆದು ಪ್ರತಿಯಾಗಿ ಬ್ಯಾಂಕ್ ಚೆಕ್ ಹಾಗೂ ಪ್ರೊನೋಟ್ ಅನ್ನು ನೀಡಿದ್ದಾರೆ. ಅದರೆ, ತದನಂತರ ಲಾಭಾಂಶದ ಹಣ ಕೊಡಲು ಹಿಂದೇಟು ಹಾಕಿದಾಗ ಮೋಸ ಹೋಗಿರುವುದು ದೃಢಪಟ್ಟ ಹಿನ್ನೆಲೆಯಲ್ಲಿ ಕೆಲವರು ಡಿಐಜಿ ಡಾ. ಬೋರಲಿಂಗಯ್ಯ ಅವರನ್ನು ಭೇಟಿ ಮಾಡಿ ಮೋಸ ಹೋದ ಬಗ್ಗೆ ವಿವರಿಸಿದರು. ತಕ್ಷಣ ಅವರು ಅಗತ್ಯ ಕ್ರಮ ಕೈಗೊಳ್ಳುವಂತೆ ಎಸ್ಪಿ ಎನ್. ವಿಷ್ಣುವರ್ಧನ್ ಅವರಿಗೆ ನಿರ್ದೇಶನ ನೀಡಿದರು.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ವಿಷ್ಣುವರ್ಧನ್ ಅವರು ಜಿಲ್ಲಾ ಸೆನ್ ಠಾಣೆ ಪೋಲೀಸರಿಗೆ ದೂರು ಪಡೆದುಕೊಂಡು ತನಿಖೆ ನಡೆಸುವಂತೆ ಸೂಚಿಸಿದ್ದ ಹಿನ್ನೆಲೆಯಲ್ಲಿ ಇನ್ಸ್‌ಪೆಕ್ಟರ್ ಸುನಿಲ್ ಅವರು ವಂಚನೆ ಪ್ರಕರಣ ದಾಖಲಿಸಿಕೊಂಡು ಆರೋಪಿತರಾದ ಶೃತಿಯನ್ನು ಬೆಂಗಳೂರಿನ ಅಪಾರ್ಟಮೆಂಟ್‌ವೊಂದರಲ್ಲಿ ಬಂಧಿಸಿ ಕರೆ ತಂದರು.

ಸೆನ್ ಠಾಣೆಯಲ್ಲಿ ಆರೋಪಿಯನ್ನು ವಿಚಾರಣೆಗೊಳಪಡಿಸಿದಾಗ ಆಕೆಯೊಂದಿಗೆ ರಾಮಚಂದ್ರ ಹೆಗಡೆ ಮತ್ತು ರಾಜಕುಮಾರ್ ಸಹ ಸೇರಿಕೊಂಡು ಹಣ ವಸೂಲಿ ಮಾಡಿರುವುದು ತಿಳಿಯಿತು. ತಕ್ಷಣ ಕಾರ್ಯನಿರತರಾದ ಪೊಲೀಸರು ರಾಮಚಂದ್ರ ಹೆಗಡೆಯನ್ನು ಬಂಧಿಸಿದರು. ಆತನಿಗೆ ನಿನ್ನೆಯಷ್ಟೇ ನ್ಯಾಯಾಲಯದಿಂದ ಜಾಮೀನು ಮಂಜೂರಾಗಿದ್ದು, ಶೃತಿ ಕಳೆದ ಒಂದು ತಿಂಗಳ ಹಿಂದೆಯೇ ಜಾಮೀನು ಪಡೆದಿದ್ದಾರೆಂದು ■ 6ನೇ ಪುಟಕ್ಕೆ

ಆಂಧ್ರ ದೇಗುಲದಲ್ಲಿ ಕಾಲ್ತುಳಿತಕ್ಕೆ 10 ಸಾವು


ಶ್ರೀಕಾಕುಳಂ, ನ.2– ದೇಶದಲ್ಲಿ ಮತ್ತೊಂದು ಕಾಲ್ತುಳಿತ ಪ್ರಕರಣ ವರದಿಯಾಗಿದ್ದು, ಆಂಧ್ರಪ್ರದೇಶದ ದೇಗುಲದಲ್ಲಿ ಕಾಲ್ತುಳಿತ ಸಂಭವಿಸಿ 10 ಮಂದಿ ಸಾವಿಗೀಡಾಗಿದ್ದಾರೆ.

ಆಂಧ್ರ ಪ್ರದೇಶದ ಶ್ರೀಕಾಕುಳಂನಲ್ಲಿರುವ ಕಾಶಿಬುಗ್ಗ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಕಾಲ್ತುಳಿತ ಸಂಭವಿಸಿದ್ದು ದುರಂತದಲ್ಲಿ 10 ಮಂದಿ ಭಕ್ತರು ಸಾವನ್ನಪ್ಪಿ, 20ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.

ಕಾರ್ತಿಕ ಮಾಸದ ಏಕಾದಶಿ ಶನಿವಾರ ಬಂದಿದ್ದರಿಂದ, ದೇವರ ದರ್ಶನ ಪಡೆಯಲು ಹೆಚ್ಚಿನ ಸಂಖ್ಯೆಯ ಭಕ್ತರು ಸೇರಿದ್ದರು. ಈ ಸಮಯದಲ್ಲಿ, ಜನಸಂದಣಿ ಹೆಚ್ಚಾದ ಕಾರಣ ಕಾಲ್ತುಳಿತ ಇದ್ದಕ್ಕಿದ್ದಂತೆ ■ 6ನೇ ಪುಟಕ್ಕೆ

ನಂಜನಗೂಡಲ್ಲಿ ಬೈಕಿಗೆ ಸಾರಿಗೆ ಬಸ್ ಡಿಕ್ಕಿ; ತಂದೆ–ತಾಯಿ, ಮಗ ಸಾವು

ಶ್ರೀ ಕಂಠೇಶ್ವರ ದರ್ಶನಕ್ಕೆ ತೆರಳುತ್ತಿದ್ದ ವೇಳೆ ದುರಂತ



ನಂಜನಗೂಡು, ನ.2– ಕೆಎಸ್‌ಆರ್‌ಟಿಸಿ ಬಸ್ಸೊಂದು ಬೈಕಿಗೆ ಹಿಂದಿನಿಂದ ಡಿಕ್ಕಿ ಹೊಡೆದ ಪರಿಣಾಮ ತಂದೆ–ತಾಯಿ, ಮಗ ಸೇರಿದಂತೆ ಮೂವರು ಸಾವನ್ನಪ್ಪಿರುವ ಧಾರುಣ ದುರಂತ ಪಟ್ಟಣದ ಚಾಮುಂಡಿ ಟೌನ್‌ಶಿಪ್ ಬಳಿ ಸಂಭವಿಸಿದೆ

ಮೈಸೂರಿನ ಕುಂಬಾರಕೊಪ್ಪಲು ಬಡಾವಣೆಯಲ್ಲಿ ವಾಸವಾಗಿರುವ ಚಾಮರಾಜನಗರ ತಾಲೂಕಿನ ಉದ್ದನೂರು ಗ್ರಾಮದ ನಿವಾಸಿ ಶಿವಮೂರ್ತಿ (51), ಅವರ ಪತ್ನಿ ಚೆನ್ನಾಜಮ್ಮ (46) ಹಾಗೂ ಪುತ್ರ ಸಿದ್ದಾರ್ಥ (15) ಮೃತ ದುರ್ದೈವಿಗಳು. ಬಣ್ಣ ಹೊಡೆಯುವ ಕೆಲಸ ಮಾಡಿಕೊಂಡಿದ್ದ ಶಿವಮೂರ್ತಿ, ಭಾನುವಾರ ■ 6ನೇ ಪುಟಕ್ಕೆ

ಇಸ್ರೊ ಚಾರಿತ್ರಿಕ ಸಾಧನೆ; ಕಕ್ಷೆ ಸೇರಿದ 4.4 ಟನ್ ಭಾರದ ಉಪಗ್ರಹ

ಶ್ರೀಹರಿಕೋಟ (ಆಂಧ್ರ ಪ್ರದೇಶ), ನ.2– 4.4 ಟನ್ ಭಾರದ ಸಂವಹನ ಉಪ ಗ್ರಹ 'ಸಿಎಂಎಸ್–03' ಇಂದು (ಭಾನುವಾರ) ಸಂಜೆ ನಿಗದಿತ ಕಕ್ಷೆ ಸೇರಿತು ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೊ) ಪ್ರಕಟಿಸಿದೆ.

ಈ ರಾಕೆಟ್ ಅನ್ನು 'ಬಾಹುಬಲಿ' ಎಂದೂ ಕರೆಯಲಾಗುತ್ತಿದ್ದು, ಬಾಹ್ಯಾಕಾಶ ಕ್ಷೇತ್ರದಲ್ಲಿ ಇಸ್ರೊ ಚಾರಿತ್ರಿಕ ಸಾಧನೆ ಮಾಡಿದೆ. ಶ್ರೀಹರಿಕೋಟದಲ್ಲಿರುವ ಉಡ್ಡಯನ ಕೇಂದ್ರದಿಂದ ಇಂದು (ಭಾನುವಾರ) ಸಂಜೆ 5.26ಕ್ಕೆ ಈ ಉಪಗ್ರಹವನ್ನು ಹೊತ್ತ ■ 6ನೇ ಪುಟಕ್ಕೆ

ಬಟ್ಟೆ ತೊಳೆಯಲು ನಾಲೆಗೆ ಹೋಗಿದ್ದ ಮೈಸೂರಿನ ನಾಲ್ವರು ವಿದ್ಯಾರ್ಥಿನಿಯರು ನೀರು ಪಾಲು

ಮಂಡ್ಯ, ನ.2– ಬಟ್ಟೆ ಮತ್ತು ಪಾತ್ರೆ ತೊಳೆಯಲು ನಾಲೆಗೆ ಹೋಗಿದ್ದ 15 ಮಂದಿ ವಿದ್ಯಾರ್ಥಿಗಳ ಪೈಕಿ ನಾಲ್ವರು ನೀರು ಪಾಲಾದ ಘಟನೆ ಶ್ರೀರಂಗಪಟ್ಟಣ ತಾಲೂಕಿನ ಮಹದೇವಪುರ ಬೋರೆ ಗ್ರಾಮದ ರಾಮಸ್ವಾಮಿ ನಾಲೆ ಬಳಿ ಕಳೆದ ಶನಿವಾರ ಸಂಜೆ ಸಂಭವಿಸಿದೆ.

ಮಂಡ್ಯ ಜಿಲ್ಲೆಯಲ್ಲಿ ಮತ್ತೊಂದು ನಾಲಾ ದುರಂತ

ಮೈಸೂರಿನ ಉದಯಗಿರಿಯ ಹಜಿರ ನಿಶ್ವಾನ್ ಅರೇಬಿಕ್ ಶಾಲೆಯಲ್ಲಿ ಓದುತ್ತಿದ್ದ 15 ಮಂದಿ ವಿದ್ಯಾರ್ಥಿಗಳು ಹಾಗೂ ಇತರೆ ನಾಲ್ವರು ಟಾಟಾ ಏಸ್‌ನಲ್ಲಿ ಬಟ್ಟೆ ಮತ್ತು ಪಾತ್ರೆಗಳನ್ನು ತೊಳೆಯಲು ಮಹದೇವಪುರ ಬಳಿಯ ರಾಮಸ್ವಾಮಿ ನಾಲೆಗೆ ಆಗಮಿಸಿದ್ದಾರೆ.

ನಾಲೆಯಲ್ಲಿ ಪಾತ್ರೆಗಳನ್ನು ನೀರಿನಲ್ಲಿ ಮುಳುಗಿಸಿ ತೆಗೆಯುವಾಗ, ಒಬ್ಬ ವಿದ್ಯಾರ್ಥಿನಿ ನೀರಿನಲ್ಲಿ ಕೊಚ್ಚಿ ಹೋಗಿದ್ದಾಳೆ. ಆಕೆಯನ್ನು ರಕ್ಷಿಸಲು ಹೋದ ಇತರ ಐವರೂ ಕೊಚ್ಚಿಹೋಗಿದ್ದು, ಸ್ಥಳದಲ್ಲಿದ್ದ ಸಾರ್ವಜನಿಕರು ಮೂವರನ್ನು ರಕ್ಷಿಸಿದ್ದಾರೆ. ಈ ಪೈಕಿ ಆಯೆಷಾ (13) ಸೇರಿದಂತೆ ಮೂವರನ್ನು ಮೈಸೂರಿನ ಕೆ.ಆರ್. ಆಸ್ಪತ್ರೆಗೆ ದಾಖಲು ■ 6ನೇ ಪುಟಕ್ಕೆ

ಟ್ರೇಲರ್‌ಗೆ ಪ್ರವಾಸಿ ಬಸ್ ಡಿಕ್ಕಿ: 18 ಭಕ್ತರ ದುರ್ಮರಣ

ರಾಜಸ್ಥಾನದಲ್ಲಿ ದುರಂತ

ಜೈಪುರ: ನಿಂತಿದ್ದ ಟ್ರೇಲರ್‌ಗೆ ಪ್ರವಾಸಿ ಬಸ್ ಡಿಕ್ಕಿ ಹೊಡೆದು 18 ಭಕ್ತರು ಸಾವನ್ನಪ್ಪಿರುವ ಘಟನೆ ರಾಜಸ್ಥಾನದಲ್ಲಿ ನಡೆದಿದೆ. ಘಟನೆಯಲ್ಲಿ ಮೂವರು ಗಾಯಗೊಂಡಿದ್ದಾರೆಂದು ಪೊಲೀಸರು ತಿಳಿಸಿದ್ದಾರೆ.

ಬಿಕಾನೇರ್‌ನ ಕೊಲಾಯತ್ ದೇವಸ್ಥಾನಕ್ಕೆ ಭೇಟಿ ನೀಡಿದ್ದ ಭಕ್ತರು ಜೋಧ್‌ಪುರದ ಸೂರ್‌ಸಾಗರ್‌ನಿಂದ ಹಿಂದಿರುತ್ತಿದ್ದರು. ಈ ವೇಳೆ ರಾಜಧಾನಿ ಜೈಪುರದಿಂದ ಸುಮಾರು 400 ಕಿಮೀ ದೂರದಲ್ಲಿರುವ ಫಲೋಡಿ ಜಿಲ್ಲೆಯಲ್ಲಿ ಭೀಕರ ಅಪಘಾತ ನಡೆದಿದೆ. ಘಟನೆ ತಿಳಿದು ರಾಜಸ್ಥಾನ ಸಿಎಂ ಭಜನ್ ಲಾಲ್ ಶರ್ಮಾ ಸಂತಾಪ ಸೂಚಿಸಿದ್ದಾರೆ. ■ 6ನೇ ಪುಟಕ್ಕೆ

ಮಂಡಕಳ್ಳಿ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಕಾಮಗಾರಿ ಶೀಘ್ರ ಆರಂಭ

- ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾಹಿತಿ
- ವಿಮಾನ ನಿಲ್ದಾಣದ ಕೆಳಗೆ ಸುರಂಗ ಮಾರ್ಗ ನಿರ್ಮಾಣ
- ಹೈಪವರ್ ವಿದ್ಯುತ್ ಲೈನ್, ಕಾಲುವೆಗಳ ಸ್ಥಳಾಂತರ

ಮೈಸೂರು, ನ.2(ಜಿಎ)– ಮಂಡಕಳ್ಳಿ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆಗೆ ಪೂರಕವಾಗಿ ಆಗಬೇಕಾಗಿರುವ ಸ್ಥಳಾಂತರ ಕಾಮಗಾರಿಗಳನ್ನು ಶೀಘ್ರವೇ ಪ್ರಾರಂಭಿಸಲಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದರು.

ಮೈಸೂರಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರನ್ ವೇ ವಿಸ್ತರಣೆಗಾಗಿ 280 ಎಕರೆ ಭೂಮಿ ಅಗತ್ಯವಾಗಿತ್ತು. ಇದರಲ್ಲಿ 240 ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡು ಸಂಬಂಧಪಟ್ಟ ರೈತರಿಗೆ ಪೂರ್ಣ ಪ್ರಮಾಣದ ಪರಿಹಾರವನ್ನು ನೀಡಲಾಗಿದೆ. ಉಳಿದ 40 ಎಕರೆ ಜಮೀನು ಸ್ವಾಧೀನಕ್ಕೆ ರೈತರೊಂದಿಗೆ ಮಾತುಕತೆ ನಡೆಲಾಗಿದೆ. ಅವರು ಕೂಡ ಜಮೀನು ನೀಡಲು ಒಪ್ಪಿಕೊಂಡಿದ್ದಾರೆ. ಆದರೆ ಪರಿಹಾರದ ಮೊತ್ತವನ್ನು ನ್ಯಾಯಾಲಯದಲ್ಲಿ ಜಮೆ ಮಾಡಬೇಕು ಎಂದು ಬೇಡಿಕೆ ಇಟ್ಟಿದ್ದಾರೆ. ಅದರಂತೆ ಇನ್ನೊಂದು ವಾರದಲ್ಲಿ ಪರಿಹಾರದ ಹಣವನ್ನು ಜಮೆ ಮಾಡಲಾಗುತ್ತದೆ ಎಂದು ತಿಳಿಸಿದರು.

ರನ್ ವೇ ವಿಸ್ತರಣೆ ಮಾಡುವ ಪ್ರದೇಶದಲ್ಲಿ ಹೈ ಪವರ್ ವಿದ್ಯುತ್ ಲೈನ್ ಹಾದು ಹೋಗಿದೆ. 3 ಕಾಲುವೆಗಳು ಇವೆ. ಹೀಗಾಗಿ ಇವುಗಳನ್ನು ಸ್ಥಳಾಂತರ ಮಾಡುವ ಹಾಗೂ ವಿನ್ಯಾಸವನ್ನು ಬದಲಾವಣೆ ಮಾಡುವ ಕಾರ್ಯ ಕೈಗೊಳ್ಳಲು ಸಂಬಂಧಿಸಿದ ಸಣ್ಣ ನೀರಾವರಿ ಇಲಾಖೆ ಹಾಗೂ ಕೆಪಿಟಿಸಿಎಲ್‌ಗೆ ಅಗತ್ಯ ಹಣವನ್ನು ರಾಜ್ಯ ಸರಕಾರ ನೀಡಿದೆ. ಕೆಲವೇ ದಿನಗಳಲ್ಲಿ ಈ ಕಾರ್ಯ ಆರಂಭವಾಗಲಿದೆ ಎಂದರು.



ಮೈಸೂರಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಶನಿವಾರ ಸಭೆ ನಡೆಸಿದರು.

ರನ್ ವೇ ವಿಸ್ತರಣೆಯಾಗಲು ಮೈಸೂರು–ನಂಜನಗೂಡು ಹೆದ್ದಾರಿಯ ಮಾರ್ಗವನ್ನು ಬದಲಾಯಿಸಬೇಕಾಗುತ್ತದೆ. ಇದು ಸುಮಾರು 7 ಕಿಲೋಮೀಟರ್ ಬಳಸಿಕೊಂಡು ಮತ್ತೆ ಹೆದ್ದಾರಿಗೆ ಸೇರಬೇಕಾಗುತ್ತದೆ. ಆದ್ದರಿಂದ ಅಧಿಕಾರಿಗಳು ವಿಮಾನ ನಿಲ್ದಾಣದ ಜಾಗದಲ್ಲಿ 3 ಕಿಲೋ ಮೀಟರ್ ಸುರಂಗ ಮಾರ್ಗ ನಿರ್ಮಾಣ ಮಾಡಬಹುದು ಎಂದು ಸಲಹೆ ನೀಡಿದ್ದಾರೆ. ಈ ಹಿಂದೆ ಸುರಕ್ಷಾ ದೃಷ್ಟಿಯಿಂದ ವಿಮಾನ ನಿಲ್ದಾಣದ ಕೆಳಗೆ ಸುರಂಗ ಮಾರ್ಗ ನಿರ್ಮಾಣ ಮಾಡಲು ಅನುಮತಿ ದೊರೆಯುತ್ತಿರಲಿಲ್ಲ. ಈಗ ಸಕ್ಷಮ ಪ್ರಾಧಿಕಾರದವರೂ ಒಪ್ಪಿಕೊಂಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳ ಜತೆ ಮಾತನಾಡಿ ಅಂತಿಮಗೊಳಿಸಲಿದ್ದಾರೆ ಎಂದರು. ಒಂದು ವೇಳೆ ಸುರಂಗ ನಿರ್ಮಾಣ ಮಾಡಿದರೆ ಅಲ್ಲಿ ಹಾದು ಹೋಗಿರುವ ನೀರಾವರಿ ಕಾಲುವೆಗಳಿಗೆ ಯಾವುದೇ ರೀತಿ ಅಡ್ಡಿಯಾಗದಂತೆ ಎಚ್ಚರಿಕೆ ವಹಿಸಿ ಯೋಜನಾ ವಿನ್ಯಾಸ ಸಿದ್ಧಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆಯಾದರೇ ಕಾರ್ಗೋ ಸೇವೆ ನೀಡಬಹುದು. ಏವಿಯೇಷನ್ ತರಬೇತಿಗೂ ಅನುಕೂಲವಾಗುತ್ತದೆ ಐಟಿ, ಬಿಟಿ ಕಂಪನಿಗಳಿಗೆ ಉದ್ಯಮ ಸ್ಥಾಪನೆಗೆ ಬಹಳ ಅನುಕೂಲವಾಗಲಿದೆ ಎಂದರು. ■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ವಕೀಲ : ಕೊಲೆಯಾದ ರಾತ್ರಿ ನಿಮ್ಮ ಗಂಡ ಹೇಳಿದ ಕೊನೆಯ ಮಾತು?
ಹೆಂಡತಿ : ನನ್ನ ಕನ್ನಡಕ ಎಲ್ಲಿದೆ ಸಂಗೀತಾ!
ವಕೀಲ : ಇದರಲ್ಲಿ ಅಂತಾದ್ದು ಏನಿದೆ ಅಂತ ಕೊಲೆ ಮಾಡಿದ್ರಿ!
ಹೆಂಡತಿ : ಏನಿದೆಯಾ...? ನನ್ನ ಹೆಸರು ರಂಜಿತಾ...!

ಮೈಸೂರು ಮಿತ್ರ
ಸೋಮವಾರ, 3 ನವೆಂಬರ್ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ......

ನಮಗಾಗುವ ಗಾಯ ಅಥವಾ ಘಾಸಿಗಳು ನಮ್ಮೊಳಗಿರುವ ಅತ್ಯುತ್ತಮ ಮತ್ತು ಅತ್ಯಂತ ಸುಂದರ ಮುಖವನ್ನೂ ಅನಾವರಣಗೊಳಿಸುತ್ತದೆ.
– ಡೇವಿಡ್ ರಿಚೋ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಡೋಲ್ ಬಾರಿಸೋ ದೊಡ್ಡಣ್ಣ, ಅಂದ್ರೆ ವೀಣೆ ತಂದಿಲ್ಲ ಅಂದ್ನಂತೆ.

ನಿಮ್ಮ ಪತ್ರಗಳು

ಭಾರತೀಯರಿಗೆ ಅವಮಾನ; ಬಾಬಾಸಾಹೇಬರಿಗೆ ಅಲ್ಲ!

ಮಾನ್ಯರೆ,

ಭಾರತವೆಂದರೆ ಬಾಬಾ ಸಾಹೇಬರು, ಬಾಬಾ ಸಾಹೇಬರು ಎಂದರೆ ಭಾರತೀಯರು. ಏಕೆಂದರೆ, ಈ ದೇಶದ ಯಾವುದೇ ಜಾತಿ ಮತ್ತು ಧರ್ಮದ ಕಟ್ಟ ಕಡೆಯ ವ್ಯಕ್ತಿಯು ಕೂಡ ಸಮಾನವಾದ ಸ್ಥಾನಮಾನಗಳು ಮತ್ತು ಹಕ್ಕು, ಅಧಿಕಾರಗಳನ್ನು ಪಡೆದುಕೊಂಡು ಜೀವಿಸುತ್ತಿರುವ ಈ ವ್ಯವಸ್ಥೆಗೆ ಭದ್ರ ಬುನಾದಿ ಹಾಕಿದ ಭಾರತದ ಸಂವಿಧಾನದ ಕರ್ತೃ ಡಾ.ಬಿ.ಆರ್.ಅಂಬೇಡ್ಕರ್.

ಕೇವಲ ಒಂದು ವರ್ಗಕ್ಕೆ ಸೀಮಿತವಾಗಿದ್ದ ಶಿಕ್ಷಣ, ಸಾಮಾಜಿಕ, ರಾಜಕೀಯ ಮತ್ತು ಆರ್ಥಿಕ ಅಧಿಕಾರಗಳನ್ನು ತಮ್ಮ ಸುದೀರ್ಘವಾದ ಹೋರಾಟದ ಮೂಲಕ ಇಡೀ ಭಾರತೀಯರಿಗೂ ಸಿಗಬೇಕು ಎಂದು ಧ್ವನಿ ಎತ್ತಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಸಾಮ್ರಾಟರು ಎಂಬ ವಿಶ್ವ ಮೆಚ್ಚಿದ ಭಾರತವನ್ನು ನಿರ್ಮಾಣ ಮಾಡಿದ ಬಾಬಾ ಸಾಹೇಬರಿಗೆ ಕೆಲವು ಅವಿವೇಕಿಗಳು ಜಾತಿ ವ್ಯವಸ್ಥೆಯನ್ನು ಮತ್ತು ಮೇಲು ಕೀಳು ಎಂಬ ಭಾವನೆಯನ್ನು ಜೀವಂತ ಇಡುವ ಜನಗಳು, ಬಾಬಾ ಸಾಹೇಬರ ಸಂವಿಧಾನದ ಅಡಿಯಲ್ಲಿ ಬದುಕಿ ಅವರು ನೀಡಿದ ಹಕ್ಕು ಅಧಿಕಾರಗಳನ್ನು ಪಡೆದು ಭಾರತೀಯರಿಗೆ ಬೆಳಕಾದ ಬಾಬಾ ಸಾಹೇಬರಿಗೆ ಕತ್ತಲಿನಲ್ಲಿ ಅವರ ಪ್ರತಿಮೆಗಳಿಗೆ, ಭಾವಚಿತ್ರಗಳಿಗೆ ಅಪಮಾನ ಮಾಡಿದರೆ ಅದು ಬಾಬಾಸಾಹೇಬರಿಗೆ ಮಾಡಿದ ಅಪಮಾನವಲ್ಲ. ಭಾರತಕ್ಕೆ ಮಾಡಿದ ಅಪಮಾನ. ಜ್ಯೋತಿ ಗೌಡನಪುರದಲ್ಲಿ ಬಾಬಾ ಸಾಹೇಬರಿಗೆ ಮತ್ತು ಬುದ್ಧರಿಗೆ ಮಾಡಿರೋ ಅವಮಾನ ಬಾಬಾ ಸಾಹೇಬರಿಗೆ ಅಲ್ಲ ಭಾರತೀಯರಿಗೆ ಅವಮಾನ ಮಾಡಿದಂತೆ. ಜಾತಿಯನ್ನು ಆರಾಧಿಸಿ ಬದುಕುವ ಅಯೋಗ್ಯರೂ ಸಂವಿಧಾನದ ಅಡಿಯಲ್ಲಿ ಬದುಕಲು ಅನರ್ಹರು.

–ಪವನ್ ಜಯರಾಂ, ಸಿದ್ದಯ್ಯನಪುರ, ಚಾಮರಾಜನಗರ.

ಬಿ ಖಾತೆದಾರರ ಪರದಾಟ

ಮಾನ್ಯರೆ,

'ಬಿ' ಖಾತೆ ಆಸ್ತಿಯನ್ನು ಎ ಖಾತೆಯಾಗಿ ಪರಿವರ್ತನೆ ಮಾಡಿಕೊಡುವುದಾಗಿ ರಾಜ್ಯ ಸರ್ಕಾರ ನಿರ್ಧರಿಸಿರುವುದು ಸರಿಯಷ್ಟೆ, ಇದು ಹಲವು ವರ್ಷಗಳಿಂದ 'ಬಿ' ಖಾತೆ ಅಸ್ತಿ ಹೊಂದಿರುವವರ ಕನಸು ಕೂಡ ಆಗಿತ್ತು. ಸದ್ಯ, ಬಿ ಖಾತೆದಾರರಿಗೆ ಖುಷಿಯ ವಿಚಾರವಾದರು ಬಿಸಿ ತುಪ್ಪದಂತಾಗಿದೆ.

'ಎ' ಖಾತೆ ಪರಿವರ್ತನೆಗೆ ಲಕ್ಷಗಟ್ಟಲೆ ಹಣ ಕಟ್ಟಬೇಕೆಂದು ತಿಳಿದು ಗಾಬರಿಯಾಗುತಿದೆ. ಅದೂ ನೂರು ದಿನದೊಳಗೆ ಹೊಂದಿಸುವುದು ಹೇಗೆ ಎಂಬ ಚಿಂತನೆಯಾಗಿದೆ. ಆದುದರಿಂದ ರಾಜ್ಯ ಸರ್ಕಾರ ಈ ಬಗ್ಗೆ ಗಮನಹರಿಸಿ, 'ಬಿ' ಖಾತೆದಾರರ ಪರದಾಟಕ್ಕೆ ನೆರವಾಗಬೇಕಾಗಿದೆ.

–ಸಿದ್ದಲಿಂಗೇಗೌಡ, ಹೈರಿಗೆ, ಹೆಚ್.ಡಿ.ಕೋಟೆ ತಾಲೂಕು.

ರೈತರ ಬಗ್ಗೆ ಯಾಕಿಷ್ಟು ತಾತ್ಸಾರ

ಮಾನ್ಯರೆ,

ಕೆಲವು ದಿವಸಗಳಿಂದ ಕಾಡುಪ್ರಾಣಿಗಳು ದಾಳಿ ಮಾಡಿ ಹಲವಾರು ರೈತರು ಅಸುನೀಗಿದ್ದಾರೆ. ಎಲ್ಲಾ ರಾಜಕಾರಣಿಗಳು ರೈತರ ಉದ್ಧಾರ ಮಾಡುವ ಆಶ್ವಾಸನೆ ನೀಡುತ್ತಾ ಬಂದಿದ್ದಾರೆ. ಈಗ ಯಾರೂ ರೈತರ ಬಗ್ಗೆ ಕಾಳಜಿ ತೋರುತಿಲ್ಲ. ಮುಖ್ಯ ಮಂತ್ರಿಗಳಾಗಲಿ ಅಥವಾ ಉಪಮುಖ್ಯಮಂತ್ರಿಗಳಾಗಲಿ. ಅವರ ಬಗ್ಗೆ ಸಾಂತ್ವನ ಹೇಳಿಲ್ಲ. ಅವರಿಗೆ ವಿಷಯ ಗೊತ್ತಿಲ್ಲದ ರೀತಿಯಲ್ಲಿ ಅಧಿಕಾರದ ಬಗ್ಗೆ ಆಸಕ್ತಿ ವಹಿಸುತ್ತಿದ್ದಾರೆ.

ಸಂಬಂಧಪಟ್ಟ ಮಂತ್ರಿಗಳು ಘಟನೆ ನಡೆದ ಮೂರು ದಿವಸಗಳು ಕಳೆದ ಮೇಲೆ ತೋರಿಕೆಗೆ ಹೋಗಿ ನೋಡಿ ಪರಿಹಾರದ ಬಗ್ಗೆ ಆಶ್ವಾಸನೆ ಕೊಟ್ಟು ಬರುತ್ತಾರೆ. ಹೀಗೆ ಆದರೆ ಬಡ ರೈತರ ಪಾಡೇನು? ಪ್ರಾಣಿಗಳು ಹೊರಗಡೆ ಬರದ ಹಾಗೆ ಶಾಶ್ವತವಾದ ಪರಿಹಾರ ಕಂಡುಹಿಡಿಯಬೇಕು.

–ಎ.ವಿ.ರಾಜಶೇಖರ, ನೊಂದ ರೈತ, ಹೆಬ್ಬಾಳು. ಮೈಸೂರು.

ಕುತೂಹಲಕಾರಿ ಋತುಮಾನ

ಮಾನ್ಯರೆ,

ಸಾಮಾನ್ಯವಾಗಿ ಜನವರಿ ಮತ್ತು ಫೆಬ್ರವರಿ ತಿಂಗಳಲ್ಲಿ ಮಾತ್ರ ಮರಗಳ ಎಲೆಗಳು ಉದುರಿ ಹೊಸ ಎಲೆಗಳು ಚಿಗುರುತ್ತವೆ. ಈ ಕಾರಣಕ್ಕಾಗಿಯೇ ಇದನ್ನು ವಸಂತಮಾಸ ಎಂದು ಕರೆಯುತ್ತಾರೆ. ಆದರೆ ಈ ವರ್ಷದ ಕುತೂಹಲಕಾರಿ ಸಂಗತಿಯೆಂದರೆ, ಈಗಾಗಲೇ ಅಂದರೆ ಅಕ್ಟೋಬರ್ ತಿಂಗಳಲ್ಲೇ ಕೆಲವು ಕಡೆ ಹೊಂಗೆ ಮರದ ಎಲೆಗಳು ಉದುರಿ ಹೊಸ ಎಲೆಗಳು ಚಿಗುರಿವೆ. ಇದಕ್ಕೆ ನಿಖರವಾದ ಕಾರಣ ತಿಳಿದುಬಂದಿಲ್ಲ, ನಾನು ಈ ಬಗ್ಗೆ ಕೆಲವು ಸಸ್ಯಶಾಸ್ತ್ರ ತಜ್ಞರನ್ನು ಕೇಳಿದರೆ ಈ ಬಾರಿಯ ಹವಾಮಾನ ವೈಪರೀತ್ಯದಿಂದ ಇರಬಹುದು ಎನ್ನುತ್ತಾರೆ, ಇದು ಮೈಸೂರಿನ ಸುತ್ತಮುತ್ತ ಇರುವ ಹೊಂಗೆ ಮರದಲ್ಲಿ ಮಾತ್ರ ಕಂಡುಬರುತ್ತದೆ, ಈ ಬಗ್ಗೆ ಸಸ್ಯಶಾಸ್ತ್ರ ವಿಭಾಗದ ತಜ್ಞರು ಅಧ್ಯಯನ ನಡೆಸುವ ಅಗತ್ಯವಿದೆ, ಹಾಗೂ ಸಾರ್ವಜನಿಕರಿಗೂ ಈ ಬಗ್ಗೆ ತಿಳಿಯಲು ಕುತೂಹಲವಿದೆ,

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು.

ವಿವಿಧತೆಯಲ್ಲಿ ಏಕತೆ!

ಮಾನ್ಯರೆ,

ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ 'ಬುರುಡೆ' ಪ್ರಕರಣದಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಗಿರೀಶ್ ಮಟ್ಟಣ್ಣವರ್, ಮಹೇಶ್ ತಿಮರೋಡಿ, ವಿಠಲ್‌ಗೌಡ ಮತ್ತು ಟಿ.ಜಯಂತ್ ಹೈಕೋರ್ಟಿನ ಮೆಟ್ಟಿ ಲೇರಿದ್ದಾರೆ! ಈ ಪ್ರಕರಣದಲ್ಲಿ ವಿವಿಧ ರೀತಿಯ ಬೇರೆ ಬೇರೆ ಪಾತ್ರ ವಹಿಸಿದ್ದ ಈ ನಾಲ್ವರು ಒಬ್ಬರೇ ವಕೀಲರ ಮುಖೇನ ಒಟ್ಟಾಗಿ ಒಂದೇ ಅರ್ಜಿ ಸಲ್ಲಿಸುವ ಮೂಲಕ ಏಕತೆ ಮೆರೆದಿದ್ದು ಆಶ್ಚರ್ಯಕರ! ವಿವಿಧತೆಯಲ್ಲಿ ಏಕತೆ ಎಂದರೆ ಇದೇನಾ? –ಪಿ.ಜೆ.ರಾಘವೇಂದ್ರ ನ್ಯಾಯವಾದಿ ಮೈಸೂರು



ಜಿ. ಎಲ್. ತ್ರಿಪುರಾಂತಕ
ಮೊ: 96866-77284

ಅರಿವು

ಭೂಗೋಳ ಸೇರೋದು ಇದ್ದೇ ಇದೆ; ಇತಿಹಾಸ ಸೇರೋ ಪ್ರಯತ್ನವಿರಲಿ...!

ವ್ಯಕ್ತಿತ್ವ ವಿಕಸನ ತರಬೇತುದಾರರಾದ ಜಯಪ್ರಕಾಶ್ ನಾಗತಿಹಳ್ಳಿಯವರು ಮನುಷ್ಯ ಕೊನೆಗೆ ಭೂಗೋಳ ಸೇರೋದು ಇದ್ದೇ ಇದೆ, ಆದರೆ ಇತಿಹಾಸ ಸೇರುವ ಪ್ರಯತ್ನ ಮಾಡಬೇಕು ಎಂದು ತಮ್ಮ ತರಬೇತಿ ಕಾರ್ಯಾಗಾರವೊಂದರಲ್ಲಿ ಹೇಳಿದ್ದಾರೆ. ಮನುಷ್ಯ ಭೂಮಿಯ ಮೇಲೆ ಜನ್ಮ ತಾಳಿದ ಮೇಲೆ ಅವನ ಪಯಣ ಸಾವಿನ ಕಡೆ ಎಂಬುದು ಕಹಿಸತ್ಯ. ಪ್ರತಿ ದಿನವೂ ಆಯುಷ್ಯದಲ್ಲಿ ಒಂದು ದಿನ ಕಡಿಮೆಯಾಗುತ್ತಲೇ ಇರುತ್ತದೆ. ಜನ್ಮದಿನದ ಬಗ್ಗೆ ಹಾಸ್ಯ ಸಾಹಿತಿ ಬೀಚಿಯವರು ಸಾವಿನ ಬಗ್ಗೆ ಎಚ್ಚರಿಸಲು ಕಾಲರಾಯನು ವರ್ಷಕ್ಕೊಮ್ಮೆ ಗಂಟೆ ಬಾರಿಸುವ ದಿನವೇ ಜನ್ಮದಿನ ಎಂದಿದ್ದಾರೆ. ಅಂತಿಮವಾಗಿ ಮನುಷ್ಯ ಗತಿಸಿದ ಮೇಲೆ ಮಣ್ಣು ಸೇರುತ್ತಾನೆ, ಅದನ್ನು ಯಾರಿಂದಲೂ ತಪ್ಪಿಸಲು ಸಾಧ್ಯವಿಲ್ಲ. ಹುಟ್ಟಿದ ಮೇಲೆ ಸಾವು ಖಚಿತ. ಆದರೆ ಮನುಷ್ಯ ಜೀವಿತಾವಧಿಯಲ್ಲಿ ಮನುಷ್ಯ ಪ್ರಯತ್ನದಿಂದ ಸಾಧನೆ ಮಾಡಿ ಇತಿಹಾಸ ಸೇರುವ ಪ್ರಯತ್ನ ಸಾಧ್ಯತೆ ಪ್ರತಿಯೊಬ್ಬರಿಗೂ ಇರುತ್ತದೆ. ಇತಿಹಾಸ ಸೇರುವುದು ಎಂದರೆ ಇತಿಹಾಸದ ಪಠ್ಯಪುಸ್ತಕದ ಪುಟ ಸೇರಬೇಕು ಎಂದಲ್ಲ, ಜನಮಾನಸದ ಮಸ್ತಕದಲ್ಲಿ ಒಂದೊಳ್ಳೆ ಅಭಿಪ್ರಾಯ ಮೂಡುವಂತೆ ಬದುಕಬೇಕು. ಆಗ ಮನುಷ್ಯನಾಗಿ ಹುಟ್ಟಿದ್ದಕ್ಕೂ ಸಾರ್ಥಕವಾಗುತ್ತದೆ.

ಮನುಷ್ಯರಲ್ಲಿ ಸಂಸ್ಕೃತಿ ಎಷ್ಟಿದಿಯೋ ಅಷ್ಟೇ ವಿಕೃತಿಯೂ ಇರುತ್ತದೆ. ಹಂಚಿಕೊಂಡು ಬದುಕುವುದು ಮಾನವ ಧರ್ಮ. ಕಿತ್ತುಕೊಂಡು ಬದುಕುವುದು ದಾನವ ಧರ್ಮ. ಸಮಾಜಕ್ಕಾಗಿ ಎಲ್ಲವನ್ನೂ ತ್ಯಾಗ ಮಾಡಿ ತ್ಯಾಗಮೂರ್ತಿಗಳಾಗಿ ಇತಿಹಾಸದಲ್ಲಿ ಲಕ್ಷಾಂತರ ಮಂದಿ ದಾಖಲಾಗಿದ್ದಾರೆ. ಹಾಗೆಯೆ ಸಾರ್ವಜನಿಕರ ಕೋಟ್ಯಾಂತರ ರೂಪಾಯಿ ಹಣವನ್ನು ತಿಂದು ತೇಗಿ ಭೋಗಮೂರ್ತಿಗಳಾದ ಸಾವಿರಾರು ಮಂದಿಯೂ ಇದ್ದಾರೆ. ಅವರ ಹೆಸರುಗಳು ಸಹ ಇತಿಹಾಸದಲ್ಲಿ ದಾಖಲಾಗುತ್ತದೆ. ವಿಖ್ಯಾತಿ ಪಡೆದು ಇತಿಹಾಸದಲ್ಲಿ ದಾಖಲಾಗುವುದಕ್ಕೂ, ಕುಖ್ಯಾತಿ ಪಡೆದು ಇತಿಹಾಸದಲ್ಲಿ ದಾಖಲಾಗುವುದಕ್ಕೂ ವ್ಯತ್ಯಾಸವಿದೆ. ವ್ಯಕ್ತಿ ಸತ್ತ ಮೇಲೂ ಜನ ಸ್ಮರಿಸುವಂತೆ ಬದುಕಬೇಕೇ ವಿನಃ ಶಪಿಸುವಂತೆ ಬದುಕಬಾರದು.

ಜನಾನುರಾಗಿಯಾಗಿ ಬದುಕಲು ತುಂಬಾ ಕಷ್ಟಪಡಬೇಕಿಲ್ಲ. ಸಾಧ್ಯವಾದರೆ ಒಬ್ಬರಿಗೆ ನೆರವು ನೀಡಬೇಕು, ಇಲ್ಲವಾದರೆ ಸುಮ್ಮನಿರಬೇಕು. ತೊಂದರೆಯನ್ನಂತು ಕೊಡಬಾರದು. ದಾನ ಧರ್ಮ ಮಾಡುವವರನ್ನು ಕಂಡು ಅನೇಕರು ನಮ್ಮ ಬಳಿ ಹಣವಿಲ್ಲ, ಹಣವಿದ್ದರೆ ದಾನ ಮಾಡಬಹುದಿತ್ತು ಎಂದು ಭಾವಿಸುತ್ತಾರೆ. ಬರುವುದರಲ್ಲಿ ಸಹಾಯ ಮಾಡುತ್ತೇನೆ ಎಂದು ಭಾವಿಸುವುದಕ್ಕಿಂತ ಇರುವುದರಲ್ಲಿ ಸಹಾಯ ಮಾಡುವುದು ಉದಾರಿಗಳ ಲಕ್ಷಣ. ದಾನ ಮಾಡಲು ಬೇಕಿರುವುದು ಶ್ರೀಮಂತಿಕೆ ಅಲ್ಲ, ಬದಲಿಗೆ ಹೃದಯವಂತಿಕೆ. ಶ್ರೀಮಂತಿಕೆ ಇರುವವರೆಲ್ಲಾ ತುಂಬಾ ದಾನಧರ್ಮ ಮಾಡುತ್ತಾರೆ ಅಂತೇನಿಲ್ಲ. ಬಡತನ ಇರುವವರು ದಾನ ಮಾಡುವುದಿಲ್ಲ ಅಂತೇನಿಲ್ಲ. ದಾನ ಮಾಡಬೇಕು ಎಂದರೆ ಅದಕ್ಕೆ ಮಾರ್ಗಗಳು ಸಹ ಇರುತ್ತವೆ. ಮನಸ್ಸಿದ್ದರೆ ಮಾರ್ಗ ಎನ್ನುವಂತೆ ಹೃದಯವಂತಿಕೆ ಇದ್ದರೆ ದಾನ ಮಾಡುವುದು ದೊಡ್ಡ ಸಂಗತಿಯಲ್ಲ.

ಕಿತ್ತಲೆ ಹಣ್ಣು ಮಾರಿ ಬಂದ ಹಣದಿಂದ ತಮ್ಮೂರಿನ ಮಕ್ಕಳ ಶಿಕ್ಷಣಕ್ಕಾಗಿ ಶಾಲೆ ನಿರ್ಮಿಸಿದ ಹರೇಕಳದ ಹಾಜಬ್ಬ ಅವರು ಮಾದರಿ ಪುರುಷರಾಗಿದ್ದು, ಅವರ ಹೆಸರು ಇತಿಹಾಸದ ಪುಟದಲ್ಲಿ ಅರ್ಥಪೂರ್ಣವಾಗಿ ದಾಖಲಾಗಿದೆ. ಕೋಟಿ ಕುಳಗಳಾಗಿರುವ ರಾಜಕಾರಣಿಗಳು, ಸಮಾಜ ಸೇವೆ ಹೆಸರಿನಲ್ಲಿ ಅಧಿಕಾರ ಹಿಡಿಯುವ ರಾಜಕಾರಣಿಗಳು, ಸರ್ಕಾರದ ಸೇವೆ ದೇವರ ಸೇವೆ ಎಂದು ಭಾವಿಸಿರುವ ಸರ್ಕಾರಿ ಅಧಿಕಾರಿಗಳು ತಮ್ಮ ಊರಿನ ಏಳ್ಗೆಗೆ ತಮ್ಮ ದುಡಿಮೆಯ ಹಣದಿಂದ ದಾನಧರ್ಮ ಮಾಡಿರುವುದು ಬಹಳ ವಿರಳ. ಆದರೆ ಮಂಗಳೂರಿನಿಂದ 20 ಕಿ.ಮೀ. ದೂರದಲ್ಲಿರುವ ಹರೇಕಳದ ಹಾಜಬ್ಬ ಅವರು ಕಿತ್ತಲೆ ಹಣ್ಣು ಮಾರಾಟ ಮಾಡಿ ಬಂದ ಹಣದಿಂದ ಹಾಗೂ ತಮ್ಮ ಸ್ವಂತ ಜಮೀನನ್ನು ದಾನ ಮಾಡಿ ತಮ್ಮ ಊರಿನಲ್ಲಿ ಪ್ರೌಢಶಾಲೆ ನಿರ್ಮಿಸಲು ಶ್ರಮಿಸಿದ್ದಾರೆ. ವಿಶೇಷವೇನೆಂದರೆ ಅವರಿಗೆ ಓದಲು ಹಾಗೂ ಬರೆಯಲು ಬರುವುದಿಲ್ಲ. ಅನಕ್ಷರಸ್ಥರಾದ ಹಾಜಬ್ಬ ಅವರು ತಮ್ಮ ಊರಿನ ಮಕ್ಕಳು ವಿದ್ಯಾವಂತರಾಗಲಿ ಎಂಬ ಅಭಿಲಾಷೆಯಿಂದ ತ್ಯಾಗದ ಬದುಕನ್ನು ನಡೆಸಿದ್ದಾರೆ. ಅವರ ಈ ಸಮಾಜ ಸೇವೆಯನ್ನು ಪರಿಗಣಿಸಿ ಕೇಂದ್ರ ಸರ್ಕಾರವು 2020ರಲ್ಲಿ ಅವರಿಗೆ ದೇಶದ ನಾಲ್ಕನೇ ಅತ್ಯುನ್ನತ ಪುರಸ್ಕಾರವಾದ ಪದ್ಮಶ್ರೀ ನೀಡಿ ಗೌರವಿಸಿತು.







> "ಅನೇಕರು ತೋರಿಕೆಗಾಗಿ ದಾನಧರ್ಮ ಮಾಡುವುದುಂಟು. ಪ್ರಚಾರದ ಗೀಳಿನಿಂದ ನೆರವು ನೀಡುವುದು ಉಂಟು. ನೀವು ದಾನಧರ್ಮ ಮಾಡುವ ಸಂದರ್ಭದಲ್ಲಿ ನಿಮ್ಮ ಕ್ಯಾಮೆರಾವನ್ನು ಮನೆಯಲ್ಲಿ ಇಟ್ಟು ಹೋಗಿ? ಎಂದು ಮಹನೀಯರೊಬ್ಬರು ಹೇಳಿರುವುದು ಅರ್ಥಪೂರ್ಣವಾಗಿದೆ. ದೇವಸ್ಥಾನಗಳಲ್ಲಿ ಭಕ್ತರು ತಾವು ನೀಡುವ ಟ್ಯೂಬ್‌ಲೈಟ್, ಫ್ಯಾನ್, ಬೀರು, ಬೋರ್ಡುಗಳ ಕೊಡುಗೆಗಳಲ್ಲಿ ದಪ್ಪ ದಪ್ಪ ಅಕ್ಷರಗಳಲ್ಲಿ ತಮ್ಮ ಹೆಸರುಗಳನ್ನು ಬರೆಯಿಸಿರುತ್ತಾರೆ. ಅದು ಇತಿಹಾಸದಲ್ಲಿ ತಮ್ಮ ಹೆಸರು ಶಾಶ್ವತವಾಗಿರಲಿ ಎಂಬ ಸ್ವಾರ್ಥದಿಂದ ಬರೆಯಿಸಿದ ಅಕ್ಷರಗಳು ಅಷ್ಟೆ. ದಾನ ಮಾಡುವಾಗ ಬಲಗೈಯಲ್ಲಿ ಕೊಟ್ಟದ್ದು ಎಡಗೈಗೆ ತಿಳಿಯಬಾರದು ಎಂದು ತಿಳಿದವರು ಹೇಳುತ್ತಾರೆ. ದಾನಧರ್ಮದ ಹೆಸರಿನಲ್ಲೂ ಸ್ವಾರ್ಥ ಮೆರೆಯುವ ವಿದ್ಯಾವಂತ ಅವಿವೇಕಿಗಳು ನಮ್ಮ ಸುತ್ತಲೇ ಇರುವುದು ವಿಪರ್ಯಾಸ.

ವೃಕ್ಷ ಮಾತೆ ಎಂದು ಕರೆಯಿಸಿಕೊಳ್ಳುವ ಸಾಲುಮರದ ತಿಮ್ಮಕ್ಕ ಅವರು ಸಹ ಅನಕ್ಷರಸ್ಥರಾಗಿದ್ದರೂ ಪರಿಸರವಾದಿಯಾಗಿ ಖ್ಯಾತಿ ಹೊಂದಿದ್ದಾರೆ. ಭೂಮಿ ಮೇಲೆ ಹುಟ್ಟಿದ ಮೇಲೆ ಭೂಮಿಗೆ ಏನಾದರೂ ಕೊಡುಗೆ ನೀಡಬೇಕು ಎಂಬ ಆಕಾಂಕ್ಷೆಯಿಂದ ರಸ್ತೆ ಬದಿಯಲ್ಲಿ ಗಿಡಗಳನ್ನು ನೆಟ್ಟು, ನಿತ್ಯ ನೀರುಣಿಸಿ ಮುಗಿಲೆತ್ತರದ ಮರಗಳನ್ನಾಗಿ ಮಾಡಿದವರು. ಮಕ್ಕಳಿಲ್ಲದ ತಿಮ್ಮಕ್ಕ ಅವರಿಗೆ ಮರಗಳೇ ಮಕ್ಕಳು. ಇವರಿಗೆ ಈ ರೀತಿ ಸೇವೆ ಮಾಡಬೇಕು ಎಂದು ಯಾರು ಬೋಧನೆ ಮಾಡಿಲ್ಲ. ಏನಾದರೂ ಸೇವೆ ಮಾಡಬೇಕು ಎಂದರೆ ವಿದ್ಯಾವಂತರೇ ಆಗಬೇಕಿಲ್ಲ, ಧನವಂತರೇ ಆಗಬೇಕಿಲ್ಲ, ಜ್ಞಾನವಂತರೇ ಆಗಬೇಕಿಲ್ಲ, ಬದಲಿಗೆ ವಿವೇಕವಂತರಾದರೆ ಅದೇ ದಾರಿ ತೋರುತ್ತದೆ. ಸಾಲುಮರದ ತಿಮ್ಮಕ್ಕ ತನ್ನ ಹೆಸರು ಇತಿಹಾಸದ ಪುಟದಲ್ಲಿ ಸೇರಲಿ ಎಂದು ಬಯಸದೇ ಇರುವಷ್ಟು ಮುಗ್ಧೆ. ಅವರ ಹೆಸರು ಜನಮಾನಸದಲ್ಲಿ ಎಂದಿಗೂ ಅಜರಾಮರ. ಇವರು ರಾಜ್ಯೋತ್ಸವ ಪ್ರಶಸ್ತಿ, ಪದ್ಮಶ್ರೀ ಪುರಸ್ಕಾರಕ್ಕೆ ಭಾಜನರಾಗಿರುವುದಷ್ಟೇ ಅಲ್ಲದೆ ಅನೇಕ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಸಂಸ್ಥೆಗಳು ಗೌರವಿಸಿವೆ.

ಬಿಳಿಗಿರಿರಂಗನ ಬೆಟ್ಟದವರಾದ ರಾಮೇಗೌಡ ಅವರು ಅನಕ್ಷರಸ್ಥರಾಗಿದ್ದರೂ ಒಂದು ಸಾವಿರ ಸಸ್ಯಗಳ ಪರಿಚಯ ಹೊಂದಿದ್ದಾರೆ. ಅಳಿವಿನಂಚಿನಲ್ಲಿರುವ ಸಸ್ಯ ಪ್ರಬೇಧಗಳನ್ನು ಉಳಿಸುವ ಕಾರ್ಯದಲ್ಲಿ ನಿರತರಾಗಿರುವ ಇವರಿಗೆ ಮೂಲಭೂತ ಸೌಕರ್ಯಗಳ ಕೊರತೆ ಇದ್ದರೂ ತಮ್ಮ ಸಸ್ಯ ಪ್ರೇಮವನ್ನು ಬಿಟ್ಟಿಲ್ಲ. ಇವರಿಗೆ ಈ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ. ಈ ಮೇಲೆ ಉಲ್ಲೇಖಿಸಿದ ಮೂವರು ಮಹನೀಯರುಗಳು ಅಕ್ಷರಸ್ಥರಲ್ಲ, ಆದರೆ ಸಮಾಜಕ್ಕೆ, ಅನ್ನ ನೀಡುವ ಮಣ್ಣಿಗೆ ಮಣ್ಣು ಸೇರುವ ಮುನ್ನ ಏನಾದರೂ ಸೇವೆ ಸಲ್ಲಿಸಬೇಕೆಂಬ ಅದಮ್ಯ ಆಸೆ ಹೊಂದಿದವರು. ಅದಕ್ಕಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟವರು. ತಮಗಾಗಿ ಅಲ್ಲದೆ ಸಮಾಜಕ್ಕಾಗಿ ದುಡಿದವರು. ಎಲೆಮರೆ ಕಾಯಿಗಳಂತೆ ತಮ್ಮ ಕಾಯಕ, ಸೇವೆ ಮಾಡಿದ್ದಾರೆ ಅಷ್ಟೆ. ಸಾಧನೆ ಮಾಡಲು ಮನಸ್ಸು ಇರಬೇಕು, ದೂರದೃಷ್ಟಿ ಇರಬೇಕೆ ವಿನಃ ದುರಾದೃಷ್ಟಿ ಇರಬಾರದು. ಅನೇಕ ಡೋಂಗಿ ಸಾಧಕರು ಪ್ರಶಸ್ತಿ ಪುರಸ್ಕಾರಗಳಿಗೋಸ್ಕರ ಲಾಭಿ ಮಾಡಿ, ಅದನ್ನು ಗಳಿಸಿ ಪತ್ರಿಕೆಗಳಲ್ಲಿ/ಮಾಧ್ಯಮಗಳಲ್ಲಿ ಅವರ ಹೆಸರು ಪ್ರಕಟವಾದರೂ ಜನರ ಮನಸ್ಸಿನಲ್ಲಿ ಅವರು ಸಣ್ಣವರೇ ಆಗಿರುತ್ತಾರೆ. ಅವರನ್ನು ಜನರೂ ಸಹ ಅಷ್ಟೇ ಬೇಗ ಮರೆತುಬಿಡುತ್ತಾರೆ.

ಅನೇಕರು ತೋರಿಕೆಗಾಗಿ ದಾನಧರ್ಮ ಮಾಡುವುದುಂಟು. ಪ್ರಚಾರದ ಗೀಳಿನಿಂದ ನೆರವು ನೀಡುವುದು ಉಂಟು. 'ನೀವು ದಾನಧರ್ಮ ಮಾಡುವ ಸಂದರ್ಭದಲ್ಲಿ ನಿಮ್ಮ ಕ್ಯಾಮೆರಾವನ್ನು ಮನೆಯಲ್ಲಿ ಇಟ್ಟು ಹೋಗಿ' ಎಂದು ಮಹನೀಯರೊಬ್ಬರು ಹೇಳಿರುವುದು ಅರ್ಥಪೂರ್ಣವಾಗಿದೆ. ದೇವಸ್ಥಾನಗಳಲ್ಲಿ ಭಕ್ತರು ತಾವು ನೀಡುವ ಟ್ಯೂಬ್‌ಲೈಟ್, ಫ್ಯಾನ್, ಬೀರು, ಬೋರ್ಡುಗಳ ಕೊಡುಗೆಗಳಲ್ಲಿ ದಪ್ಪ ದಪ್ಪ ಅಕ್ಷರಗಳಲ್ಲಿ ತಮ್ಮ ಹೆಸರುಗಳನ್ನು ಬರೆಯಿಸಿರುತ್ತಾರೆ. ಅದು ಇತಿಹಾಸದಲ್ಲಿ ತಮ್ಮ ಹೆಸರು ಶಾಶ್ವತವಾಗಿರಲಿ ಎಂಬ ಸ್ವಾರ್ಥದಿಂದ ಬರೆಯಿಸಿದ ಅಕ್ಷರಗಳು ಅಷ್ಟೆ. ದಾನ ಮಾಡುವಾಗ ಬಲಗೈಯಲ್ಲಿ ಕೊಟ್ಟದ್ದು ಎಡಗೈಗೆ ತಿಳಿಯಬಾರದು ಎಂದು ತಿಳಿದವರು ಹೇಳುತ್ತಾರೆ. ದಾನಧರ್ಮದ ಹೆಸರಿನಲ್ಲಿಯೂ ಸ್ವಾರ್ಥ ಮೆರೆಯುವ ವಿದ್ಯಾವಂತ ಅವಿವೇಕಿಗಳು ನಮ್ಮ ಸುತ್ತಲೇ ಇರುವುದು ವಿಪರ್ಯಾಸ.

ಇತಿಹಾಸ ಸೇರಲು ಅಂದರೆ ಸಾಧನೆ ಮಾಡಲು ದೈಹಿಕವಾಗಿ ಸದೃಢರಾಗಿದ್ದರಷ್ಟೇ ಸಾಲದು, ವಿದ್ಯಾವಂತರಾದರಷ್ಟೇ ಸಾಲದು, ಹಣ ಬಲ ಇದ್ದರಷ್ಟೇ ಸಾಲದು, ವಯಸ್ಸಿದ್ದರಷ್ಟೇ ಸಾಲದು, ಏನಾದರೂ ಮಾಡಬೇಕೆಂಬ ಮನಸ್ಸಿರಬೇಕು. ಅನೇಕ ವಿಕಲಚೇತನರು /ವಿಶೇಷಚೇತನರು ಅಸಾಧ್ಯ ಎನಿಸಿದ್ದನ್ನು ಸಾಧಿಸಿದ್ದು ಇತಿಹಾಸದಲ್ಲಿ ದಾಖಲಾಗಿದೆ. ಉತ್ತರ ಪ್ರದೇಶ ರಾಜ್ಯದ ಅರುಣಿಮ ಸಿನ್ಹ ಎಂಬ ಮಹಿಳೆ ರೈಲು ಅಪಘಾತದಲ್ಲಿ ಒಂದು ಕಾಲನ್ನು ಕಳೆದುಕೊಂಡರು ಎವೆರೆಸ್ಟ್ ಏರಬೇಕೆಂಬ ಕನಸನ್ನು ತಮ್ಮ ಪರಿಶ್ರಮದಿಂದ ನನಸು ಮಾಡಿಕೊಂಡಿದ್ದಾರೆ. ಎವರೆಸ್ಟ್ ಏರಿದ ಪ್ರಥಮ ದಿವ್ಯಾಂಗರು ಇವರಾಗಿದ್ದಾರೆ. ದೈಹಿಕವಾಗಿ ಸದೃಢರಾಗಿರುವ ಅನೇಕರಿಗೆ ಅಂತಹ ಕನಸುಗಳೇ ಇರುವುದಿಲ್ಲ. ಹಾಗಾಗಿ ಮನುಷ್ಯ ಜನ್ಮ ಸಾರ್ಥಕಗೊಳಿಸುವಂತಹ ಕೆಲಸ ಮಾಡಿ ಮಣ್ಣಾಗಬೇಕು.

ಸಾಧನೆ ಎಂದರೆ ಯಾವುದಾದರೂ ಕ್ಷೇತ್ರದಲ್ಲಿ ವಿಶೇಷ ಪರಿಣಿತಿಗಳಿಸಿ, ಖ್ಯಾತನಾಮರಾಗಿ ಪ್ರಶಸ್ತಿ–ಪುರಸ್ಕಾರ ಗಳಿಸಿ ಟಿ.ವಿ.ಯಲ್ಲಿ/ದಿನಪತ್ರಿಕೆಯಲ್ಲಿ ಅವರ ಸಾಧನೆ ಸುದ್ದಿಯಾಗಬೇಕು ಎಂದಿಲ್ಲ. ಮಾಡುವ ಕೆಲಸವನ್ನು ನಿಷ್ಠೆಯಿಂದ ಮಾಡಿದರೆ ಸಾಕು. ಜನಪ್ರಿಯತೆ ಗೀಳಿರುವ ಅನೇಕರು ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ಹುಚ್ಚಾಟಗಳಿಂದ, ಟಿ.ವಿ.ಶೋಗಳಲ್ಲಿ ವಿಶೇಷ ಮ್ಯಾನರಿಸಂನಿಂದ ಬಹುಬೇಗ ಜನಪ್ರಿಯರಾಗುತ್ತಾರೆ. ಈ ರೀತಿಯ ಕೀಳು ಅಭಿರುಚಿಯಿಂದ ಖ್ಯಾತಿ ಪಡೆಯುವುದು ತಾತ್ಕಾಲಿಕವಾದುದು. ತಮ್ಮ ಕ್ರಿಯೆ ಪ್ರಕ್ರಿಯೆಗಳಿಂದ ಸಮಾಜದ ಮೇಲೆ ಎಂತಹ ದುಷ್ಪರಿಣಾಮ ಬೀರುತ್ತದೆ ಎಂಬ ಅರಿವಿರಬೇಕು. ಅನೇಕ ವಿದ್ಯಾವಂತರು ಕೂಡ ಇಂದು ಯುಟ್ಯೂಬ್, ಫೇಸ್‌ಬುಕ್ ಇತ್ಯಾದಿ ಜಾಲತಾಣಗಳಲ್ಲಿ ಹಣಗಳಿಸುವ ಮುಖ್ಯ ಉದ್ದೇಶದಿಂದ ಅರ್ಥಹೀನವಾದ ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದಾರೆ. ಅಂತಹ ಅನಿವಾರ್ಯತೆ ಒಳ್ಳೆಯದಲ್ಲ.

ಡಿ.ವಿ.ಗುಂಡಪ್ಪನವರು ತಮ್ಮ ಕಗ್ಗವೊಂದರಲ್ಲಿ 'ಹುಲ್ಲಾಗು ಬೆಟ್ಟದಡಿ, ಮನೆಗೆ ಮಲ್ಲಿಗೆಯಾಗು, ಕಲ್ಲಾಗು ಕಷ್ಟಗಳ ಮಳೆಯ ವಿಧಿ ಸುರಿಯೆ, ಬೆಲ್ಲಸಕ್ಕರೆಯಾಗು ದೀನದುರ್ಬಲರಿಂಗೆ, ಎಲ್ಲರೊಳಗೊಂದಾಗು ಮಂಕುತಿಮ್ಮ' ಎಂದು ಹೇಳಿದ್ದಾರೆ. ಈ ಕಗ್ಗದಲ್ಲಿ ಹೇಳಿರುವಂತೆ ಬದುಕಿಬಿಟ್ಟರೆ ಅದೇ ಇತಿಹಾಸದ ಪುಟ ಸೇರಿದ ಹಾಗೆ. ಜೀವಿತಾವಧಿಯಲ್ಲಿ ತಮ್ಮ ಕಾಲ ಮೇಲೆ ತಾವು ನಿಂತು, ಒಬ್ಬರಿಗೆ ತೊಂದರೆ ಕೊಡದಂತೆ, ಭೂಮಿಗೆ ಹೊರೆಯಾಗುವಷ್ಟು ಸೋಮಾರಿಯಾಗದೆ, ಅಗತ್ಯಬಿದ್ದಾಗ ನಾಲ್ಕು ಜನರ ಕಷ್ಟಸುಖ ದಲ್ಲಿ ಭಾಗಿಯಾಗಿ, ಅನೇಕರಿಗೆ ಮಾದರಿಯಾಗಿ, ಕುಟುಂಬಕ್ಕೆ ಕಣ್ಣಾಗಿ ಬದುಕಿದರೆ ಅದು ಸಹ ಇತಿಹಾಸ ಸೇರಿದಂತೆ. ನೀವು ಬದುಕಿದ್ದಾಗ ನಿಮ್ಮ ಇರುವಿಕೆಯನ್ನು ಬಯಸುವ, ನಿಮ್ಮ ಬರುವಿಕೆಗಾಗಿ ನಾಲ್ಕು ಜನ ಕಾಯುವಂತಹ ವ್ಯಕ್ತಿತ್ವ ನಿಮ್ಮದಾದರೆ ಬದುಕು ಸಾರ್ಥಕ ಎನಿಸುತ್ತದೆ.

ಹೂರಣ: ತಮಗಾಗಿ ಬದುಕಿದವರನ್ನು ಜನ ಮರೆಯುತ್ತಾರೆ, ಇತರರಿಗಾಗಿ ಬದುಕಿದವರನ್ನು ಸ್ಮರಿಸುತ್ತಾರೆ.

ಮಾಡ್ಯುಲರ್ ಕೃತಕ ಅಂಗಗಳ ಉಚಿತ ಜೋಡಣೆಗೆ ಮಾಪನ ಶಿಬಿರ

ಮೈಸೂರು,ನ.2(ಎಂಕೆ)–ಮೈಸೂರಿನ ನಜರ್ ಬಾದ್‌ನಲ್ಲಿರುವ ಸಮತ ಭವನದಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ನೋಟುಮುದ್ರಣ ಪ್ರೈವೇಟ್ ಲಿಮಿಟೆಡ್, ಆಶ್ರಯ ಸೇವಾ ಸಂಸ್ಥಾನ, ಲಯನ್ಸ್ ಇಂಟರ್‌ನ್ಯಾಷನಲ್, ಜೈನ್ ಮಿಲನ್ ಚಾರಿಟಬಲ್ ಟ್ರಸ್ಟ್, ಸ್ಥಾನಕ್ ವಾಸಿ ಜೈನ್ ಸಂಘ ಹಾಗೂ ಸಾಧು ಮಾರ್ಗಿ ಸಂಘದ ವತಿಯಿಂದ ವಿಕಲಚೇತನರಿಗೆ 'ಮಾಡ್ಯುಲರ್ ಕೃತಕ ಅಂಗಗಳ(ಕೈ–ಕಾಲು) ಉಚಿತ ಜೋಡಣೆಗೆ ಮಾಪನ ಶಿಬಿರ' ನಡೆಯಿತು.

ಬೆಳಗ್ಗೆ 10 ಗಂಟೆಯಿಂದ ಸಂಜೆವರೆಗೂ ನಡೆದ ಶಿಬಿರದಲ್ಲಿ 250ಕ್ಕೂ ಹೆಚ್ಚು ವಿಕಲಚೇತನರು ಹೆಸರು ನೊಂದಾಯಿಸಿಕೊಂಡು, ತಮಗೆ ಅಗತ್ಯವಿರುವ ಕೃತಕ ಅಂಗಗಳಿಗೆ ಅಳತೆ ನೀಡಿದರು. ಇದೇ ವೇಳೆ ಶಿಬಿರ ಉದ್ಘಾಟಿಸಿದ ಶಾಸಕ ಜಿ.ಟಿ.ದೇವೇಗೌಡ, ತಾಳ್ಮೆಯಿಂದ ಕಾದು ತಮಗೆ ಅಗತ್ಯವಿರುವ ಕೃತಕ ಅಂಗಗಳ ಅಳತೆ ನೀಡುವಂತೆ ಮನವಿ ಮಾಡಿದರು.

ಬಳಿಕ ವೇದಿಕೆ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ದಾನದಿಂದ ದೇವರಾಗುತ್ತೇವೆ. ಈ ನಿಟ್ಟಿನಲ್ಲಿ ವಿಕಲಚೇತನರಿಗಾಗಿ ಆಯೋಜಿಸಿರುವ ಸೇವಾ ಶಿಬಿರ ಅತ್ಯಂತ ಶ್ಲಾಘನೀಯ. ಕಾಲು ಇಲ್ಲದವರಿಗೆ ಕಾಲು ಬಂದರೆ, ಅವರಿಗೆ ಇಡೀ ಕುಟುಂಬವನ್ನು ನೋಡಿಕೊಳ್ಳುವ ಶಕ್ತಿ ಮತ್ತು ಆರೋಗ್ಯ ಬರುವುದರ ಜೊತೆಗೆ ಸಂತೋಷದಿಂದ ಬದುಕಲು ಸಾಧ್ಯವಾಗುತ್ತದೆ. ಅನಾಥರು, ಬಡವರ, ವಿಕಲಚೇತನರಿಗೆ ಮಾಡುವ ದಾನ–ಧರ್ಮದಿಂದ ದೇವರ ಅನುಗ್ರಹವಾಗಲಿದೆ ಎಂದು ಹೇಳಿದರು.



'ಮಾಡ್ಯುಲರ್ ಕೃತಕ ಅಂಗಗಳ(ಕೈ–ಕಾಲು) ಉಚಿತ ಜೋಡಣೆಗೆ ಮಾಪನ ಶಿಬಿರ' ನಡೆಯಿತು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ರಾಜ್ಯದ ಮೂಲೆ ಮೂಲೆಯಿಂದಲೂ ಜನ ಬಂದಿದ್ದಾರೆ. ಯಾರಿಗೆ ಕೃತಕ ಅಂಗಗಳನ್ನು ತೆಗೆದುಕೊಳ್ಳುವ ಆರ್ಥಿಕ ಶಕ್ತಿ ಇಲ್ಲವೋ ಅಂತಹವರು ಅಳತೆ ಕೊಟ್ಟು, ಮುಂದಿನ ತಿಂಗಳು ಕೃತಕ ಅಂಗಗಳನ್ನು ಪಡೆದುಕೊಳ್ಳಬಹುದಾಗಿದೆ. ಇದೊಂದು ಉತ್ಕೃಷ್ಟ ಸೇವಾ ಕಾರ್ಯಕ್ರಮವಾಗಿದ್ದು, ಸುಮಾರು 45 ಲಕ್ಷ ರೂ. ಖರ್ಚಾಗಲಿದೆ ಎನ್ನಲಾಗಿದೆ. ಮುಂದಿನ ದಿನಗಳಲ್ಲಿ ನಾನು ಕೂಡ ಇಂತಹ ಸೇವಾ ಕಾರ್ಯಗಳಿಗೆ ಸಹಕರಿಸುವ ಪ್ರಯತ್ನ ಮಾಡುತ್ತೇನೆ ಎಂದರು.

ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಗೋಪಾಲಗೌಡ ಮೆಮೋರಿಯಲ್ ಆಸ್ಪತ್ರೆಯ ವೈದ್ಯ ಡಾ.ಶುಶ್ರೂತ್‌ಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಲಯನ್ಸ್ ಇಂಟರ್ ನ್ಯಾಷನಲ್ ಸೇವಾ ವಿಭಾಗದ ಜಿಲ್ಲಾ ಕಾರ್ಯದರ್ಶಿ ಹೇಮಂತ್ ಕುಮಾರ್ ಬನ್ಸಾಲಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಮುಖ್ಯಸ್ಥ ಮಹಾವೀರ್ ಚಂದ್ ಬನ್ಸಾಲಿ, ಜೈನ್ ಮಿಲನ್ ಚಾರಿಟಬಲ್ ಟ್ರಸ್ಟ್‌ನ ಜಿಲ್ಲಾ ಮುಖ್ಯಸ್ಥ ವಿನೋದ್‌ಕುಮಾರ್ ಜೈನ್, ಜಿಲ್ಲಾಧ್ಯಕ್ಷ ಮದನ್‌ಲಾಲ್ ಮಾರೋ, ಲಯನ್ಸ್ ಕ್ಲಬ್ ಆಫ್ ಗೋಲ್ಡನ್ ಸಿಟಿ ಅಧ್ಯಕ್ಷೆ ಎಸ್.ಪ್ರಮೀಳ, ಕಾರ್ಯದರ್ಶಿ ಗೋಲ್ಡನ್ ಸುರೇಶ್, ಲಯನ್ಸ್ ಕ್ಲಬ್ ಆಫ್ ಮೈಸೂರು ಪೂರ್ವ ಅಧ್ಯಕ್ಷ ವೀರಸ್, ಕಾರ್ಯದರ್ಶಿ ವಿಜಯಲಕ್ಷ್ಮಿ, ಖಜಾಂಚಿ ವಿಕಾಶ್ ಜೈನ್, ಸ್ಥಾನಕ್ ವಾಸಿ ಜೈನ್ ಸಂಘದ ಅಧ್ಯಕ್ಷ ಸುಭಾಷ್ ಡಾರ್ಡ, ಕಾರ್ಯದರ್ಶಿ ಬುದ್ಧಮಲ್ ಜೈನ್, ಸಾಧು ಮಾರ್ಗಿ ಸಂಘದ ಜಿಲ್ಲಾಧ್ಯಕ್ಷ ಸುರೇಶ್ ಡಕ್, ಮುಖಂಡರಾದ ಸಮ್ರತ್ ಲಾಲ್ ಡಕ್, ಮನೀಶ್ ಡಕ್, ಮೇನ ದೇವಿ, ಪ್ರಕಾಶ್ ಡಕ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಿನಲ್ಲಿ 70ನೇ ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಣೆ

ವಿಜ್ಞಾನ, ತಂತ್ರಜ್ಞಾನದ ಜೊತೆ ಜೊತೆಗೆ ಕನ್ನಡ ಮತ್ತಷ್ಟು ಬಳಸಿ, ಬೆಳಸಬೇಕು

● ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಕರೆ ● ಕನ್ನಡ ಭಾಷೆ ಹಿಂದುಳಿಯದಂತೆ ಅನೇಕ ಕಾರ್ಯಕ್ರಮ ಜಾರಿ
● ಕನ್ನಡ ನಾಡು, ನುಡಿ ಅಭಿಮಾನ ಇಮ್ಮಡಿಗೊಳಿಸುವ ಸುದಿನ ● ವಿವಿಧ ಕ್ಷೇತ್ರದ ಸಾಧಕರಿಗೆ ರಾಜ್ಯೋತ್ಸವ ಪುರಸ್ಕಾರ

ಮೈಸೂರು, ನ.2(ಬಿಎಲ್‌ಯು)– ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಕನ್ನಡ ಲಿಪಿಯು ಹೆಚ್ಚು ಬಳಕೆಯಾಗುತ್ತಿದೆ. ಆದರೂ ವಿಜ್ಞಾನ–ತಂತ್ರಜ್ಞಾನದ ಜೊತೆ ಜೊತೆಗೆ ಕನ್ನಡವನ್ನು ಮತ್ತಷ್ಟು ಬಳಸಿ, ಬೆಳಸಬೇಕಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಕರೆ ನೀಡಿದರು.

ಮೈಸೂರು ವಿಶ್ವವಿದ್ಯಾನಿಲಯದ ಓವಲ್ ಮೈದಾನದಲ್ಲಿ ಶನಿವಾರ 70ನೇ ಅದ್ದೂರಿ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ತಂತ್ರಜ್ಞಾನದ ವೇಗ ಹಾಗೂ ಡಿಜಿಟಲ್ ಲೋಕದಲ್ಲಿ ಕನ್ನಡ ಭಾಷೆ ಹಿಂದುಳಿಯದಂತೆ ರಾಜ್ಯ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಕನ್ನಡದಲ್ಲಿ ಯೂನಿಕೋಡ್ ಅಕ್ಷರ ವಿನ್ಯಾಸ, ಪರಿವರ್ತಕಗಳು, ಮೊಬೈಲ್ ಹಾಗೂ ಬ್ರೈಲ್ ಲಿಪಿಯಲ್ಲಿ ಕನ್ನಡ ಬಳಕೆ ಸೇರಿ ಹಲವು ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ ಎಂದು ಹೇಳಿದರು.

ಅಖಂಡ ಕರ್ನಾಟಕ ನಿರ್ಮಾಣಕ್ಕೆ ಶ್ರಮಿಸಿದ ಎಲ್ಲಾ ಮಹನೀಯರನ್ನು ಸ್ಮರಿಸುವ ಸುದಿನ ಇದಾಗಿದೆ. ನಾಡು ನುಡಿ ಬಗೆಗಿನ ಪ್ರೀತಿ, ಅಭಿಮಾನವನ್ನು ಈ ದಿನ ಇಮ್ಮಡಿಗೊಳಿಸುತ್ತದೆ ಎಂದು ಡಾ.ಮಹದೇವಪ್ಪ ಅಭಿಪ್ರಾಯಪಟ್ಟರು.


ಹರಿದು ಹಂಚಿಹೋಗಿದ್ದ ಕನ್ನಡ ನಾಡಿನ ಏಕೀಕರಣಕ್ಕಾಗಿ ಆಲೂರು ವೆಂಕಟರಾಯರು ಅನೇಕ ಸಮ್ಮೇಳನಗಳನ್ನು ನಡೆಸಿ ಹೋರಾಟದ ಕಿಚ್ಚು ಹೊತ್ತಿಸಿದರು. 1950ರಲ್ಲಿ ಭಾರತ ಗಣರಾಜ್ಯವಾದ ನಂತರ ನಿರ್ದಿಷ್ಟ ಪ್ರದೇಶದ ಭಾಷೆ ಆಧಾರದ ಮೇಲೆ ವಿವಿಧ ಪ್ರಾಂತ್ಯಗಳಾಗಿ ನವೆಂಬರ್ 1, 1956ರಲ್ಲಿ ರಚನೆಯಾಯಿತು. ತರುವಾಯ ದೇವರಾಜ ಅರಸ್ ಅವರು ಮುಖ್ಯಮಂತ್ರಿ ಆಗಿದ್ದಾಗ 'ಮೈಸೂರು' ರಾಜ್ಯಕ್ಕೆ 'ಕರ್ನಾಟಕ' ಎಂದು ಮರುನಾಮಕರಣ ಮಾಡಲಾಯಿತು ಎಂದು ಹೇಳಿದರು.

ಮೈಸೂರಿನ ಈ ನೆಲ ಹಲವು ಕವಿ, ಸಾಹಿತಿಗಳು ಹಾಗೂ ಕಲಾವಿದರಿಗೆ ಜನ್ಮ ನೀಡಿದೆ. ಕನ್ನಡ ಸಾರಸ್ವತ ಲೋಕವು 8 ಜ್ಞಾನಪೀಠ ಪ್ರಶಸ್ತಿಗಳನ್ನು ತನ್ನ ಮುಡಿಗೇರಿಸಿಕೊಂಡಿದೆ. 21ನೇ ಶತಮಾನದ ಈ ಹೊತ್ತಿನಲ್ಲಿ ಕನ್ನಡ ಭಾಷೆ ಆಧುನಿಕತೆಯೊಂದಿಗೆ ತನ್ನದೆ ಆದ ಅಸ್ಮಿತೆಯನ್ನು ಉಳಿಸಿಕೊಂಡಿದೆ. ಈ ಮೂಲಕ ಕನ್ನಡ ನುಡಿಗೊಂದು ವಿಶೇಷ ಸೊಗಸು, ಸೌಂದರ್ಯ, ಬೆಡಗಿದೆ. ಈ ಹಿನ್ನೆಲೆ ಪ್ರಾದೇಶಿಕ ಸಂಸ್ಕೃತಿಯನ್ನು ಎತ್ತಿ ಹಿಡಿಯೋಣ ಎಂದು ಕರೆ ನೀಡಿದರು.

ಕನ್ನಡ ಧ್ವಜಾರೋಹಣಕ್ಕೂ ಮುನ್ನ ಡಾ.ಮಹದೇವಪ್ಪ ಪಥ ಸಂಚಲನದ ಪರಿವೀಕ್ಷಣೆ ನಡೆಸಿದರು. ತರುವಾಯ ಪೊಲೀಸ್, ಅಗ್ನಿ ಶಾಮಕ ದಳ, ಗೃಹ ರಕ್ಷಕ ದಳ, ಎನ್ ಸಿಸಿ, ಎನ್‌ಎಸ್‌ಎಸ್ ಹಾಗೂ ವಿವಿಧ ಶಾಲಾ ವಿದ್ಯಾರ್ಥಿಗಳಿಂದ ಗೌರವ ವಂದನೆ ಸ್ವೀಕರಿಸಿದರು.

ವಿವಿಧ ಕ್ಷೇತ್ರಗಳ 95 ಸಾಧಕರಿಗೆ ಮೈಸೂರು ಪೇಟ ತೊಡಿಸಿ ಸನ್ಮಾನಿಸಿದರು. ಈ ವೇಳೆ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಗಳ ವರದಿಗಾರ ಎಂ.ಟಿ.ಯೋಗೇಶ್ ಕುಮಾರ್ ಅವರಿಗೆ ಕನ್ನಡ ರಾಜ್ಯೋತ್ಸವ ಪುರಸ್ಕಾರ ನೀಡಿ ಡಾ.ಮಹದೇವಪ್ಪ ಸನ್ಮಾನಿಸಿದರು.

ಇದಕ್ಕೂ ಮೊದಲು ಮೈಸೂರು ಅರಮನೆಯಲ್ಲಿರುವ ಶ್ರೀ ಭುವನೇಶ್ವರಿ ದೇವಾಲಯಕ್ಕೆ ಭೇಟಿ ನೀಡಿದ ಡಾ.ಮಹದೇವಪ್ಪ ಅವರು, ತಾಯಿ ಭುವನೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸಿದರು. ನಂತರ ಶ್ರೀ ಭುವನೇಶ್ವರಿ ತಾಯಿ ಮೆರವಣಿಗೆಯ ರಥಕ್ಕೆ ಚಾಲನೆ ನೀಡಿದರು. ಮೈಸೂರಿನ ಕಲಾಮಂದಿರದಲ್ಲಿ ರಾಜ್ಯೋತ್ಸವದ ಹಿನ್ನೆಲೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿತ್ತು. ಹಾಡಿರೆ ರಾಗಗಳ–ತೂಗಿರೆ ದೀಪಗಳ ಕಾರ್ಯಕ್ರಮದಲ್ಲಿ ಹಲವು ಕಲಾ ತಂಡಗಳು ಗೀತೆ, ಭಕ್ತಿಗೀತೆ, ಭಾವಗೀತೆಗಳ ಪ್ರಸ್ತುತಪಡಿಸಿದರು. ಶಾಸಕರಾದ ಜಿ.ಟಿ.ದೇವೇಗೌಡ, ಕೆ.ಹರೀಶ್‌ಗೌಡ, ತನ್ವೀರ್‌ಸೇಠ್, ಸಿ.ಎನ್.ಮಂಜೇಗೌಡ, ಕೆ.ಶಿವಕುಮಾರ್, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಯುಕೇಶ್‌ಕುಮಾರ್, ನಗರ ಪಾಲಿಕೆ ಆಯುಕ್ತ ಷೇಕ್ ಆಸೀಫ್ ತನ್ವೀರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ, ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮೈಸೂರು ವಿಶ್ವವಿದ್ಯಾನಿಲಯದ ಓವಲ್ ಮೈದಾನದಲ್ಲಿ ಶನಿವಾರ 70ನೇ ಅದ್ದೂರಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಪಥ ಸಂಚಲನದ ಗೌರವ ವಂದನೆ ಸ್ವೀಕರಿಸಿದರು (ಎಡಚಿತ್ರ). ಪಥ ಸಂಚಲನದಲ್ಲಿ ಶಿಸ್ತು ಬದ್ಧರಾಗಿ ಸಾಗಿದ ವಿವಿಧ ತಂಡಗಳನ್ನು ಬಲಚಿತ್ರದಲ್ಲಿ ಕಾಣಬಹುದು.



ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ 70ನೇ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ



ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಶನಿವಾರ 70ನೇ ಕನ್ನಡ ರಾಜ್ಯೋತ್ಸವ ಆಚರಣೆ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2025ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಚಿತ್ರದಲ್ಲಿ (ಎಡದಿಂದ) ನಾಟ್ಯಾಚಾರ್ಯ ಪ್ರೊ.ಕೆ.ರಾಮಮೂರ್ತಿರಾವ್, ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕ್ರೀಡಾಪಟು ಎಂ.ಯೋಗೇಂದ್ರ (ಮೈಸೂರಿನವರು), ರಂಗಾಯಣ ಮಾಜಿ ಕಲಾವಿದ ಮೈಮ್ ರಮೇಶ್ (ದಕ್ಷಿಣ ಕನ್ನಡ) ಮತ್ತು ಜಿಂದಾಲ್ ನೇಚರ್‌ಕ್ಯೂರ್ ಸಂಸ್ಥೆಯ ಮುಖ್ಯ ವೈದ್ಯಾಧಿಕಾರಿ ಡಾ.ನೆಲ್ಲಮಕ್ಕಡ ಎಂ.ಬಬಿನ (ಕೊಡಗು) ಪ್ರಶಸ್ತಿ ಸ್ವೀಕರಿಸಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ, ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರ ಹಾಗೂ ಎಂಎಲ್ಸಿ ನಸೀರ್ ಅಹಮದ್ ಇನ್ನಿತರರು ಉಪಸ್ಥಿತರಿದ್ದರು.

ಹಿನಕಲ್ ಮಂಜುಗೆ ಸನ್ಮಾನ



ಮೈಸೂರು ಜಿಲ್ಲಾಡಳಿತ ವತಿಯಿಂದ ಕನ್ನಡ ರಾಜ್ಯೋತ್ಸವ ಪುರಸ್ಕಾರಕ್ಕೆ ಭಾಜನರಾದ ಮೈಸೂರು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಹಿನಕಲ್ ಮಂಜು ಅವರನ್ನು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸಿ.ನರೇಂದ್ರ ಸನ್ಮಾನಿಸಿದರು. ಈ ವೇಳೆ ಮೈಸೂರು ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ವಿಭಾಗದ ಅಧ್ಯಕ್ಷ ನಾಗವಾಲ ಮಹೇಶ್, ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷ ಪೈಲ್ವಾನ್ ನವೀನ್, ಚಾಮುಂಡೇಶ್ವರಿ ಬ್ಲಾಕ್ ಯುವ ಕಾಂಗ್ರೆಸ್ ಉಪಾಧ್ಯಕ್ಷ ಎಸ್‌ಆರ್‌ಎಸ್ ಮಂಜು, ಕಾಂಗ್ರೆಸ್ ಮುಖಂಡ ಜವರನಾಯಕ, ನಾಗವಾಲ ಗ್ರಾಪಂ ಸದಸ್ಯ ಮಂಜ ಉಪಸ್ಥಿತರಿದ್ದರು.

ಕುವೆಂಪು ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದಿಂದ ರಾಜ್ಯೋತ್ಸವ



ಮೈಸೂರಿನ ಕುವೆಂಪುನಗರದಲ್ಲಿರುವ ಕುವೆಂಪು ಒಕ್ಕಲಿಗರ ಕ್ಷೇಮಾಭಿವೃದ್ಧಿ ಕಚೇರಿ ಆವರಣದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಟ್ರಸ್ಟ್ ಉಪಾಧ್ಯಕ್ಷ ಉಮಾಶಂಕರ್ ವಹಿಸಿದ್ದರು. ಶಾಂತವೇರಿ ಗೋಪಾಲ ಗೌಡ ಮೆಮೋರಿಯಲ್ ಆಸ್ಪತ್ರೆಯ ನಿರ್ದೇಶಕ ಡಾ.ಹೆಚ್.ವಿ.ಶುಶ್ರೂತ್‌ಗೌಡ ಧ್ವಜಾರೋಹಣ ನೆರವೇರಿಸಿದರು. ಸಮಾರಂಭದಲ್ಲಿ ಕಾರ್ಯದರ್ಶಿ ರಘುರಾಂ ಗೌಡ, ಸಂಘಟನಾ ಕಾರ್ಯದರ್ಶಿ ಪೂಜಾ, ಟೆಂಟ್‌ಹೌಸ್ ಲಿಂಗಪ್ಪ, ಸಂಚಾಲಕರಾದ ಬೂಕನಕೆರೆ ವಿಜೇಂದ್ರ, ಖಜಾಂಜಿ ಅನಿಲ್.ಪಿ.ಬಿ,ಡಾ. ಎಲ್.ದೇವೇಗೌಡ, ಕುಮಾರ್‌ಗೌಡ, ಲಕ್ಷ್ಮೀದೇವಿ ಸುಶೀಲಾ, ನಂಜಪ್ಪ, ಶ್ರೀನಿವಾಸ್, ರವಿ, ನಾರಾಯಣಗೌಡ, ಬಿ.ಟಿ.ಬಸವರಾಜು, ಹೆಚ್.ಎಂ.ಗಿರೀಶ್, ಜಿ.ಎಲ್.ಶಿವಣ್ಣ, ಬೋರಯ್ಯ, ಆನಂದ್ ಮುಂತಾದ ಟ್ರಸ್ಟ್‌ನ ಪದಾಧಿಕಾರಿಗಳು ಹಾಗೂ ಸದಸ್ಯರುಗಳು ಹಾಜರಿದ್ದರು

ಗೃಹಿಣಿ ನಾಪತ್ತೆ

ಮೈಸೂರು, ನ.2– ಕೆ.ಆರ್.ಆಸ್ಪತ್ರೆಯಿಂದ ಗೃಹಿಣಿ ನಾಪತ್ತೆಯಾಗಿರುವ ಬಗ್ಗೆ ದೇವರಾಜ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.



ಸರಸ್ವತಿಪುರಂ ನಿವಾಸಿ ಎಸ್.ಆರ್. ಶೇಖರಪ್ಪ ಅವರ ಪತ್ನಿ ಎಂ.ಜೆ. ಪ್ರಭಾವತಿ ನಾಪತ್ತೆಯಾದವರಾಗಿದ್ದು, ಕಿಡ್ನಿ ಸಮಸ್ಯೆ ಬಳಲುತ್ತಿದ್ದ ಪತಿಯ ನಾದಿನಿ ಜ್ಯೋತಿ ಎಂಬುವರ ಆರೈಕೆಗಾಗಿ ಆಸ್ಪತ್ರೆಯಲ್ಲಿದ್ದ ಇವರು ಅ.17ರಂದು ನಾಪತ್ತೆಯಾಗಿದ್ದಾರೆ.

ಸುಳಿವು ಸಿಕ್ಕಲ್ಲಿ ದೇವರಾಜ ಪೊಲೀಸ್ ಠಾಣೆ ದೂ.ಸಂ:0821–2418306 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ,

ನೂತನ ಪದಾಧಿಕಾರಿಗಳು



ಮೈಸೂರು ಆಂಗ್ಲೋ–ಇಂಡಿಯನ್ ಅಸೋಸಿಯೇಷನ್‌ನ 2025–26ನೇ ಸಾಲಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ಚಿತ್ರದಲ್ಲಿ ಎಡದಿಂದ ಜಂಟಿ ಖಜಾಂಚಿ ಬಾರ್ಬರಾ ಬೇಯರ್, ಸದಸ್ಯ ರಿಚರ್ಡ್ ಶೆಫರ್ಡ್, ಯುವ ಸದಸ್ಯರಾದ ಜಸ್ಟಸ್ ರೊಡ್ರಿಗಸ್, ರೋಜರ್ ಲೂಯಿಸ್, ಶೆಲ್ಡನ್ ಟೇಲರ್, ಸದಸ್ಯ ಗ್ಲೆನ್ ಟೇಲರ್, ಗೌರವ ಖಜಾಂಚಿ ಜೂಡ್ ಡೇಲಿ, ಅಧ್ಯಕ್ಷ ಜಾಯ್ ಆಂಥೋನಿ ಡವ್, ಆಡಳಿತ ಮಂಡಳಿ ಸದಸ್ಯ ಡಾ.ಲಾರೆನ್ಸ್ ಜೆಂಕಿನ್ಸ್, ಗೌರವ ಕಾರ್ಯದರ್ಶಿ ಜಿ.ಎ.ಎಡ್ವರ್ಡ್ಸ್, ಉಪಾಧ್ಯಕ್ಷೆ ಕ್ಯಾರೋಲಿನ್ ಡೇಲಿ, ಜಂಟಿ ಕಾರ್ಯದರ್ಶಿ ಹಾಗೂ ಯುವ ಸದಸ್ಯೆ ಕ್ರಿಸ್ಟೀನ್ ಲಿನ್ ಡಿ'ಕ್ರೂಜ್ ಹಾಗೂ ಯುವ ಸದಸ್ಯೆ ಸಿಂಥಿಯಾ ಪೆರೇರಾ ಅವರನ್ನು ಚಿತ್ರದಲ್ಲಿ ಕಾಣಬಹುದು.



ಪ್ರಶಸ್ತಿ ಪ್ರದಾನ

ಸಂಧ್ಯಾ ಸುರಕ್ಷ ಟ್ರಸ್ಟ್‌ನ 20ನೇ ವಾರ್ಷಿಕೋತ್ಸವ ಅಂಗವಾಗಿ ತೇಜಸ್ ಲೋಕೇಶ್ ಗೌಡ, ಎಂ. ಚಂದ್ರಶೇಖರ್, ಬಿ.ವಿ. ಶೇಷಾದ್ರಿ, ಪುಷ್ಪಾ ಅಯ್ಯಂಗಾರ್, ಅಂಶಿ ಪ್ರಸನ್ನಕುಮಾರ್, ರಂಗನಾಥ್ ಮೈಸೂರು, ವಿಕ್ರಾಂತ್ ಪಿ. ದೇವೇಗೌಡ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಬಿ.ಆರ್. ನಟರಾಜ ಜೋಯಿಸ್, ಮಂಗಳಾ ಜೋಯಿಸ್, ಕೆ. ರಘುರಾಂ ವಾಜಪೇಯಿ, ಮಡ್ಡೀಕೆರೆ ಗೋಪಾಲ್, ಡಾ.ವೈ.ಡಿ. ರಾಜಣ್ಣ, ವೆಂಕಟಸುಬ್ಬಯ್ಯ ಉಪಸ್ಥಿತರಿದ್ದರು.

ಮೈಮುಲ್ ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವ



ಮೈಮುಲ್ ಕಚೇರಿಯಲ್ಲಿ ಅಧ್ಯಕ್ಷರಾದ ಕೆ.ಈರೇಗೌಡ ಅವರು ಕನ್ನಡ ರಾಜ್ಯೋತ್ಸವವನ್ನು ಆಚರಿಸುವ ಮೂಲಕ ಕನ್ನಡ ಜನತೆಗೆ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್.ಸುರೇಶ್ ನಾಯ್ಕ್ ಮೈಮುಲ್ ಎಂಪ್ಲಾಯಿಸ್ ಯೂನಿಯನ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಹಾಜರಿದ್ದರು.

ಸನ್ಮತಿ ಲೇಡಿಸ್ ಫೌಂಡೇಶನ್‌ನಿಂದ ರಾಜ್ಯೋತ್ಸವ



ಸನ್ಮತಿ ಲೇಡಿಸ್ ಫೌಂಡೇಶನ್ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಈ ಸಂದರ್ಭದಲ್ಲಿ ಪೌಂಡೇಷನ್‌ನ ಪದಾಧಿಕಾರಿಗಳು ಮತ್ತು ಸದಸ್ಯರುಗಳು ಹಾಜರಿದ್ದರು.

ಡಾ. ಸಿಪಿಕೆಗೆ ಸಾಹಿತ್ಯ ಪುರುಷ ಸರಸ್ವತಿ ಪ್ರಶಸ್ತಿ ಪ್ರದಾನ

ಮೈಸೂರು, ನ.2– ಕರ್ನಾಟಕ ಸುಗಮ ಸಂಗೀತ ಪರಿಷತ್ತು, ಶ್ರೀ ಅನಂತೇಶ್ವರ ಟ್ರಸ್ಟ್ ವತಿಯಿಂದ ನಾದಬ್ರಹ್ಮ ಸಂಗೀತ ಸಭಾದಲ್ಲಿ ಭಾನುವಾರ ಏರ್ಪಡಿಸಿದ್ದ ಕನ್ನಡಹಬ್ಬದಲ್ಲಿ ಹಿರಿಯ ಸಾಹಿತಿ ಡಾ.ಸಿಪಿಕೆ ಅವರಿಗೆ ಸಾಹಿತ್ಯ ಪುರುಷ ಸರಸ್ವತಿ, ಪ್ರೊ.ಎನ್.ಕೆ. ಲೋಲಾಕ್ಷಿ, ಡಾ.ಎ.ಡಿ. ಶ್ರೀನಿವಾಸನ್, ಇಂದುಶೇಖರ್ ಅವರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಎರಡೂ ಸಂಘಟನೆಗಳ ಅಧ್ಯಕ್ಷ ನಾಗರಾಜ ವಿ. ಬೈರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಪ್ರಶಸ್ತಿ ಪ್ರದಾನ ಮಾಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸಂಸ್ಕೃತಿ ಚಿಂತಕ ಶಂಕರ್‌ದೇವನೂರು ಮುಖ್ಯ ಅತಿಥಿಗಳಾಗಿದ್ದರು. ಸಾಹಿತಿ ಜಯಪ್ಪ ಹೊನ್ನಾಳಿ ಸಾಧಕರನ್ನು ಪರಿಚಯಿಸಿದರು. ಹಿರಿಯ ಪತ್ರಕರ್ತ ಎಸ್.ಟಿ. ರವಿಕುಮಾರ್ ಅಭಿನಂದನಾ ಭಾಷಣ ಮಾಡಿದರು.



ಹಿರಿಯ ಸಾಹಿತಿ ಡಾ.ಸಿ.ಪಿ. ಕೃಷ್ಣಕುಮಾರ್ ಅವರಿಗೆ ಜೀವಮಾನದ ಸಾಧನೆಗಾಗಿ ಸಾಹಿತ್ಯ ಸರಸ್ವತಿ ಪುರುಷ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ. ಎನ್.ಕೆ. ಲೋಲಾಕ್ಷಿ, ಗಾಯಕ ಡಾ.ಎ.ಡಿ. ಶ್ರೀನಿವಾಸನ್ ಹಾಗೂ ತಬಲಾ ವಾದಕ ಇಂದು ಶೇಖರ್ ಅವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗೀತಗಾಯನ : ಗಾಯಕರಾದ ಇಂದ್ರಾಣಿ ಅನಂತರಾಜ್, ರಶ್ಮಿ ಚಿಕ್ಕಮಗಳೂರು, ರಾಜೇಶ್ ಪಡಿಯಾರ್, ಎನ್. ಬೆಟ್ಟೇಗೌಡ, ಶ್ರೀಧರ್, ಡಾ.ವೈ.ಡಿ. ರಾಜಣ್ಣ, ರವಿರಾಜ್ ಹಾಸು, ಕವಿತಾ ಕಾಮತ್, ಪೂರ್ಣಿಮಾ, ಶ್ರೀಲತಾ, ಸಿ.ಎಸ್. ವಾಣಿ, ಅಬ್ದುಲ್ ಖಯ್ಯಾಂ, ನಾಗೇಂದ್ರ, ವೇದಶ್ರೀ, ಸುಜಾತಾ ಜಯಕುಮಾರ್, ವಾಣಿಶ್ರೀ, ಪಿ.ಎಂ. ಸುರೇಶ್, ಶುಭಪಲ್ಲವಿ, ಶಶಿಕಲಾ ಅನಂತರಾವ್, ಸ್ಫೂರ್ತಿ, ಶೀಲಾ ಗುರುದತ್, ಸಿಂಚನ, ಸಿ. ರಮೇಶ್, ಸುಗಂಧಮ್ಮ ಜಯಪ್ಪ, ಸುಮಿತ್ರ, ಮಾನ್ವಿ ಯು.ಎಸ್. ಆಚಾರ್, ಚಾರ್ವಿ ಸತೀಶ್, ಪಿ. ಮಾನ್ಯತಾ, ಉಪಾಸನಾ, ಜರುಷ ಅವರು ಗೀತಗಾಯನ ನಡೆಸಿಕೊಟ್ಟರು. ಎಲ್ಲಾ ಗಾಯಕರನ್ನು ಸನ್ಮಾನಿಸಲಾಯಿತು.

ವಾದ್ಯಗಾರರಾದ ಗಣೇಶ್ ಭಟ್– ಕೀ ಬೋರ್ಡ್, ನಾಗಲಿಂಗೇಶ್ ಆಚಾರ್– ಕೀ ಬೋರ್ಡ್, ರಘುನಾಥ್– ತಬಲ, ರಾಘವೇಂದ್ರ ಪ್ರಸಾದ್– ಡ್ರಮ್ಸ್, ಗುರುದತ್– ರಿದಂ ಪ್ಯಾಡ್, ಬಾಲಸುಬ್ರಹ್ಮಣ್ಯ – ಕೊಳಲು ಸಾಥ್ ನೀಡಿದರು.

ಕನ್ನಡ ರಾಜ್ಯೋತ್ಸವ ಅಂಗವಾಗಿ ಕನ್ನಡದ ಮಹತ್ವ ಕುರಿತ ಗೀತೆಗಳನ್ನು ಹಾಡಿದ್ದು ವಿಶೇಷವಾಗಿತ್ತು.

ಮೈಸೂರು ಮಿತ್ರ ಸೋಮವಾರ 3 ನವೆಂಬರ್ 2025

ಪಾಂಡವಪುರ ಶಾಸಕರ ಗೈರು ಹಾಜರಿಯಲ್ಲಿ ಕನ್ನಡ ರಾಜ್ಯೋತ್ಸವ

ಪಾಂಡವಪುರ, ನ.2– ಪಟ್ಟಣದ ಪಾಂಡವ ಕ್ರೀಡಾಂಗಣದಲ್ಲಿ ತಾಲೂಕು ಆಡಳಿತದ ವತಿಯಿಂದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರ ಗೈರು ಹಾಜರಿಯಲ್ಲಿ ಆಚರಣೆ ಮಾಡಲಾಯಿತು.

ಪಾಂಡವ ಕ್ರೀಡಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಶ್ರೀನಿವಾಸ್ ಅವರು ಧ್ವಜಾರೋಹಣ ನೆರವೇರಿಸುವ ಮೂಲಕ ಚಾಲನೆ ನೀಡಿದರು. ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಶ್ರೀನಿವಾಸ್ ಅವರು ಬ್ಯಾಂಡ್‌ಸೆಟ್ ತಂಡ ಹಾಗೂ ಶಾಲಾ ವಿದ್ಯಾರ್ಥಿಗಳ ತಂಡದ ಸದಸ್ಯರಿಗೆ ವಂದನೆ ಸಲ್ಲಿಸಿದರು. ಬಳಿಕ ವೇದಿಕೆ ಮೇಲಿನ ಗಣ್ಯರಿಗೆ ಪಥಸಂಚಲನದ ಮೂಲಕ ಶಾಲಾ ವಿದ್ಯಾರ್ಥಿಗಳು, ಎನ್‌ಸಿಸಿ ಹಾಗೂ ಬ್ಯಾಂಡ್ ಸೆಟ್ ತಂಡಗಳ ಸದಸ್ಯರು ವಂದನೆ ಸಲ್ಲಿಸಿದರು.

ಕನ್ನಡ ಕೇವಲ ಒಂದು ಭಾಷೆಯಲ್ಲ, ಇದು ನಮ್ಮ ಅಸ್ಮಿತೆ



ಕಾರ್ಯಕ್ರಮದಲ್ಲಿ ಮಾತನಾಡುತ್ತಿರುವ ಸಚಿವ ಚಲುವರಾಯಸ್ವಾಮಿ.

ಮಂಡ್ಯ: ಕನ್ನಡ ಸಾಹಿತ್ಯಕ್ಕೆ ದೊರೆತಿರುವ 8 ಜ್ಞಾನಪೀಠ ಪ್ರಶಸ್ತಿಗಳೇ ನಮ್ಮ ಭಾಷೆಯ ಶ್ರೀಮಂತಿಕೆಗೆ ಸಾಕ್ಷಿ. ಬಸವಣ್ಣನವರ ವಚನಗಳು, ದಾಸರ ಕೀರ್ತನೆಗಳು, ಕವಿಗಳ ಕಾವ್ಯಗಳು ನಮ್ಮ ನಾಡಿನ ಪರಂಪರೆ, ಕನ್ನಡ ಕೇವಲ ಒಂದು ಭಾಷೆಯಲ್ಲ, ಅದು ನಮ್ಮ ಅಸ್ಮಿತೆ ಎಂದು ಕೃಷಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು.

ಜಿಲ್ಲಾಡಳಿತ ವತಿಯಿಂದ ನಗರದ ಸರ್. ಎಂ ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನವೆಂಬರ್ 1 ರಂದು ನಾವೆಲ್ಲರೂ ಅತ್ಯಂತ ಸಡಗರ–ಸಂಭ್ರಮದಿಂದ ಎಲ್ಲ ಜಾತಿ ಮತ ಧರ್ಮಗಳ ಜನರು ಸೇರಿ ಒಗ್ಗೂಡಿ ಕನ್ನಡ ರಾಜ್ಯೋತ್ಸವವನ್ನು ಆಚರಿಸುತ್ತೇವೆ. 1950ರಲ್ಲಿ ಭಾರತವು ಗಣರಾಜ್ಯವಾದ ನಂತರ ಭಾಷಾವಾರು ಪ್ರಾಂತ್ಯಗಳ ರಚನೆಯ ಅನಿವಾರ್ಯತೆಯಿಂದ ಫಜಲ್ ಅಲಿ ನೇತೃತ್ವದ ಸಮಿತಿ ರಚಿಸಿ, ವರದಿ ಪಡೆಯಲಾಯಿತು. ಈ ವರದಿಯ ಆಧಾರದ ಮೇಲೆ ನವೆಂಬರ್ 1, 1956ರಲ್ಲಿ ಭಾಷಾವಾರು ಪ್ರಾಂತ್ಯಗಳು ರಚನೆಯಾಗಿ ಕನ್ನಡ ಭಾಷೆಯನ್ನಾಡುವ ಪ್ರಾಂತ್ಯಗಳನ್ನೊಳಗೊಂಡ ಮೈಸೂರು ರಾಜ್ಯ ಉದಯವಾಯಿತು ಎಂದರು.

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನವೆಂಬರ್ 1, 1973 ರಲ್ಲಿ ಕರ್ನಾಟಕದ ಮಾಜಿ ಮುಖ್ಯಮಂತ್ರಿ ದಿ.ಡಿ.ದೇವ ರಾಜ ಅರಸುರವರು ನಾಮಕರಣ ಮಾಡಿದರು. ಕರ್ನಾಟಕ ರಾಜ್ಯದ ಏಕೀಕರಣಕ್ಕೆ ಹಲವಾರು ವ್ಯಕ್ತಿಗಳು ಕಾರಣ ಕರ್ತರಾಗಿದ್ದಾರೆ. ಹುಯಿಲಗೋಳ ನಾರಾಯಣ ರಾವ್, ಎನ್.ಎಸ್.ಹರ್ಡೀಕರ್, ಗಂಗಾಧರರಾವ್ ದೇಶಪಾಂಡೆ, ಆರ್.ದಿವಾಕರ್, ಸಕ್ಕರಿ ಬಾಳಾಚಾರ್ಯ, ಕುವೆಂಪು, ಮಾಸ್ತಿ ವೆಂಕಟೇಶ ಅಯ್ಯಂಗಾರ್, ಕೆ.ಶಿವರಾಮ ಕಾರಂತ, ಎ.ಎನ್.ಕೃಷ್ಣರಾವ್ ಮತ್ತು ಬಿ.ಎಂ.ಶ್ರೀಕಂಠಯ್ಯ ಹಾಗೂ ಇನ್ನೂ ಹಲವು ಮಹನೀಯರ ಹೋರಾಟ ಸ್ಮರಣೀಯ ಎಂದು ತಿಳಿಸಿದರು.

ನಮ್ಮ ಸರ್ಕಾರದ ಮೂಲ ಧ್ಯೇಯ ಸಮಾನತೆ ಮತ್ತು ಸಾಮಾಜಿಕ ನ್ಯಾಯ, ಜನಸಾಮಾನ್ಯರ ಮತ್ತು ಹಿಂದುಳಿದ ವರ್ಗದವರ ಅಗತ್ಯತೆಗಳನ್ನು ಪೂರೈಸುವ ಹಿನ್ನಲೆಯಲ್ಲಿ 5 ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂಬ ಹೆಗ್ಗಳಿಕೆ ನಮ್ಮ ಸರ್ಕಾರದ ಹೆಮ್ಮೆ ಎಂದು ಅಭಿಪ್ರಾಯಪಟ್ಟರು.

ನಮ್ಮ ಸರ್ಕಾರ ನೀರಾವರಿ ಹಾಗೂ ಕೃಷಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಮಂಡ್ಯ ತಾಲೂಕಿನ ಹೆಬ್ಬಕವಾಡಿ ನಾಲೆ ಮರುವಿನ್ಯಾಸ ಕಾಮಗಾರಿಗೆ ರೂ.286 ಕೋಟಿ ವೆಚ್ಚದಲ್ಲಿ ಅನುಮೋದನೆ ನೀಡಲಾಗಿದ್ದು, ಶೀಘ್ರವೇ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ಮದ್ದೂರು ತಾಲೂಕಿನ ಸೂಳೆಕೆರೆ ನಾಲೆ ಅಭಿವೃದ್ಧಿ, ಕೆರೆ ಅಭಿವೃದ್ಧಿ, ಕೆರೆ ಸಂರಕ್ಷಣೆ ಮತ್ತು ವೈದ್ಯನಾಥ ನಾಲೆ ಅಭಿವೃದ್ಧಿಗಾಗಿ ಒಟ್ಟು ರೂ.150 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. CDS ನಾಲೆ ಅಭಿವೃದ್ಧಿಗಾಗಿ ರೂ.50 ಕೋಟಿ ಹಾಗೂ ವಿಶ್ವೇಶ್ವರಯ್ಯ ನಾಲೆ ಅಭಿವೃದ್ಧಿಗಾಗಿ ರೂ.120 ಕೋಟಿ ವೆಚ್ಚದಲ್ಲಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಗಣಿಗ ರವಿಕುಮಾರ್, ದಿನೇಶ್ ಗೂಳಿಗೌಡ, ಜಿಲ್ಲಾಧಿಕಾರಿ ಡಾ.ಕುಮಾರ್, ಸಿಇಓ ಕೆಆರ್.ನಂದಿನಿ, ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಮಾಜಿ ಶಾಸಕ ಎಂ.ಶ್ರೀನಿವಾಸ್, ನಗರಸಭೆಯ ಅಧ್ಯಕ್ಷ ಎಂ.ವಿ.ಪ್ರಕಾಶ್, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಕರ್ನಾಟಕ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದ ಉಪಾಧ್ಯಕ್ಷೆ ವಿಜಯಲಕ್ಷ್ಮಿ ರಘುನಂದನ್, ಮೂಡಾ ಅಧ್ಯಕ್ಷ ನಯೀಮ್ ಇತರರಿದ್ದರು.


ಕನ್ನಡ ಭಾಷೆ ಮರೆಯದೆ ಮೆರೆಯುವ ಭಾಷೆ ಆಗಲಿ

ಕಿಕ್ಕೇರಿ: ನಮ್ಮ ಕನ್ನಡ ಭಾಷೆ ಮರೆಯದೆ ಮನದಾಳದಿಂದ ಮೆರೆಯುವ ಭಾಷೆಯಾದರೆ ಮಾತ್ರ ಉಳಿಯಲಿದೆ ಎಂದು ಕೆಪಿಎಸ್ ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಐಕನಹಳ್ಳಿ ಕೃಷ್ಣೇಗೌಡ ಅಭಿಪ್ರಾಯಪಟ್ಟರು.

ಪಟ್ಟಣದ ಕೆಪಿಎಸ್ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡುತ್ತ, ಕನ್ನಡ ಭಾಷೆಗೆ ಸುಂದರ ಲಿಪಿ ಇದ್ದು, ಸುಲಿದ ಬಾಳೆಹಣ್ಣಿನಂತೆ ಸುಂದರವಾಗಿ ಮಾತನಾಡುವ ಭಾಷೆ ನಮ್ಮದು. ಕನ್ನಡಿಗರು ಶಾಂತಿ ಪ್ರಿಯರಾಗಿದ್ದು, ಮೊದಲು ಅನ್ನ ಕೊಡುವ ಭಾಷೆ ಮಾತೃಭಾಷೆ ಕನ್ನಡವನ್ನು ಮರೆಯಬಾರದು ಎಂದರು.

ಉಪಪ್ರಾಂಶುಪಾಲ ಚಲುವನಾರಾಯಣಸ್ವಾಮಿ ಮಾತನಾಡಿದರು. ರಾಷ್ಟ್ರಧ್ವಜ, ಕನ್ನಡ ಧ್ವಜಾರೋಹಣ ಮಾಡಲಾಯಿತು. ಕನ್ನಡಾಂಬೆ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಶಿಕ್ಷಕರಾದ ಪರಶಿವಮೂರ್ತಿ, ಸುರೇಶ್, ಗಿರೀಶ್, ದೀಪಕ್, ಕೃಷ್ಣಪ್ಪ, ವೆಂಕಟರಮಣ ಹೆಗ್ಗಡೆ, ಸಾಹಿದ್ ರಿಜ್ವಿ, ರಾಗಿಣಿ, ನಂದಿನಿ, ವಿಶಾ ಲಾಕ್ಷಿ, ಲೀಲಾವತಿ ಇದ್ದರು.

ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ 2 ಸ್ಥಾನ, ಜೆಡಿಎಸ್‌ಗೆ ಒಂದು ಸ್ಥಾನ



ಚುನಾವಣೆಯಲ್ಲಿ ವಿಜೇತರಾದವರನ್ನು ಅಭಿನಂದಿಸಲಾಯಿತು.

ಮಂಡ್ಯ: ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಆಡಳಿತ ಮಂಡಳಿಯ ಐದು ವರ್ಷಗಳ ಅವಧಿಗೆ ಮೂರು ನಿರ್ದೇಶಕ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ 2 ಹಾಗೂ ಜೆಡಿಎಸ್ ಬೆಂಬಲಿತ ಸದಸ್ಯರು ಒಂದು ಸ್ಥಾನ ಗೆಲುವ ಸಾಧಿಸಿದ್ದಾರೆ.

ಇದರಿಂದ ಆಡಳಿತ ಮಂಡಳಿಯ 12 ನಿರ್ದೇಶಕ ಸ್ಥಾನಗಳ ಪೈಕಿ ಕಾಂಗ್ರೆಸ್ 11 ಸ್ಥಾನ ಪಡೆಯುವ ಮೂಲಕ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಜೆಡಿಎಸ್–ಬಿಜೆಪಿ ಮೈತ್ರಿಗೆ ಮುಖಭಂಗ ಉಂಟಾಗಿದೆ.

ಭಾನುವಾರ ನಗರದ ಮೈಷುಗರ್ ಪ್ರೌಢ ಶಾಲೆಯಲ್ಲಿ ಬೆಳಗ್ಗೆಯಿಂದ ಆರಂಭಗೊಂಡ ಚುನಾವಣೆಯಲ್ಲಿ ಮಂಡ್ಯ ತಾಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕ್ಷೇತ್ರದಲ್ಲಿ ಸಾತನೂರು ಗ್ರಾಮದ ಸತೀಶ್ ಮತ್ತು ಹಳೇಬೂದನೂರು ಗ್ರಾಮದ ಸ್ವಾಮಿ ಕಣದಲ್ಲಿದ್ದರು. ಪಾಂಡವಪುರ ತಾಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕ್ಷೇತ್ರದಲ್ಲಿ ಅರಳಕುಪ್ಪೆ ಗ್ರಾಮದ ಅಶೋಕ ಎ.ಆರ್. ಮತ್ತು ಹೊಸಕೋಟೆ ಗ್ರಾಮದ ಎಚ್.ಸಿ.ಪುಟ್ಟಸ್ವಾಮಿಗೌಡ ನಡುವೆ ತೀವ್ರ ಪೈಪೋಟಿ ನಡೆದಿತ್ತು.

ಕೆ.ಆರ್.ಪೇಟೆ ತಾಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕ್ಷೇತ್ರದಲ್ಲಿ ಶೀಳನೆರೆ ಗ್ರಾಮದ ಎಸ್.ಎಸ್.ಅಂಬರೀಷ್ ಮತ್ತು ಸಿಂಗನಹಳ್ಳಿ ಗ್ರಾಮದ ಧರಣೇಶ್ ಕುಮಾರ್ ಪಿ. ನಡುವೆ ಸ್ಪರ್ಧೆ ಏರ್ಪಟ್ಟಿತ್ತು. ಇದರಲ್ಲಿ ಕಾಂಗ್ರೆಸ್ ಬೆಂಬಲಿತ ಸತೀಶ್, ಎಸ್.ಎಸ್.ಅಂಬರೀಷ್ ಹಾಗೂ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಎಚ್.ಸಿ.ಪುಟ್ಟಸ್ವಾಮಿಗೌಡ ಗೆಲುವು ಸಾಧಿಸಿದ್ದಾರೆ.

9 ಮಂದಿ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರು ಅವಿರೋಧ ಆಯ್ಕೆ

ಒಟ್ಟು 12 ಸ್ಥಾನಗಳ ಪೈಕಿ 9 ಸ್ಥಾನಗಳಲ್ಲಿ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗುವ ಮೂಲಕ ಪಾರಮ್ಯ ಸಾಧಿಸಿದ್ದು, ಬ್ಯಾಂಕಿನ ಅಧಿಕಾರ ಗದ್ದುಗೆ ಕಾಂಗ್ರೆಸ್ ತೆಕ್ಕೆಗೆ ಸೇರಿದೆ.

ಅಧಿಕಾರ ಗದ್ದುಗೆ ಏರಲು 8 ನಿರ್ದೇಶಕರ ಬಹುಮತ ಅಗತ್ಯವಿದೆ. ಆದರೆ ಕಾಂಗ್ರೆಸ್ ಬೆಂಬಲಿತ 11 ನಿರ್ದೇಶಕರು ಇರುವುದರಿಂದ ಸರಳ ಬಹುಮತ ಸಿಕ್ಕಿರುವುದರಿಂದ ಕಾಂಗ್ರೆಸ್ ಆಡಳಿತ ಮುಂದುವರೆಯಲಿದೆ.

8 ಮಂದಿ ಮೊದಲು ಅವಿರೋಧ ಆಯ್ಕೆಯಾಗಿದ್ದರು. ಒಂದು ನಿರ್ದೇಶಕ ಸ್ಥಾನ ಮಂಡ್ಯ ಉಪವಿಭಾಗದ ಹಾಲು ಉತ್ಪಾದಕರ ಸಹಕಾರ ಸಂಘಗಳ ಕ್ಷೇತ್ರದಲ್ಲಿ ತೈಲೂರು ಗ್ರಾಮದ ಸಿ.ಚಲುವರಾಜು ಮತ್ತು ವಡ್ಡರಹಳ್ಳಿ ಗ್ರಾಮದ ವಿಶ್ವನಾಥ್ ವಿ.ಎಂ. ನಡುವೆ ಸ್ಪರ್ಧೆ ಏರ್ಪಟ್ಟಿತ್ತು. ಆದರೆ ವಿಶ್ವನಾಥ್ ಮತ ಅನರ್ಹತೆ ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರಿಂದ ನ್ಯಾಯಾಲಯ ವಿಶ್ವನಾಥ್ ಮತ ಅನರ್ಹಗೊಳಿಸಿ ಆದೇಶ ನೀಡಿದ್ದರಿಂದ ಕಾಂಗ್ರೆಸ್ ಬೆಂಬಲಿತ ಚಲುವರಾಜು ಅವಿರೋಧ ಆಯ್ಕೆಯಾಗಿದ್ದರು.

ನ.6 ರಂದು ಮಂಡ್ಯದಲ್ಲಿ ದಿಶಾ ಸಮಿತಿ ಸಭೆ

ಮಂಡ್ಯ, ನ.2– ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯನ್ನು ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರು ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರ ಸಂಸದರಾದ ಹೆಚ್.ಡಿ. ಕುಮಾರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ನ.6 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಸದರಿ ಸಭೆಗೆ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಇತರೆ ಸಿಬ್ಬಂದಿಗಳನ್ನು ನಿಯೋಜಿಸದೆ ತಪ್ಪದೇ ಹಾಜರಾಗಬೇಕೆಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಟಿಎಪಿಸಿಎಂಎಸ್ ಅಧ್ಯಕ್ಷ, ಉಪಾಧ್ಯಕ್ಷರಿಗೆ ಅಭಿನಂದನೆ



ಪಾಂಡವಪುರ ತಾಲ್ಲೂಕಿನ ಲಕ್ಷ್ಮೀಸಾಗರ ಹಾಲು ಉತ್ಪಾದಕರ ಸಹಕಾರ ಸಂಘದ ವತಿಯಿಂದ ನೂತನವಾಗಿ ಆಯ್ಕೆಯಾದ ಟಿಎಪಿಸಿಎಂಎಸ್‌ನ ಅಧ್ಯಕ್ಷ ಚಿಕ್ಕಾಡೆ ಗಿರೀಶ್, ಉಪಾಧ್ಯಕ್ಷೆ ಪ್ರೇಮ ಪುಟ್ಟೇಗೌಡ ಹಾಗೂ ಡೇರಿ ಅಧ್ಯಕ್ಷ ಎಲ್.ಕೆ.ಸತೀಶ್ ಅವರನ್ನು ಅಭಿನಂದಿಸಲಾಯಿತು. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಟಿಎಪಿಸಿಎಂಎಸ್ ಮಾಜಿ ನಿರ್ದೇಶಕ ಜಗದೀಶ್, ತಾಪಂ ಮಾಜಿ ಸದಸ್ಯ ಎಲ್.ಎಸ್.ರಾಜು, ಸೋಬಾನೆ ರಾಜೇಶ್, ಡೇರಿ ಕಾರ್ಯದರ್ಶಿ ಜಯಕುಮಾರ್ ಸೇರಿದಂತೆ ಹಲವು ಮುಖಂಡರು ಹಾಜರಿದ್ದರು.

ಎಲ್ಲಾ ಕ್ಷೇತ್ರಗಳಲ್ಲೂ ಕನ್ನಡ ಬಳಸಿದರೆ ಭಾಷೆ ಬೆಳೆಯುತ್ತದೆ

ಮಂಡ್ಯ, ನ.2– ಸಾಹಿತ್ಯ, ಮಾಹಿತಿ ವಿಜ್ಞಾನ ಮತ್ತು ತಂತ್ರಜ್ಞಾನ, ಸಂಗೀತ, ಸಂಸ್ಕೃತಿ, ಸಾಮಾನ್ಯ ಜನರ ಮಾತುಕತೆ, ರಾಜಕೀಯ, ಪತ್ರಿಕೋದ್ಯಮ ಹೀಗೆ ಎಲ್ಲಾ ಕ್ಷೇತ್ರಗಳಲ್ಲೂ ಕನ್ನಡವನ್ನೂ ಬಳಸಿದಾಗ ಮಾತ್ರ ಕನ್ನಡ ಭಾಷೆಯೂ ವಿಶ್ವದೆಲ್ಲೆಡೆ ಬೆಳೆಯುತ್ತದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ. ನಿಂಗರಾಜ್ ಗೌಡ ಅಭಿಪ್ರಾಯಿಸಿದರು.

ನಗರದ ಕರ್ನಾಟಕ ಸಂಘದ ಆವರಣದಲ್ಲಿರುವ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ಡಾ.ಜೀಶಂಪ ಸಾಹಿತ್ಯ ವೇದಿಕೆ ವತಿಯಿಂದ ಆಯೋಜಿಸಿದ್ದ ಕನ್ನಡ ಹಬ್ಬ, 14ನೇ ಅಖಿಲ ಕರ್ನಾಟಕ ಕನ್ನಡ ಅಕ್ಷರ ಜಾತ್ರೆ ಹಾಗೂ ವಿವಿಧ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಹೆಮ್ಮೆಯ ನಾಡು ಕರ್ನಾಟಕ. ಅಸಂಖ್ಯಾತ ಶೂರರ ರಕ್ತದಿಂದ, ಕವಿಗಳ ಕಲೆಯಿಂದ, ಕೃಷಿಕರ ಕಷ್ಟದಿಂದ, ವಿಜ್ಞಾನಿಗಳ ವಿನ್ಯಾಸದಿಂದ ರೂಪುಗೊಂಡ ಈ ಧರೆಯು ನಿಜವಾದ ಸಂಸ್ಕೃತಿಯ ತಾಯ್ನಾಡಾಗಿದೆ. ನವೆಂಬರ್ 1ರಂದು ನಾವು ಆಚರಿಸುವ ಕನ್ನಡ ರಾಜ್ಯೋತ್ಸವವು ನಮ್ಮ ಭಾಷೆಯ, ಸಂಸ್ಕೃತಿಯು ಮತ್ತು ಸೌಹಾರ್ದದ ಮಹೋತ್ಸವವಾಗಿದೆ ಎಂದರು.

ಪತ್ರಕರ್ತೆ ಸಬಾ ಹಕ್ಕಿಂ ಮಾತನಾಡಿ, ಇಡೀ ರಾಜ್ಯದಲ್ಲಿ ಕನ್ನಡ ಹೆಚ್ಚು ಮಾತನಾಡುವ ಜಿಲ್ಲೆ ಎಂದರೆ ಅದು ಮಂಡ್ಯ ಕನ್ನಡವನ್ನು ಶಿಕ್ಷಣ, ವೃತ್ತಿ, ಸಾಮಾಜಿಕವಾಗಿ ಬಳವಂತಹದ್ದು ಸಹ ಮಂಡ್ಯ ಜಿಲ್ಲೆಯಲ್ಲಿ. ಕನ್ನಡ ಭಾಷೆ ದೇಶದಲ್ಲಿ ಮೂರನೇ ಸಾಹಿತ್ಯಿಕ, ಸಂಪ್ರದಾಯದ ಭಾಷೆಯಾಗಿದೆ. ಕನ್ನಡ ಮತ್ತು ಮಂಡ್ಯ ಎಂಬ ಎರಡು ಪದಗಳು ಕನ್ನಡಿಗರಿಗೆ ಹೆಚ್ಚು ಹತ್ತಿರವಾಗುವ ಪದಗಳು ಎಂದು ಬಣ್ಣಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಅನೇಕ ಮಹನೀಯರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಕನ್ನಡ ಅಕ್ಷರ ಜಾತ್ರೆಯ ಸಮ್ಮೇಳನಾಧ್ಯಕ್ಷರಾದ ಕವಿ ಡಾ.ನ.ಗಂಗಾಧರಪ್ಪ, ಖ್ಯಾತ ನರರೋಗ ತಜ್ಞ ಡಾ.ಸೂರ್ಯನಾರಾಯಣ ಶರ್ಮಾ, ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ಎಸ್.ಎಸ್.ಕೋಮಲ್‌ಕುಮಾರ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಬನ್ನಂಗಾಡಿ ಸಿದ್ದಲಿಂಗಯ್ಯ ಇದ್ದರು.

ಮೂರನೇ ಪುಟದಿಂದ

ಸುಮಾರು 80 ಕೋಟಿ ರೂ. ಪಂಗನಾಮ

ಮೂಲಗಳು ತಿಳಿಸಿವೆ. ರಾಜಕುಮಾರ್‌ಗೆ ನಿರೀಕ್ಷಣಾ ಜಾಮೀನು ದೊರೆತಿದೆ. ಹಣ ತೊಡಗಿಸಿ ಮೋಸ ಹೋದವರಲ್ಲಿ ವ್ಯಾಪಾರಸ್ಥರು, ಇಂಜಿನಿಯರಿಂಗ್ ಕಾಲೇಜು ಪ್ರಾಂಶುಪಾಲರ ಪುತ್ರ, ನಿವೃತ್ತ ಡಿವೈಎಸ್ಪಿ, ಐಟಿ–ಬಿಟಿ ಉದ್ಯೋಗಿಗಳು, ಕೈಗಾರಿಕೋದ್ಯಮಿಗಳು, ಶಾಲಾ ಶಿಕ್ಷಕರು, ಕಾಲೇಜು ಉಪನ್ಯಾಸಕರು ಹಾಗೂ ವಿವಿಧ ವೃತ್ತಿಪರರು ಸೇರಿದ್ದಾರೆ. ಪೊಲೀಸರು ಹಲವು ವರ್ಷಗಳಿಂದ ಆನ್‌ಲೈನ್ ವಂಚನೆ, ಸೈಬ್ರರ್ ಕ್ರೈಂ ಕುರಿತಂತೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುತ್ತಾದಾಗ್ಯೂ, ವಿದ್ಯಾವಂತರು ಹಾಗೂ ಬುದ್ಧಿವಂತರೇ ಹಣದ ಆಸೆಗಾಗಿ ಈ ಮೋಸದ ಜಾಲಕ್ಕೆ ಬೀಳುತ್ತಿರುವುದು ವಿಪರ್ಯಾಸವೇ ಸರಿ.

ಸುಳಿವು ಕೊಟ್ಟ ಡಿಸಿಎಂ ಡಿಕೆಶಿ

ಜಾರಕಿಹೊಳಿ ದೆಹಲಿ ಭೇಟಿ ಬಗ್ಗೆ ಪ್ರತಿಕ್ರಿಯೆ ಕೊಟ್ಟಿರುವ ಡಿಸಿಎಂ ಡಿಕೆಶಿ, ಅವರು ಅವರ ಕೆಲಸಕ್ಕೆ ಹೋಗುತ್ತಿದ್ದಾರೆ. ಇದೇ 5, 6ಕ್ಕೆ ನಾನೂ ಬಿಹಾರ ಹೋಗುತ್ತಿದ್ದೇನೆ. ಸೆಂಟ್ರಲ್ ಮಿನಿಸ್ಟರ್ ಸಭೆ ಕರೆದಿದ್ದಾರೆ. ಇನ್ನೊಂದು ದಿನ ಕಾವೇರಿ ಕೇಸ್ ಇದೆ, ಮತ್ತೊಂದಿನ ನನ್ನದೊಂದು ಬುಕ್ ರಿಲೀಸ್ ಕಾರ್ಯಕ್ರಮ ಇದೆ. ದೆಹಲಿಗೆ ಹೋದರೆ ನಾವು ರಾಜಕೀಯಕ್ಕಾಗಿಯೇ ಹೋಗುತ್ತಿದ್ದೇನೆ ಅಂತ ಯಾಕೆ ಅಂದುಕೊಳ್ಳುತ್ತೀರಿ? ಸತೀಶ್ ಅವರು ಹೋಗುವುದಾದರೆ ಅವರು ಹೋಗ್ಲಿ ಬಿಡಿ ಎಂದರು. ಈ ನಡುವೆ ಸಾಮಾಜಿಕ ಜಾಲತಾಣಗಳಲ್ಲಿ 'ರಾಮಲಿಂಗಾರೆಡ್ಡಿ ಫಾರ್ ಸಿಎಂ' ಅಭಿಯಾನ ನಡೆಯುತ್ತಿದ್ದು, ಇದಕ್ಕೆ ಎಕ್ಸ್‌ನಲ್ಲಿ ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟನೆ ನೀಡಿದ್ದಾರೆ. ರಾಜ್ಯದಲ್ಲಿ ಸರ್ಕಾರ ಭದ್ರವಾಗಿದೆ. ಪ್ರಸ್ತುತ ಮುಖ್ಯಮಂತ್ರಿ ಸ್ಥಾನ ಸಹ ಖಾಲಿ ಇರುವುದಿಲ್ಲ ಮತ್ತು ನಾನು ಅದರ ಆಕಾಂಕ್ಷಿಯಲ್ಲ ಎಂದು ಸ್ಪಷ್ಟಪಡಿಸುತ್ತೇನೆ. ದಯವಿಟ್ಟು ಈ ರೀತಿಯ ಆಧಾರರಹಿತ ಪ್ರಚಾರವನ್ನು ತಕ್ಷಣವೇ ನಿಲ್ಲಿಸಬೇಕು ಅಂತ ಮನವಿ ಮಾಡಿಕೊಂಡಿದ್ದಾರೆ.

ದೇಗುಲದಲ್ಲಿ ಕಾಲ್ತುಳಿತಕ್ಕೆ 10 ಸಾವು



ಹೆಚ್ಚಾಯಿತು. ಕಾಲ್ತುಳಿತದಲ್ಲಿ ಅನೇಕ ಭಕ್ತರು ಗಂಭೀರವಾಗಿ ಗಾಯಗೊಂಡರು.

ಅವರನ್ನು ಹತ್ತಿರದ ಆಸ್ಪತ್ರೆಗಳಿಗೆ ಕರೆದೊಯ್ಯಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಯ ಬಗ್ಗೆ ಜಿಲ್ಲಾ ಅಧಿಕಾರಿಗಳು ಸಂಪೂರ್ಣ ತನಿಖೆಗೆ ಆದೇಶಿಸಿದ್ದಾರೆ.

ದೇವಸ್ಥಾನದ ಆವರಣದಲ್ಲಿ ಭಕ್ತರ ಶವಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿರುವ ಭಯಾನಕ ದೃಶ್ಯಗಳು ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿವೆ. ಕಾಲ್ತುಳಿತ ದುರಂತಕ್ಕೆ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಆಘಾತ ವ್ಯಕ್ತಪಡಿಸಿದ್ದು, ಭಕ್ತರ ಸಾವು ಹೃದಯ ವಿದ್ರಾವಕ ಎಂದು ವಿಷಾದಿಸಿದ್ದಾರೆ.

ದೇಗುಲದ ಇತಿಹಾಸ: ಪಾಂಡ ಕುಟುಂಬವು ಹತ್ತು ವರ್ಷಗಳ ಹಿಂದೆ ತಿರುಮಲದಲ್ಲಿ ದರ್ಶನ ಪಡೆಯಲು ಸಾಧ್ಯವಾಗದ ಕಾರಣ, 12 ಎಕರೆ ಭೂಮಿಯಲ್ಲಿ ಈ ಕಾಶಿಬುಗ್ಗ ವೆಂಕಟೇಶ್ವರ ಸ್ವಾಮಿ ದೇವಾಲಯವನ್ನು ಸ್ವಂತವಾಗಿ ನಿರ್ಮಿಸಿತ್ತು.

ಕಕ್ಷೆ ಸೇರಿದ 4.4 ಟನ್ ಭಾರದ ಉಪಗ್ರಹ

'ಎಲ್‌ವಿಎಂ–ಎಂ5' ರಾಕೆಟ್ ನಭಕ್ಕೆ ಚಿಮ್ಮಿತು. ಬಳಿಕ ಉಪಗ್ರಹ ನಿಗದಿತ ಭೂಹೊಂದಾಣಿಕೆ ವರ್ಗಾವಣೆ ಕಕ್ಷೆಗೆ (ಜಿಯೊಸಿಂಕ್ರೊನಸ್ ಟ್ರಾನ್ಸ್‌ಫರ್ ಆರ್ಬಿಟ್–ಜಿಟಿಒ) ಸೇರಿತು. ಉಪಗ್ರಹದ ತೂಕ 4,410 ಕೆ.ಜಿ ಇದ್ದು, ದೇಶದ ಬಾಹ್ಯಾಕಾಶ ಕೇಂದ್ರದಿಂದ ಇದೇ ಮೊದಲ ಬಾರಿಗೆ ಉಡ್ಡಯನ ಮಾಡಿದ ಭಾರಿ ತೂಕದ ಉಪಗ್ರಹ ಇದಾಗಿದೆ ಎಂದು ಇಸ್ರೊ ತಿಳಿಸಿದೆ. 'ಸಿಎಂಎಸ್–03' ಬಹುಬ್ಯಾಂಡ್ ಸಂವಹನ ಉಪಗ್ರಹವಾಗಿದ್ದು, ಭೂಪ್ರದೇಶ ಸೇರಿದಂತೆ ಸಾಗರದ ಕುರಿತು ಮಾಹಿತಿಗಳನ್ನು ಒದಗಿಸುತ್ತದೆ.

ವಿದ್ಯಾರ್ಥಿನಿಯರು ನೀರು ಪಾಲು



ಪಡಿಸಿದಾಗ ಚಿಕಿತ್ಸೆ ಫಲಕಾರಿಯಾಗದೇ ಆಯೆಷಾ ಕಳೆದ ರಾತ್ರಿ ಅಸುನೀಗಿದ್ದಾಳೆ. ರಾತ್ರಿಯಾದ ಪರಿಣಾಮ ಅಗ್ನಿಶಾಮಕ ಮತ್ತು ಪೊಲೀಸ್ ಸಿಬ್ಬಂದಿ ಹಾಗೂ ಈಜುಪಟುಗಳು ಉಳಿದ ಮೂವರ ಶೋಧ ಕಾರ್ಯವನ್ನು ನಿಲ್ಲಿಸಿ ಭಾನುವಾರ ಬೆಳಿಗ್ಗೆ ಶೋಧ ಕಾರ್ಯ ಆರಂಭಿಸಿದ್ದಾರೆ. ಈ ಪೈಕಿ ಉಮ್ಮಾನಿ (14) ಎಂಬ ಬಾಲಕಿಯ ಶವ ಭಾನುವಾರ ಬೆಳಗ್ಗೆ ನಾಲೆಯ ಅಕ್ಕಪಕ್ಕದಲ್ಲೇ ಪತ್ತೆಯಾದರೆ, ತರ್ಮೀನ್ (14) ಹಾಗೂ ಅಫ್ರಿನ್ (14) ಶವಗಳು ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲ್ಲಕಿನ ಬಳಿಯ ನಾಲೆಯಲ್ಲಿ ಪತ್ತೆಯಾಗಿದೆ. ಇನ್ನು ನೀರಿನಲ್ಲಿ ಕೊಚ್ಚಿ ಹೋಗುತ್ತಿದ್ದ ಅಲ್ಫಿಯಾ (14) ಮಹಮ್ಮದ್ ಗೌಸ್ (14) ಪ್ರಾಣಾಪಾಯದಿಂದ ಪಾರಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆ ಸಂಬಂಧ ಅರಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಸ್ ಡಿಕ್ಕಿ: 18 ಭಕ್ತರ ದುರ್ಮರಣ

ಘಟನೆಯಲ್ಲಿ ಮೂವರು ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತರ ಕುಟುಂಬಸ್ಥರಿಗೆ ಘಟನೆ ಕುರಿತು ಮಾಹಿತಿ ನೀಡಲಾಗುತ್ತಿದೆ ಎಂದು ಪೊಲೀಸ್ ಆಯುಕ್ತ ಓಂ ಪ್ರಕಾಶ್ ಪಾಸ್ವಾನ್ ತಿಳಿಸಿದ್ದಾರೆ. ಕಳೆದ 2 ವಾರಗಳಲ್ಲಿ ರಾಜಸ್ಥಾನದಲ್ಲಿ ನಡೆದ 2ನೇ ಅತಿದೊಡ್ಡ ದುರಂತವಾಗಿದೆ. ಕಳೆದ ತಿಂಗಳು ಜೈಸಲ್ಮೆರ್‌ನಲ್ಲಿ ಸ್ಲೀಪರ್ ಬಸ್‌ಗೆ ಬೆಂಕಿ ಹೊತ್ತಿಕೊಂಡು 26 ಮಂದಿ ಸಜೀವ ದಹನ ಆಗಿದ್ದರು. ಎಸಿಯಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದು ಬೆಂಕಿ ಕಾಣಿಸಿಕೊಂಡು ದುರಂತ ಸಂಭವಿಸಿತ್ತು.

ರನ್ ವೇ ವಿಸ್ತರಣೆ ಕಾಮಗಾರಿ ಶೀಘ್ರ ಆರಂಭ



ಲೋಕೋಪಯೋಗಿ ಇಲಾಖೆ ವತಿಯಿಂದ 400 ಕೋಟಿ ರೂ.ಅಂದಾಜು ವೆಚ್ಚದಲ್ಲಿ ಮೈಸೂರು ನಗರದ 12 ರಸ್ತೆಗಳ 46 ಕಿಲೋಮೀಟರ್ ರಸ್ತೆಯನ್ನು ವೈಟ್ ಟ್ಯಾಪಿಂಗ್ ಮಾಡಲಾಗುತ್ತದೆ. ಈ ವಿಚಾರವಾಗಿ ಸ್ಥಳೀಯ ಶಾಸಕರ ಜತೆಯೂ ಚರ್ಚೆ ನಡೆಸಲಾಗಿದ್ದು, ಅವರು ಯೋಜನೆಯಲ್ಲಿ ಕೆಲವು ಮಾರ್ಪಾಡು ಮಾಡುವಂತೆ ಸಲಹೆ ನೀಡಿದ್ದಾರೆ. ಅವುಗಳನ್ನು ಯೋಜನೆಯಲ್ಲಿ ಸೇರ್ಪಡೆ ಮಾಡಿಕೊಂಡು ಕೆಲಸ ಆರಂಭಿಸುವಂತೆ ಸೂಚಿಸಲಾಗಿದೆ ಎಂದರು.

ಮೈಸೂರು ನಗರಕ್ಕೆ ಮೆಟ್ರೋ ಯೋಜನೆ, ಕೆಲವು ಕಡೆ ಫೈ ಓವರ್ ನಿರ್ಮಾಣ, ಸಬ್ ವೇ ಸ್ಥಾಪನೆ ಕುರಿತಂತೆ ಹಲವು ಸಲಹೆಗಳು ಬಂದಿವೆ. ಇವುಗಳನ್ನು ಅಧಿಕಾರಿಗಳ ಮಟ್ಟದಲ್ಲಿ ಪ್ರಾಥಮಿಕ ಚರ್ಚೆ ನಡೆಸಲಾಗಿದೆ ಎಂದರು. ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಹೊಸ ಫ್ಲೈಓವರ್, ಟನಲ್ ಗಳ ನಿರ್ಮಾಣ ಹೆಚ್ಚಳವಾಗುತ್ತಿದೆ ಇದರಿಂದ ನಗರದ ಸೌಂದರ್ಯ ಕಡಿಮೆಯಾಗುತ್ತಿದೆ ಇದರ ಬಗ್ಗೆ ಪರ್ಯಾಯ ಚಿಂತನೆ ನಡೆಸಬೇಕಿದೆ ಎಂದರು.

ಶಾಸಕ ಜಿ.ಟಿ.ದೇವೇಗೌಡ ಅವರು ಮಾತನಾಡಿ, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಹಲವಾರು ರಸ್ತೆಗಳು ದುರಸ್ತಿಪಡಿಸಬೇಕಿದ್ದು, ಅಧಿಕಾರಿಗಳು ಕ್ರಮವಹಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಶಾಸಕರಾದ ಕೆ.ಹರೀಶ್ ಗೌಡ, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ಎಸ್.ಯುಕೇಶ್‌ಕುಮಾರ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ವನಿತೆಯರಿಗೆ ಚೊಚ್ಚಲ ಐಸಿಸಿ ವಿಶ್ವಕಪ್ ಕಿರೀಟ



ಅಯಬೊಂಗಾ ಖಾಕಾ 3 ವಿಕೆಟ್ ಕಿತ್ತರೆ, ನಾನ್ಕುಲು ಲೆಕೊ ಮ್ಲಾಬಾ, ನಾಡಿನ್ ಡಿ ಕ್ಲರ್ಕ್, ಕ್ಲೋಯ್ ಟ್ರೈಯಾನ್ ತಲಾ ಒಂದೊಂದು ವಿಕೆಟ್ ಪಡೆದರು.

ಬೃಹತ್ ಮೊತ್ತ ಬೆನ್ನತ್ತಿದ ದಕ್ಷಿಣ ಆಫ್ರಿಕಾ ತಂಡಕ್ಕೆ ಆರಂಭಿಕ ಆಘಾತ ಎದುರಾಯಿತು. ತಾಜ್ಮೀನ್ ಬ್ರಿಟ್ಸ್ 23 ರನ್ ಗಳಿಸಿ ಔಟಾದರೆ, ಅನಿಕೆ ಬಾಷ್ ಡಕ್‌ಔಟ್ ಆಗುವ ಮೂಲಕ ಬಂದಷ್ಟೆ ವೇಗವಾಗಿ ಪೆವಿಲಿಯನ್ ಸೇರಿದರು.

ಬಳಿಕ ಬಂದ ಸುನಿಲೂಸ್ 25, ಮರೈಝಾನ್ ಕಾಪ್ 4, ಸಿನಾಲೊ ಝಾಪ್ಟಾ 16, ಅನೇರಿ ಡರ್ಕ್‌ಸನ್ 35, ಯಾರಿಂದಲೂ ನಿರೀಕ್ಷಿತ ಆಟ ಕಂಡುಬರಲೇ ಇಲ್ಲ. ಭಾರತ ತಂಡದ ಬಿಗಿ ಬೌಲಿಂಗ್ ದಾಳಿಗೆ ದಕ್ಷಿಣ ಆಫ್ರಿಕಾ ಬ್ಯಾಟರ್‌ಗಳು ಪೆವಿಲಿಯನ್ ಪರೇಡ್ ನಡೆಸಿದರು.

ವ್ಯರ್ಥವಾಯ್ತು ನಾಯಕಿ ಲಾರಾ ವೊಲ್ವಾರ್ಟ್ ಶತಕ: ಒಂದೆಡೆ ವಿಕೆಟ್ ಬೀಳುತ್ತಿದ್ದರೂ ಮತ್ತೊಂದೆಡೆ ಭದ್ರವಾಗಿ ನಿಂತು ಏಕಾಂಗಿ ಹೋರಾಟ ನಡೆಸಿದ ದ.ಆಫ್ರಿಕಾ ನಾಯಕಿ ಲಾರಾ, ಟೀಂ ಇಂಡಿಯಾ ಬೌಲರ್‌ಗಳನ್ನು ಕಾಡಿದರು. 98 ಎಸೆತ ಎದುರಿಸಿ 11 ಬೌಂಡರಿ, 1 ಸಿಕ್ಸರ್ ಸಹಿತ 101 ರನ್ ಗಳಿಸಿದ್ದ ವೇಳೆ ದೀಪ್ತಿ ಶರ್ಮಾ ಸ್ಪಿನ್ ಮೋಡಿಗೆ ಬಲಿಯಾಗಿ ಅಮನ್ಜೋತ್ ಕೈಗೆ ಕ್ಯಾಚಿತ್ತು ಹೊರನಡೆದರು.

ಉಳಿದಂತೆ ಚೋಲೆ ಟ್ರೈಯನ್ 9, ನದೀಣ್ ಡೀ ಕ್ಲರ್ಕ್ 18 ಅಯಾಬೊಂಗಾ ಕಾಕಾ 1 ರನ್ ಗಳಿಸಿ ಔಟಾದರು. ಅಂತಿಮವಾಗಿ ದಕ್ಷಿಣ ಆಫ್ರಿಕಾ 45.3 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 246 ರನ್ ಕಲೆಹಾಕಿ 52 ರನ್‌ಗಳ ಅಂತರದಿಂದ ಸೋಲೊಪ್ಪಿಕೊಂಡಿತು.

ಟೀಂ ಇಂಡಿಯಾ ಪರ ದೀಪ್ತಿ ಶರ್ಮಾ ಪ್ರಮುಖ 5 ವಿಕೆಟ್ ಕಬಳಿಸಿದರು. ಶಫಾಲಿ ವರ್ಮಾ 2, ಶ್ರೀಚಾರಿಣಿ 1 ವಿಕೆಟ್ ಪಡೆದರು. ಫೈನಲ್ಸ್ ಪಂದ್ಯದಲ್ಲಿ 87 ರನ್ ಹಾಗೂ 36ಕ್ಕೆ2 ವಿಕೆಟ್ ಪಡೆದ ಶಫಾಲಿ ವರ್ಮಾ ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದರು.

ಟೂರ್ನಿಯ ಇತರೆ ಹೈಲೈಟ್ಸ್

ಫೈನಲ್ ಪಂದ್ಯದ ಪಂದ್ಯಶ್ರೇಷ್ಠ	: ಶಫಾಲಿ ವರ್ಮಾ
ಸರಣಿ ಶ್ರೇಷ್ಠ	: ದೀಪ್ತಿ ಶರ್ಮಾ
ಟೂರ್ನಿಯಲ್ಲಿ ಅತ್ಯಧಿಕ ರನ್	: 571 (ಲಾರಾ ವೊಲ್ವಾರ್ಟ್)
ಟೂರ್ನಿಯಲ್ಲಿ ಅತ್ಯಧಿಕ ವಿಕೆಟ್	: 22 (ದೀಪ್ತಿ ಶರ್ಮಾ)
ಪಂದ್ಯವೊಂದರಲ್ಲಿ ವೈಯಕ್ತಿಕ ಗರಿಷ್ಠ ರನ್	: 169 (ಲಾರಾ ವೊಲ್ವಾರ್ಟ್)
ಪಂದ್ಯವೊಂದರಲ್ಲಿ ವೈಯಕ್ತಿ ಗರಿಷ್ಠ ವಿಕೆಟ್	: 18ಕ್ಕೆ7 (ಅಲಾನಾ ಕಿಂಗ್)
ವೈಯಕ್ತಿಕ ಹೆಚ್ಚು ಶತಕ	: ಗಾರ್ಡನರ್ (2 ಶತಕ)
ವೈಯಕ್ತಿಕ ಹೆಚ್ಚು ಅರ್ಧಶತಕ	: ದೀಪ್ತಿ ಶರ್ಮಾ (3 ಅರ್ಧಶತಕ)
ಅತೀ ಹೆಚ್ಚು ಫೋರ್ಸ್	: ಲಾರಾ ವೊಲ್ವಾರ್ಟ್ (73)
ಅತೀ ಹೆಚ್ಚು ಸಿಕ್ಸ್	: ರಿಚಾ ಘೋಷ್ (12)

–:ಭಾರತಕ್ಕೆ ಸಿಕ್ಕ ಬಹುಮಾನ ಮೊತ್ತವೆಷ್ಟು?:–

ಇನ್ನು ಈ ಬಾರಿಯ ಮಹಿಳಾ ಏಕದಿನ ವಿಶ್ವಕಪ್ ಚಾಂಪಿಯನ್ ಆದ ಭಾರತ ತಂಡಕ್ಕೆ ಆಕರ್ಷಕ ಟ್ರೋಫಿಯೊಂದಿಗೆ 37.3 ಕೋಟಿ ರೂ.ಗಳ ಬಹುಮಾನ ಮೊತ್ತ ನೀಡಲಾಯಿತು, ರನ್ನರ್ ಅಪ್ ಆದ ದ.ಆಫ್ರಿಕಾ ತಂಡಕ್ಕೆ ಬೆಳ್ಳಿ ಪದಕದೊಂದಿಗೆ 18.6 ಕೋ. ಬಹುಮಾನ ಮೊತ್ತ ನೀಡಿ ಗೌರವಿಸಲಾಯಿತು.

ಬಸ್ ಡಿಕ್ಕಿ; ತಂದೆ–ತಾಯಿ, ಮಗ ಸಾವು



ಪತ್ನಿ ಮತ್ತು ಪುತ್ರನ ಜೊತೆಗೆ ಕುಟುಂಬ ಸಮೇತ ನಂಜನಗೂಡಿನ ಶ್ರೀಕಂಠೇಶ್ವರ ಸ್ವಾಮಿಯ ದೇವಾಲಯಕ್ಕೆ ದರ್ಶನಕ್ಕೆಂದು ಬೈಕ್‌ನಲ್ಲಿ ಆಗಮಿಸುತ್ತಿದ್ದ ವೇಳೆ ನಂಜನಗೂಡು ನಗರದ ಪ್ರವೇಶ ದ್ವಾರದ ಬಳಿ ಇರುವ ಚಾಮುಂಡಿ ಟೌನ್ ಶಿಪ್ ಮುಂಭಾಗ ಮೈಸೂರಿನಿಂದ ಗುಂಡ್ಲುಪೇಟೆ ಕಡೆಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಹಿಂದಿನಿಂದ ಬೈಕ್‌ಗೆ ಡಿಕ್ಕಿ ಹೊಡೆದಿದೆ.

ಇದರಿಂದ ಸ್ಥಳದಲ್ಲೇ ಸಿದ್ದಾರ್ಥ ಮೃತಪಟ್ಟರೆ, ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯದಲ್ಲಿ ಶಿವಮೂರ್ತಿ ನಿಧನರಾದರು. ಗಂಭೀರವಾಗಿ ಗಾಯಗೊಂಡಿದ್ದ ಚೆನ್ನಾಜಮ್ಮ ಆಸಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಆಸ್ಪತ್ರೆಯಲ್ಲಿ ಅಸುನೀಗಿದರು ಎಂದು ನಂಜನಗೂಡು ಸಂಚಾರ ಠಾಣೆ ಪೊಲೀಸರು ತಿಳಿಸಿದ್ದಾರೆ.

ನಂಜನಗೂಡು ಸಂಚಾರ ಠಾಣೆಯ ಪಿಎಸ್‌ಐ ಕೃಷ್ಣಕಾಂತ ಕೋಳಿ ಮತ್ತು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಅಪಘಾತಕ್ಕೀಡಾಗಿರುವ ವಾಹನಗಳನ್ನು ವಶಕ್ಕೆ ಪಡೆದುಕೊಂಡಿದ್ದು, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೊಳಪಡಿಸಿ ವಾರಸುದಾರರಿಗೆ ಹಸ್ತಾಂತರಿಸಲಾಗಿದೆ. ಈ ಸಂಬಂಧ ನಂಜನಗೂಡು ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೆ–ಸೆಟ್ ಪರೀಕ್ಷೆಗೆ 17 ಸಾವಿರ ಅಭ್ಯರ್ಥಿಗಳ ಹಾಜರು



ಕೆ–ಸೆಟ್ ಪರೀಕ್ಷಾ ಕೇಂದ್ರಗಳಿಗೆ ಎಡಿಸಿ ಡಾ.ಪಿ.ಶಿವರಾಜು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮೈಸೂರು, ನ.2(ಎಂಕೆ)– ಮೈಸೂರು ಸೇರಿದಂತೆ ರಾಜ್ಯದ 11 ಜಿಲ್ಲೆಗಳ 316 ಪರೀಕ್ಷಾ ಕೇಂದ್ರಗಳಲ್ಲಿ ಕೆ–ಸೆಟ್(ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ) ಪರೀಕ್ಷೆ ಭಾನುವಾರ ನಡೆಯಿತು. 33 ವಿಷಯಗಳಿಗೆ ನಡೆದ ಕೆ–ಸೆಟ್ ಪರೀಕ್ಷೆಗೆ 1.36 ಲಕ್ಷ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಮೈಸೂರಿನ 41 ಪರೀಕ್ಷಾ ಕೇಂದ್ರಗಳಲ್ಲಿ ನೋಂದಣಿಯಾಗಿದ್ದ 18,674 ಅಭ್ಯರ್ಥಿಗಳ ಪೈಕಿ 17,038 ಮಂದಿ ಪರೀಕ್ಷೆಗೆ ಹಾಜರಾಗಿದ್ದರೆ, 1636 ಮಂದಿ ಗೈರಾಗಿದ್ದರು. ಬೆಳಿಗ್ಗೆ 10ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆದ ಪರೀಕ್ಷೆಯಲ್ಲಿ ಪತ್ರಿಕೆ–1 ಮತ್ತು ಪತ್ರಿಕೆ–2 ನೀಡಲಾಗಿತ್ತು. ವಸ್ತ್ರ ಸಂಹಿತೆಯ ಕಡ್ಡಾಯ ಪಾಲನೆಯ ಜೊತೆಗೆ ಪರೀಕ್ಷಾ ಕೇಂದ್ರಗಳ ಪ್ರವೇಶಕ್ಕೂ ಮುನ್ನ ಪೊಲೀಸ್ ಮತ್ತು ಗೃಹ ರಕ್ಷಕ ಸಿಬ್ಬಂದಿ ಅಭ್ಯರ್ಥಿಗಳ ಮುಖ ಚಹರೆ ಪರಿಶೀಲನೆ ನಡೆಸಿದರು.

ಮಹಾರಾಜ, ಮರಿಮಲ್ಲಪ್ಪ ಪಿಯು ಕಾಲೇಜು, ಸೆಂಟ್ ಫಿಲೋಮಿನಾ ಸೇರಿದಂತೆ ವಿವಿಧ ಕಾಲೇಜಿನ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿದ ಎಡಿಸಿ ಡಾ.ಪಿ.ಶಿವರಾಜು, ಪರಿಶೀಲನೆ ನಡೆಸಿದರು. ಪರೀಕ್ಷಾರ್ಥಿಗಳಿಗೆ ಯಾವುದೇ ಮೂಲ ಸೌಕರ್ಯ ಸಮಸ್ಯೆ ಉಂಟಾಗದಂತೆ ನಿಗಾ ವಹಿಸಿ, ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡುವಂತೆ ಸೂಚಿಸಿದರು.

ನದಿ ದಂಡೆಯಲ್ಲಿ ತಡೆಗೋಡೆ ನಿರ್ಮಿಸಲು 500 ಕೋಟಿ ರೂ. ಬಿಡುಗಡೆಗೆ ಆಗ್ರಹ

ಕೇಂದ್ರ ಹಣಕಾಸು ಆಯೋಗಕ್ಕೆ ಎಂಎಲ್‌ಸಿ ಕೆ.ಶಿವಕುಮಾರ್ ಪತ್ರ



ಕೆ.ಶಿವಕುಮಾರ್

ಮೈಸೂರು, ನ.2(ಬಿಎಲ್‌ಯು)– ಕಾವೇರಿ, ಕಪಿಲಾ ನದಿಯ ಪ್ರವಾಹದಿಂದ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಯ ನದಿ ಪಾತ್ರದ ಗ್ರಾಮಗಳ ಜನರು ಎದುರಿಸುತ್ತಿರುವ ಸಂಕಷ್ಟದಿಂದ ಪಾರು ಮಾಡಲು ನದಿ ದಂಡೆ ಉದ್ದಕ್ಕೂ ತಡೆಗೋಡೆ ನಿರ್ಮಾಣಕ್ಕೆ 500 ಕೋಟಿ ರೂ. ವಿಶೇಷ ಆರ್ಥಿಕ ನೆರವು ನೀಡಬೇಕೆಂದು ವಿಧಾನಪರಿಷತ್ ಸದಸ್ಯ ಕೆ.ಶಿವಕುಮಾರ್ ಅವರು ಕೇಂದ್ರ ಸರ್ಕಾರದ 16ನೇ ಹಣಕಾಸು ಆಯೋಗಕ್ಕೆ ಪತ್ರ ಬರೆದಿದ್ದಾರೆ.

ಪ್ರತಿ ವರ್ಷದ ಮಳೆಗಾಲದ ಸಂದರ್ಭದಲ್ಲಿ ಕಾವೇರಿ, ಕಪಿಲಾ ಜಲಾಶಯದಿಂದ ಹೆಚ್ಚಿನ ನೀರು ಬಿಡುಗಡೆ ಮಾಡಲಾಗುತ್ತದೆ. ಆ ವೇಳೆ ನದಿ ನೀರು ಗ್ರಾಮಗಳಿಗೆ ನುಗ್ಗುವುದಲ್ಲದೆ, ಹೊಲ, ಗದ್ದೆಗಳಿಗೂ ಹರಿಯುತ್ತದೆ. ಇದರಿಂದ ರೈತರಿಗೆ ಅಪಾರ ನಷ್ಟ ಉಂಟಾಗುತ್ತಿದೆ ಎಂದು ಹೇಳಿದ್ದಾರೆ.

ಪ್ರವಾಹದ ಸಂದರ್ಭದಲ್ಲಿ ಗ್ರಾಮಸ್ಥರನ್ನು ಬೇರೆಡೆ ಸ್ಥಳಾಂತರಿಸಿ ತಾತ್ಕಾಲಿಕ ಶಿಬಿರಗಳಲ್ಲಿ ವಾಸ್ತವ್ಯದ ವ್ಯವಸ್ಥೆ ಮಡಲಾಗುತ್ತದೆ. ಇದರಿಂದ ಮಕ್ಕಳ ಶಿಕ್ಷಣಕ್ಕೂ ತೊಂದರೆ ಆಗುತ್ತಿದೆ ಎಂದು ಪ್ರವಾಹದ ಪರಿಣಾಮವನ್ನು ವಿವರಿಸಿದ್ದಾರೆ. ಕೊಳ್ಳೆಗಾಲ ತಾಲೂಕಿನ ಮುಳ್ಳೂರು, ಹಳೇ ಅಣಗಳ್ಳಿ, ಹರಳೆ, ಸರಗೂರು, ಧನಗೆರೆ, ಸತ್ತೆಗಾಲ, ಎಡಕುರಿ ಗ್ರಾಮದ ಜನರು ನೆರೆಯಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆ ನಂಜನಗೂಡು ಹಾಗೂ ತಿ.ನರಸೀಪುರದಲ್ಲಿ 2.5 ಕಿಲೋ ಮೀಟರ್‌ನಿಂದ 3.5 ಕಿಲೋ ಮೀಟರ್ ಮತ್ತು ಕೊಳ್ಳೇಗಾಲ ತಾಲೂಕಿನಲ್ಲಿ 6 ಕಿಲೋ ಮೀಟರ್ ಉದ್ದಕ್ಕೂ ತಡೆಗೋಡೆ ನಿರ್ಮಾಣ ಮಾಡಬೇಕೆಂದು ಶಿವಕುಮಾರ್ ಒತ್ತಾಯಿಸಿದ್ದಾರೆ.

ನ.21ಕ್ಕೆ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘದಿಂದ ಕನ್ನಡ ರಾಜ್ಯೋತ್ಸವ



ಮೈಸೂರಲ್ಲಿ ಭಾನುವಾರ ನಡೆದ ಮೈಸೂರು ಜಿಲ್ಲಾ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘದ ಪದಾಧಿಕಾರಿಗಳ ಸಭೆಯಲ್ಲಿ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ, ಕೆಎಂಎಫ್‌ನ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ಮಾತನಾಡಿದರು.

ಮೈಸೂರು,ನ.2(ಎಂಟಿವೈ)–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ನ.21ರಂದು ಬೆಳಗ್ಗೆ 11ಕ್ಕೆ ಮೈಸೂರು ಜಿಲ್ಲಾ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘದ ಪ್ರಥಮ ವರ್ಷದ ವಾರ್ಷಿಕೋತ್ಸವ ಹಾಗೂ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದ್ದು, ಹಿರಿಯ ನ್ಯಾಯವಾದಿ ಪ್ರೊ: ರವಿವರ್ಮಕುಮಾರ್ ಅವರಿಗೆ ಡಿ.ದೇವರಾಜ ಅರಸು ಮತ್ತು ಎಲ್.ಜಿ. ಹಾವನೂರ್ ಪ್ರಶಸ್ತಿಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಪ್ರದಾನ ಮಾಡಲಿದ್ದಾರೆ ಎಂದು ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಹಾಗು ಕೆಎಂಎಫ್‌ನ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ತಿಳಿಸಿದ್ದಾರೆ.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ನಡೆದ ಮೈಸೂರು ಜಿಲ್ಲಾ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘದ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ನ.21ರಂದು ಮುಕ್ತ ವಿವಿಯ ಘಟಿಕೋತ್ಸವ ಭವನದಲ್ಲಿ ಕನ್ನಡ ರಾಜ್ಯೋತ್ಸವ ಹಾಗೂ ಸಂಘದ ಪ್ರಥಮ ವಾರ್ಷಿಕೋತ್ಸವದ ಕಾರ್ಯಕ್ರಮ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಿವರಾಜ್ ಎಸ್ ತಂಗಡಗಿ, ಜಿಲ್ಲೆಯ ಶಾಸಕರು, ವಿಧಾನಪರಿಷತ್ ಸದಸ್ಯರು, ಹಿಂದುಳಿದ ವರ್ಗಳ ಕಲ್ಯಾಣ ಇಲಾಖೆಯ ಆಯುಕ್ತ ಕೆ.ಎ.ದಯಾನಂದ್, ಸಂಘದ ಗೌರವಾಧ್ಯಕ್ಷ ಎಂ.ರಾಮಯ್ಯ, ಕಾರ್ಯಾಧ್ಯಕ್ಷ ಡಾ.ಕುಮಾರ್ ಹಾಗೂ ಇನ್ನಿತರರು ಪಾಲ್ಗೊಳ್ಳಲಿದ್ದಾರೆ ಎಂದರು. ಸಭೆಯಲ್ಲಿ ಹುಣಸೂರು ತಹಸೀಲ್ದಾರ್ ಮಂಜುನಾಥ್, ಕಾರ್ಯದರ್ಶಿ ಬಿ.ಪಿ. ರಾಜೇಶ್, ಜಂಟಿ ಕಾರ್ಯದರ್ಶಿ ಜೆ.ಕೆ. ರಮೇಶ್ ಗೌಡ, ಖಜಾಂಚಿ ಕೆ.ರುಕ್ಮಾಂಗದ, ಅಹಿಂದ ಜವರಪ್ಪ, ಎನ್.ಮುತ್ತ ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂದಿನ ದೇವರಾಜ ಅರಸು ಪ್ರತಿಮೆ ಅನಾವರಣಕ್ಕೆ ಪ್ರಯತ್ನ



ಪೊಲೀಸರಿಂದ ಅಡ್ಡಿ, ಸ್ಥಳದಲ್ಲಿ ಬಿಗುವಿನ ವಾತಾವರಣ



ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿ ಮುಂದೆ ದಿವಂಗತ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಪ್ರತಿಮೆ ಅನಾವರಣ ಮಾಡದ ರಾಜ್ಯ ಸರ್ಕಾರದ ವಿಳಂಬ ಧೋರಣೆ ಖಂಡಿಸಿ ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ನ.2(ಬಿಎಲ್‌ಯು)– ಮೈಸೂರಿನ ನೂತನ ಜಿಲ್ಲಾಧಿಕಾರಿ ಕಚೇರಿ ಮುಂದೆ ಉದ್ಘಾಟನೆಗೆ ಸಿದ್ದವಾಗಿರುವ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ ಪ್ರತಿಮೆ ಅನಾವರಣ ಮಾಡದಿರುವ ಸರ್ಕಾರದ ವಿಳಂಬಧೋರಣೆ ವಿರುದ್ಧ ವಿಧಾನಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಬಿಜೆಪಿ ಕಾರ್ಯಕರ್ತರು ಸೇರಿದಂತೆ ಡಿ.ದೇವರಾಜ ಅರಸು ಅವರ ಅಪಾರ ಅಭಿಮಾನಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ನಾವೇ ಪ್ರತಿಮೆ ಅನಾವರಣ ಮಾಡುತ್ತೇವೆ ಎಂದು ಪ್ರತಿಭಟನಾಕಾರರು ಸಿಪಿಡಬ್ಲ್ಯು ಕಚೇರಿಯಿಂದ ಮೆರವಣಿಗೆಯಲ್ಲಿ ತೆರಳಿದರು. ಆ ವೇಳೆ ಪೊಲೀಸರು ತಡೆದರೂ ಅದನ್ನು ಬೇಧಿಸಿದ ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಕಚೇರಿ ಮುಂದೆ ನಿಂತು ಧರಣಿ ಕುಳಿತರು. ಈ ವೇಳೆ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು.

ಜಿಲ್ಲಾಧಿಕಾರಿ ಕಚೇರಿಯ ಕಾಂಪೌಂಡ್ ದಾಟಿ ಪ್ರತಿಮೆ ಅನಾವರಣ ಮಾಡಲು ಪೊಲೀಸರು ಅವಕಾಶ ನೀಡಲಿಲ್ಲ. ಈ ಸಂದರ್ಭದಲ್ಲಿ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು.

ದೇವರಾಜ ಅರಸು ಅವರು ಉಳುವವರಿಗೆ ಭೂಮಿ ನೀಡಿದರು. ಹಾವನೂರ್ ಆಯೋಗದ ವರದಿ ಜಾರಿ ಮಾಡಿ ಹಿಂದುಳಿದ ವರ್ಗದವರ ಅಭಿವೃದ್ಧಿಗೆ ಕಾರಣದವರು. ಮೈಸೂರಿನವರೇ ಆದ ದೇವರಾಜ ಅರಸು ಅವರ ಪ್ರತಿಮೆ ಹುಣಸೂರು ಬಿಟ್ಟರೆ ಬೇರೆ ಯಾವ ಸ್ಥಳದಲ್ಲೂ ಇಲ್ಲ. ಪ್ರತಿಮೆ ಸ್ಥಾಪಿಸಲು ಯಡಿಯೂರಪ್ಪ ಸಿಎಂ ಆಗಿದ್ದಾಗ 92 ಕೋಟಿ ರೂ. ನೀಡಿದ್ದರು ಎಂದು ವಿಶ್ವನಾಥ್ ತಿಳಿಸಿದರು.

> “ನೂತನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಡಿ.ದೇವರಾಜ ಅರಸು ಅವರ ಪ್ರತಿಮೆಯನ್ನು ನವೆಂಬರ್ 3ರಂದು ಸಿದ್ದರಾಮಯ್ಯ ಅನಾವರಣ ಮಾಡುತ್ತಾರೆ. ಸಿಎಂ ಅವರಿಂದಲೇ ಅನಾವರಣ ಮಾಡಬೇಕೆಂಬ ಇಚ್ಛೆ ಇದ್ದ ಕಾರಣ ಸ್ವಲ್ಪ ವಿಳಂಬವಾಯಿತು.
>
> –ಡಾ.ಹೆಚ್.ಸಿ.ಮಹದೇವಪ್ಪ, ಸಚಿವ

ಆದರೆ ಹಿಂದುಳಿದ ವರ್ಗದ ನಾಯಕರೆಂದು ತಮ್ಮ ಬೆನ್ನು ತಾವೇ ತಟ್ಟಿಕೊಳ್ಳುವ ಸಿಎಂ ಸಿದ್ದರಾಮಯ್ಯ ದೇವರಾಜ ಅರಸು ಅವರ ಪ್ರತಿಮೆ ಅನಾವರಣ ಮಾಡುತ್ತಿಲ್ಲ. ಸಂವಿಧಾನದ ಆಶಯಕ್ಕೆ ತಕ್ಕಂತೆ ಕೆಲಸ ಮಾಡುತ್ತೇವೆ ಎಂದು ಹೇಳುವ ಸಚಿವ ಡಾ.ಮಹದೇವಪ್ಪ ಕೂಡ ಇದಕ್ಕೆ ಪ್ರಯತ್ನ ಮಾಡುತ್ತಿಲ್ಲ. ಈ ಹಿನ್ನೆಲೆ ನಾವೇ ಪ್ರತಿಮೆ ಅನಾವರಣ ಮಾಡುತ್ತೇವೆ ಎಂದರು.

ತರುವಾಯ ಸ್ಥಳಕ್ಕೆ ಬಂದ ಎಡಿಸಿ ಡಾ.ಪಿ.ಶಿವರಾಜ್, ನ.3ರಂದು ಸಿಎಂ ಸಿದ್ದರಾಮಯ್ಯ ಅವರೇ ಪ್ರತಿಮೆ ಅನಾವರಣ ಮಾಡುತ್ತಾರೆ ಎಂದು ಭರವಸೆ ನೀಡಿದ್ದರಿಂದ ಪ್ರತಿಭಟನೆ ಕೈಬಿಟ್ಟರು. ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಸುಬ್ಬಣ್ಣ, ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ಕೌಟಿಲ್ಯ ರಘು, ಮಾಜಿ ಮೇಯರ್ ಶಿವಕುಮಾರ್ ಇನ್ನಿತರರಿದ್ದರು.

ಎಲ್ಲಾ ಆಸ್ಪತ್ರೆಗಳಲ್ಲೂ ಮಾರಣಾಂತಿಕ ಕಾಯಿಲೆಯ ರೋಗಿಗಳಿಗೆ ಪ್ರತ್ಯೇಕ ಆರೈಕೆ ಕೇಂದ್ರಗಳಿರಬೇಕು

ಮೈಸೂರು ಮೆಡಿಕಲ್ ಕಾಲೇಜು ಪ್ರಾಂಶುಪಾಲ ಡಾ.ಸತೀಶ್ ಪ್ರತಿಪಾದನೆ



ರೋಟರಿ ಸಂಸ್ಥೆಯಿಂದ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ಗೆ ಪ್ಯಾಲಿಯೇಟಿವ್ ಕೇರ್‌ಗಾಗಿ 50 ಸಾವಿರ ದೇಣಿಗೆಯ ಚೆಕ್ ಅನ್ನು ನೀಡಲಾಯಿತು.

ಮೈಸೂರು, ನ.2(ಎಸ್‌ಪಿಎನ್)– ಮಾರಣಾಂತಿಕ ಕಾಯಿಲೆಯಿಂದ ಬಳಲುತ್ತಿರುವ ರೋಗಿಗಳ ಉಪಶಮನ ಆರೈಕೆಗೆ (ಪ್ಯಾಲಿಯೇಟಿವ್ ಕೇರ್) ದೇಶದ ಎಲ್ಲಾ ಜಿಲ್ಲಾ ಸರ್ಕಾರಿ ಆಸ್ಪತ್ರೆ ಮೆಡಿಕಲ್ ಕಾಲೇಜುಗಳಲ್ಲಿ ಪ್ರತೇಕ ವಿಭಾಗವಿರಬೇಕು ಎಂದು ಎಂಎಂಸಿ ಮತ್ತು ಆರ್‌ಐನ ಪ್ರಾಂಶುಪಾಲ ಡಾ.ಸತೀಶ್ ಪ್ರತಿಪಾದಿಸಿದರು.

ಜೆ.ಕೆ.ಮೈದಾನದಲ್ಲಿ ಎಂಎಂಸಿ ಮತ್ತು ಆರ್‌ಐನ ಅಮೃತ ಮಹೋತ್ಸವ ಭವನದಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ಎಂಎಂಸಿ ಮತ್ತು ಆರ್‌ಐ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಏರ್ಪಡಿಸಿದ್ದ ವಿಶ್ವ ಹಾಸ್ಪೈಸ್ ಮತ್ತು ಪ್ಯಾಲಿಯೇಟಿವ್ ಕೇರ್ ದಿನಾಚರಣೆ ಅಂಗವಾಗಿ ಬೆಳಕಿನ ದೀಪ ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ಕ್ಯಾನ್ಸರ್, ಸ್ಟ್ರೋಕ್(ಪಾರ್ಶ್ವವಾಯು), ಹೆಚ್‌ಐವಿ/ಏಡ್ಸ್ ಇತರೆ ದೀರ್ಘಕಾಲಿಕ ಹಾಗೂ ಮಾರಣಾಂತಿಕ ಖಾಯಿಲೆಗಳಿಂದ ಬಳಲುತ್ತಿರುವ ರೋಗಿಗಳ ಉಪಶಮನ ಆರೈಕೆ(ಪ್ಯಾಲಿಯೇಟಿವ್ ಕೇರ್) ಕೇಂದ್ರಗಳನ್ನು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಆರಂಭಿಸಬೇಕು. ಈ ನಿಟ್ಟಿನಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆಯು ಎಂಎಂಸಿ ಮತ್ತು ಆರ್‌ಐನೊಂದಿಗೆ ಉಪಶಮನ ಆರೈಕೆ ಕೇಂದ್ರವು 2009ರಿಂದ ಉಚಿತವಾಗಿ ಕಾರ್ಯ ನಿರ್ವಹಿಸುತ್ತಿರುವುದು ಸಂತೋಷಕರ ಸಂಗತಿ ಎಂದರು.

ರೋಟರಿ ಇಂಟರ್ ನ್ಯಾಷನಲ್ ಜಿಲ್ಲಾ ಗವರ್ನರ್ ಪಿ.ಕೆ.ರಾಮಕೃಷ್ಣ ನೇತೃತ್ವದಲ್ಲಿ ರೋಟರಿ ಸಂಸ್ಥೆಯಿಂದ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ಗೆ ಪ್ಯಾಲಿಯೇಟಿವ್ ಕೇರ್‌ಗಾಗಿ 50 ಸಾವಿರ ರೂ. ದೇಣಿಯ ಚೆಕ್ ವಿತರಿಸಿದರು. ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಸಿಇಒ ಎಸ್.ಸವಿತಾ, ಡಾ.ಅರ್ಚನಾ, ರೊ.ರಾಮಪ್ರಸಾದ್, ಉಪ ಶಮನ ಆರೈಕೆ ಕಾರ್ಯಕ್ರಮದ ವ್ಯವಸ್ಥಾಪಕಿ ಎಸ್.ನಂದಿನಿ ಇದ್ದರು.

ವೇದಿಕೆ ಕಾರ್ಯಕ್ರಮದ ನಂತರ ವಿಶ್ವ ಹಾಸ್ಪೈಸ್ ಮತ್ತು ಪ್ಯಾಲಿಯೇಟಿವ್ ಕೇರ್ ದಿನಾಚರಣೆ ಅಂಗವಾಗಿ ಮೈಸೂರು ನಗರದಲ್ಲಿ 'ಬೆಳಕಿನ ದೀಪ ಜಾಥಾ'ಗೆ ಎಂಎಂಸಿ ಮತ್ತು ಆರ್‌ಐನ ಪ್ರಾಂಶುಪಾಲ ಡಾ.ಸತೀಶ್ ಚಾಲನೆ ನೀಡಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯೊಂದಿಗೆ ನಾನಾ ಸ್ವಯಂ ಸೇವಾ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜಾಥಾ ನಡೆಯಿತು. ಜಾಥಾದಲ್ಲಿ ರೋಟರಿ ಮೈಸೂರು ನಾರ್ತ್, ರೋಟರಿ ಮೈಸೂರು ಬೃಂದಾವನ, ರೋಟರಿ ಮೈಸೂರು ವಿಜಯನಗರ, ರೋಟರಿ ಮೈಸೂರು ಅಂಬಾರಿ ಮತ್ತು ರೋಟರಿ ಮೈಸೂರು ಸೌತ್, ನಾರ್ತ್, ಈಸ್ಟ್ ಸಂಸ್ಥೆಯ ಪ್ರತಿನಿಧಿಗಳು ಭಾಗವಹಿಸಿದ್ದರು.

ನ.19 ರಂದು ಬೆಂಗಳೂರಿನಲ್ಲಿ 'ಅಕ್ಕ ಪಡೆ'ಗೆ ಚಾಲನೆ



ಉಡುಪಿ, ನ.2– ಮಹಿಳೆಯರು ಮತ್ತು ಮಕ್ಕಳ ರಕ್ಷಣೆಯ ಗುರಿ ಹೊಂದಿರುವ ಅಕ್ಕ ಪಡೆಗೆ ನ.19 ರಂದು ಬೆಂಗಳೂರಿನಲ್ಲಿ ಚಾಲನೆ ನೀಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಘೋಷಿಸಿದ್ದಾರೆ.

ಉಡುಪಿಯ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಆಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು. ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯವನ್ನು ತಡೆಗಟ್ಟುವುದು, ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ದೌರ್ಜನ್ಯಕ್ಕೊಳಗಾದವರಿಗೆ ತಕ್ಷಣದ ನೆರವು ನೀಡುವುದು ಈ ಪಡೆಯ ಉದ್ದೇಶವಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಪೊಲೀಸ್ ಇಲಾಖೆಯ ಜಂಟಿ ಸಹಯೋಗದಲ್ಲಿ ಈ ಪಡೆಯನ್ನು ಆರಂಭದಲ್ಲಿ ಬೆಂಗಳೂರು, ಉಡುಪಿ, ಮೈಸೂರು ಮತ್ತು ಮಂಗಳೂರಿನಲ್ಲಿ ರಚಿಸಲಾಗುವುದು ಎಂದು ಹೆಬ್ಬಾಳ್ಕರ್ ಹೇಳಿದರು. ಮೊದಲು 2023 ರಲ್ಲಿ ಬೀದರ್‌ನಲ್ಲಿ ಪೈಲಟ್ ಯೋಜನೆಯಾಗಿ ಮೇಲೆ ಅಕ್ಕ ಪಡೆಯನ್ನು ಪ್ರಾರಂಭಿಸಲಾಯಿತು.

ಪತ್ರಕರ್ತರು, ರಾಜಕಾರಣಿಗಳು ಸಮಾಜದ ಎರಡು ಕಣ್ಣುಗಳಿದ್ದಂತೆ

ವಿಧಾನಸಭಾ ಸಭಾಪತಿಗಳಾದ ಯು.ಟಿ.ಖಾದರ್ ವಿಶ್ಲೇಷಣೆ



ವಿಧಾನಸಭಾ ಸಭಾಪತಿ ಯು.ಟಿ.ಖಾದರ್ 'ವಿಜಯಕಾಲ' ದಿನಪತ್ರಿಕೆ ಲೋಕಾರ್ಪಣೆಗೊಳಿಸಿದರು.

ಮೈಸೂರು, ನ.2(ಜಿಎ)– ಪತ್ರಕರ್ತರು ಮತ್ತು ರಾಜಕಾರಣಿಗಳು ಸಮಾಜದ ಎರಡು ಕಣ್ಣುಗಳಿದ್ದಂತೆ. ಅವರು ಒಟ್ಟಾಗಿ ಕೆಲಸ ಮಾಡಿದರೆ, ಜನರ ಕಷ್ಟಗಳ ಬಗೆಹರಿಸುವ ಕೆಲಸವನ್ನು ಮಾಡಬಹುದು ಎಂದು ವಿಧಾನಸಭಾ ಸಭಾಪತಿಗಳಾದ ಯು.ಟಿ. ಖಾದರ್ ವಿಶ್ಲೇಶಿಸಿದರು.

ಮೈಸೂರಿನ ಮಾನಸಗಂಗೋತ್ರಿಯ ಆವರಣದಲ್ಲಿರುವ ವಿಜ್ಞಾನ ಭವನದಲ್ಲಿ 'ವಿಜಯ ಕಾಲ' ಪತ್ರಿಕೆ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಜನರ ಕಷ್ಟಗಳ ಕಡೆಗೆ ಜನಪ್ರತಿನಿಧಿಗಳು, ಅಧಿಕಾರಿಗಳ ಗಮನ ಸೆಳೆಯುವ ಕೆಲಸವನ್ನು ಪತ್ರಕರ್ತರು ಮಾಡಿದರೆ, ಅವುಗಳನ್ನು ಬಗೆಹರಿಸುವ ಕೆಲಸವನ್ನು ರಾಜಕಾರಣಿಗಳು ಮಾಡಲಿದ್ದಾರೆ ಎಂದು ತಿಳಿಸಿದರು.

ಬಹುಭಾಷ ನಟ ಪ್ರಕಾಶ್ ರಾಜ್ ಮಾತನಾಡಿ, ಸಂವಿಧಾನಿಕ ಕೋರ್ಟ್, ಎರಡನೆಯದು ಮೀಡಿಯಾ ಕೋರ್ಟ್, ಮೂರನೆಯದು ಸೋಷಿಯಲ್ ಮೀಡಿಯಾ ಕೋರ್ಟ್‌ಗಳು ಇಂದು ದೇಶದಲ್ಲಿ ಈ ಮೂರು ಕೋರ್ಟ್‌ಗಳು ಕೆಲಸ ಮಾಡುತ್ತಿವೆ. ಆದರೆ, ಈ ಮೂರೂ ಕೋರ್ಟ್‌ಗಳಿಗೆ ಜವಾಬ್ದಾರಿ ಇಲ್ಲದಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕನ್ನಡ, ಕನ್ನಡತನ, ಕರ್ನಾಟಕ ಎಂದರೆ ವಚನ ಸಾಹಿತ್ಯ, ಕುವೆಂಪು ಅವರ ವಿಶ್ವ ಮಾನವ ಸಂದೇಶ. ಸರ್ವಜನಾಂಗದ ಶಾಂತಿಯ ತೋಟ. ನೂರು ಮತದ ಹೊಟ್ಟ ತೂರಿ ಎಲ್ಲ ತತ್ವದೆಲ್ಲೆ ಮೀರಿ ನಿರ್ದಿಗಂತವಾಗಿರುವುದೇ ಕರ್ನಾಟಕದ ಅಸ್ಮಿತೆ. ನಮಗೆ ನಿಷ್ಠೂರ ಪತ್ರಿಕೋದ್ಯಮ ಎಂದಾಕ್ಷಣ ಮೇಷ್ಟ್ರು ಲಂಕೇಶ್ ನೆನಪಾಗುತ್ತಾರೆ. ಅವರನ್ನು ಬಿಟ್ಟು ಬೇರೆಯವರನ್ನು ನೆನಪು ಮಾಡಿಕೊಳ್ಳಲು ಆಗುವುದಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹಾದೇವಪ್ಪ, ಶಾಸಕ ಜಿ.ಟಿ.ದೇವೇಗೌಡ, ವಿಧಾನ ಪರಿಷತ್ ಸದಸ್ಯರಾದ ಡಾ.ಯತೀಂದ್ರ, ಕೆ.ಶಿವಕುಮಾರ್, ಹಿರಿಯ ಪತ್ರಕರ್ತ ಮಹದೇವಪ್ಪ, ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್, ವಿಧಾನ ಪರಿಷತ್‌ನ ಮಾಜಿ ಸದಸ್ಯ ಕೆ.ಸಿ.ಪುಟ್ಟಸಿದ್ದ ಶೆಟ್ಟಿ, ಇತಿಹಾಸ ತಜ್ಞ ಪ್ರೊ.ನಂಜರಾಜೇ ಅರಸ್, ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ. ನಾರಾಯಣಗೌಡ, ಪತ್ರಕರ್ತ ಸಿ.ಕೆ.ಮಹೇಂದ್ರ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ್, ಹಿರಿಯ ಪತ್ರಕರ್ತರಾದ ಬಾಲಕೃಷ್ಣ ಮದ್ದೂರು, ಮುಳ್ಳೂರು ರಾಜು, ಪ್ರಗತಿ ಗೋಪಾಲ ಕೃಷ್ಣ, ಕೊಳ್ಳೇಗಾಲ ಮಹೇಶ್, ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷರಾದ ಡಾ.ಬಿ.ಜೆ. ವಿಜಯ್‌ಕುಮಾರ್, ಕನ್ನಡ ಪರ ಹೋರಾಟಗಾರರಾದ ಮೂಗೂರು ನಂಜುಂಡಸ್ವಾಮಿ ಮತ್ತಿರರರು ಭಾಗವಹಿಸಿದ್ದರು. 'ವಿಜಯಕಾಲ' ಪತ್ರಿಕೆಯ ಪ್ರಧಾನ ಸಂಪಾದಕ ಕೆ.ದೀಪಕ್ ಸ್ವಾಗತಿಸಿದರೆ, ಪತ್ರಿಕೆಯ ಸಿಇಓ ವಿಭಾವಸು ವಂದಿಸಿದರು.

ದೇಶ – ವಿದೇಶ

ಕೊಲೆ ಪ್ರಕರಣ: ಬಿಹಾರದ ಜೆಡಿಯು ಅಭ್ಯರ್ಥಿ ಅನಂತ್ ಸಿಂಗ್ ಬಂಧನ



ಪಟ್ನಾ: ಮೂರು ದಿನಗಳ ಹಿಂದೆ ಮೋಕಾಮಾದಲ್ಲಿ ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಜನ್ ಸುರಾಜ್ ಬೆಂಬಲಿಗ ದುಲರ್ ಚಂದ್ ಯಾದವ್ ಅವರ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಹಾರ ಪೊಲೀಸರು ಆಮಾಜಿ ಗ್ಯಾಂಗ್‌ಸ್ಟರ್, ರಾಜಕಾರಣಿ ಅನಂತ್‌ಕುಮಾರ್ ಸಿಂಗ್ ಅವರನ್ನು ಬಂಧಿಸಿದ್ದಾರೆ.

ಎನ್‌ಡಿಎ ಅಭ್ಯರ್ಥಿಯಾಗಿ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಜೆಡಿಯು ಅಭ್ಯರ್ಥಿಯನ್ನು ಭಾನುವಾರ ಬೆಳಗಿನ ಜಾವ ಮೊಕಾಮಾದ ಅವರ ಮನೆಯಿಂದ ಪೊಲೀಸರು ಬಂಧಿಸಿದ್ದಾರೆ. ಪಿಟಿಐ ಜೊತೆ ಮಾತನಾಡಿದ ಪಾಟ್ನಾ ಎಸ್‌ಎಸ್‌ಪಿ ಕಾರ್ತಿಕೇಯ ಕೆ ಶರ್ಮಾ, ಅನಂತ್ ಬಂಧನವನ್ನು ದೃಢಪಡಿಸಿದರು. ಆದರೂ, ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸಲು ನಿರಾಕರಿಸಿದರು. ಪಟ್ನಾದ ಮೋಕಾಮಾ ಪ್ರದೇಶದಲ್ಲಿ ಜನ್ ಸುರಾಜ್ ಪಕ್ಷದ ಅಭ್ಯರ್ಥಿ ಪಿಯೂಷ್ ಪ್ರಿಯದರ್ಶಿ ಪರ ಪ್ರಚಾರ ನಡೆಸುತ್ತಿದ್ದಾಗ ಯಾದವ್ ಅನುಮಾನಾಸ್ಪದವಾಗಿ ಮೃತಪಟ್ಟಿದ್ದರು. ಮೋಕಾಮಾ ಪ್ರದೇಶದ ಭದೌರ್ ಮತ್ತು ಘೋಸ್ವರಿ ಪೊಲೀಸ್ ಠಾಣೆಗಳ ಸಮೀಪದಲ್ಲೇ ಈ ಘಟನೆ ನಡೆದಿತ್ತು.

ಬ್ರಿಟನ್ ರೈಲಿನಲ್ಲಿ ಹಲವರಿಗೆ ಚಾಕು ಇರಿತ: ಇಬ್ಬರ ಬಂಧನ

ಲಂಡನ್: ಬ್ರಿಟನ್‌ನ ಕೇಂಬ್ರಿಡ್ಜ್‌ಶೈರ್‌ನ ರೈಲೊಂದರಲ್ಲಿ ಇಬ್ಬರು ದುಷ್ಕರ್ಮಿಗಳು ಹಲವು ಪ್ರಯಾಣಿಕರಿಗೆ ಚಾಕುವಿನಿಂದ ಇರಿದಿದ್ದು, ನಂತರ ಶಸ್ತ್ರಸಜ್ಜಿತ ಪೊಲೀಸರು ರೈಲನ್ನು ತಡೆದು ಇಬ್ಬರು ವ್ಯಕ್ತಿಗಳನ್ನು ಬಂಧಿಸಿದ್ದಾರೆ.

ಹಂಟಿಂಗ್‌ಡನ್‌ನಲ್ಲಿ ರೈಲನ್ನು ತಡೆದು ಗಾಯಾಳುಗಳನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಅಧಿಕಾರಿಗಳು ಬ್ರಿಟಿಷ್ ಸಾರಿಗೆ ಪೊಲೀಸರೊಂದಿಗೆ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಹಂಟಿಂಗ್‌ಡನ್‌ನಲ್ಲಿ ರೈಲನ್ನು ತಡೆದ ಸಶಸ್ತ್ರ ಪೊಲೀಸರು, ಇಬ್ಬರು ಪುರುಷರನ್ನು ಬಂಧಿಸಿದ್ದಾರೆ. ಗಾಯಗೊಂಡವರನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮರ್ ಭಯಾನಕ ಘಟನೆಯನ್ನು ಖಂಡಿಸಿದ್ದು, ಜನರು ಪೊಲೀಸರ ಸಲಹೆಯನ್ನು ಪಾಲಿಸುವಂತೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಒತ್ತಾಯಿಸಿದ್ದಾರೆ. ಗಾಯಾಳುಗಳ ನೆರವಿಗೆ ನಾವಿದ್ದೇವೆ. ಸಂತ್ರಸ್ತರಿಗೆ ಸ್ಪಂದಿಸಿದ ತುರ್ತು ಸೇವೆ ಅಧಿಕಾರಿಗಳಿಗೆ ಧನ್ಯವಾದ. ಆ ಪ್ರದೇಶ ಪ್ರತಿಯೊಬ್ಬರೂ ಪೊಲೀಸರ ಸಲಹೆ ಪಾಲಿಸಬೇಕು ಎಂದು ಪೊಲೀಸರು ಹೇಳಿದ್ದಾರೆ.

ಘಟನೆ ಕುರಿತಂತೆ ಗೃಹ ಕಾರ್ಯದರ್ಶಿ ಶಬಾನಾ ಮೊಹಮ್ಮದ್ ಆಘಾತ ವ್ಯಕ್ತಪಡಿಸಿದ್ದು, ವದಂತಿಗಳಿಗೆ ಕಿವಿಗೊಡದಂತೆ ಜನರಲ್ಲಿ ಮನವಿ ಮಾಡಿದ್ದಾರೆ.

ಇಂಟರ್‌ವ್ಯೂಗೆಂದು ಹೋದ ಯುವತಿ ಶವವಾಗಿ ಪತ್ತೆ



ತಿರುಚ್ಚಿ: ಎರಡು ದಿನಗಳಿಂದ ನಾಪತ್ತೆಯಾಗಿದ್ದ ಯುವತಿ ಕಾಡಿನಲ್ಲಿ ಸುಟ್ಟು ಕರಕಲಾದ ಸ್ಥಿತಿಯಲ್ಲಿ ಶವವಾಗಿ ಪತ್ತೆಯಾಗಿರುವ ಘಟನೆ ತಮಿಳುನಾಡಿನ ತಿರುಚ್ಚಿಯಲ್ಲಿ ನಡೆದಿದೆ. ಶ್ರೀನಿವಾಸಪುರಂ ನಿವಾಸಿಯಾಗಿರುವ ಈ ಮಹಿಳೆ ಗುರುವಾರದಿಂದ ಕೆಲಸಕ್ಕೆ ಇಂಟರ್‌ವ್ಯೂಗೆಂದು ಮನೆಯಿಂದ ಹೊರಟಿದ್ದವಳು ಹಿಂದಿರುಗಿರಲಿಲ್ಲ. ಆಕೆಯ ಪೋಷಕರು ನಾಪತ್ತೆಯಾದ ಮಗಳ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪೊಲೀಸರು ಶೋಧ ಕಾರ್ಯ ಆರಂಭಿಸಿದ್ದರು. ತನಿಖೆ ನಂತರ, ಪೊಲೀಸರು ಸಣಮಂಗಲಂ ಅರಣ್ಯ ಪ್ರದೇಶದಲ್ಲಿ ಆಕೆ ಮೊಬೈಲ್ ಫೋನ್ ಸಿಗ್ನಲ್ ಪತ್ತೆಹಚ್ಚಿದರು. ಅದೇ ಕಾಡಿನಲ್ಲಿ ಶವವೊಂದು ಸುಟ್ಟು ಕರಕಲಾದ ಸ್ಥಿತಿಯಲ್ಲಿ ಪತ್ತೆಯಾಗಿತ್ತು.

ಪೊಲೀಸರು ಶವವನ್ನು ವಶಪಡಿಸಿಕೊಂಡು, ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿ, ಕಾಣೆಯಾದ ಯುವತಿ ದೇಹವನ್ನು ಆಕೆಯ ತಾಯಿ ತನ್ನ ಮಗಳದ್ದು ಎಂದು ಗುರುತಿಸಿದ್ದಾರೆ. ಪೊಲೀಸರು ಈಗ ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ಯುವತಿಯ ಕೊಲೆಯ ರಹಸ್ಯ ಭೇದಿಸಲು ಎಲ್ಲಾ ಆಯಾಮಗಳಿಂದ ತನಿಖೆ ನಡೆಸುತ್ತಿದ್ದಾರೆ.

ಮೆಕ್ಸಿಕೋ ಸೂಪರ್ ಮಾರ್ಕೆಟ್‌ನಲ್ಲಿ ಸ್ಫೋಟ; ಮಕ್ಕಳು ಸೇರಿ 23 ಮಂದಿ ಸಾವು



ಮೆಕ್ಸಿಕೋ ಸಿಟಿ: ಉತ್ತರ ಮೆಕ್ಸಿಕೋದ ಸೂಪರ್ ಮಾರ್ಕೆಟ್‌ನಲ್ಲಿ ಸ್ಫೋಟ ಸಂಭವಿಸಿದ್ದು, ಮಕ್ಕಳು ಸೇರಿದಂತೆ 23 ಮಂದಿ ಸಾವನ್ನಪ್ಪಿದ್ದಾರೆ.

ಹರ್ಮೊಸಿಲ್ಲೊದ ವಾಲ್ಡೋ ಅಂಗಡಿಯಲ್ಲಿ ಈ ಸ್ಫೋಟ ಸಂಭವಿಸಿದೆ. ಸ್ಫೋಟದಲ್ಲಿ 11 ಮಂದಿ ಗಾಯಗೊಂಡಿದ್ದು, ಅವರನ್ನು ನಗರದಲ್ಲಿ ಚಿಕಿತ್ಸೆಗಾಗಿ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಮೆಕ್ಸಿಕನ್ ಅಧ್ಯಕ್ಷೆ ಕ್ಲೌಡಿಯಾ ಶೀನ್‌ಬಾಮ್ ಅವರು, ಮೃತರ ಕುಟುಂಬಗಳು ಮತ್ತು ಪ್ರೀತಿಪಾತ್ರರಿಗೆ ಎಕ್ಸ್ ಖಾತೆಯಲ್ಲಿ ಸಂತಾಪ ಸೂಚಿಸಿದ್ದಾರೆ. ಮೃತರ ಕುಟುಂಬಗಳು ಮತ್ತು ಗಾಯಾಳುಗಳಿಗೆ ಸಹಾಯ ಮಾಡಲು ಬೆಂಬಲ ತಂಡವನ್ನು ಕಳುಹಿಸಲು ನಾನು ಆಂತರಿಕ ಕಾರ್ಯದರ್ಶಿ ರೋಸಾ ಐಸ್ಲಾ ರೊಡ್ರಿಗಸ್ ಅವರಿಗೆ ಸೂಚಿಸಿದ್ದೇನೆ ಎಂದು ತಿಳಿಸಿದ್ದಾರೆ. ಸ್ಫೋಟದ ವೇಳೆ ವಿಷಕಾರಿ ಅನಿಲ ಉಸಿರಾಟದಿಂದ ಹೆಚ್ಚಿನ ಮಂದಿ ಸಾವಿಗೀಡಾಗಿದ್ದಾರೆ ಎಂದು ವಿಧಿವಿಜ್ಞಾನ ವೈದ್ಯಕೀಯ ಸೇವೆಯ ರಾಜ್ಯದ ಅಟಾರ್ನಿ ಜನರಲ್ ಗುಸ್ತಾವೋ ಸಲಾಸ್ ಮಾಹಿತಿ ನೀಡಿದ್ದಾರೆ.

ಕೇರಳದಲ್ಲಿ ಕ್ಯಾನ್ಸರ್ ರೋಗಿಗಳಿಗೆ ಉಚಿತ ಬಸ್ ಪ್ರಯಾಣ ಯೋಜನೆ



ತಿರುವನಂತಪುರ: ಕ್ಯಾನ್ಸರ್ ರೋಗಿಗಳಿಗೆ ಕೇರಳ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಉಚಿತ ಬಸ್ ಪ್ರಯಾಣ ಯೋಜನೆ ಘೋಷಿಸಿದೆ.

ಕ್ಯಾನ್ಸರ್ ರೋಗಿಗಳು ಚಿಕಿತ್ಸೆಗಾಗಿ ರಾಜ್ಯದಲ್ಲಿನ ಯಾವುದೇ ಆಸ್ಪತ್ರೆಗಳಿಗೆ ಬಸ್‌ನಲ್ಲಿ ಉಚಿತ ಪ್ರಯಾಣ ಮಾಡಬಹುದು.

ಸಾಮಾನ್ಯ ಬಸ್‌ನಿಂದ ಹಿಡಿದು ವೇಗದ ಬಸ್‌ನಲ್ಲಿಯೂ ಕೀಮೊ ತೆರಪಿ, ರೇಡಿಯೇಶನ್ ಮುಂತಾದ ಕ್ಯಾನ್ಸರ್ ಚಿಕಿತ್ಸೆಗಾಗಿ ರೋಗಿಗಳು ಉಚಿತವಾಗಿ ಪ್ರಯಾಣಿಸಬಹುದು ಎಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಹಾಗೂ ಮುಖ್ಯಸ್ಥ ಪ್ರಮೋಜ್ ಶಂಕರ್ ಹೇಳಿದ್ದಾರೆ. ಯೋಜನೆಗೆ ಅರ್ಹರಾಗಿರುವ ರೋಗಿಗಳು keralartcit.com ಮೂಲಕ ರೇಡಿಯೊ ಫ್ರಿಕ್ವೆನ್ಸಿ ಐಡೆಂಟಿಫಿಕೇಶನ್ (ಆರ್‌ಎಫ್‌ಐಡಿ) ಕಾರ್ಡ್ ಪಡೆದುಕೊಳ್ಳಬೇಕು. ಇದಕ್ಕೆ ನೋಂದಾಯಿಸಿಕೊಳ್ಳಲು ಪಾಸ್‌ಪೋರ್ಟ್ ಗಾತ್ರದ ಫೋಟೋ, ಆಧಾರ್ ಕಾರ್ಡ್, ವಿಳಾಸ ಮತ್ತು ಕ್ಯಾನ್ಸರ್ ಚಿಕಿತ್ಸೆ ಪಡೆಯುತ್ತಿರುವ ಕುರಿತ ದಾಖಲೆಗಳನ್ನು ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಮಾಹಿತಿ ನೀಡಿದ್ದಾರೆ.

ಚೇನಂಡ ಹಾಕಿ ನಮ್ಮೆಗೆ ಕೋಟಿ ರೂ. ಅನುದಾನ

ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

ಮಡಿಕೇರಿ,ನ.2–ಕೊಡವ ಕೌಟುಂಬಿಕ 'ಚೇನಂಡ ಹಾಕಿ ನಮ್ಮೆ'ಗೆ ರಾಜ್ಯ ಸರಕಾರದಿಂದ ಕೋಟಿ ರೂ. ಅನುದಾನ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಬೆಂಗಳೂರಿನ ಗೃಹ ಕಚೇರಿ ಕೃಷ್ಣದಲ್ಲಿ ಚೇನಂಡ ಹಾಕಿ ಪಂದ್ಯಾವಳಿಯ ಲೋಗೋ ಬಿಡುಗಡೆ ಮಾಡಿ, ಕೊಡವರು ಅಂದರೆ ಹಾಕಿ, ಹಾಕಿ ಅಂದರೆ ಕೊಡವರು ಎನ್ನುವ ಮಾತಿದೆ. ಚೇನಂಡ ಹಾಕಿ ಪಂದ್ಯಾವಳಿಗೆ ಸರ್ಕಾರ ದಿಂದ ಈ ಬಾರಿ 1 ಕೋಟಿ ರೂ. ಅನುದಾನ ಒದಗಿಸಲಾಗುವುದು. ಮಾತ್ರವಲ್ಲದೇ ಹಾಕಿ ಪಂದ್ಯಾವಳಿ ವೀಕ್ಷಿಸಲು ತಾವೂ ಕೂಡ ಬರುವುದಾಗಿ ಭರವಸೆ ನೀಡಿದರು.



ಗೃಹ ಕಚೇರಿ ಕೃಷ್ಣದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಚೇನಂಡ ಹಾಕಿ ಪಂದ್ಯಾವಳಿಯ ಲೋಗೋ ಬಿಡುಗಡೆ ಮಾಡಿದರು

ಅಂತಾರಾಷ್ಟ್ರೀಯ ಮಟ್ಟದಲ್ಲಿ ಕೊಡಗಿನ ಹಾಕಿ ಪಟುಗಳು ಮಿಂಚಿದ್ದಾರೆ. ದೇಶಕ್ಕೆ ಕೀರ್ತಿ ತಂದಿದ್ದಾರೆ. ಏಷ್ಯಾ ಗೇಮ್ಸ್ ಸೇರಿ ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ದೇಶಕ್ಕೆ ಹೆಮ್ಮೆ ಮತ್ತು ಘನತೆ ತಂದು ಕೊಟ್ಟಿದ್ದಾರೆ ಎಂದು ಮುಖ್ಯಮಂತ್ರಿಗಳು ಶ್ಲಾಘಿಸಿದರು. ಕೊಡವ ಸಂಸ್ಕೃತಿ ತನ್ನದೇ ಆದ ಭಿನ್ನತೆಯನ್ನು ಉಳಿಸಿಕೊಂಡು, ಬೆಳೆಸಿಕೊಂಡು ಬಂದಿದೆ. ಇದು ನಮ್ಮ ಸಂಸ್ಕೃತಿಯ ಹೆಮ್ಮೆ ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು, ಸಚಿವರಾದ ಭೈರತಿ ಸುರೇಶ್, ಶಿವರಾಜ್ ತಂಗಡಗಿ, ಶಾಸಕ ಎಎಸ್.ಪೊನ್ನಣ್ಣ, ಕೊಡವ ಹಾಕಿ ಅಕಾಡೆಮಿ ಅಧ್ಯಕ್ಷ ಪಾಂಡಂಡ ಕೆ.ಬೋಪಣ್ಣ, ಚೇನಂಡ ಕುಟುಂಬ ಪ್ರಮುಖರು ಉಪಸ್ಥಿತರಿದ್ದರು.

ಸಿಎನ್‌ಸಿಯಿಂದ ಜಂತರ್ ಮಂತರ್‌ನಲ್ಲಿ ಸತ್ಯಾಗ್ರಹ

ಮಡಿಕೇರಿ,ನ.2– ಕೊಡವ ಲ್ಯಾಂಡ್ ಪುನರ್–ಸಂಘಟನಾ ಆಯೋಗವನ್ನು ರಚಿಸಬೇಕೆಂದು ಆಗ್ರಹಿಸಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ನವದೆಹಲಿಯ ಜಂತರ್ ಮಂತರ್‌ನಲ್ಲಿ ಶಾಂತಿಯುತ ಸತ್ಯಾಗ್ರಹ ನಡೆಸಿತು.

ಸತ್ಯಾಗ್ರಹದ ನೇತೃತ್ವ ವಹಿಸಿ ಮಾತನಾಡಿದ ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ, ವಿಶ್ವ ಸಂಸ್ಥೆ ಮತ್ತು ಅದರ ನಂತರದ ಒಪ್ಪಂದಗಳು ಹಾಗೂ ಘೋಷಣೆಗಳು ಪ್ರಪಂಚದಾದ್ಯಂತ ಜನರ ಸ್ವ–ನಿರ್ಣಯದ ಹಕ್ಕುಗಳನ್ನು ಎತ್ತಿ ಹಿಡಿಯುತ್ತವೆ. ಇದರಲ್ಲಿ ಭಾರತ ಸರ್ಕಾರವು ಸಹಿ ಹಾಕಿದೆ. 2ನೇ ರಾಜ್ಯಗಳ ಪುನರ್–ಸಂಘಟನಾ ಆಯೋಗ ರಚನೆಗಾಗಿ ಒತ್ತಾಯಿಸಿ ಈಗಾಗಲೇ ಕೇಂದ್ರದ ಮಾಜಿ ಸಚಿವ ಹಾಗೂ ಖ್ಯಾತ ಅರ್ಥಶಾಸ್ತ್ರಜ್ಞ ಡಾ.ಸುಬ್ರಮಣಿಯನ್ ಸ್ವಾಮಿ ಅವರ ಮೂಲಕ ಸಿಎನ್‌ಸಿ ಸಂಘಟನೆ ಹೈಕೋರ್ಟ್‌ನಲ್ಲಿ ಕಾನೂನು ಹೋರಾಟ ನಡೆಸುತ್ತಿದ್ದು, ಜಯ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕೊಡವರ ಸಾಂಪ್ರದಾಯಿಕ ತಾಯ್ನಾಡು 'ಸಿ' ರಾಜ್ಯ 1956ರ ನ.1ರಂದು ಮೈಸೂರಿನಲ್ಲಿ ಈಗಿನ ಕರ್ನಾಟಕ ರಾಜ್ಯದಲ್ಲಿ ವಿಲೀನಗೊಂಡಿತು. ನಂತರದ ದಿನಗಳಲ್ಲಿ ಕೊಡವರ ಹಿತಾಸಕ್ತಿಗಳನ್ನು ರಕ್ಷಿಸಲು ಸಂವಿಧಾನದ 7ನೇ ತಿದ್ದುಪಡಿಯಲ್ಲಿ ಪ್ರತಿಪಾದಿಸಲಾದ ರಾಜ್ಯಗಳ ಪುನರ್–ಸಂಘಟನಾ ಕಾಯ್ದೆ 1956ರ ಬದ್ಧತೆಯನ್ನು ರಾಜ್ಯವು ಪಾಲಿಸಿಲ್ಲ. ಕೊಡಗಿನ ವಿಲೀನದ ನಂತರ, ಕೊಡವರನ್ನು ರಾಜ್ಯದ ಎರಡನೇ ದರ್ಜೆಯ, ವರ್ಣಭೇದ ನೀತಿಯ ನಾಗರಿಕರಂತೆ ಪರಿಗಣಿಸಲಾಗಿದ್ದು, ಇದು ಸಾಂವಿಧಾನಿಕ ಹಕ್ಕಿನ ಉಲ್ಲಂಘನೆಯಾಗಿದೆ ಎಂದು ಟೀಕಿಸಿದರು.


ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ನವದೆಹಲಿಯ ಜಂತರ್ ಮಂತರ್‌ನಲ್ಲಿ ಶಾಂತಿಯುತ ಸತ್ಯಾಗ್ರಹ ನಡೆಸಿತು.

ಸಿಕ್ಕಿಂನ ಬೌದ್ಧ ಸನ್ಯಾಸಿ ಸಮುದಾಯಕ್ಕಾಗಿ ಸಂಘ ಕ್ಷೇತ್ರದ ಮಾದರಿಯಲ್ಲಿ ಕೊಡವರಿಗಾಗಿ ವಿಶೇಷ ಕೊಡವ ಸಂಸದೀಯ ಕ್ಷೇತ್ರ ಮತ್ತು ಕೊಡವ ವಿಧಾನಸಭಾ ಕ್ಷೇತ್ರ ರಚಿಸಬೇಕು ಎಂದು ಆಗ್ರಹಿಸಿದರು. ಬಳಿಕ ಸತ್ಯಾಗ್ರಹದ ಮನವಿ ಪತ್ರವನ್ನು ಕೇಂದ್ರ ಸರಕಾರಕ್ಕೆ ಸಲ್ಲಿಸಲಾಯಿತು.

ಸತ್ಯಾಗ್ರಹದಲ್ಲಿ ನಂದೇಟಿರ ಕವಿತಾ ಸುಬ್ಬಯ್ಯ, ಬೊಜ್ಜಂಗಡ ನಕ್ಷಾ ಪೂವಣ್ಣ, ಅಂಜಪರವಂಡ ಕೌಶಿ ನಿಖಿಲ್, ಜಮ್ಮಡ ಮೋಹನ್, ನಂದೇಟಿರ ರವಿ ಸುಬ್ಬಯ್ಯ, ಕುಲ್ಲೇಟಿರ ಅರುಣಾ ಬೇಬ, ಕಾಂಡೇರ ಸುರೇಶ್, ಪಾರ್ವಂಗಡ ನವೀನ್, ಅಪ್ಪೆಯಂಗಡ ಮಾಲೆ ಪೂಣಚ್ಚ, ಕರ್ತಂಡ ದಿಲನ್, ಬೊಜ್ಜಂಗಡ ಪೂವಣ್ಣ, ಅಂಜಪರವಂಡ ನಿಖಿಲ್ ಕಾರ್ಯಪ್ಪ, ಮಾಚಿಮಂಡ ಶರತ್ ಸುಬ್ಬಯ್ಯ, ಮಾಚಿಮಾಡ ನಿಶಾನ್ ಮತ್ತಿತರರು ಪಾಲ್ಗೊಂಡಿದ್ದರು.

ಭಾಷೆಯ ಬಗ್ಗೆ ಪ್ರೇಮವನ್ನು ಬೆಳೆಸಿಕೊಳ್ಳಿ: ಎ.ಎಸ್.ಪೊನ್ನಣ್ಣ


ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಶಾಸಕ ಎ.ಎಸ್. ಪೊನ್ನಣ್ಣ ಮಾತನಾಡಿದರು.

ವಿರಾಜಪೇಟೆ, ನ.2– ಕನ್ನಡ ಭಾಷೆ ಬಗ್ಗೆ ಅಭಿಮಾನ ಒಂದು ದಿನಕ್ಕೆ ಮಾತ್ರ ಸೀಮಿತವಾಗದೆ, ಸದಾ ನಾಡು, ಜಲ, ಭಾಷೆ ಬಗ್ಗೆ ಪ್ರೇಮವನ್ನು ಬೆಳೆಸಿಕೊಳ್ಳಬೇಕೆಂದು ಶಾಸಕ ಎ.ಎಸ್. ಪೊನ್ನಣ್ಣ ತಿಳಿಸಿದರು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ, ತಾಲೂಕು ಆಡಳಿತ ಸಂಯುಕ್ತ ಆಶ್ರಯದಲ್ಲಿ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಕನ್ನಡ ಧ್ವಜಾರೋಹಣ, ಧ್ವಜ ವಂದನೆ ಸಲ್ಲಿಸಿ ಗೌರವ ಸ್ವೀಕರಿಸಿ ಮಾತನಾಡಿದ ಶಾಸಕರು, ಸಮಸ್ತ ಕರ್ನಾಟಕದ ಜನತೆ ಇಂದು ಹೆಮ್ಮೆಪಡುವ ದಿನ. ನಮ್ಮ ಭಾಷೆ, ನೆಲ ಜಲ ಸದಾ ನಮ್ಮೊಂದಿಗಿರುತ್ತದೆ. ನಮ್ಮತನವನ್ನು ಸದಾ ಉಳಿಸಿಕೊಳ್ಳಲು ನಾವು ನಮ್ಮ ಭಾಷೆಗೆ ನೀಡುವ ಗೌರವ, ಅಭಿಮಾನ ಪೋಷಿಸುವ ರೀತಿಯ ಮೇಲೆ ಅವಲಂಬಿತವಾಗಿರುತ್ತದೆ ಎಂದರು.

ಗಡಿನಾಡಾದ ವಿರಾಜಪೇಟೆಯಲ್ಲಿ ಕನ್ನಡ ಭಾಷೆಯನ್ನು ಬಳಸುವುದರ ಮೂಲಕ ಬೆಳೆಸುವಂತಾಗಬೇಕು. ಇಲ್ಲಿ ಎಲ್ಲಾ ಭಾಷೆ ಜನರು ಬೆರೆತಿದ್ದಾರೆ. ನಮ್ಮ ಮಾತೃ ಭಾಷೆಯನ್ನು ಮನೆಗಳಲ್ಲಿ ಬಳಸಿ ಅನ್ಯದ ಭಾಷೆ ಕನ್ನಡವನ್ನು ಎಲ್ಲೆಡೆ ಬಳಸಿ ಇನ್ನೊಬ್ಬರಿಗೆ ಕಲಿಸುವಂತಾಗಬೇಕು ಎಂದರು.

ಧ್ವಜ ವಂದನೆ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ಪಿ.ಸಿ. ಪ್ರವೀಣ್ ಕುಮಾರ್ ಮಾತನಾಡಿ, ಕರ್ನಾಟಕದ ಸಂಗೀತವನ್ನು ಪ್ರಪಂಚಕ್ಕೆ ನೀಡಿದ ಪುಣ್ಯಭೂಮಿ ನಾಡಾಗಿದೆ. ಯಕ್ಷಗಾನ, ನೃತ್ಯ, ನಾಟಕಗಳಲ್ಲಿಯು ಕರ್ನಾಟಕದ ಕೊಡುಗೆ ಅಪಾರ ಎಂದರು.

ವಿಧಾನಪರಿಷತ್ ಸದಸ್ಯ ಮಂಡೇಪಂಡ ಸುಜಾ ಕುಶಾಲಪ್ಪ ಮಾತನಾಡಿ, ಭಾಷೆಗೆ ಧಕ್ಕೆ ಬರುವ ರೀತಿಯಲ್ಲಿ ನಾವು ನಡೆದುಕೊಳ್ಳಬಾರದು. ಕನ್ನಡ ಭಾಷೆಯ ಬಗ್ಗೆ ಶ್ರದ್ದೆ ಭಕ್ತಿ, ಗೌರವದಿಂದ ಹೊಂದಿಕೊಳ್ಳಬೇಕು. ಪ್ರತಿದಿನವೂ ಕನ್ನಡ ಬಳಸಬೇಕು. ಕೇವಲ ನವೆಂಬರ್‌ಗೆ ಮಾತ್ರ ಕನ್ನಡ ಸೀಮಿತವಾಗಬಾರದು ಎಂದು ಹೇಳಿದರು. ತಾಲೂಕು ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ರಾಜೇಶ್ ಪದ್ಮನಾಭ ಮಾತನಾಡಿದರು.

ಶಾಲಾ–ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರಿಂದ ಮೆರವಣಿಗೆ ಹೊರಟು ದೊಡ್ಡಟ್ಟಿ ಚೌಕಿ, ಗಡಿಯಾರ ಕಂಬ ಮೂಲಕ ತಾಲೂಕು ಮೈದಾನಕ್ಕೆ ಮೆರವಣಿಗೆ ಸಾಗಿಬಂದಿತು. ವಿವಿಧ ಶಾಲಾ ಮಕ್ಕಳಿಂದ ಕನ್ನಡದ ಹಿರಿಮೆ ಸಾರುವ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಇದೇ ಸಂದರ್ಭದಲ್ಲಿ ಕನ್ನಡದಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ, ಸಮಾಜ ಸೇವೆ ಸಲ್ಲಿಸಿದ ಸಾಧಕರುಗಳಾದ ಚೋಕಂಡ ಸಂಜು ಸುಬ್ಬಯ್ಯ ಹಾಗೂ ಶೆಜೋಯ್ ಅವರನ್ನು ತಾಲೂಕು ಆಡಳಿತ ವತಿಯಿಂದ ಸನ್ಮಾನಿಸಲಾಯಿತು. ಪೊಲೀಸ್ ಇಲಾಖೆ, ಸ್ಕೌಟ್ಸ್, ಗೈಡ್ಸ್ ವಿದ್ಯಾರ್ಥಿಗಳಿಂದ ಪಥ ಸಂಚಲನ ನಡೆಯಿತು.

ವೇದಿಕೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಆನಂದ್, ಪುರಸಭೆ ಉಪಾಧ್ಯಕ್ಷೆ ಫಸಿಹಾ ತಬಸುಂ ಪುರಸಭೆ ಮುಖ್ಯಾಧಿಕಾರಿ ನಾಚಪ್ಪ, ಸದಸ್ಯರುಗಳಾದ ಎಸ್.ಎಚ್ ಮತೀನ್, ಮಹಮ್ಮದ್ ರಾಫಿ, ಪಟ್ಟಡ ರಂಜಿ ಪೂಣಚ್ಚ, ರವಿ, ದಿನೇಶ್, ಬೆನ್ನಿ, ಹಮೀದ್, ವಿರಾಜಪೇಟೆ ಡಿವೈಎಸ್‌ಪಿ ಮಹೇಶ್ ಕುಮಾರ್, ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ, ಕಂದಾಯ ಪರಿವೀಕ್ಷಕ ಎಂ.ಎಲ್. ಹರೀಶ್ ಹಾಗೂ ಸಿಬ್ಬಂದಿಗಳು, ಬಗರ್ ಹುಕುಂ ಸಮಿತಿಯ ಆರ್.ಕೆ. ಸಲಾಂ, ತಾಲೂಕು ಗ್ಯಾರಂಟಿ ಯೋಜನೆಗಳ ಸಮಿತಿ ಜಾನ್ಸನ್, ಸರಕಾರಿ ಅಭಿಯೋಜಕ ನರೇಂದ್ರ ಕಾಮತ್, ಎ.ವಿ. ಮಂಜುನಾಥ್, ಶಿಕ್ಷಣ ಇಲಾಖೆಯ ಗೀತಾಂಜಲಿ ಕೆ.ಸಿ. ವಾಮನ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ನಾಳೆಯಿಂದ ಶಿಕ್ಷಕರ ವರ್ಗಾವಣೆ ಕೌನ್ಸಿಲಿಂಗ್

ಮಡಿಕೇರಿ: ಪ್ರಾಥಮಿಕ ಮತ್ತು ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ವಿಶೇಷ ಶಿಕ್ಷಕರಿಗೆ ನ.4 ರಿಂದ 10ರವರೆಗೆ ಜಿಲ್ಲಾ ಮಟ್ಟದ ಪರಸ್ಪರ ವರ್ಗಾವಣೆಯ ಗಣಕೀಕೃತ ಕೌನ್ಸಿಲಿಂಗ್ ಮುಖಾಂತರ ಸ್ಥಳ ನಿಯುಕ್ತಿಗೊಳಿಸಬೇಕಿರುತ್ತದೆ.

ಪ್ರಾಥಮಿಕ ಶಾಲಾ ವಿಭಾಗಕ್ಕೆ ನ.4 ರಿಂದ 6 ರವರೆಗೆ ಹಾಗೂ ಪ್ರೌಢಶಾಲಾ ವಿಭಾಗಕ್ಕೆ ನ.7ರಿಂದ10 ರವರೆಗೆ ಉಪ ನಿರ್ದೇಶಕರು (ಆಡಳಿತ) ಕಚೇರಿಯಲ್ಲಿ ನಡೆಯಲಿದೆ.

ಸ್ವ–ಉದ್ಯೋಗ ಉಚಿತ ತರಬೇತಿಗೆ ಅರ್ಜಿ ಆಹ್ವಾನ

ಕುಶಾಲನಗರ: ಕೂಡಿಗೆ ಯೂನಿಯನ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ನಿರುದ್ಯೋಗಿ ಯುವಕ ಯುವತಿಯರಿಗೆ ಊಟ ವಸತಿಯೊಂದಿಗೆ ಸಂಪೂರ್ಣ ಉಚಿತ ಸ್ವ–ಉದ್ಯೋಗ ತರಬೇತಿಗಳನ್ನು ನೀಡಲಾಗುತ್ತಿದೆ.

ಅರ್ಜಿ ಸಲ್ಲಿಸಲು 18 ರಿಂದ 50 ವರ್ಷ ವಯೋಮಿತಿಯೊಳಗಿನ ಯುವಕ–ಯುವತಿಯರಿಗೆ ಮಾತ್ರ ಅವಕಾಶವಿದ್ದು, ಅರ್ಜಿ ಸಲ್ಲಿಸಬಹುದು. ನ.26ರಿಂದ ಡಿ.26ರ ವರೆಗೆ ಮಹಿಳೆಯರ ಹೊಲಿಗೆ ತರಬೇತಿ 31 ದಿನಗಳು, ಡಿ.1ರಿಂದ ಡಿ.30 ರವರೆಗೆ ಮೊಬೈಲ್ ರಿಪೇರಿ ತರಬೇತಿ 30 ದಿನಗಳು, ಡಿ.15 ರಿಂದ 26 ರವರೆಗೆ ಉಚಿತ ಫಾಸ್ಟ್ ಫುಡ್ ತಯಾರಿಕೆ ತರಬೇತಿ 12 ದಿನಗಳು ಹಾಗೂ ಜ.15ರಿಂದ ಫೆ18ರವರೆಗೆ ಬ್ಯೂಟಿ ಪಾರ್ಲರ್ ತರಬೇತಿ 35 ದಿನಗಳ ಕಾಲ ತರಬೇತಿ ನೀಡಲಾಗುತ್ತದೆ. ಮಾಹಿತಿಗಾಗಿ 96864 06181, 9449402081, 8618471801, 9900142602. ಸಂಪರ್ಕಿಸಿ.

ಕರ್ನಾಟಕ ಎಂಬುದು ಕನ್ನಡಿಗರ ಭಾವನೆ, ಬಾಂಧವ್ಯ


ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಸಚಿವ ಬೋಸ್‌ರಾಜ್ ಗೌರವ ರಕ್ಷೆ ಸ್ವೀಕರಿಸಿದರು.

ಮಡಿಕೇರಿ, ನ2–ಕರ್ನಾಟಕ ಎಂಬುವುದು ಕೇವಲ ನೆಲವಲ್ಲ. ಅದು ಕನ್ನಡಿಗರ ಭಾವನೆ ಮತ್ತು ಬಾಂಧವ್ಯವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಅಭಿಪ್ರಾಯಪಟ್ಟಿದ್ದಾರೆ. ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಸಂಭ್ರಮದ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಸಚಿವರು ಮಾತನಾಡಿದರು.

ಕನ್ನಡ, ಕರ್ನಾಟಕ, ಕರುನಾಡು ಎಂಬುದು ಕೇವಲ ನೆಲ ಮತ್ತು ಭಾಷೆಯಲ್ಲ. ಅದು ಕನ್ನಡಿಗರ ಭಾವನೆ ಹಾಗೂ ಬಾಂಧವ್ಯವಾಗಿದ್ದು, ಕನ್ನಡ ರಾಜ್ಯೋತ್ಸವ ನಮ್ಮೆಲ್ಲರ ನಿತ್ಯೋತ್ಸವವಾಗಬೇಕು ಎಂದರು.

10 ಕೋಟಿ ಅನುದಾನ: ಜಿಲ್ಲೆಯಲ್ಲಿ ಪ್ರಾಕೃತಿಕ ವಿಕೋಪ ನಿರ್ವಹಣೆಗೆ ಜಿಲ್ಲಾಧಿಕಾರಿ ಅವರ ಪಿ.ಡಿ ಖಾತೆಯಲ್ಲಿ 10 ಕೋಟಿ ಅನುದಾನ ಲಭ್ಯವಿದೆ. ಜಿಲ್ಲೆಯಲ್ಲಿ 3 ಮಾನವಹಾನಿ ಸಂಭವಿಸಿದ್ದು, ತಲಾ 5 ಲಕ್ಷಗಳನ್ನು ಸಂಬಂಧಪಟ್ಟವರಿಗೆ ಪಾವತಿಸಲಾಗಿದೆ. 52 ಮನೆಗಳು ಪೂರ್ಣ ಹಾನಿಯಾಗಿವೆ. 194 ಮನೆಗಳು ತೀವ್ರ ಹಾನಿ ಹಾಗೂ 88 ಮನೆಗಳು ಭಾಗಶಃ ಹಾನಿಯಾಗಿವೆ. ಮಳೆಯಿಂದಾಗಿ ಜಿಲ್ಲೆಯಲ್ಲಿ 28 ಜಾನುವಾರುಗಳಿಗೆ ಹಾನಿಯಾಗಿದ್ದು ಸಂಬಂಧಪಟ್ಟವರಿಗೆ ಅಗತ್ಯ ಪರಿಹಾರ ಪಾವತಿಸಲಾಗಿದೆ ಎಂದು ತಿಳಿಸಿದರು.

ಪೊಲೀಸ್ ಘಟಕ, ಎನ್‌ಸಿಸಿ, ಗೃಹರಕ್ಷಕ ದಳ, ಸ್ಕೌಟ್ಸ್ ಮತ್ತು ಗೈಡ್ಸ್, ಸೇವಾದಳ ಮತ್ತಿತರ ತಂಡಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು. ವಿವಿಧ ಶಾಲಾ ವಿದ್ಯಾರ್ಥಿಗಳಿಂದ ನಡೆದ ಕನ್ನಡ ನಾಡು, ನುಡಿಯ ವರ್ಣರಂಜಿತ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು. ವಿವಿಧ ಇಲಾಖೆಗಳ ವತಿಯಿಂದ ಅಭಿವೃದ್ಧಿ ಕಾರ್ಯಗಳನ್ನು ಪ್ರತಿಬಿಂಬಿಸುವ ಸ್ತಬ್ಧಚಿತ್ರಗಳು ಪ್ರದರ್ಶನಗೊಂಡವು. ಸಭಾ ಕಾರ್ಯಕ್ರಮಕ್ಕೂ ಮೊದಲು ಕೋಟೆ ಆವರಣದಿಂದ ಪೊಲೀಸ್ ಕವಾಯತು ಮೈದಾನದವರೆಗೆ ವೈಭವದ ಮೆರವಣಿಗೆ ನಡೆಯಿತು.

ಶಾಸಕ ಡಾ.ಮಂತರ್ ಗೌಡ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾಧಿಕಾರಿ ವೆಂಕಟ್ ರಾಜಾ, ಎಡಿಸಿ ಆರ್.ಐಶ್ವರ್ಯ, ಎಸ್‌ಪಿ ಕೆ. ರಾಮರಾಜನ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಜ ಉತ್ತಪ್ಪ, ಜನಪ್ರತಿನಿಧಿಗಳು ಹಾಗೂ ವಿವಿಧ ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.


ರುಕ್ಮಿಣಿ ನಿಧನ

ನಾಪೋಕ್ಲು, ನ.2– ಇಲ್ಲಿಗೆ ಸಮೀಪದ ಹೊದ್ದೂರು ಗ್ರಾಮದ ನಿವಾಸಿ ತೆಕ್ಕಡೆ ರಾಘವಯ್ಯ (ರಘು) ಧರ್ಮಪತ್ನಿ ರುಕ್ಮಿಣಿ (ರುಕ್ಕು) (78) ಭಾನುವಾರ ನಿಧನರಾದರು.



ಮೃತರ ಅಂತ್ಯಕ್ರಿಯೆ ಸೋಮವಾರ ತೆಕ್ಕಡೆ ಕುಟುಂಬಸ್ಥರ ರುದ್ರಭೂಮಿಯಲ್ಲಿ ಜರುಗಲಿದೆ. ಮೃತರು ಪತಿ ತೆಕ್ಕಡೆ ರಾಘವಯ್ಯ (ರಘು) ಇಬ್ಬರು ಪುತ್ರಿಯರು, ಪುತ್ರ ಸೇರಿದಂತೆ ಬಂಧು ಬಾಂಧವರನ್ನು ಅಗಲಿದ್ದಾರೆ.

ವೀರಪ್ಪನ್ ಇದ್ದಾಗಲೇ ಕಾಡು ಚೆನ್ನಾಗಿತ್ತು


ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಚಾಮರಾಜನಗರ: ವೀರಪ್ಪನ್ ಇದ್ದಾಗಲೇ ಕಾಡು ಚೆನ್ನಾಗಿತ್ತು. ಇಂದು ಅಕ್ರಮ ಗಣಿಗಾರಿಕೆ, ರೆಸಾರ್ಟ್‌ಗಳು ಹೆಚ್ಚಾಗಿ ನಡೆಯುತ್ತಿವೆ ಎಂದು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

ನಗರದ ಕೆಡಿಪಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ ರೈತರು, ಹುಲಿ ಸಂರಕ್ಷಿತ ಪ್ರದೇಶದಲ್ಲಿ ಸಾಕಷ್ಟು ಅಕ್ರಮ ರೆಸಾರ್ಟ್‌ಗಳು ನಡೆಯುತ್ತಿವೆ. ವೀರಪ್ಪನ್ ಇದ್ದಾಗಲೇ ಕಾಡು ಚೆನ್ನಾಗಿತ್ತು. ಅಕ್ರಮ ಗಣಿಗಾರಿಕೆ, ರೆಸಾರ್ಟ್‌ಗಳು ನಡೆಯುತ್ತಿರಲಿಲ್ಲ. ಅಧಿಕಾರಿಗಳಿಗಿಂತ ವೀರಪ್ಪನ್ ಪರವಾಗಿರಲಿಲ್ಲ ಎಂದು ರೈತರು ಬೇಸರ ವ್ಯಕ್ತಪಡಿಸಿದರು. ಅರಣ್ಯ ಇಲಾಖೆಯಲ್ಲಿ ಸಾಕಷ್ಟು ಭ್ರಷ್ಟಾಚಾರ ನಡೆಯುತ್ತಿದೆ. ಬೇರೆ ಯಾವುದೇ ರಾಜ್ಯದಲ್ಲೂ ಇಷ್ಟು ಪ್ರಾಣಿ ಹಾಗೂ ಮಾನವ ಸಂಘರ್ಷವಾಗುತ್ತಿಲ್ಲ. ನಮ್ಮಲ್ಲಿ ಮಾತ್ರ ಹೆಚ್ಚುತ್ತಿದೆ. ಇದಕ್ಕೆ ಅರಣ್ಯಾಧಿಕಾರಿಗಳ ಸಂಪೂರ್ಣ ನಿರ್ಲಕ್ಷ್ಯ ಕಾರಣ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಶಾಶ್ವತ ಪರಿಹಾರ: ಸುದ್ದಿಗಾರರೊಂದಿಗೆ ಸಚಿವ ಈಶ್ವರ್ ಖಂಡ್ರೆ ಮಾತನಾಡಿ, ಮಾನವ ವನ್ಯಜೀವಿ ಸಂಘರ್ಷವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಪ್ರಾಣಿ ಗಳ ಹಾವಳಿ ತಡೆಗೆ, ಸಮಸ್ಯೆಗಳ ಪರಿಹಾರಕ್ಕೆ ಸಭೆ ನಡೆಸುತ್ತಿದ್ದೇವೆ. ಹುಲಿ, ಆನೆ ದಾಳಿ ತಡೆಗೆ ರೈತರು, ಅಧಿಕಾರಿಗಳ ಸಲಹೆ ತೆಗೆದುಕೊಂಡು ಶಾಶ್ವತ ಪರಿಹಾರ ಕಂಡುಕೊಳ್ಳುತ್ತೇವೆ ಎಂದು ಸುದ್ದಿಗಾರರಿಗೆ ತಿಳಿಸಿದರು. ಬನ್ನೇರುಘಟ್ಟದಲ್ಲಿ ಕಾಡೆಮ್ಮೆ, ಜಿಂಕೆ ಸಾವು ವಿಚಾರಕ್ಕೆ ಪ್ರತಿಕ್ರಿಯಿಸಿ, ಪ್ರಾಣಿಗಳನ್ನು ಸೆರೆ ಹಿಡಿಯಲು, ಅರಿವಳಿಕೆ ನೀಡಲು ಎಲ್ಲದಕ್ಕೂ ಎಸ್‌ಒಪಿ ಇದೆ. ಎಸ್‌ಒಪಿ ಪಾಲನೆ ಮಾಡಿದ್ದಾರೋ ಇಲ್ಲವೋ ಎಂಬುದನ್ನು ತನಿಖೆ ನಡೆಸಿ ವರದಿ ಪಡೆಯುತ್ತೇನೆ. ತನಿಖಾ ವರದಿ ಬಂದ ಬಳಿಕ ಮುಂದಿನ ಕ್ರಮ ಕೈಗೊಳ್ಳುತ್ತೇವೆ ಎಂದು ಸಚಿವರು ಹೇಳಿದರು.

ಮಾನವ–ವನ್ಯಜೀವಿ ಸಂಘರ್ಷ ತಹಬಂದಿಗೆ ಬಾರದಿದ್ದರೆ ಸಫಾರಿ ಸಂಪೂರ್ಣ ಬಂದ್

ಸಚಿವ ಈಶ್ವರ ಬಿ ಖಂಡ್ರೆ ಎಚ್ಚರಿಕೆ


ಅರಣ್ಯ, ಕಂದಾಯ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳ ಸಭೆಯಲ್ಲಿ ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ಮಾತನಾಡಿದರು.

ಚಾಮರಾಜನಗರ, ನ.2– ಮೈಸೂರು ಜಿಲ್ಲೆಯಲ್ಲಿ ಮಾನವ–ವನ್ಯಜೀವಿ ಸಂಘರ್ಷ ಹೆಚ್ಚುತ್ತಿದ್ದು, ಇದು ತಹಬಂದಿಗೆ ಬಾರದಿದ್ದರೆ ಸಫಾರಿಯನ್ನು ಸಂಪೂರ್ಣ ಬಂದ್ ಮಾಡುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಎಚ್ಚರಿಕೆ ನೀಡಿದ್ದಾರೆ.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಅರಣ್ಯ, ಕಂದಾಯ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ವನ್ಯಜೀವಿ–ಮಾನವ ಸಂಘರ್ಷ ಇರುವ ಸ್ಥಳದಲ್ಲಿ ಹೆಚ್ಚಿನ ಸಿಬ್ಬಂದಿ ನಿಯೋಜಿಸಲು ಸಿಬ್ಬಂದಿ ಕೊರತೆ ಎನ್ನುತ್ತೀರಿ. ಹಾಗಾದರೆ ಸಫಾರಿಗೆ ನಿಯೋಜಿಸಿರುವ ಸಿಬ್ಬಂದಿಯನ್ನೇ ಅಲ್ಲಿಗೆ ನಿಯೋಜಿಸಬೇಕಾಗುತ್ತದೆ ಎಂದು ಹೇಳಿದರು.

ಮಾನವ–ವನ್ಯಜೀವಿ ಸಂಘರ್ಷ ತಪ್ಪಿಸಲು ಅರಣ್ಯ ಇಲಾಖೆ ಕಂದಾಯ ಮತ್ತು ಪೊಲೀಸ್ ಇಲಾಖೆಯೊಂದಿಗೆ ಸಮನ್ವಯದಿಂದ ಕಾರ್ಯ ನಿರ್ವಹಿ ಸಬೇಕು. ಸಮನ್ವಯದ ಕೊರತೆ, ಪರಸ್ಪರ ದೋಷಾರೋಪವನ್ನು ಸರ್ಕಾರ ಕ್ಷಮಿ ಸುವುದಿಲ್ಲ ಸಬೂಬುಗಳಿಗೆ ಅವಕಾಶವಿಲ್ಲ. ಎಲ್ಲ ಇಲಾಖೆಗಳೂ ಜೊತೆಗೂಡಿ ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಿಸಬೇಕು ಎಂದು ಸೂಚಿಸಿದರು.

ಐದು ವರ್ಷಗಳ ಅವಧಿಯಲ್ಲಿ ವನ್ಯಜೀವಿಗಳ ದಾಳಿಯಿಂದ ರಾಜ್ಯದಲ್ಲಿ ಸುಮಾರು 239 ಮಂದಿ ಸಾವನ್ನಪ್ಪಿದ್ದಾರೆ. 2021–22ನೇ ಸಾಲಿನಲ್ಲಿ ಒಟ್ಟು 41 ಜನರು ಪ್ರಾಣಿಗಳ ದಾಳಿಯಿಂದ ಜೀವ ಕಳೆದುಕೊಂಡಿದ್ದಾರೆ. ಈ ಪೈಕಿ ಆನೆ ದಾಳಿಯಿಂದ 28, ಹುಲಿ ದಾಳಿಯಿಂದ ಇಬ್ಬರು ಮತ್ತು ಇತರ ಪ್ರಾಣಿಗಳ ದಾಳಿಯಿಂದ 11 ಜನರು ಮೃತಪಟ್ಟಿದ್ದರು 2022–23ನೇ ಸಾಲಿನಲ್ಲಿ 37 ಜನರು ವನ್ಯಜೀವಿ ದಾಳಿಯಿಂದ ಸಾವಿಗೀಡಾಗಿದ್ದಾರೆ. ಆನೆ ದಾಳಿಗೆ 32 ಜನರು ಮೃತಪಟ್ಟಿದ್ದರೆ, ಹುಲಿ ದಾಳಿಯಿಂದ 5 ಜನರು ಅಸುನೀಗಿದ್ದರು. 2023–24ನೇ ಸಾಲಿನಲ್ಲಿ ಒಟ್ಟು 53 ಜನರು ಮೃತಪಟ್ಟಿದ್ದರು ಈ ಪೈಕಿ ಆನೆ ದಾಳಿಯಿಂದ 48, ಹುಲಿ ದಾಳಿಯಿಂದ 5 ಜನರು ಮೃತಪಟ್ಟಿದ್ದರು. 2024–25ನೇ ಸಾಲಿನಲ್ಲಿ 38 ಜನರು ಸಾವಿಗೀಡಾಗಿದ್ದು, ಆನೆ ದಾಳಿಯಿಂದ 36 ಜನರು ಹುಲಿ ದಾಳಿಯಿಂದ ಇಬ್ಬರು ಮೃತಪಟ್ಟಿದ್ದರು. ಈ ಸಾಲಿನಲ್ಲಿ ಅಂದರೆ 2025–26ರಲ್ಲಿ ಈವರೆಗೆ 24 ಜನರು ವನ್ಯಜೀವಿ ದಾಳಿಗೆ ಬಲಿಯಾಗಿದ್ದಾರೆ. ಈ ಪೈಕಿ 20 ಜನರು ಆನೆ ದಾಳಿಯಿಂದ ಮೃತಪಟ್ಟಿದ್ದರೆ, 4 ಜನರು ಹುಲಿ ದಾಳಿಯಿಂದ ಮೃತಪಟ್ಟಿದ್ದಾರೆ ಎಂದು ವಿವರ ನೀಡಿದರು.

ಆಧುನಿಕ ತಂತ್ರಜ್ಞಾನ ಬಳಕೆಗೆ ಸೂಚನೆ: ಸಾವಿರಾರು ಚದರ ಕಿಲೋ ಮೀಟರ್ ಅರಣ್ಯದ ಸಂಪೂರ್ಣ ಗಸ್ತು ಸಾಧ್ಯವಿಲ್ಲ. ಹೀಗಾಗಿ ಆಧುನಿಕ ತಂತ್ರಜ್ಞಾನ ಬಳಸಿ ಸಾರ್ವಜನಿಕರಿಗೆ ಮಾಹಿತಿ ನೀಡಲು ಮತ್ತು ವನ್ಯಜೀವಿಗಳನ್ನು ಮರಳಿ ಕಾಡಿಗೆ ಕಳಿಸಲು ಸಮಗ್ರ ಕಮಾಂಡ್ ಕೇಂದ್ರ ರಚಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು. ಸಾವಿರಾರು ಚದರ ಕಿಲೋ ಮೀಟರ್ ಅರಣ್ಯದಲ್ಲಿ ಸಂಪೂರ್ಣ ಗಸ್ತು ಸಾಧ್ಯವಿಲ್ಲ. ಹೀಗಾಗಿ ಆಧುನಿಕ ತಂತ್ರಜ್ಞಾನ ಬಳಸಿ ಸಾರ್ವಜನಿಕರಿಗೆ ಮಾಹಿತಿ ನೀಡಲು ಮತ್ತು ವನ್ಯಜೀವಿಗಳನ್ನು ಮರಳಿ ಕಾಡಿಗೆ ಕಳಿಸಲು ಸಮಗ್ರ ಕಮಾಂಡ್ ಕೇಂದ್ರ ರಚಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಸಭೆಯಲ್ಲಿ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಗಣೇಶ್‌ಪ್ರಸಾದ್, ಅನಿಲ್ ಚಿಕ್ಕಮಾದು, ದರ್ಶನ್ ಧ್ರುವನಾರಾಯಣ್, ಎಂ.ಆರ್. ಮಂಜುನಾಥ್, ವಿಧಾನ ಪರಿಷತ್ ಸದಸ್ಯರಾದ ಮಂಜೇಗೌಡ, ಶಿವಕುಮಾರ್, ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾನಾಗ್, ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ, ಪಿಸಿಸಿಎಫ್ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕ ಪಿ.ಸಿ. ರೇ ಹಾಗೂ ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ಅಕ್ರಮ ಗಣಿಗಾರಿಕೆ, ರೆಸಾರ್ಟ್‌ಗೆ ಅವಕಾಶವಿಲ್ಲ

ರಾಜ್ಯದ ಯಾವುದೇ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ಗಣಿಗಾರಿಕೆ, ರೆಸಾರ್ಟ್‌ಗಳಿಗೆ ಅವಕಾಶ ನೀಡುವುದಿಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ, ರೆಸಾರ್ಟ್ ನಡೆಸುತ್ತಿರುವ ಬಗ್ಗೆ ದೂರು ಬಂದರೆ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ಎಂಇಎಸ್ ಪುಂಡಾಟಿಕೆ ಖಂಡಿಸಿ ಕರ್ನಾಟಕ ಸೇನಾಪಡೆ ಪ್ರತಿಭಟನೆ

ಚಾಮರಾಜನಗರ: ಬೆಳಗಾವಿಯಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ವೇಳೆಯಲ್ಲಿ ಎಂಇಎಸ್ ಪುಂಡರು ಏಕಾಏಕಿ ನುಗ್ಗಿ ಕನ್ನಡಿಗರ ಮೇಲೆ ಪುಂಡಾಟಿಕೆ ಮಾಡಿರುವುದನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಭುವನೇಶ್ವರಿ ವೃತ್ತದಲ್ಲಿ ಕರ್ನಾಟಕ ಸೇನಾ ಪಡೆಯ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ನೇತೃತ್ವದಲ್ಲಿ ಕಾರ್ಯಕರ್ತರು ಎಂಇಎಸ್ ಕಾರ್ಯಕರ್ತರ ವಿರುದ್ಧ ಘೋಷಣೆ ಕೂಗಿ ಅದರ ಭಿತ್ತಿಪತ್ರ ಹರಿದು ಆಕ್ರೋಶ ವ್ಯಕ್ತಪಡಿಸಿದರು. ಬೆಳಗಾವಿಯಲ್ಲಿ ಕನ್ನಡಿಗರ ಮೇಲೆ ಎಂಇಎಸ್ ಪುಂಡರು ನಿರಂತರ ದೌರ್ಜನ್ಯ ಮಾಡುತ್ತಿದ್ದು, ಇದು ಅತ್ಯಂತ ಖಂಡನೀಯ, ಕನ್ನಡ ರಾಜ್ಯೋತ್ಸವ ಮೆರವಣಿಗೆ ವೇಳೆಯಲ್ಲಿ ಏಕಾಏಕಿ ನುಗ್ಗಿ ಕನ್ನಡಿಗರ ಹಲ್ಲೆ ಮಾಡಿರುವುದು ಅತ್ಯಂತ ಖಂಡನೀಯ ಕೃತ್ಯವಾಗಿದೆ. ಕೂಡಲೇ ಆರೋಪಿಗಳನ್ನು ಬಂಧಿಸಿ ಗಡಿಪಾರು ಮಾಡುವಂತೆ ಚಾ.ರಂ.ಶ್ರೀನಿವಾಸಗೌಡ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಚಾ.ವೆಂ.ರಾಜ್‌ಗೋಪಾಲ್, ಪಣ್ಯದ ಹುಂಡಿರಾಜು, ವಿಜಧ್ವನಿ ಗೋವಿಂದರಾಜು, ಶಿವು, ಮುತ್ತುರಾಜು, ರಾ.ಜಗದೀಶ್, ಆಟೋ ಲಿಂಗರಾಜು, ಮಾದೇಶ್, ರಾಚಪ್ಪ, ಅಮಚವಾಡಿ ರಾಜು, ಚಂದ್ರು ಇತರರು ಭಾಗವಹಿಸಿದ್ದರು.


ಎಂಇಎಸ್ ಪುಂಡರ ಪುಂಡಾಟಿಕೆ ಖಂಡಿಸಿ ಕರ್ನಾಟಕ ಸೇನಾಪಡೆ ಪ್ರತಿಭಟನೆ ನಡೆಸಿತು.

ಭಾಷೆಗೆ ಧಕ್ಕೆಯಾದರೆ ಜಿಲ್ಲೆಯಿಂದಲೇ ಮೊದಲ ಧ್ವನಿ


10ನೇ ತರಗತಿಯಲ್ಲಿ ಕನ್ನಡದಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

ಕೊಳ್ಳೇಗಾಲ, ನ.2– ನಾಡು, ನುಡಿ ನೆಲ, ಜಲ, ಭಾಷೆ ವಿಚಾರದಲ್ಲಿ ಧಕ್ಕೆಯಾದಲ್ಲಿ ಮೊದಲ ಕೂಗು ನಮ್ಮ ಜಿಲ್ಲೆಯಿಂದಲೇ ಮೊಳಗುತ್ತದೆ, ನಾವೆ ಲ್ಲರೂ ಭಾಷಾಭಿಮಾನಿಗಳಾಗುವ ಜೊತೆಗೆ ಕನ್ನಡ ಭಾಷೆಯ ಶ್ರೀಮಂತಿಕೆ ಸಾರುವ ಕೆಲಸ ಮಾಡೋಣ ಎಂದು ಶಾಸಕ ಎ ಆರ್ ಕೃಷ್ಣಮೂರ್ತಿ ಹೇಳಿದರು

ತಾಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ದಿನಾಚರಣೆಯಲ್ಲಿ ಮಾತನಾಡಿ, ಅನೇಕ ಮಹನೀಯರು ನಮ್ಮ ಕನ್ನಡ ಸಾಹಿತ್ಯ, ಕಲೆ ಉಳಿಸುವಲ್ಲಿ ಶ್ರಮಿಸಿದ್ದಾರೆ, ಅಂತಹ ಮಹನೀಯರನ್ನು ಸ್ಮರಿಸುವ ಸುದಿನ ಇದಾಗಿದೆ ಎಂದರು.

ಮಹದೇಶ್ವರ ಕಾಲೇಜು ಕ್ರೀಡಾಂಗಣದಲ್ಲಿ ನಡೆದ ರಾಜ್ಯೋತ್ಸವದಲ್ಲಿ ತ್ರಿವರ್ಣ ಧ್ವಜವನ್ನು ತಹಸೀಲ್ದಾರ್ ಬಸವರಾಜು ಹಾಗೂ ಕನ್ನಡ ಭಾವುಟವನ್ನು ತಾಪಂ ಇಒ ಗುರುಶಾಂತಪ್ಪ ಬೆಳ್ಳುಂಡಗಿ ಹಾರಿಸಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 125 ಕ್ಕೆ 125 ಅಂಕ ಪಡೆದ 23 ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಲಾಯಿತು.

ಆಡಳಿತಾಧಿಕಾರಿ ನೇಮಿಸಲು ಆಗ್ರಹ

ಕೊಳ್ಳೇಗಾಲ: ನಗರಸಭೆಗೆ ಚುನಾಯಿತ ಪ್ರತಿನಿಧಿಗಳ ಅಧಿಕಾರ ಅವಧಿ ಮುಗಿದಿರುವುದರಿಂದ ಕೂಡಲೇ ಆಡಳಿತಾಧಿಕಾರಿ ನೇಮಿಸುವಂತೆ ನಗರಸಭೆ ಮಾಜಿ ಸದಸ್ಯ ಮಧುಚಂದ್ರ ಯುವ ಮುಖಂಡ ಶ್ರೀನಿವಾಸ್, ಬಿಜೆಪಿ ಪಕ್ಷದ ನಾಯಕ ಸಿದ್ದಪ್ಪಾಜಿ, ಮುತ್ತು ಡಿಸಿ ಶಿಲ್ಪಾನಾಗ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಅಂತಾರಾಷ್ಟ್ರೀಯ ಕ್ರೀಡಾಕೂಟಕ್ಕೆ ಚಂದ್ರಶೇಖರ್ ಆಯ್ಕೆ

ಚಾಮರಾಜನಗರ, ನ.2–ಮಾಸ್ಟರ್ ಅಥ್ಲೆಟಿಕ್ಸ್ ಫೆಡರೇಷನ್ ಆಫ್ ಇಂಡಿಯಾ ವತಿಯಿಂದ ಚೆನ್ನೈನಲ್ಲಿ ನ.5 ರಿಂದ 10ರವರೆಗೆ ನಡೆಯಲಿರುವ 23ನೇ ಏಷ್ಯನ್ ಮಾಸ್ಟರ್ಸ್ ಅಂತಾರಾಷ್ಟ್ರೀಯ ಕ್ರೀಡಾಕೂಟದಲ್ಲಿ 100, 200, ಹಾಗೂ 400 ಮೀಟರ್ ಓಟದ ಸ್ಪರ್ಧೆಗೆ ತಾಲೂಕಿನ ಆಲೂರು ಹೊಮ್ಮ ಗ್ರಾಮದ ಹೆಚ್.ಎಲ್.ಚಂದ್ರಶೇಖರ್ ಆಯ್ಕೆಯಾಗಿದ್ದಾರೆ.



ಸುಮಾರು 25 ದೇಶಗಳು ಮಾಸ್ಟರ್ಸ್ ಏಷ್ಯನ್ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದು ಭಾರತದಿಂದ ಪ್ರತಿನಿಧಿಸುತ್ತಿರುವ ಚಂದ್ರಶೇಖರ ಅವರನ್ನು ಹೊಮ್ಮ ಗ್ರಾಮಸ್ಥರು, ಸ್ನೇಹಿತರು ಅಭಿನಂದಿಸಿದ್ದಾರೆ.

ಪ್ರಸ್ತುತ ರೇಷ್ಮೆ ಇಲಾಖೆಯ ಸಿಲ್ಕ್ ಫಿಲೇಚರ್, ಅಧೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು ಅನ್ಯಕಾರ್ಯ ನಿಮಿತ್ತ ಮೈಸೂರಿನ ರೇಷ್ಮೆ ಉಪ ನಿರ್ದೇಶಕರ ಕಛೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ. ಸರ್ಕಾರಿ ಕೆಲಸದ ಒತ್ತಡ ನಡುವೆಯೂ ಕ್ರೀಡೆಗೆ ಸಮಯವನ್ನು ಮೀಸಲಿಟ್ಟು ರಾಜ್ಯಮಟ್ಟ ಹಾಗೂ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಹಲವಾರು ಪದಕಗಳನ್ನು ಗೆದ್ದು ಪ್ರಸ್ತುತ ಅಂತರಾಷ್ಟ್ರೀಯ ಕ್ರೀಡಾಕೂಟಕ್ಕೆ ಆಯ್ಕೆಯಾಗಿರುವುದು ಅನೇಕ ಕ್ರೀಡಾಪಟುಗಳಿಗೆ ಮಾದರಿಯಾಗಿರುತ್ತಾರೆ.



ಸನ್ಮಾನ

ಗುಂಡ್ಲುಪೇಟೆಯಲ್ಲಿರುವ ಶ್ರೀ ಮದ್ದಾನೇಶ್ವರ ಮಹಾಮನೆಯ ಯೋಗ ಕೇಂದ್ರದಲ್ಲಿ ನಿವೃತ್ತಿಗೊಂಡ ಯೋಗ ಗುರು ಬಸವಣ್ಣ ಅವರನ್ನು ಕೇಂದ್ರದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸನ್ಮಾನಿಸಿದರು. ಅಧ್ಯಕ್ಷ ಶ್ರೀನಿವಾಸ್, ಕಾರ್ಯದರ್ಶಿ ಗಿರೀಶ್ ಹಾಗೂ ಯೋಗಬಂದುಗಳು ಹಾಜರಿದ್ದರು.

ದಿ ಆಕ್ಮಿ ಸ್ಕೂಲ್‌ನಲ್ಲಿ ಕನ್ನಡ ರಾಜ್ಯೋತ್ಸವ



ದಿ ಆಕ್ಮಿ ಸ್ಕೂಲ್‌ನಲ್ಲಿ ಶನಿವಾರ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಮೈಸೂರು,ನ.2(ಪಿಎಂ)– ಮೈಸೂರಿನ ನಿವೇದಿತಾನಗರದಲ್ಲಿರುವ ಕಮಲರಂಜಿತ್ ಎಜುಕೇಷನಲ್ ಸೊಸೈಟಿಯ ದಿ ಆಕ್ಮಿ ಸ್ಕೂಲ್‌ನಲ್ಲಿ ಶನಿವಾರ ಅತ್ಯಂತ ಸಡಗರದಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಧ್ವಜಾರೋಹಣ ನೆರವೇರಿಸಿದ ಸಾಹಿತಿ ಡಾ.ಜಯಪ್ಪ ಹೊನ್ನಾಳಿ ಮಾತನಾಡಿ, ಆಂಗ್ಲ ಮಾಧ್ಯಮ ಶಾಲೆಯಾಗಿಯೂ ಕನ್ನಡ ಭಾಷೆ ಬೆಳೆಸುವ ಕಾಯಕದಲ್ಲಿ ತೊಡಗಿರುವುದು ಕಂಡು ಸಂತಸ ಉಂಟಾಯಿತು. ನಮ್ಮ ಕನ್ನಡ ಭಾಷೆಗೆ ಸ್ವಂತ ಲಿಪಿ ಇದ್ದು, ಕನ್ನಡ ಭಾಷೆ 27ನೇ ಜಾಗತಿಕ ಸ್ಥಾನಮಾನವನ್ನು ಪಡೆದುಕೊಂಡಿರುವುದು ನಮ್ಮ ಹೆಮ್ಮೆಯಾಗಿದೆ ಎಂದು ತಿಳಿಸಿದರು.

ನಮ್ಮ ಕನ್ನಡದ ಬಾವುಟದಲ್ಲಿರುವ ಅರಿಶಿಣ ಬಣ್ಣವು ಶಾಂತಿಯನ್ನು ಸೂಚಿಸಿದರೆ, ಕುಂಕುಮದ ಕೆಂಪು ಬಣ್ಣವು ಕ್ರಾಂತಿಯನ್ನು ಸೂಚಿಸುತ್ತದೆ. ಇಷ್ಟೆಲ್ಲಾ ವೈಶಿಷ್ಟ್ಯತೆಯನ್ನು ಹೊಂದಿರುವ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಬೇಕಿರುವುದು ಕನ್ನಡಿಗರಾಗಿ ನಮ್ಮೆಲ್ಲರ ಕರ್ತವ್ಯ ಎಂದರು.

ವಿವಿಧ ತರಗತಿಯ ಮಕ್ಕಳು, ಕನ್ನಡದ ಅಭಿಮಾನ ಮೆರೆಯುವ ನೃತ್ಯ ರೂಪಕ ಹಾಗೂ ಕಿರುನಾಟಕ ಸೇರಿದಂತೆ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಗಮನ ಸೆಳೆದರು. ಶಾಲೆಯ ಕಾರ್ಯದರ್ಶಿಗಳಾದ ಅರುಣ್ ಸಿಂಗ್, ಸುಭಾಷಿಣಿ, ಪ್ರಾಂಶುಪಾಲರಾದ ಶ್ವೇತ ಚವಾಣ್, ಮುಖ್ಯ ಶಿಕ್ಷಕರಾದ ಶ್ರೀದೇವಿ, ಶಾಲಿನಿ ಮತ್ತು ಶಿಕ್ಷಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಅವರ ಪೋಷಕರು ಹಾಜರಿದ್ದರು.

ಕನ್ನಡ ರಾಜ್ಯೋತ್ಸವ ಆಚರಣೆ...



ಮೈಸೂರಿನ ಶ್ರೀರಾಂಪುರದ ನವಚೇತನ ಬಸವೇಶ್ವರ ಟ್ರಸ್ಟ್‌ನ ವಿಶೇಷ ಮಕ್ಕಳ ಶಾಲೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವದಲ್ಲಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಸಮಾಜ ಸೇವಕ ಎಸ್.ಶ್ರೀಕಾಂತ್, ನವಚೇತನ ಬಸವೇಶ್ವರ ಟ್ರಸ್ಟ್ ವಿಶೇಷ ಮಕ್ಕಳ ಶಾಲೆ ಸಂಸ್ಥಾಪಕ ಅಧ್ಯಕ್ಷ ಮರೀಗೌಡ, ಮುಖ್ಯ ಶಿಕ್ಷಕರಾದ ಸುಗಂಧ ನಾಯಕ್, ಮುಖಂಡರಾದ ಪರಿಸರ ಚಂದ್ರು, ದೂರ ಕುಮಾರ್, ಬಸಪ್ಪ, ದರ್ಶನ್, ಶಿಕ್ಷಕರಾದ ಲತಾ, ಮಹಾಲಕ್ಷ್ಮಿ, ಚಂದ್ರಿಕಾ, ಬೇಬಿ, ನಾಗರತ್ನ ಉಪಸ್ಥಿತರಿದ್ದರು.

ವ್ಯಕ್ತಿ ಕೊಲೆಗೆ ಯತ್ನಿಸಿದವವರಿಗೆ ಜೈಲು

ಮೈಸೂರು,ನ2(ಪಿಎಂ)– ಆಸ್ತಿ ವಿಚಾರಕ್ಕೆ ವ್ಯಕ್ತಿಯೊಬ್ಬರ ಮೇಲೆ ಮಚ್ಚಿನಿಂದ ಮಾರಣಾಂತಿಕ ಹಲ್ಲೆ ನಡೆಸಿ ಕೊಲೆಗೆ ಯತ್ನಿಸಿದ್ದ ಮೂರ್ತಿ ಎಂಬಾತನಿಗೆ 5ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು 2 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಮತ್ತು 54 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ. ಅಲ್ಲದೆ, ಮತ್ತೊಬ್ಬ ಆರೋಪಿ ಗುರುಪ್ರಸಾದ್‌ಗೆ 6 ತಿಂಗಳ ಸಾದಾ ಶಿಕ್ಷೆ ಮತ್ತು 9 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ.

2018ರ ಏ.21ರಂದು ರಾತ್ರಿ 7.45ರ ಸಮಯದಲ್ಲಿ ನಂಜನಗೂಡು ಕಸುವಿನಹಳ್ಳಿ ಗ್ರಾಮದ ಕೆ.ಜಿ.ವೀರೇಂದ್ರ ಎಂಬವರ ಮನೆಗೆ ಮೂರ್ತಿ ನುಗ್ಗಿದ್ದಲ್ಲದೆ, ಅವರನ್ನು ಅವಾಚ್ಯ ಶಬ್ಧಗಳಿಂದ ನಿಂದಿಸಿ, ಅವರ ಮೇಲೆ ಮಚ್ಚಿನಿಂದ ಮಾರಣಾಂತಿಕ ಹಲ್ಲೆ ನಡೆಸಿದ್ದ. ಈ ಸಂಬಂಧ ನಂಜನಗೂಡು ಗ್ರಾಮಾಂತರ ಠಾಣೆ ಪೊಲೀಸರು ತನಿಖೆ ನಡೆಸಿ ಆರೋಪಿ ಮೂರ್ತಿ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ 5ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಕೆ.ಎನ್.ರೂಪಾ ಅವರು ಇದೇ ಅ.27ರಂದು ಶಿಕ್ಷೆ ವಿಧಿಸಿ ಆದೇಶಿಸಿದ್ದಾರೆ. ಸದರಿ ಪ್ರಕರಣದಲ್ಲಿ ಈ ಹಿಂದಿನ ಸರ್ಕಾರಿ ಅಭಿಯೋಜಕ ಬಿ.ಈ.ಯೋಗೇಶ್ವರ ಅವರು ಸರ್ಕಾರದ ಪರ ವಾದ ಮಂಡಿಸಿದ್ದರು ಎಂದು ಸರ್ಕಾರಿ ಅಭಿಯೋಜಕ ಎ.ಎನ್.ಮಧು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರಲ್ಲಿ ಇಂದು ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ



ಶ್ರೀನಿವಾಸಮೂರ್ತಿ ಉಮಾಶ್ರೀ ರಿಚರ್ಡ್ ಬಸವರಾಜು

ಮೈಸೂರು,ನ.2(ಪಿಎಂ)– ಕರ್ನಾಟಕ ಸರ್ಕಾರ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ 2018 ಮತ್ತು 2019ನೇ ಸಾಲಿನ ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭವನ್ನು ನ.3ರಂದು ಮೈಸೂರಿನಲ್ಲಿ ಆಯೋಜಿಸಲಾಗಿದೆ.

ಮೈಸೂರಿನ ಮುಕ್ತ ಗಂಗೋತ್ರಿಯ ಮುಕ್ತ ವಿವಿಯ ಘಟಿಕೋತ್ಸವ ಭವನದಲ್ಲಿ ಅಂದು ಸಂಜೆ 5ಕ್ಕೆ ಸಮಾರಂಭ ನಡೆಯಲಿದೆ. ಬರ್ಫಿ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ಸಹ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡೂ ವರ್ಷಗಳ ಪ್ರಶಸ್ತಿ ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

2018 ಹಾಗೂ 2019ರ ಕ್ಯಾಲೆಂಡರ್ ವರ್ಷಗಳಲ್ಲಿ ಅತ್ಯುತ್ತಮ ಚಲನ ಚಿತ್ರಗಳು, ಜನಪ್ರಿಯ ಮನರಂಜನಾ ಚಿತ್ರ, ವಿಶೇಷ ಸಾಮಾಜಿಕ ಕಾಳಜಿಯ ಚಿತ್ರಗಳು ಸೇರಿದಂತೆ ಅತ್ಯುತ್ತಮ ನಟ, ನಟಿ ಸೇರಿದಂತೆ ಚಿತ್ರರಂಗದ ವಿವಿಧ ಪ್ರಕಾರಗಳಲ್ಲಿ ಪ್ರಶಸ್ತಿಗಳಿಗೆ ಭಾಜನರಾಗಿರುವ ಸುಮಾರು 85 ಪ್ರತಿಭಾವಂತರಿಗೆ ಮುಖ್ಯಮಂತ್ರಿಯವರು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಿದ್ದಾರೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಹೇಮಂತ್.ಎಂ ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೀವಮಾನ ಸಾಧನೆ ಪ್ರಶಸ್ತಿ: 2018ನೇ ಸಾಲಿನ ಜೀವಮಾನ ಸಾಧನೆ ಪ್ರಶಸ್ತಿಗೆ ಜೆ.ಕೆ.ಶ್ರೀನಿವಾಸಮೂರ್ತಿ (ಡಾ.ರಾಜ್‌ಕುಮಾರ್ ಪ್ರಶಸ್ತಿ), ಪಿ.ಶೇಷಾದ್ರಿ (ಪುಟ್ಟಣ್ಣ ಕಣಗಾಲ್ ಪ್ರಶಸ್ತಿ), ಬಿ.ಎಸ್.ಬಸವರಾಜು (ಡಾ.ವಿಷ್ಣುವರ್ಧನ್ ಪ್ರಶಸ್ತಿ), 2019ನೇ ಸಾಲಿನ ಜೀವಮಾನ ಸಾಧನೆ ಪ್ರಶಸ್ತಿಗೆ ಉಮಾಶ್ರೀ (ಡಾ.ರಾಜ್‌ಕುಮಾರ್ ಪ್ರಶಸ್ತಿ), ಎನ್.ಆರ್.ನಂಜುಂಡೇಗೌಡ (ಪುಟ್ಟಣ್ಣ ಕಣಗಾಲ್ ಪ್ರಶಸ್ತಿ) ಹಾಗೂ ರಿಚರ್ಡ್ ಕ್ಯಾಸ್ಟಲಿನೋ (ಡಾ.ವಿಷ್ಣುವರ್ಧನ್ ಪ್ರಶಸ್ತಿ) ಭಾಜನರಾಗಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್ ಘಟಕದಲ್ಲಿ ರಾಜ್ಯೋತ್ಸವ



ಮೈಸೂರು ನಗರ ಸಾರಿಗೆ ವಿಭಾಗದ ವಿಜಯನಗರ ಬಸ್ ಘಟಕದಲ್ಲಿ ಘಟಕದ ಹಿರಿಯ ವ್ಯವಸ್ಥಾಪಕಿ ಶ್ರೀಮತಿ ಸುಮಲತಾ ಅವರ ಅಧ್ಯಕ್ಷತೆಯಲ್ಲಿ ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ. ವಿಭಾಗಿಯ ನಿಯಂತ್ರಣಾ ಅಧಿಕಾರಿ ವೀರೇಶ್ ತ್ಯಾಪೆ, ವಿಭಾಗಿಯ ಸಂಚಾರ ಅಧಿಕಾರಿ ಶ್ರೀಮತಿ ಕಲಾಶ್ರೀ, ಸಹಾಯಕ ಕಾರ್ಮಿಕ ಕಲ್ಯಾಣ ಅಧಿಕಾರಿ ಶ್ರೀಮತಿ ವಾಣಿಶ್ರೀ, ಸಹಾಯಕ ಆಡಳಿತ ಅಧಿಕಾರಿ ಶಿವಪ್ರಸಾದ್ ಹಾಜರಿದ್ದರು. ಈ ಸಂದರ್ಭದಲ್ಲಿ ಜಾನಪದ ಕಲಾವಿದ ಕ್ಷೇತ್ರದಲ್ಲಿ ರಾಜ್ಯ ಪ್ರಶಸ್ತಿಗೆ ಆಯ್ಕೆಯಾಗಿರುವ ಘಟಕದ ಚಾಲಕ ಎಂ.ಎ.ಯೋಗೇಶ್ ಅವರನ್ನು ಸನ್ಮಾನಿಸಲಾಯಿತು.


ಕನ್ನಡದಲ್ಲೇ ರಾಜ್ಯೋತ್ಸವ ಶುಭಾಶಯ ತಿಳಿಸಿದ ಮೋದಿ



ನವದೆಹಲಿ, ನ.2– 70ನೇ ಕನ್ನಡ ರಾಜ್ಯೋತ್ಸವ ಸಂಭ್ರಮ ನಾಡಿನಾದ್ಯಂತ ಮನೆ ಮಾಡಿದ್ದು, ಈ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕನ್ನಡಿಗರಿಗೆ ಕನ್ನಡದಲ್ಲೇ ಶುಭಾಶಯಗಳನ್ನು ಕೋರಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಇಂದು, ನಾವು ಕನ್ನಡ ರಾಜ್ಯೋತ್ಸವವನ್ನು ಆಚರಿಸುತ್ತಿರುವಾಗ, ಕರ್ನಾಟಕದ ಜನರಿಗೆ ಪ್ರತೀಕವಾಗಿರುವ ಶ್ರೇಷ್ಠತೆ ಮತ್ತು ಶ್ರಮಶೀಲ ಸ್ವಭಾವವನ್ನು ನಾವು ಆಚರಿಸುತ್ತೇವೆ. ಸಾಹಿತ್ಯ, ಕಲೆ, ಸಂಗೀತ ಮತ್ತಿತರ ಕ್ಷೇತ್ರಗಳಲ್ಲಿ ಪ್ರತಿಫಲಿಸುವ ಕರ್ನಾಟಕದ ಶ್ರೀಮಂತ ಸಂಸ್ಕೃತಿಯನ್ನು ಸಹ ನಾವು ಆಚರಿಸುತ್ತೇವೆ. ಈ ರಾಜ್ಯವು ಜ್ಞಾನದಲ್ಲಿ ಅಡಗಿರುವ ಪ್ರಗತಿಯ ಮನೋಭಾವವನ್ನು ಪ್ರತಿಬಿಂಬಿಸುತ್ತದೆ. ರಾಜ್ಯದ ಜನರು ಸಂತೋಷ ಮತ್ತು ಆರೋಗ್ಯದಿಂದ ಇರಲಿ ಎಂದು ನಾನು ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.

ಇಂದು ಸಿಎಂ ಜಿಲ್ಲಾ ಪ್ರವಾಸ



ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನ.3ರಂದು ಮೈಸೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಅಂದು ಬೆಳಗ್ಗೆ 10.25ಕ್ಕೆ ಮೈಸೂರು ವಿಮಾನ ನಿಲ್ದಾಣಕ್ಕೆ ಆಗಮಿಸುವರು. ನಂತರ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. 11 ಗಂಟೆಗೆ ಮೈಸೂರು ಪಾಲಿಕೆಯ ವಲಯ ಕಚೇರಿ 3ರಲ್ಲಿ ಆಯೋಜಿಸಲಾಗಿರುವ ಮೈಸೂರು ಗ್ರೇಟರ್ ಸಮಗ್ರ ಅಭಿವೃದ್ಧಿ ಕುರಿತು ಸಭೆಯಲ್ಲಿ ಭಾಗವಹಿಸುವರು. ನಂತರ ಸಂಜೆ 4 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಆಯೋಜಿಸಿರುವ 2018 ಮತ್ತು 2019ನೇ ಸಾಲಿನ ರಾಜ್ಯ ಚಲನ ಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮಾನವ–ಪ್ರಾಣಿ ಸಂಘರ್ಷ ತಡೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಿ

ಹುಲಿ ದಾಳಿಗೆ ಬಲಿಯಾದ ರೈತನ ಅಂತಿಮ ದರ್ಶನ ಪಡೆದು ಕುಟುಂಬಕ್ಕೆ ಸಾಂತ್ವನ ಹೇಳಿದ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ

ಸರಗೂರು, ನ.2– ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಶಾಸಕ ಅನಿಲ್ ಚಿಕ್ಕಮಾದು ಅವರು ಜಿಲ್ಲಾಡಳಿತದೊಂದಿಗೆ ತಾಲೂಕಿನ ಕೂಡಗಿ ಗ್ರಾಮಕ್ಕೆ ಭೇಟಿ ನೀಡಿ, ಹುಲಿ ದಾಳಿಗೆ ಬಲಿಯಾದ ದೊಡ್ಡನಿಂಗಯ್ಯ ಅವರ ಅಂತಿಮ ದರ್ಶನ ಪಡೆದರು. ನಂತರ ಮೃತರ ಕುಟುಂಬಕ್ಕೆ ಸಾಂತ್ವಾನ ಹೇಳಿ, ಸರಕಾರದಿಂದ ಕೊಡಮಾಡುವ ಸೌಲಭ್ಯಗಳನ್ನು ದೊರಕಿಸಿಕೊಡಲಾಗುವುದು ಎಂದು ಭರವಸೆ ನೀಡಿದರು.

ನಂತರ ಮಾತನಾಡಿದ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಕಾಡುಪ್ರಾಣಿಗಳು–ಮಾನವ ಸಂಘರ್ಷಕ್ಕೆ ಅರಣ್ಯ ಇಲಾಖೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಶಾಶ್ವತವಾದ ಪರಿಹಾರವನ್ನು ಕಂಡುಕೊಳ್ಳಬೇಕು. ಮನುಷ್ಯನ ಜೀವ ಹೋದರೆ ಮತ್ತೆ ಬಾರದು. ಜೀವಕ್ಕೆ ಬೆಲೆಕಟ್ಟಲಾಗದು. ಸಂತಾನೋತ್ಪತ್ತಿಗಾಗಿ ಕಾಡಿನಿಂದ ಹೊರಬರುವ ಕಾಡುಪ್ರಾಣಿಗಳ ಹಾವಳಿ ತಡೆಗೆ ಅರಣ್ಯ ಇಲಾಖೆ ಸಿಬ್ಬಂದಿಗಳು ಕಾಡಿನಂಚಿನ ಗ್ರಾಮಗಳಲ್ಲಿ ಗಸ್ತು ಮಾಡಬೇಕು. ರೈಲ್ವೆ ಕಂಬಿ ಅಳವಡಿಸಲು ಕ್ರಮವಹಿಸಬೇಕು. ಅರಣ್ಯ ಇಲಾಖೆ ಅಧಿಕಾರಿಗಳು ಹೊಂದಾಣಿಕೆಯಿಂದ ಕೆಲಸ ಮಾಡಬೇಕು ಎಂದು ತಾಕೀತು ಮಾಡಿದರು.

ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ಕಾಡಂಚಿನ ಗ್ರಾಮಗಳ ರೈತರು ಪ್ರಾಣಿಗಳಿರುವ ಸ್ಥಳಕ್ಕೆ ಹೋಗಬಾರದು. ತಾಲೂಕಿನಲ್ಲಿ ಮೂರು ಘಟನೆಗಳು ನಡೆದಿವೆ. ಇದಕ್ಕೆ ಅರಣ್ಯ ಅಧಿಕಾರಿಗಳೇ ನೇರ ಹೊಣೆ. ಅರಣ್ಯ ಅಧಿಕಾರಿಗಳೊಂದಿಗೆ ಹೊಂದಾಣಿಕೆ ಮುಖ್ಯ. ಹಿರಿಯ ಅಧಿಕಾರಿಗಳು ಆದೇಶ ನೀಡಿದರೆ ಕಿರಿಯ ಅಧಿಕಾರಿಗಳು ಚಾಚು ತಪ್ಪದೇ ಮಾಡಬೇಕು. ಅರಣ್ಯ ಗಸ್ತು ಮಾಡಬೇಕು. ಇಂಥ ಘಟನೆಗೆ ಅಧಿಕಾರಿಗಳೇ ನೇರ ಹೊಣೆ. ಇಂಥ ಅಧಿಕಾರಿಗಳ ವಿರುದ್ಧ ಸಚಿವರು ಕ್ರಮವಹಿಸಬೇಕು. ಬಲಿ ಪಡೆದ ಹುಲಿ ಸೆರೆಗೆ ಕ್ರಮವಹಿಸಬೇಕು. ಅರಣ್ಯಾಧಿಕಾರಿಗಳು ರಿಯಲ್ ಎಸ್ಟೇಟ್ ಮಾಡುತ್ತಿದ್ದಾರೆ. ರೈತ ಸಂಪರ್ಕ ಸಭೆ ಮಾಡಿಲ್ಲ ಎಂದು ಹೇಳಿದರು.



ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರು ಹುಲಿ ದಾಳಿಗೆ ಬಲಿಯಾದ ದೊಡ್ಡನಿಂಗಯ್ಯ ಅವರ ಅಂತಿಮ ದರ್ಶನವನ್ನು ಪಡೆದರು.

ಮೃತರ ಕುಟುಂಬಕ್ಕೆ 20 ಲಕ್ಷ ರೂ., ಪರಿಹಾರ ಮತ್ತು ಹೊರಗುತ್ತಿಗೆ ಆಧಾರದಲ್ಲಿ ಒಬ್ಬರಿಗೆ ಅರಣ್ಯ ಇಲಾಖೆಯಲ್ಲಿ ಕೆಲಸ ಕೊಡಿಸಲಾಗುವುದು. ಮೃತರ ಪತ್ನಿ ಹೆಸರಿನಲ್ಲಿ ಮಾಶಾಸನ ನೀಡಲಾಗುವುದು. ಇದಲ್ಲದೆ ಆಹಾರದ ಕಿಟ್ ಕೂಡ ನೀಡಲಾಗುವುದು. ಹುಲಿ ಕೂಂಬಿಂಗ್ ಕಾರ್ಯಾಚರಣೆ ನಡೆಯಲಿದ್ದು, ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ದಸಂಸ ಮುಖಂಡ ಬೆಟ್ಟಯ್ಯಕೋಟೆ ಮಾತನಾಡಿ, ಅರಣ್ಯದೊಳಗೆ ಅಕ್ರಮ ರೆಸಾರ್ಟ್ ನಡೆಯುತ್ತಿದ್ದು, ಅದಕ್ಕೆ ಅರಣ್ಯ ಇಲಾಖೆ ಕಡಿವಾಣ ಹಾಕಬೇಕು. ಅಕ್ರಮ ರೆಸಾರ್ಟ್‌ನಿಂದಾಗಿ ಕಾಡುಪ್ರಾಣಿಗಳು ನಾಡಿನತ್ತ ಬರುತ್ತಿದ್ದು, ಮಾನವನ ಸಂಘರ್ಷಕ್ಕೆ ಕಾರಣವಾಗುತ್ತಿವೆ. ಹೀಗಾಗಿ ಅಕ್ರಮ ರೆಸಾರ್ಟ್‌ಗೆ ಕಡಿವಾಣ ಹಾಕಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ, ಜಿಪಂ ಸಿಇಒ ರಾಕೇಶ್‌ಕುಮಾರ್, ಎಸ್ಪಿ ವಿಷ್ಣುವರ್ಧನ್, ಡಿಸಿಎಫ್ ಕೆ.ಪರಮೇಶ್, ತಹಸೀಲ್ದಾರ್ ಮೋಹನಕುಮಾರಿ, ಇಒ ಪ್ರೇಮ್‌ಕುಮಾರ್, ಸಿಪಿಐ ಪ್ರಸನ್ನಕುಮಾರ್, ಪಿಎಸ್ಐ ಕಿರಣ್, ಆರ್‌ಎಫ್‌ಒ ಅಮೃತಾ, ದಸಂಸ ಮುಖಂಡ ಬೆಟ್ಟಯ್ಯಕೋಟೆ, ಕೋಟೆ ಪುರಸಭೆ ಸದಸ್ಯ ಎಚ್.ಸಿ.ನರಸಿಂಹಮೂರ್ತಿ, ಎಪಿಎಂಸಿ ಮಾಜಿ ಅಧ್ಯಕ್ಷ ದೇವಲಾಪುರ ಸಿದ್ದರಾಜು, ಹೆಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರದ ಯೂತ್ ಕಾಂಗ್ರೆಸ್ ಅಧ್ಯಕ್ಷ ಕಂದೇಗಾಲ ಶಿವರಾಜು, ರೈತ ಸಂಘದ ಹೊಸಕೋಟೆ ಬಸವರಾಜು, ವಕೀಲ ಜವರಯ್ಯ, ಆದಿ ಕರ್ನಾಟಕ ಮಹಾಸಭಾದ ತಾಲೂಕು ಅಧ್ಯಕ್ಷ ಇಟ್ನರಾಜಣ್ಣ, ಮಾಜಿ ಅಧ್ಯಕ್ಷ ಶಿವಣ್ಣ, ಗ್ಯಾರಂಟಿ ಯೋಜನೆ ಅಧ್ಯಕ್ಷ ಚೆನ್ನಿಪುರ ಚಲುವರಾಜು, ಹಾದನೂರು ಪ್ರಕಾಶ್, ಎಂ.ಸಿ.ತಳಲು ಪ್ರಕಾಶ್ ಚಂದ್ರು ಗ್ರಾಪಂ ಅಧ್ಯಕ್ಷ ದೇವದಾಸ, ಜಿಪಂ ಮಾಜಿ ಉಪಾಧ್ಯಕ್ಷೆ ಭಾಗ್ಯಲಕ್ಷ್ಮಿನಿಂಗರಾಜು, ಸೌಮ್ಯ ಮಂಜುನಾಥ್, ಎಸ್ಸಿ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಕುಂದೂರು ಮೂರ್ತಿ, ಅಕ್ರಮ ಸಕ್ರಮ ಸಮಿತಿ ಸದಸ್ಯ ಶಿವಶಂಕರ್, ಗ್ರಾಪಂ ಸದಸ್ಯ ಕುರ್ಣೇಗಾಲ ಬೆಟ್ಟಸ್ವಾಮಿ, ಅಂಬೇಡ್ಕರ್ ಭವನದ ಅಧ್ಯಕ್ಷ ಚೆನ್ನಿಪುರ ನಾಗರಾಜು, ತುಂಬಸೋಗೆ ನಾಗಣ್ಣ, ಹಳಿಯೂರು ಚಿನ್ನಯ್ಯ, ಕಂದೇಗಾಲ ಶಿವರಾಜು, ಸರಗೂರು ಸಣ್ಣಸ್ವಾಮಿ, ಅಲ್ಪಸಂಖ್ಯಾತರ ಆಯೋಗದ ಸದಸ್ಯ ಸುಭಾನ್, ಕೂಡಗಿ ಗ್ರಾಮ ಸೇರಿದಂತೆ ಅಕ್ಕಪಕ್ಕದ ಗ್ರಾಮಸ್ಥರು ಹಾಜರಿದ್ದರು.

ನಾಳೆ ತಿ.ನರಸೀಪುರದಲ್ಲಿ ವಿದ್ಯೋದಯ ಸಂಘದ ಕೆ.ಪಿ.ಮಹದೇವಸ್ವಾಮಿಯವರ ಅಮೃತ ಮಹೋತ್ಸವ

ನರಸೀಪುರದಲ್ಲಿ ಪ್ರವೇಶದ್ವಾರ, ದಾಸೋಹ ಭವನ, ಬಯಲು ರಂಗಮಂದಿರ ಉದ್ಘಾಟನೆ

ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಸಿಎಂ ಬಿಎಸ್‌ವೈ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಮತ್ತಿತರರು ಭಾಗಿ

ತಿ.ನರಸೀಪುರ, ನ.2–ತಾಲೂಕಿನ ಪ್ರತಿಷ್ಠಿತ ವಿದ್ಯಾಸಂಸ್ಥೆಯಾದ ಗ್ರಾಮ ವಿದ್ಯೋದಯ ಸಂಘದ ಗೌರವ ಪ್ರಧಾನ ಕಾರ್ಯದರ್ಶಿ, ಕೆ.ಪಿ.ಮಹದೇವಸ್ವಾಮಿಯವರ ಅಮೃತ ಮಹೋತ್ಸವ, ಎಂ.ಸಿ.ಶಿವಾನಂದ ಶರ್ಮ ಸ್ಮಾರಕ ಪ್ರವೇಶ ದ್ವಾರ, ದಾಸೋಹ ಭವನ ಹಾಗೂ ಡಾ.ಶ್ರೀ ಶಿವಕುಮಾರ ಮಹಾಸ್ವಾಮಿಗಳವರ ಬಯಲು ರಂಗ ಮಂದಿರಗಳ ಉದ್ಘಾಟನಾ ಸಮಾರಂಭ ನ.4 ರಂದು ನಡೆಯಲಿದೆ.

ವಿದ್ಯೋದಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿಗಳಾಗಿದ್ದ ಎಂ.ಸಿ.ಶಿವಾನಂದಶರ್ಮರು 1940ರಲ್ಲಿ ಬೆಂಗಳೂರಿನಲ್ಲಿ ರಾಷ್ಟ್ರೀಯ ವಿದ್ಯಾಲಯ ಶಿಕ್ಷಣ ಸಂಸ್ಥೆ ಹಾಗೂ 1946 ರಲ್ಲಿ ತಿ.ನರಸೀಪುರದಲ್ಲಿ ವಿದ್ಯೋದಯ ಶಿಕ್ಷಣ ಸಂಸ್ಥೆಯನ್ನು ನಿರ್ಮಿಸಿದರು. ಇಲ್ಲಿ 1946 ರಲ್ಲಿ ಆರಂಭಿಸಿದ ವಿವಿದೋದ್ದೇಶ ಪ್ರೌಢಶಾಲೆಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗತೊಡಗಿದ ಹಿನ್ನೆಲೆಯಲ್ಲಿ ಶರ್ಮರವರು ಪ್ರತ್ಯೇಕವಾಗಿ ವಿಶಾಲವಾದ ನಿವೇಶನ ಪಡೆದು ಸಾರ್ವಜನಿಕರ ನೆರವಿನೊಂದಿಗೆ 31 ಕೊಠಡಿಗಳ ಶಾಲಾ ಕಟ್ಟಡವನ್ನು ನಿರ್ಮಿಸಿದ್ದರು.



ಶಿವಮಲ್ಲಪ್ಪ

ಈ ಕಟ್ಟಡವನ್ನು 1951ರಲ್ಲಿ ಮೈಸೂರಿನ ಜಯಚಾಮರಾಜ ಒಡೆಯರ್ ಬಹದ್ದೂರ್ ರವರು ಉದ್ಘಾಟಿಸಿದ್ದರು. ನಂತರದಲ್ಲಿ ವಿದ್ಯೋದಯ ಸಿಕ್ಷಣ ಸಂಸ್ಥೆಯ ಗೌರವ ಕಾರ್ಯದರ್ಶಿಯಾಗಿ 1989 ರಲ್ಲಿ ಅಧಿಕಾರ ವಹಿಸಿಕೊಂಡ ಕೆ.ಪಿ.ಮಹದೇವಸ್ವಾಮಿಯವರು ಕಳೆದ 36 ವರ್ಷಗಳಿಂದ ಸಂಸ್ಥೆಯ ಬೆಳವಣಿಗೆಗಾಗಿ ದುಡಿಯುವ ಮೂಲಕ ಶರ್ಮರ ಕನಸನ್ನು ಸಾಕಾರಗೊಳಿಸಿತ್ತಾ ಬಂದಿದ್ದಾರೆ.

ಹಾಗಾಗಿ ನ.4 ರಂದು ಮಹದೇವಸ್ವಾಮಿಯವರ 75ನೇ ವರ್ಷದ ಅಮೃತ ಮಹೋತ್ಸವ ಕಾರ್ಯಕ್ರಮವನ್ನು ಶಿಕ್ಷಣ ಸಂಸ್ಥೆ ಆವರಣದಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತಿದ್ದು, ನಿಸ್ವಾರ್ಥಿ ಎಂಬ ಅಭಿನಂದನಾ ಗ್ರಂಥವನ್ನು ಅರ್ಪಿಸಲಾಗುತ್ತಿದೆ. ಅಲ್ಲದೇ ಅಮೃತ ಮಹೋತ್ಸವದ ಅಂಗವಾಗಿ ವರ್ಷವಿಡೀ ಸಮಾಜ ಸೇವಾ ಕಾರ್ಯಗಳನ್ನು ನಡೆಸಲು ಆಡಳಿತ ಮಂಡಳಿ ನಿರ್ಧರಿಸಿದೆ.

ನ4 ರಂದು ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಸುತ್ತೂರು ವೀರ ಸಿಂಹಾಸನಮಠದ ಶಿವರಾತ್ರಿ ದೇಶೀಕೇಂದ್ರಸ್ವಾಮೀಜಿ, ತುಮಕೂರು ಸಿದ್ದಗಂಗಾ ಕ್ಷೇತ್ರದ ಸಿದ್ದಲಿಂಗಮಹಾಸ್ವಾಮಿಗಳು, ಆದಿ ಚುಂಚನಗಿರಿ ಕ್ಷೇತ್ರದ ಡಾ. ನಿರ್ಮಲಾನಂದ ಸ್ವಾಮೀಜಿ ವಹಿಸಲಿದ್ದು ರಾಜ್ಯದ ವಿವಿಧ ಮಠಗಳ ಹರ ಗುರು ಚರ ಮೂರ್ತಿಗಳು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವೇರಿಸಲಿದ್ದು, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅಧ್ಯಕ್ಷತೆ ವಹಿಸುವರು. ಬಯಲು ರಂಗ ಮಂದಿರವನ್ನು ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಪ್ರವೇಶ ದ್ವಾರವನ್ನು ಮಾಜಿ ಸಚಿವ ಡಾ.ಶಾಮನೂರು ಶಿವಶಂಕರಪ್ಪ ಉದ್ಘಾಟಿಸಲಿದ್ದಾರೆ. ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅಭಿನಂದನಾ ನುಡಿಗಳನ್ನಾಡಲಿದ್ದು, ಪಶುಸಂಗೋಪನೆ ಸಚಿವ ಕೆ.ವೆಂಕಟೇಶ್ ಅಭಿನಂದನಾ ಗ್ರಂಥ ಬಿಡುಗಡೆ ಮಾಡಲಿದ್ದಾರೆ. ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ದಾಸೋಹ ಭವನ ಉದ್ಘಾಟನೆ ಮಾಡಲಿದ್ದು, ಸಂಸದ ಸುನೀಲ್ ಬೋಸ್ ಶರ್ಮರ ಭಾವ ಚಿತ್ರ ಅನಾವರಣ ಮಾಡಲಿದ್ದಾರೆ ಎಂದು ಅಭಿನಂದನಾ ಸಮಿತಿ ಕಾರ್ಯಾಧ್ಯಕ್ಷ ಕೆ.ಪಿ. ಉದಯಕುಮಾರ್ ಹಾಗು ಕಾರ್ಯಕ್ರಮದ ರೂವಾರಿ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಬಿ.ಎಂ. ಶಿವಮಲ್ಲಪ್ಪ ತಿಳಿಸಿದ್ದಾರೆ.

ಬನ್ನೂರಿಗೆ ಶೀಘ್ರದಲ್ಲೇ ಕಸಗುಡಿಸುವ ಯಂತ್ರ

ಬನ್ನೂರು: ಪಟ್ಟಣವನ್ನು ಸುಂದರ ಹಾಗೂ ಕಸಮುಕ್ತವನ್ನಾಗಿ ಮಾಡುವ ಉದ್ದೇಶದೊಂದಿಗೆ ಮತ್ತು ಪೌರಕಾರ್ಮಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಶೈಕ್ಷಣಿಕ ವರ್ಷದ ಅನುದಾನದಲ್ಲಿ ಬನ್ನೂರು ಪುರಸಭೆಗೆ ಶೀಘ್ರದಲ್ಲಿ ಕಸಗುಡಿಸುವ ಯಂತ್ರ ಬರಲಿದೆ ಎಂದು ಬನ್ನೂರು ಪುರ ಸಭೆಯ ಅಧ್ಯಕ್ಷ ಕೃಷ್ಣೇಗೌಡ ತಿಳಿಸಿದರು.

ಪಟ್ಟಣದಲ್ಲಿನ ಪುರಸಭೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ 70ನೇ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಂಡು 2024–25ನೇ ಸಾಲಿನ 15ನೇ ಹಣಕಾಸು ಯೋಜನೆಯ ಘನತ್ಯಾಜ್ಯ ವಸ್ತುಗಳ ಅನುದಾನದಲ್ಲಿ ಖರೀದಿ ಮಾಡಿರುವ ನೂತನ ಟ್ರಾಕ್ಟರ್, ಟಿಪ್ಪರ್, ಎಲ್ಇಡಿ ಡಿಸ್‌ಪ್ಲೇ ವಾಹನಗಳನ್ನು ಪೌರಕಾರ್ಮಿಕರಿಗೆ ಹಸ್ತಾಂತರಿಸಿ ಮಾತನಾಡಿದರು.

ಇಂದು ರಾಜ್ಯದಲ್ಲಿ ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತಿದೆ. ಕನ್ನಡ ನಾಡು ನುಡಿಯ ಬಗೆಗೆ ಎಲ್ಲರೂ ಹೆಚ್ಚಿನ ಅಭಿಮಾನವನ್ನು ಬೆಳೆಸಿಕೊಂಡಾಗ ಮಾತ್ರ ಕನ್ನಡ ಅಭಿವೃದ್ಧಿಯಾಗಲು ಸಾಧ್ಯ ಎಂದು ತಿಳಿಸಿದರು. ಎಲ್ಲೇ ಹೋದರೂ ಹೆಚ್ಚಾಗಿ ಕನ್ನಡವನ್ನು ಮಾತನಾಡುವ ಮೂಲಕ ಅನ್ಯರಿಗೂ ಕನ್ನಡದ ಬಗೆಗೆ ಭಾಷಾಭಿಮಾನ ಬೆಳೆಸುವಂತೆ ಮಾಡಬೇಕೆಂದು ಕರೆಯನ್ನು ನೀಡಿದರು.



ಕಾರ್ಯಕ್ರಮದಲ್ಲಿ ಪುರಸಭೆಯ ಅಧ್ಯಕ್ಷ ಕೃಷ್ಣೇಗೌಡ ನೂತನ ನೈರ್ಮಲ್ಯ ವಾಹನಗಳನ್ನು ಪೌರಕಾರ್ಮಿಕರಿಗೆ ಹಸ್ತಾಂತರಿಸಿದರು.

ಕಾರ್ಯಕ್ರಮದಲ್ಲಿ ಪುರಸಭಾ ಮುಖ್ಯಾಧಿಕಾರಿ ಹೇಮಂತ್‌ರಾಜ್, ಸಮುದಾಯ ಸಂಘಟನಾ ಅಧಿಕಾರಿ ಪುಟ್ಟರಾಜು, ವಿನುತ, ಪರಿಸರ ಅಭಿಯಂತರರು ನಸೀಮ ಅಂಜುಂ, ಪುರಸಭೆಯ ಉಪಾಧ್ಯಕ್ಷೆ ಎಂ.ಆರ್. ಸೌಮ್ಯರಾಣಿ, ಎಸ್. ಭಾಗ್ಯ, ಎಂ.ಕೆ. ಮಹೇಶ್, ಬಿ.ಕೆ.ಆನಂದ, ಬಿ.ಎಸ್. ಶೃತಿ, ನಂಜುಂಡಸ್ವಾಮಿ, ಬಿ.ಆರ್.ಶ್ರೀನಿವಾಸ್, ಅನುತ ಮೂರ್ತಿ, ಶೋಭ ಸತೀಶ್, ನಾಗರತ್ನ ಪ್ರಭಾಕರ್, ದಿವ್ಯ ಪೈಲ್ವಾನ್‌ಚಂದ್ರು, ಫೀರ್ದೋಸ್, ಫೀರ್‌ಖಾನ್, ಭಾಗ್ಯಶ್ರೀ, ಬಿ.ಎಸ್.ಲೋಕಾಂಬಿಕಾ, ಪುಷ್ಪವತಿ, ಮೂರ್ತಿ, ಬಿ.ಕೆ. ಶಾಂತರಾಜು, ಶಿವಣ್ಣ, ಚೆಲುವರಾಜು, ಸಿ. ಹೆಚ್. ವಿಜಯ್‌ಕುಮಾರ್, ಸಿ.ಸಿ.ಸುರೇಶ, ಆರ್. ಶಿವಣ್ಣ ಬಿ.ಎಂ. ಮಹೇಶ, ನಾಗರಾಜಚಾರ್, ಅಸದ್‌ಅಲಿ, ಬಸವರಾಜು, ಕಾಂತರಾಜು, ಕುಮಾರ್, ಹರಿಪ್ರಸಾದ್, ಪುಷ್ಪಲತಾ, ಸೋಮಪ್ರಭ, ಅಗಾಜ್, ಹರೀಶ್, ಸೇರಿದಂತೆ ಪುರಸಭೆಯ ಪೌರಕಾರ್ಮಿಕರು ಇದ್ದರು.

ಬಿಳಿಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಆಯ್ಕೆ



ನಂಜನಗೂಡು ತಾಲೂಕು ಬಿಳಿಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಕಲ್ಲುಂದ ಕೆ.ಬಿ.ಚಂದ್ರಶೇಖರ್, ಉಪಾಧ್ಯಕ್ಷರಾಗಿ ಕುಪ್ಪರವಳ್ಳಿ ಸೋಮಣ್ಣ ಅವಿರೋಧವಾಗಿ ಆಯ್ಕೆಯಾದರು. ಈ ಸಂದರ್ಭದಲ್ಲಿ ನಿರ್ದೇಶಕರಾದ ಕಲ್ಲುಂದ ಮಹದೇವಸ್ವಾಮಿ, ಸೋಮಣ್ಣ ಬಿಳಿಗೆರೆ, ಶೇಖರಪ್ಪಕಹಳ್ಳಿ, ಗುರುಮಲ್ಲೇಗೌಡ, ಪಚ್ಚತಾಯಮ್ಮ, ನಾಗರತ್ನಮ್ಮ ಕೆ.ಎಸ್, ಪುಟ್ಟಬುದ್ದಿ ಹಾಗೂ ಮುಖಂಡರು ಹಾಜರಿದ್ದರು.

ಕೆ.ಆರ್.ನಗರದಲ್ಲಿ ರಾಜ್ಯೋತ್ಸವ ಆಚರಣೆ

ಕರ್ನಾಟಕ ಏಕೀಕರಣಕ್ಕೆ ಶ್ರಮಿಸಿದ ನಾಯಕರ ಸ್ಮರಣೆ



ಕೆ.ಆರ್.ನಗರ ಮತ್ತು ಸಾಲಿಗ್ರಾಮದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಕೆ.ಆರ್.ನಗರ: ಕನ್ನಡನಾಡು ಮೈಸೂರು ರಾಜ್ಯವಾಗಿ ಏಕೀಕೃತವಾಯಿತು. ಈ ಮೈಸೂರು ರಾಜ್ಯಕ್ಕೆ 'ಕರ್ನಾಟಕ' ರಾಜ್ಯ ಎಂದು ಅಂದಿನ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ್‌ಅರಸು ಅವರು ಮರುನಾಮಕರಣ ಮಾಡಲು ಪ್ರಮುಖ ಪಾತ್ರ ವಹಿಸಿದ್ದರು ಎಂದು ಶಾಸಕ ಡಿ.ರವಿಶಂಕರ್ ಸ್ಮರಿಸಿದರು.

ಪಟ್ಟಣದ ಪುರಸಭೆ ಬಯಲು ಮಂದಿರದಲ್ಲಿ ತಾಲೂಕು ಆಡಳಿತ ವತಿಯಿಂದ ಆಯೋಜಿಸಿದ್ದ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕರ್ನಾಟಕ ಏಕೀಕರಣದ ಹೋರಾಟಕ್ಕೆ ಕರ್ನಾಟಕ ವಿದ್ಯಾವರ್ಧಕ ಸಂಘ, ಕನ್ನಡ ಸಾಹಿತ್ಯ ಪರಿಷತ್ತು, ಕರ್ನಾಟಕ ಇತಿಹಾಸ ಮಂಡಳಿ, ಕರ್ನಾಟಕ ಸೇವಾ ದಳ ನಿರ್ಣಾಯಕ ಪಾತ್ರ ವಹಿಸಿದವು. ಈ ಸಂಘ ಸಂಸ್ಥೆಗಳ ನೇತಾರರಾಗಿ ಉಳವಿ ವಿ.ಪಿ. ಮಾದವರಾಯರು, ಡೆಪ್ಯೂಟಿ ಚನ್ನಬಸಪ್ಪ, ಹುಯಿಲಗೋಳ ನಾರಾಯಣ ರಾವ್, ಅನಕೃ, ಪಾಟೀಲ ಪುಟ್ಟಪ್ಪ ಸೇರಿದಂತೆ ಹಲ ಮಹನೀಯರು ಹಾಗೂ ಅಸಂಖ್ಯಾತ ಸಾಹಿತಿಗಳು, ಲೇಖಕರು, ಸಂಘ ಸಂಸ್ಥೆಗಳು ಕರ್ನಾಟಕ ಏಕೀಕರಣಕ್ಕೆ ಕಾರಣರಾದರು. ಅವರೆಲ್ಲರನ್ನು ಇಂದು ಸ್ಮರಿಸುವುದು ಅಗತ್ಯ ಎಂದರು.

ಇದಕ್ಕೂ ಮೊದಲು ಕನ್ನಡ ನಾಡಿನ ಜೈಭುವನೇಶ್ವರಿ ಪುತ್ಥಳಿಯನ್ನು ಬೆಳ್ಳಿ ರಥದಲ್ಲಿ ಪ್ರತಿಷ್ಠಾನ ಮಾಡಿದ ಬಳಿಕ ವಿವಿಧ ಕಲಾತ್ಮಕ ಕಲಾ ತಡಗಳು, ಶಾಲಾ ಮಕ್ಕಳೊಂದಿಗೆ ಶಾಸಕ ಡಿ.ರವಿಶಂಕರ್ ಮೆರವಣಿಗೆ ಚಾಲನೆ ನೀಡಿದರು.

ಪಟ್ಟಣದ ಪುರಸಭೆ ಬಯಲು ರಂಗಮಂದಿರದಲ್ಲಿ ವಿವಿಧ ಶಾಲಾ ಮಕ್ಕಳಿಂದ ಕನ್ನಡ ನಾಡಿನ ಪರಂಪರೆ, ಜನಪದ ಶೈಲಿ, ಸಾಂಸ್ಕೃತಿಕ ಸೇರಿದಂತೆ ಅನೇಕ ಮನರಂಜನಾ ಪ್ರದರ್ಶನಗಳು ನಡೆಸಿ ಕನ್ನಡಾಭಿಮಾನಿಗಳಿಂದ ಮೆಚ್ಚುಗೆ, ಪ್ರಶಂಸೆ ಪಾತ್ರರಾದರು.

2024–25ನೇ ಸಾಲಿನಲ್ಲಿ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡದಲ್ಲಿ 125ಕ್ಕೆ 125 ಅಂಕಗಳನ್ನು ಪಡೆದ ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲೂಕಿನ 36 ವಿದ್ಯಾರ್ಥಿಗಳನ್ನು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಅನ್ಯಭಾಷಿಗರ ನಡುವೆ ಕನ್ನಡ ಭಾಷೆ ಉಳಿಸಿ, ಬೆಳೆಸಬೇಕಿದೆ

ಕನ್ನಡ ರಾಜ್ಯೋತ್ಸವದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್ ಕರೆ



ನಂಜನಗೂಡಿನಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್ ಭಾಗವಹಿಸಿದ್ದರು.

ನಂಜನಗೂಡು: ಕರ್ನಾಟಕ ರಾಜ್ಯ ಹಲವಾರು ಅನ್ಯ ಭಾಷಿಕರಿಗೆ ನೆಲೆ ಒದಗಿಸಿದ್ದು, ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಮಹತ್ತರವಾದ ದೊಡ್ಡ ಜವಾಬ್ದಾರಿ ನಮ್ಮ ಮೇಲಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು.

ತಾಲೂಕು ಕಚೇರಿಯ ಆವರಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿಯ ವತಿಯಿಂದ ಏರ್ಪಡಿಸಲಾಗಿದ್ದ 70ನೇ ವರ್ಷದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮಾತನಾಡಿದರು.

ಕಳೆದ 10 ವರ್ಷಗಳ ಹಿಂದೆ ಕರ್ನಾಟಕ ರಾಜ್ಯದಲ್ಲಿ ಬರೀ ಕನ್ನಡ ಭಾಷೆ ಮಾತ್ರ ಕೇಳಿ ಬರುತ್ತಿತ್ತು, ಆದರೆ ಇತ್ತೀಚಿನ ದಿನಗಳಲ್ಲಿ ಮೈಸೂರಿನಲ್ಲೂ ಸಹ ಅನ್ಯ ಭಾಷೆಗಳನ್ನು ಹಾಡುವ ಜನರು ಸಾಕಷ್ಟಿದ್ದಾರೆ. ನಮ್ಮ ರಾಜ್ಯ ಹಲವಾರು ಭಾಷೆಗಳಿಗೆ ನೆಲೆ ಒದಗಿಸಿದೆ, ಆದರೂ ಸಹ ನಾವು ಸಂವಿಧಾನದ ಮೂಲಕ ಏಕತೆಯನ್ನು ಕಾಪಾಡಿಕೊಂಡು ಹೋಗುತ್ತಿದ್ದೇವೆ. ರಾಜ್ಯದಲ್ಲಿ ಬೆಳಗಾವಿ, ಕನ್ನಡ, ಮಂಗಳೂರು ಕನ್ನಡ, ಮಲೆನಾಡು ಕನ್ನಡದಂತಹ ಪ್ರಾಂತ್ಯ ಭಾಷೆಗಳ ನಡುವೆಯೂ ಕೂಡ ಕನ್ನಡ ಭಾಷೆ ನಮ್ಮೆಲ್ಲರನ್ನು ಒಗ್ಗೂಡಿಸಿದೆ ಎಂದರು.

ಮುಖ್ಯ ಭಾಷಣಕಾರರಾಗಿದ್ದ ಡಾ.ಸಿ.ನಾಗಣ್ಣ ಮಾತನಾಡಿ ಕರ್ನಾಟಕದ ಸಂಸ್ಕೃತಿ, ಕಲೆ, ಸಾಹಿತ್ಯ ಸಂಗೀತಗಳು, ಭಾರತೀಯ ಸಾಂಸ್ಕೃತಿಕ ಶ್ರೀಮಂತಿಕೆಗೆ ತನ್ನದೇ ಆದ ಕೊಡುಗೆಯನ್ನು ನೀಡಿವೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು, ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು, ಸನ್ಮಾನಿಸಲಾಯಿತು, ನಂದೂ ಕ್ಲಿನಿಕ್‌ನ ವೈದ್ಯರಾದ ಸುಂದರೇಶ್‌ರವರಿಗೆ ತಾಲೂಕು ಕನ್ನಡ ರಾಜ್ಯೋತ್ಸವ ಪ್ರಶಸ್ತಿ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸುಮಾರು ನೂರು ಜನ ಶಾಲಾ ಮಕ್ಕಳು ನಾಡಗೀತೆಯನ್ನು ಹಾಡಿದ್ದು ಪ್ರೇಕ್ಷಕರ ಮನಸೂರೆಗೊಂಡಿತು, ಸಮಾರಂಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ನಗರಸಭಾ ಅಧ್ಯಕ್ಷ ಶ್ರೀಕಂಠಸ್ವಾಮಿ, ಉಪಾಧ್ಯಕ್ಷೆ ರಿಯಾನ ಬಾನು, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಕಾಂಗ್ರೆಸ್ ಪಕ್ಷಕ್ಕೆ ಸಿಎಂ ಸಿದ್ದರಾಮಯ್ಯ ಅನಿವಾರ್ಯ

ತಿ.ನರಸೀಪುರ, ಅ.31– ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರಿಗೆ ಅಹಿಂದ ವರ್ಗದ ಬೆಂಬಲ ಇದೆ, ಅವರು ಯಾವುದೇ ಒಂದು ಜಾತಿಗೆ ಸೀಮಿತವಾದ ರಾಜಕಾರಣಿ ಅಲ್ಲ ಎಂದು ತಿಳಿಸಿದ ಸುನೀಲ್ ಬೋಸ್ ಯುವ ಬ್ರಿಗೇಡ್‌ನ ಅಧ್ಯಕ್ಷ ಕನ್ನಾಯಕನಹಳ್ಳಿ ಕುಮಾರ್ ರಾಮೇಗೌಡ ಕಾಂಗ್ರೆಸ್ ಪಕ್ಷಕ್ಕೆ ಸಿಎಂ ಸಿದ್ದರಾಮಯ್ಯ ಅನಿವಾರ್ಯ ಎಂದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ರಾಜ್ಯದಲ್ಲಿ ಹಿಂದುಳಿದ ವರ್ಗಗಳ, ಅಲ್ಪಸಂಖ್ಯಾತ ಹಾಗೂ ದಲಿತ ಸಮುದಾಯಗಳ ಪ್ರಬಲವಾದ ನಾಯಕ ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಹೇಬರು, ರಾಜ್ಯದಲ್ಲಿ ಅಹಿಂದ ರಾಜಕಾರಣಕ್ಕೆ ಹೊಸ ದಿಕ್ಕನ್ನು ತೋರಿಸಿದ್ದು ಸಿದ್ದರಾಮಯ್ಯ, ಅವರಿಂದಾಗಿ ಕಾಂಗ್ರೆಸ್ ಪಕ್ಷಕ್ಕೆ ಅಹಿಂದ ವರ್ಗದ ಪೂರ್ಣ ಬೆಂಬಲ ಇದೆ ಎಂದರು.

ಭೇರ್ಯದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ



ಕಾರ್ಯಕ್ರಮದಲ್ಲಿ ಕನ್ನಡಾಂಭಿಕೆ ಜೈ ಭುವನೇಶ್ವರಿ ಭಾವಚಿತ್ರಕ್ಕೆ ಗ್ರಾ.ಪಂ.ಅಧ್ಯಕ್ಷೆ ರೇಖಾಮಹದೇವ್ ಮತ್ತು ಪಿಡಿಓ ಮಮತಾ ಪುಷ್ಪಾರ್ಚನೆ ನೆರವೇರಿಸಿದರು.

ಭೇರ್ಯ, ನ.2– ಕರ್ನಾಟಕ ಏಕೀಕರಣಕ್ಕೆ ಅನೇಕ ಮಹನೀಯರು ಶ್ರಮಿಸಿದ್ದಾರೆ. ಕರ್ನಾಟಕ ರಾಜ್ಯವನ್ನಾಗಿ ಘೋಷಣೆ ಮಾಡಿದ ಫಲವಾಗಿ ಇಂದು ಕನ್ನಡ ರಾಜ್ಯೋತ್ಸವವನ್ನು ಆಚರಿಸುತ್ತಿದ್ದೇವೆ ಎಂದು ಭೇರ್ಯ ಗ್ರಾಮ ಪಂಚಾಯತಿ ಪಿಡಿಓ ಮಮತಾ ಹೇಳಿದರು.

ಭೇರ್ಯ ಗ್ರಾಮಪಂಚಾಯತಿ ಕಾರ್ಯಾಲಯದಲ್ಲಿ 70ನೇ ವರ್ಷದ ಕನ್ನಡ ರಾಜ್ಯೋತ್ಸವ ಆಚರಣೆ ಕಾಯಕ್ರಮದಲ್ಲಿ ಜೈ ಭುವನೇಶ್ವರಿ ಭಾವಚಿತ್ರಕ್ಕೆ ಗ್ರಾ.ಪಂ. ಅಧ್ಯಕ್ಷೆ ರೇಖಾ ಮಹದೇವ್ ಅವರೊಂದಿಗೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು.

ಜನನಿ ಹಾಗೂ ಜನ್ಮಭೂಮಿ ಸ್ವರ್ಗಕ್ಕಿಂತ ದೊಡ್ಡದು ಎಂಬಂತೆ ಪ್ರತಿಯೊಬ್ಬರು ನಮ್ಮ ಮಾತೃಭಾಷೆ ಕನ್ನಡದ ಅಭಿಮಾನ ಬೆಳೆಸಿಕೊಳ್ಳಬೇಕು ಎಂದರು.

ಇದಕ್ಕೂ ಮೊದಲು ಗ್ರಾ.ಪಂ.ಅಧ್ಯಕ್ಷೆ ರೇಖಾಮಹದೇವ್ 70ನೇ ಕನ್ನಡ ರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಿದರು.

ಗ್ರಾ.ಪಂ. ಉಪಾಧ್ಯಕ್ಷೆ ಶಾಂತಮ್ಮ, ಸದಸ್ಯೆ ಹರ್ಷವರ್ಧನಿ, ಪಂಚಾಯತಿ ಲೆಕ್ಕ ಸಹಾಯಕಿ ಬಿ.ಎಸ್.ಅಶ್ವಿನಿ, ಬಿಲ್ ಕಲೆಕ್ಟರ್ ಕುಮಾರ್, ಗ್ರಂಥಾಲಯ ಮೇಲ್ವಿಚಾರಕಿ ಅಶೀಯ ಸಿಬ್ಬಂದಿಗಳಾದ ಜಯಂತ್, ಮಹದೇವ, ಸ್ವಾಮೀಗೌಡ, ಚೆನ್ನರಾಜು, ರಮೇಶ್, ಜಬ್ಬರ್ ಬೇಗ್, ನಾಗರಾಜು, ಹರೀಶ್, ಯೋಗಾ, ಲೋಕೇಶ್ ಮೊದಲಾದವರು ಇದ್ದರು

ಮತ್ತೆ ಕೆ.ಪಿ.ನಂಜುಂಡಿ ವಿಶ್ವಕರ್ಮ ಮಹಾ ಸಭೆಯ ಅಧ್ಯಕ್ಷ

ಸಮಾಜದ ಸ್ವಾಮೀಜಿಗಳ ಒತ್ತಾಯಕ್ಕೆ ಮಣಿದು ಈ ನಿರ್ಧಾರ: ಕೆ.ಪಿ.ನಂಜುಂಡಿ

ತಿ.ನರಸೀಪುರ, ನ.2– ವಿಶ್ವಕರ್ಮ ಸಮಾಜದ ಸ್ವಾಮೀಜಿಗಳ ಒತ್ತಾಯದ ಮೇರೆಗೆ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭೆಯ ಮುಂದಿನ 5 ವರ್ಷಗಳ ಅವಧಿವರೆಗೆ ಅಧ್ಯಕ್ಷನಾಗಿ ಕೆಲಸ ನಿರ್ವಹಿಸಿ ಸರ್ಕಾರದಿಂದ ಸಮಾಜಕ್ಕೆ ಸಿಗಬೇಕಾದ ಎಲ್ಲ ಅನುಕೂಲತೆಗಳನ್ನು ಕೊಡಿಸಿ ನಂತರವಷ್ಟೇ ವಿಶ್ರಮಿಸುತ್ತೇನೆ ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭೆಯ ಸಂಸ್ಥಾಪಕ ಅಧ್ಯಕ್ಷ ಕೆಪಿ.ನಂಜುಂಡಿ ವಿಶ್ವಕರ್ಮ ಭರವಸೆ ನೀಡಿದರು.

ತಾಲೂಕಿನ ಬನ್ನೂರು ಪಟ್ಟಣದ ಶ್ರೀ ಕರಿಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಭಾನುವಾರ ನಡೆದ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭೆ ಬನ್ನೂರು ಘಟಕದ ತಾಲೂಕು ಮಟ್ಟದ ಸಂಘಟನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾನು ಅಧ್ಯಕ್ಷನಾಗಿ ನಿರ್ಗಮಿಸಿದ 6 ವರ್ಷಗಳ ಅವಧಿಯಲ್ಲಿ ನಮ್ಮ ವಿಶ್ವಕರ್ಮ ಸಮಾಜ ಪಾತಾಳಕ್ಕಿಳಿದು ಹೋಯಿತು. ಸಮಾಜದ ಸ್ವಾಮೀಜಿಗಳು ಪಾತಾಳಕ್ಕಿಳಿದ ಸಮಾಜಕ್ಕೆ ಮತ್ತೆ ಶಕ್ತಿ ಕೊಡೋಣ. ಹಾಗಾಗಿ ನೇತೃತ್ವ ವಹಿಸಿಕೊಳ್ಳುವಂತೆ ಕೇಳಿದಾಗ ಒಪ್ಪಿಗೆ ಕೊಟ್ಟೆ 25 ವರ್ಷಗಳ ಆಯಸ್ಸನ್ನು ಸಮಾಜಕ್ಕೆ ಕೊಟ್ಟಾಗಿದೆ. ಈಗ ಮತ್ತೆ 5 ವರ್ಷಗಳ ಕಾಲ ಮಾತ್ರವೇ ಅಧ್ಯಕ್ಷನಾಗಿರುತ್ತೇನೆ. ನಂತರ ಯಾವುದೇ ಕಾರಣಕ್ಕೂ ಆ ಸ್ಥಾನದಲ್ಲಿ ಮುಂದುವರಿಯಲಾರೆ ಎಂದರು.



ವಿಶ್ವಕರ್ಮ ಸಮಾಜದ ಸಭೆಯನ್ನು ಕೆ.ಪಿ.ನಂಜುಂಡಿ ವಿಶ್ವಕರ್ಮ ಉದ್ಘಾಟಿಸಿದರು.

ಅಧ್ಯಕ್ಷ ಸ್ಥಾನದ 5 ವರ್ಷಗಳ ಅವಧಿಯಲ್ಲಿ ಸಮಾಜಕ್ಕೆ ಕೊಡಬೇಕಾದ ಎಲ್ಲ ಅನುಕೂಲತೆಗಳನ್ನು ಕೊಡಿಸಲು ಬದ್ದನಾಗಿದ್ದೇನೆ. ಸಮಾಜಕ್ಕೆ ಒಳ್ಳೆಯ ನಾಯಕರನ್ನು ಕೂಡ ಕೊಡಲಿದ್ದೇನೆ, ಸಮಾಜಕ್ಕೆ ಬೇಕಾದ ಮೂಲಭೂತ ಹಕ್ಕುಗಳ ಜೊತೆಗೆ ಸಾಮಾಜಿಕ ನ್ಯಾಯ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.ಪ್ರತಿ ಜಿಲ್ಲೆಯಲ್ಲಿಯೂ ಮಹಾಸಭಾದ ಜಿಲ್ಲಾ ಘಟಕ ತೆರೆದು ಅಲ್ಲಿಗೆ 2 ಎಕರೆ ಜಾಗ ಮಂಜೂರು ಮಾಡಿಸಿ ಸಮುದಾಯ ಭವನ ಸಹ ಕಟ್ಟುತ್ತೇನೆ ಎಂದು ನಂಜುಂಡಿ ಭರವಸೆ ನೀಡಿದರು.

13 ಕೋಟಿ ಜನಸಂಖ್ಯೆ ಇದ್ದೇವೆ....!: ವಿಶ್ವಕರ್ಮ ಸಮಾಜದವರು ದೇಶದಲ್ಲಿ 13 ಕೋಟಿ ಜನಸಂಖ್ಯೆ ಇದ್ದೇವೆ. ಒಟ್ಟಾರೆ ಶೇ8 ರಷ್ಟಿದ್ದರೂ ನಾವು ಏನು ಇಲ್ಲದಂತಿದ್ದೇವೆ ಎಂದರು.

ಚಿಕ್ಕಲ್ಲೂರು ಹಳೇ ಮಠ ನಮ್ಮದೇ....!

ನಮ್ಮ ಸಮಾಜದ ಸಿದ್ದಪ್ಪಾಜಿ ಸ್ವಾಮೀಜಿಗಳು ಚಿಕ್ಕಲ್ಲೂರಿನ ಹಳೇ ಮಠದಲ್ಲಿ ಐಕ್ಯವಾಗಿದ್ದಾರೆ. ನಾವು ಹೊಸ ಮಠದಲ್ಲಿ ಏನೇ ಪೂಜೆ ಮಾಡಿದರು ಲೆಕ್ಕವಿಲ್ಲ. ಹಾಗಾಗಿ ನಮ್ಮ ಸಮಾಜದ ಪವಾಡ ಪುರುಷ ಸಿದ್ದಪ್ಪಾಜಿ ಐಕ್ಯವಾಗಿರುವ ಹಳೇ ಮಠ ನಮ್ಮದೇ ಆಗಿದೆ, ಅಲ್ಲಿ ನಮಗೆ ಹಕ್ಕಿದೆ. ಅದನ್ನು ನಾವು ಕೇಳಬೇಕಿದೆ, ದೇವಸ್ಥಾನ ಯಾರದ್ದೇ ಕಂಟ್ರೋಲ್‌ನಲ್ಲಿಯಾದರೂ ಇರಲಿ ಆದರೆ ಅಲ್ಲಿರುವುದು ನಮ್ಮ ಸಿದ್ದಪ್ಪಾಜಿ, ಆಗಿನ ಕಾಲ ಘಟ್ಟದಲ್ಲಿ ನಾವು ಏನನ್ನೂ ಕೇಳಲು ಹೋಗಲಿಲ್ಲ. ಈಗ ನಾವು ಕೇಳುತ್ತೇವೆ. ಅದು ನಮಗೆ ಬೇಕು ಎಂದು ಕೆ.ಪಿ. ನಂಜುಂಡಿ ಹೇಳಿದರು.

ಬನ್ನೂರು ಬ್ಲಾಕ್ ಕಾಂಗ್ರೆಸ್ ಓಬಿಸಿ ಅಧ್ಯಕ್ಷ ಹಾಗೂ ಪುರಸಭಾ ಸದಸ್ಯ ಎನ್ ನಾಗರಾಜ ಆಚಾರ್ ರವರ ನೇತೃತ್ವದಲ್ಲಿ ಪುರಸಭಾ ಸದಸ್ಯ ಸುಭಾಷ್ ನಗರ ಶಿವಣ್ಣಆರ್ ಶಿವಣ್ಣ, ವಿಶ್ವಕರ್ಮ ಟಿಂಬರ್ಸ್ ನಿಂಗರಾಜು ಪಿರಾಜಪ್ಪ ಮೊಗಣ್ಣ ಚಾರ್, ರಿಷಿ ವಿಶ್ವಕರ್ಮ, ಚೆಲುವರಾಜ್, ಪ್ರಭಾಕರ್, ಎಚ್ಎನ್ ರಾಜು, ರಮೇಶ್, ನರಸಿಂಹಮೂರ್ತಿ, ವಕೀಲ ಶಿವು, ಬೇವಿನಹಳ್ಳಿ ಮಹಾದೇವ, ದಿಲೀಪ್ ಕುಮಾರ್, ಯೋಗ, ನಾಗರಾಜು, ಮಹೇಶ್, ಸಿದ್ದರಾಜು, ಜಯರಾಮು, ಭೈರವ, ದೇವಲಿಂಗ, ಸತೀಶ, ಸಿದ್ದಪ್ಪಾಜಿ, ಚೆಲುವರಾಜು, ಬಸವರಾಜು, ಶಿವಲಿಂಗು, ರವಿ, ಸೋಮಣ್ಣ ಹಾಗೂ ವಿಶ್ವಕರ್ಮ ಜನಾಂಗದ ಯುವ ಮುಖಂಡರು ಯಜಮಾನರು ಭಾಗವಹಿಸಿದ್ದರು.

ಎಸ್‌ಟಿಗೆ ಸೇರಿಸಲು ಕುಲಶಾಸ್ತ್ರ ಅಧ್ಯಯನ....!

ವಿಶ್ವ ಕರ್ಮ ಸಮಾಜವನ್ನು ಪ.ಪಂಗಡಕ್ಕೆ ಸೇರಿಸಬೇಕೆಂಬ ನಿಟ್ಟಿನಲ್ಲಿ ಕುಲಶಾಸ್ತ್ರ ಅಧ್ಯಯನ ಮಾಡಿಸಿದ್ದೇನೆ, ಪ.ಪಂಗಡಕ್ಕೆ ಸೇರಿದ್ದೇ ಆದಲ್ಲಿ ಮಕ್ಕಳಿಗೆ ಉದ್ಯೋಗ ಸಿಗಲಿದೆ.ಸಾಮಾಜಿಕ ನ್ಯಾಯ ಸೇರಿದಂತೆ ಗ್ರಾಮಾಂತರ ಪ್ರದೇಶಗಳಲ್ಲಿ ಕುಲುಮೆ ಕೆಲಸ ಮಾಡುವ ಹೆಣ್ಣು ಮಕ್ಕಳು ವಿದ್ಯಾವಂತರಾಗುತ್ತಾರೆ.ಸರ್ಕಾರದ ಸವಲತ್ತುಗಳು ನಿಮ್ಮ ಕಾಲ ಬಳಿ ಬಂದು ಬೀಳಲಿವೆ. –ಕೆ.ಪಿ.ನಂಜುಂಡಿ

ರಸ್ತೆ ಅಪಘಾತದಲ್ಲಿ ಪತ್ರಕರ್ತನ ಪುತ್ರ ಸಾವು



ಬೆಟ್ಟದಪುರ: ಪಿರಿಯಾಪಟ್ಟಣದ ಪತ್ರಕರ್ತ ಎನ್.ಪಿ.ಹರೀಶ್ ಅವರ ಪುತ್ರ ರಂಜನ್(20) ಹಾಸನ ಜಿಲ್ಲೆ ರಾಮನಾಥಪುರದಲ್ಲಿ ಶನಿವಾರ ಸಂಜೆ ನಡೆದ ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಹಾಸನದ ಸಾರ್ವಜನಿಕ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಂತರ ಅಂತ್ಯಕ್ರಿಯೆ ಸ್ವಗ್ರಾಮ ಪಿರಿಯಾಪಟ್ಟಣ ತಾಲೂಕಿನ ನಂದಿಪುರದಲ್ಲಿ ನಡೆಸಲಾಯಿತು. ರಂಜನ್ ಅವರು ತಂದೆ, ತಾಯಿ, ಸಹೋದರ ಸೇರಿದಂತೆ ಅಪಾರ ಬಂದು ಬಳಗವನ್ನು ಆಗಲಿದ್ದಾರೆ.

ನಾಗರಾಜ ನಿಧನ

ಪಿರಿಯಾಪಟ್ಟಣ: ತಾಲೂಕಿನ ಬೆಟ್ಟದಪುರದ ನಿವಾಸಿ ಎಚ್‌ಪಿ ಪೆಟ್ರೋಲ್ ಬಂಕ್ ಮಾಲೀಕರಾದ ನಾಗರಾಜ ಶೆಟ್ಟಿ(63) ಶುಕ್ರವಾರ ಸಂಜೆ ನಿಧನರಾದರು. ಅಂತ್ಯಕ್ರಿಯೆ ಶನಿವಾರ ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು. ಮೃತರು ಸಹೋದರ ಸಹೋದರಿಯರು ಪತ್ನಿ, ಪುತ್ರ ಮತ್ತು ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಇವರ ನಿಧನಕ್ಕೆ ಹಲವಾರು ಮಠಾಧೀಶರು ತಾಲೂಕಿನ ವಿವಿಧ ರಾಜಕೀಯ ಗಣ್ಯರು ತಾಲೂಕು ವೀರಶೈವ ಲಿಂಗಾಯತ ಸಮಾಜ ಹಾಗೂ ಗ್ರಾಮಸ್ಥರು ಸಂತಾಪ ಸೂಚಿಸಿದ್ದಾರೆ.



ಮಂಜುನಾಥ್



ಬೆಟ್ಟದಪುರ: ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪೊಲೀಸ್ ಪೇದೆ ಮಂಜುನಾಥ್ (36) ಶುಕ್ರವಾರ ಸಂಜೆ ಅನಾರೋಗ್ಯದಿಂದ ನಿಧನರಾಗಿದ್ದಾರೆ. ದಿವಂಗತರು ಪತ್ನಿ ಹಾಗೂ ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಆಗಲಿದ್ದಾರೆ. ಇವರ ಅಂತ್ಯಕ್ರಿಯೆ ಹುಣಸೂರು ತಾಲೂಕಿನ ಹುಂಡಿ ಮಾಳ ಗ್ರಾಮದಲ್ಲಿ ಇಂದು ನೆರವೇರಿಸಲಾಯಿತು.

ಎರಡು ದಿನ ಸತತ ಕಾರ್ಯಾಚರಣೆ ನಡೆಸಿದರೂ ಸಿಗದ ಹುಲಿ

ಮೈಸೂರು, ನ2(ಎಂಟಿವೈ)– ಸರಗೂರು ತಾಲೂಕಿನ ಕಾಡಂಚಿನ ಗ್ರಾಮಗಳಲ್ಲಿ ಉಪಟಳ ನೀಡುತ್ತಿರುವ ಹುಲಿ ಸೆರೆಗೆ 9 ತಂಡಗಳಲ್ಲಿ 150ಕ್ಕೂ ಹೆಚ್ಚು ಮಂದಿ ಕೂಂಬಿಂಗ್ ಕಾರ್ಯಾಚರಣೆಯಲ್ಲಿ ತೊಡಗಿದ್ದರೂ, ಭಾನುವಾರ ದಿನವಿಡೀ ಹುಲಿ ಸುಳಿವು ಸಿಗಲಿಲ್ಲ.

ಸರಗೂರು ತಾಲೂಕಿನ ಬಡಗಲಪುರ, ಮುಳ್ಳೂರು, ಬೆಣ್ಣೆಗೆರೆ, ಕೂಡಗಿ, ಕುರ್ಣೆಗಾಲ, ನಂಜನಗೂಡು ತಾಲೂಕಿನ ಅಂಜನಾಪುರ, ಈರೇಗೌಡನಹುಂಡಿ ಸೇರಿದಂತೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಹೆಡಿಯಾಲ, ನುಗು ವನ್ಯಜೀವಿ ವಲಯದ ವಿವಿಧ ಕಾಡಂಚಿನ ಗ್ರಾಮಗಳ ಪಾಳು ಬಿದ್ದ ಹೊಲದಲ್ಲಿ ಕಾಣಿಸಿಕೊಳ್ಳುತ್ತಿರುವ ಹುಲಿಗಳ ಆಕಸ್ಮಿಕ ದಾಳಿಯಿಂದ ಈಗಾಗಲೇ ಇಬ್ಬರು ಮೃತಪಟ್ಟಿದ್ದು, ಒಬ್ಬರು ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಉಪಟಳ ನೀಡುತ್ತಿರುವ ಹುಲಿಗಳ ಸೆರೆಗೆ ವ್ಯಾಪಕ ಒತ್ತಾಯ ಕೇಳಿ ಬಂದ ಹಿನ್ನೆಲೆಯಲ್ಲಿ ಹುಲಿ ಓಡಾಟದ ಸ್ಥಳದಲ್ಲಿ ಬಿರುಸಿನಿಂದ ಕೂಂಬಿಂಗ್ ಕಾರ್ಯಾಚರಣೆ ನಡೆಯುತ್ತಿದೆ.


ಕಾರ್ಯಾಚರಣೆಯಲ್ಲಿ ತೊಡಗಿರುವ ಅರಣ್ಯ ಸಿಬ್ಬಂದಿಗಳು

ಕಂಡು ಕಣ್ಮರೆಯಾದ ಹುಲಿ: ಶನಿವಾರ ಮತ್ತು ಭಾನುವಾರ ದಿನವಿಡೀ ಕೂಂಬಿಂಗ್ ನಡೆಸಿದರೂ, ಹುಲಿಯನ್ನು ಸೆರೆ ಹಿಡಿಯಲು ಸಾಧ್ಯವಾಗಿಲ್ಲ. ಶನಿವಾರ ಹಳ್ಳವೊಂದರ ಪೊದೆಯಲ್ಲಿ ಹುಲಿ ಅಡಗಿ ಕುಳಿತಿರುವ ಮಾಹಿತಿ ಬಂತಾದರೂ, ಕೂಂಬಿಂಗ್ ತಂಡ ಅರವಳಿಕೆ ಮದ್ದು ನೀಡಿ ಸೆರೆ ಹಿಡಿಯಲು ಸಜ್ಜಾಗುತ್ತಿದ್ದಂತೆ ಹಳ್ಳದ ಮೂಲಕವೇ ತಪ್ಪಿಸಿಕೊಂಡು ಪರಾರಿಯಾಗಿದೆ.

ಭಾನುವಾರ ಬೆಳಗ್ಗೆಯೇ ಕಾರ್ಯಾಚರಣೆ ಆರಂಭಿಸಿದ ಅರಣ್ಯ ಸಿಬ್ಬಂದಿಗಳಿಗೆ ಮಧ್ಯಾಹ್ನದವರೆಗೂ ಹುಲಿ ಪತ್ತೆಯಾಗಲಿಲ್ಲ. ಮಧ್ಯಾಹ್ನ ಪಾಳು ಬಿದ್ದ ಜಮೀನೊಂದರಲ್ಲಿ ಹುಲಿ ಹೆಜ್ಜೆ ಗುರುತು ಪತ್ತೆಯಾಗಿತ್ತು. ಕೂಡಲೇ ಕೂಂಬಿಂಗ್ ಕಾರ್ಯಾಚರಣೆ ಆರಂಭಿಸಿದ ಅರಣ್ಯ ಸಿಬ್ಬಂದಿಗಳಿಗೆ ಹುಲಿ ಸಿಗಲಿಲ್ಲ. ಆದರೂ ಹದ್ದಿನ ಕಣ್ಣಿಟ್ಟಿರುವ ಅರಣ್ಯ ಸಿಬ್ಬಂದಿ, ಹುಲಿ ಸೆರೆಗೆ ರಾತ್ರಿಯಿಡೀ ಪಹರೆ ಕಾಯುವ ಮೂಲಕ ಗ್ರಾಮಸ್ಥರಲ್ಲಿ ಇರುವ ಆತಂಕ ನಿವಾರಣೆಗೆ ಕ್ರಮ ಕೈಗೊಂಡಿದ್ದಾರೆ.

9 ತಂಡದಲ್ಲಿ 150 ಮಂದಿ: ಹುಲಿ ಸೆರೆಗೆ 9 ತಂಡದಲ್ಲಿ 150ಕ್ಕೂ ಹೆಚ್ಚು ಮಂದಿಯನ್ನು ನಿಯೋಜಿಸಿದ್ದಾರೆ. ಕೂಂಬಿಂಗ್ ಕಾರ್ಯಾಚರಣೆಯಲ್ಲಿ ಮೈಸೂರು ವನ್ಯಜೀವಿ ವಿಭಾಗ, ಮೈಸೂರು ವಿಭಾಗ, ಮಂಡ್ಯ, ಮದ್ದೂರು, ಕೆ.ಆರ್.ನಗರದಿಂದ 2 ತಂಡ, ಪಿರಿಯಾಪಟ್ಟಣ, ಮಳವಳ್ಳಿ ಸಿಬ್ಬಂದಿಗಳ ತಂಡ ಸೇರಿದಂತೆ ಒಟ್ಟು 9 ತಂಡಗಳೊಂದಿಗೆ ಬಂಡಿಪುರ ಹುಲಿ ಸಂರಕ್ಷಿತ ಪ್ರದೇಶದ ಸಿಬ್ಬಂದಿ ಹಾಗೂ ಇಟಿಎಫ್, ಎಲ್‌ಟಿಎಫ್ ಸಿಬ್ಬಂದಿ ಸೇರಿದಂತೆ 150 ಮಂದಿ ಹುಲಿ ಪತ್ತೆ ಹಚ್ಚುವ ಕೂಂಬಿಂಗ್ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಳ್ಳಲಾಗಿದೆ.

46 ಕ್ಯಾಮರಾ, 10 ಲೈವ್ ಕ್ಯಾಮರಾ: 9 ತಂಡದ ಕೂಂಬಿಂಗ್ ಕಾರ್ಯಾಚರಣೆ ಸದಸ್ಯರೊಂದಿಗೆ ವಿವಿಧೆಡೆ 46 ಕ್ಯಾಮರಾ ಟ್ರ್ಯಾಪ್ ಅಳವಡಿಸಲಾಗಿದೆ. ಅಲ್ಲದೇ 10 ಸ್ಥಳಗಳಲ್ಲಿ ಲೈವ್ ಕ್ಯಾಮರಾ ಅಳವಡಿಸಿ, ದಿನದ 24 ಗಂಟೆಯೂ ಕ್ಯಾಮರಾದಲ್ಲಿ ಸೆರೆಯಾಗುವ ದೃಶ್ಯವನ್ನು ಪರಿಶೀಲಿಸಲಾಗುತ್ತಿದೆ. ಇದರೊಂದಿಗೆ ಥರ್ಮಲ್ ಡ್ರೋನ್ ಬಳಸಲಾಗುತ್ತಿದ್ದು, ಹುಲಿ ಸೇರಿದಂತೆ ಯಾವುದೇ ಪ್ರಾಣಿಗಳ ಚಲನ–ವಲನ ಗುರುತಿಸುವಿಕೆಯ ಕಾರ್ಯಾಚರಣೆಯನ್ನು ಬಿರುಸಾಗಿ ನಡೆಸಲಾಗುತ್ತಿದೆ.

ಮತ್ತೊಂದು ಆನೆ ಸೇರ್ಪಡೆ: ಕಳೆದ ಒಂದು ವಾರದಿಂದ 3 ಆನೆಗಳನ್ನು ಬಳಸಿ ಕೂಂಬಿಂಗ್ ಕಾರ್ಯಾಚರಣೆ ನಡೆಸಲಾಗುತ್ತಿತ್ತು. ನಿನ್ನೆಯಿಂದ ಮತ್ತೊಂದು ಆನೆಯನ್ನು ಕರೆಸಲಾಗಿದ್ದು, ಒಟ್ಟು 4 ಆನೆಗಳನ್ನು ಬಳಸಿಕೊಂಡು ಕೂಂಬಿಂಗ್ ಕಾರ್ಯಾಚರಣೆ ಮುಂದುವರೆಸಲಾಗಿದೆ. ಮಹೇಂದ್ರ, ಭೀಮಾ, ರೋಹಿತ ಹಾಗೂ ಕೆಬ್ಬೆ ಆನೆಯನ್ನು ಕೂಂಬಿಂಗ್ ಕಾರ್ಯಾಚರಣೆಗೆ ಬಳಸಿಕೊಳ್ಳಲಾಗಿದೆ.

ಜಾಗೃತಿ: ಕೂಂಬಿಂಗ್ ಕಾರ್ಯಾಚರಣೆ ಆರಂಭಿಸುವುದನ್ನು ಅರಣ್ಯ ಇಲಾಖೆ ಕಾಡಂಚಿನ ಗ್ರಾಮಗಳಲ್ಲಿ ಧ್ವನಿವರ್ಧಕದ ಮೂಲಕ ಕೂಂಬಿಂಗ್ ಕಾರ್ಯಾಚರಣೆ ಬಗ್ಗೆ ಮಾಹಿತಿ ನೀಡಿ, ಸಹಕಾರ ನೀಡುವಂತೆ ಕೋರಲಾಯಿತು. ಅಲ್ಲದೆ ಕೂಂಬಿಂಗ್ ಕಾರ್ಯಾಚರಣೆ ನಡೆಸುವ ಸ್ಥಳಕ್ಕೆ ಗ್ರಾಮಸ್ಥರು ಬರದಂತೆ ಸೂಚನೆ ನೀಡುವ ಮೂಲಕ ಜಾಗೃತಿ ಮೂಡಿಸಲಾಯಿತು.

ಬೀಡು ಬಿಟ್ಟ ಅಧಿಕಾರಿಗಳು: ಕೂಂಬಿಂಗ್ ಕಾರ್ಯಾಚರಣೆಯ ವೇಳೆ ಬಂಡಿಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಎಸ್.ಪ್ರಭಾಕರನ್, ಹೆಡಿಯಾಲ ವಿಭಾಗದ ಎಸಿಎಫ್ ಡಿ.ಪರಮೇಶ್ ಬೀಡು ಬಿಟ್ಟಿದ್ದು, ನುಗು ಆರ್‌ಎಫ್‌ಓ ಎಸ್.ವಿವೇಕ್, ಕಲ್ಕೆರೆ ಆರ್‌ಎಫ್‌ಓ ರಾಜೇಶ್, ಗುಂಡ್ರೆ ಆರ್‌ಎಫ್‌ಓ ಅಮೃತೇಶ್, ಮಳೆಯೂರು ಆರ್‌ಎಫ್‌ಓ ಅಮೃತ ಮಾಯಪ್ಪ, ಹೆಡಿಯಾಲ ಆರ್‌ಎಫ್‌ಓ ಮುನಿರಾಜು ಸೇರಿದಂತೆ ಇನ್ನಿತರರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಹುಲಿ ಸೆರೆ ಹಿಡಿಯಲು ತಜ್ಞರ ಅಭಿಪ್ರಾಯ ಪಡೆದು ಕಾರ್ಯಾಚರಣೆಯಲ್ಲಿ ತಲ್ಲೀನರಾಗಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಶಾಸ್ತ್ರಿ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಏಕ್ ದಿವಾನೆ ಕಿ ದಿವಾನಿಯತ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ರಾಜಕಮಲ್	
ಆರ್ಯನ್ (ತ) + ಬೈಸನ್ (ತ)	2+2 ಪ್ರದರ್ಶನಗಳು
ಸಂಗಂ	
ಬ್ರಾಟ್ (ಕ)	4 ಪ್ರದರ್ಶನಗಳು
ಲಿಡೋ	
ಕೋಣ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಮಂಡ್ಯ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕಾಂತಾರ ಚಾಪ್ಟರ್ 1(ಕ): ಮ.1.00ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ,
	ಡ್ಯೂಡ್ (ತ): ಬೆ.10.10ಕ್ಕೆ, ಸಂ.4.20ಕ್ಕೆ
ಸ್ಕ್ರೀನ್ 2	ಬೈಸನ್ (ತ): ಬೆ.10.00ಕ್ಕೆ, ಸಂಜೆ 4.15ಕ್ಕೆ, ಡೀಸೆಲ್ (ತ): ಮ.1.20ಕ್ಕೆ, ತೆಲುಸು ಕದ (ತೆ): ರಾ.7.35ಕ್ಕೆ. ದಿ ಪೆಟ್ ಡಿಟೆಕ್ಟಿವ್ (ಇ): ರಾ.10.20ಕ್ಕೆ
ಸ್ಕ್ರೀನ್ 3	ಡ್ಯೂಡ್ (ತ): ರಾ.7.20ಕ್ಕೆ, ರಾ. 10.15ಕ್ಕೆ, ಕಾಂತಾರ ಚಾಪ್ಟರ್ 1(ಕ): ಸಂ. 4.00ಕ್ಕೆ, ಪ್ರೇಮಿಗಳ ಗಮನಕ್ಕೆ (ಕ): ಬೆ.10.25ಕ್ಕೆ, ಟೈಮ್ ಪಾಸ್ (ಕ): ಮ.1.15ಕ್ಕೆ
ಸ್ಕ್ರೀನ್ 4	ಕಾಂತಾರ ಚಾಪ್ಟರ್ 1(ಕ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7.05ಕ್ಕೆ, ರಾ.10.30ಕ್ಕೆ.

ನೆಕ್ಸಸ್ ಮಾಲ್

- **ಕಾಂತಾರ ಚಾಪ್ಟರ್ 1(ಕ) :** ಬೆ: 8.05ಕ್ಕೆ, 9.05ಕ್ಕೆ, 10.25ಕ್ಕೆ, 11.15ಕ್ಕೆ, ಮ: 12.15ಕ್ಕೆ, 2.40ಕ್ಕೆ, 3.40ಕ್ಕೆ, ಸಂಜೆ 6.05ಕ್ಕೆ, 6.55ಕ್ಕೆ, ರಾತ್ರಿ: 7.05ಕ್ಕೆ, 9.30ಕ್ಕೆ, 9.45ಕ್ಕೆ, 10ಕ್ಕೆ, 10.30ಕ್ಕೆ.
- **ಕಾಂತಾರ ಚಾಪ್ಟರ್ 1(ಹಿ):** ಬೆ: 9.10ಕ್ಕೆ, ಮ.3.10ಕ್ಕೆ.
- **ಡ್ಯೂಡ್ (ತ):** ಬೆ: 10ಕ್ಕೆ, ಸಂ: 4ಕ್ಕೆ, ರಾ: 10.20ಕ್ಕೆ
- **ಟೈಮ್ ಪಾಸ್ (ಕ):** ಬೆ: 11.15ಕ್ಕೆ
- **ತೆಲುಸು ಕಾದಾ (ತೆ):** ಮ: 12.20ಕ್ಕೆ, ರಾತ್ರಿ 7.20ಕ್ಕೆ
- **ಬೈಸನ್ ಕಾಳಮಂದಾನ್ (ತ):** ಬೆ: ಮ: 12.40ಕ್ಕೆ, ಸಂಜೆ 6.35ಕ್ಕೆ
- **ಡೀಸೆಲ್ (ತ):** ಮ: 1.40ಕ್ಕೆ
- **ಮಹಾಯೋಧ ರಾಮ (ಹಿ):** ಮ: 1.50ಕ್ಕೆ
- **ಕೆ–ರ್‍ಯಾಂಪ್ (ತೆ):** ಸಂ: 4.15ಕ್ಕೆ, ರಾ: 10.10ಕ್ಕೆ
- **ಮಿತ್ರ ಮಂಡಳಿ (ತೆ):** ಸಂ: 4.40ಕ್ಕೆ
- **ಗುಡ್ ಫಾರ್ಚ್ಯೂನ್ (ಇ):** ಸಂ: 7.30ಕ್ಕೆ


ಗರುಡ ಮಾಲ್

- **ಕಾಂತಾರ ಚಾಪ್ಟರ್ 1(ಕ) :** ಬೆ: 8.20ಕ್ಕೆ, 9.05ಕ್ಕೆ, 9.40ಕ್ಕೆ, 11.30ಕ್ಕೆ, ಮ: 12.15ಕ್ಕೆ, 2.55ಕ್ಕೆ, 3.40ಕ್ಕೆ, ಸಂ: 6.20ಕ್ಕೆ, 7.05ಕ್ಕೆ, ರಾ: 9.45ಕ್ಕೆ, 10.30ಕ್ಕೆ
- **ಪ್ರೇಮಿಗಳ ಗಮನಕ್ಕೆ (ಕ):** ಬೆ: 11.05ಕ್ಕೆ
- **ಡ್ಯೂಡ್ (ತ):** ಮ: 12.50ಕ್ಕೆ, ರಾ: 7.10ಕ್ಕೆ
- **ಟೈಮ್ ಪಾಸ್ (ಕ):** ಮ: 1.50ಕ್ಕೆ
- **ಬೈಸನ್ ಕಾಳಮಂದಾನ್ (ತ):** ಮ: 3.40ಕ್ಕೆ, ರಾ.10.05ಕ್ಕೆ
- **ತೆಲುಸು ಕಾದಾ (ತೆ):** ಮ: 4.30ಕ್ಕೆ
- **ಕೆ–ರ್‍ಯಾಂಪ್ (ತೆ):** ರಾ: 7.20ಕ್ಕೆ
- **ಮಿತ್ರ ಮಂಡಳಿ (ತೆ):** ರಾ: 10.15ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

‘ನಿಜಮಹಾತ್ಮ ಬಾಬಾಸಾಹೇಬ’ ನಾಟಕಕ್ಕೆ ಅಭೂತಪೂರ್ವ ಬೆಂಬಲ

ನಾಟಕ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ಹರ್ಷ



ಮೈಸೂರು,ನ.2(ಪಿಎಂ)– ರಂಗಭೂಮಿ ಟ್ರಸ್ಟ್ ಕೊಡಗು ಪ್ರಸ್ತುತಿಯ ‘ನಿಜಮಹಾತ್ಮ ಬಾಬಾಸಾಹೇಬ’ ನಾಟಕ 10ನೇ ಪ್ರದರ್ಶನದತ್ತ ಸಾಗುತ್ತಿದ್ದು, ಪ್ರೇಕ್ಷಕರಿಂದ ಅಭೂತಪೂರ್ವ ಬೆಂಬಲ ದೊರಕುತ್ತಿದೆ ಎಂದು ಸದರಿ ನಾಟಕದ ನಿರ್ದೇಶಕರೂ ಆದ ಮೈಸೂರು ರಂಗಾಯಣದ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ಹರ್ಷ ವ್ಯಕ್ತಪಡಿಸಿದ್ದಾರೆ.

ನಾಟಕದ ರಚನೆ, ನಿರ್ದೇಶನ ಮತ್ತು ಕಲಾವಿದರ ಅಭಿನಯವನ್ನು ಪ್ರೇಕ್ಷಕರು ಮುಕ್ತಕಂಠದಿಂದ ಪ್ರಶಂಸಿಸಿದ್ದಾರೆ. 2 ಗಂಟೆ 20 ನಿಮಿಷ ಅವಧಿಯ ಈ ನಾಟಕವನ್ನು ಪ್ರೇಕ್ಷಕರು ತಲ್ಲೀನತೆಯಿಂದ ವೀಕ್ಷಿಸುತ್ತಿರುವುದು ವಿಶೇಷ. ಅಂಬೇಡ್ಕರ್ ಪಾತ್ರದಲ್ಲಿ ಲಿಖಿತ್, ಅಂಬೇಡ್ಕರ್ ಪತ್ನಿ ರಮಾದೇವಿ ಪಾತ್ರದಲ್ಲಿ ಅನಿತಾ ಕಾರ್ಯಪ್ಪ, ಗಾಂಧಿಯಾಗಿ ಮನೋಜ್, ಸಾವರ್ಕರ್ ಪಾತ್ರದಲ್ಲಿ ಶ್ರೇಯಸ್ ಅಮೋಘವಾಗಿ ನಟಿಸಿದ್ದಾರೆ.

ಉಳಿದ ಪಾತ್ರಗಳಲ್ಲಿ ಕಲಾವಿದರು ನಾಟಕಕ್ಕೆ ಜೀವ ತುಂಬುವುದರಲ್ಲಿ ಯಶಸ್ವಿಯಾಗಿದ್ದಾರೆ. ಪ್ರತಿಯೊಬ್ಬರು ಒಮ್ಮೆ ನೋಡಬೇಕಾದ ಅದ್ಭುತ ನಾಟಕ ಇದು. ಅಂಬೇಡ್ಕರ್ ವಿಚಾರದಲ್ಲಿ ಹುದುಗಿಟ್ಟ ಅನೇಕ ಸತ್ಯಸಂಗತಿಗಳ ಸ್ಫೋಟವು ಈ ನಾಟಕದಲ್ಲಿದೆ ಎಂಬುದು ಪ್ರೇಕ್ಷಕರ ಅಭಿಪ್ರಾಯವಾಗಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದ್ದಾರೆ.

ರಾಜ್ಯಮಟ್ಟಕ್ಕೆ ಆಯ್ಕೆ



ಮೈಸೂರಿನ ವಿದ್ಯಾವರ್ಧಕ ಶಾಲಾ ವಿದ್ಯಾರ್ಥಿಗಳು, ಶಾಲಾ ಶಿಕ್ಷಣ ಇಲಾಖೆಯು ನಗರದ ಕಾವೇರಿ ಶಾಲೆಯಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಟೇಬಲ್ ಟೆನಿಸ್ ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ. ಸ್ಪರ್ಧೆಯಲ್ಲಿ ಅನಿಷಾ ಆರ್ ಐಯ್ಯರ್ (ರಮೇಶ್ ಮತ್ತು ವಾಣಿಶ್ರೀ ದಂಪತಿ ಪುತ್ರಿ) ಅವರನ್ನೊಳಗೊಂಡ 17 ವರ್ಷದೊಳಗಿನ ಬಾಲಕಿಯರ ತಂಡವು ತಮ್ಮ ವಿಭಾಗದಲ್ಲಿ ಪ್ರಥಮ ಸ್ಥಾನ ಗಳಿಸಿ ಗಮನಾರ್ಹ ಈ ಸಾಧನೆಯೊಂದಿಗೆ ರಾಜ್ಯ ಮಟ್ಟದ ಟೇಬಲ್ ಟೆನಿಸ್ ಸ್ಪರ್ಧೆಯಲ್ಲಿ ಮೈಸೂರು ಜಿಲ್ಲೆಯನ್ನು ಪ್ರತಿನಿಧಿಸಲು ಅರ್ಹರಾಗಿರುತ್ತಾರೆ.

ಸಮುದಾಯ ಮೈಸೂರು ರಂಗೋತ್ಸವಕ್ಕೆ ತೆರೆ

ಅಂಬೇಡ್ಕರ್ ವಿಚಾರಧಾರೆ ಅರ್ಥೈಸಿಕೊಳ್ಳದಿದ್ದರೆ ಭಾರತಕ್ಕಿಲ್ಲ ಉತ್ತಮ ಭವಿಷ್ಯ: ರತಿರಾವ್ ಅಭಿಮತ


ಮೈಸೂರಿನ ಕಲಾಮಂದಿರದ ಕಿರುರಂಗ ಮಂದಿರ ಆವರಣದಲ್ಲಿ ಭಾನುವಾರ ರಂಗಕರ್ಮಿಗಳನ್ನು ಸನ್ಮಾನಿಸಲಾಯಿತು.

ಮೈಸೂರು,ನ.2(ಪಿಎಂ)– ಡಾ.ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆ ಅರ್ಥೈಸಿಕೊಳ್ಳದಿದ್ದರೆ ಭಾರತೀಯ ಸಮಾಜಕ್ಕೆ ಉತ್ತಮ ಭವಿಷ್ಯವಿಲ್ಲ ಎಂದು ಅಖಿಲ ಭಾರತ ಪ್ರಗತಿಪರ ಮಹಿಳಾ ವೇದಿಕೆ ಅಧ್ಯಕ್ಷೆ ಹಾಗೂ ಪ್ರಗತಿಪರ ಚಿಂತಕಿ ರತಿರಾವ್ ಅಭಿಪ್ರಾಯಪಟ್ಟರು.

ಮೈಸೂರಿನ ಕಲಾಮಂದಿರದ ಕಿರುರಂಗ ಮಂದಿರ ಆವರಣದಲ್ಲಿ ಭಾನುವಾರ ಸಂಪನ್ನಗೊಂಡ ಸಮುದಾಯ ಕರ್ನಾಟಕ ಸಂಘಟನೆಯ ‘ಮನುಷ್ಯತ್ವದೆಡೆಗೆ ಸಮುದಾಯ–50’ ಶೀರ್ಷಿಕೆಯ ‘ಸಮುದಾಯ ಮೈಸೂರು ರಂಗೋತ್ಸವ’ದ ಸಮಾರೋಪ ಸಮಾರಂಭದಲ್ಲಿ ಅವರು ಸಮಾರೋಪ ನುಡಿಗಳನ್ನಾಡಿದರು.

ಬಂಡವಾಳಶಾಹಿ ವ್ಯವಸ್ಥೆಯ ಮುಖ್ಯ ಉದ್ದೇಶವೇ ಲಾಭ. ಈ ವ್ಯವಸ್ಥೆ ಪ್ರಸ್ತುತ ತೀವ್ರವಾಗಿ ಬೆಳೆಯುವ ಮೂಲಕ ಬಡವರ ಶೋಷಣೆಗೆ ಕಾರಣವಾಗುತ್ತಿದೆ. ಜೊತೆಗೆ ದಲಿತರು, ಮಹಿಳೆಯರು ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ಪ್ರಮಾಣವೂ ವ್ಯಾಪಕಗೊಳ್ಳುತ್ತಿದೆ. ಇವುಗಳನ್ನು ಎದುರಿಸಲು ಕಾರ್ಲ್ ಮಾರ್ಕ್ಸ್, ಲೆನಿನ್ ತತ್ವಗಳ ಜೊತೆಗೆ ಬುದ್ಧ, ಬಸವ, ಅಂಬೇಡ್ಕರ್ ತತ್ವದಡಿಯ ಹೋರಾಟ ಅಗತ್ಯ ಎಂದು ತಿಳಿಸಿದರು.

ಖಾಸಗೀಕರಣ ವ್ಯಾಪಕವಾಗುತ್ತಿದ್ದು, ಎಲ್ಲವೂ ಲಾಭ ಕೇಂದ್ರೀತವಾಗುತ್ತಿದೆ. ಬಡವರು ಬಡವರಾಗಿಯೇ ಉಳಿಯುವಂತಾಗಿದೆ. ಶೇ.1ರಷ್ಟೂ ಇಲ್ಲದ ಬಂಡವಾಳಶಾಹಿಗಳು, ಶೇ.90ಕ್ಕಿಂತಲೂ ಹೆಚ್ಚಿರುವ ದೇಶದ ಬಡವರು, ಜನಸಾಮಾನ್ಯರನ್ನು ನಿಯಂತ್ರಿಸುವ ಮೂಲಕ ಶೋಷಣೆ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಸ್ವಾತಂತ್ರ್ಯನಂತರ ದೇಶದಲ್ಲಿ ಸಮಾಜವಾದಿ ಆರ್ಥಿಕತೆಯಾಗಿತ್ತು. ಶೇ.52ರಷ್ಟು ಸಾರ್ವಜನಿಕ ಉದ್ಯಮಗಳಿದ್ದವು. ಶೇ.48ರಷ್ಟು ಖಾಸಗಿ ಉದ್ದಿಮೆಗಳಿದ್ದ ಹಿನ್ನೆಲೆಯಲ್ಲಿ ಯಾವುದೇ ಸಮಸ್ಯೆ ಯಾಗದು ಎಂದುಕೊಂಡಿದ್ದೆವು. ಆದರೆ ಇಂದು ಸರ್ಕಾರಿ ಶಾಲೆಗಳು ಮುಚ್ಚುತ್ತಿದ್ದು, ಖಾಸಗೀಕರಣ ವ್ಯಾಪಕವಾಗಿ ಬೆಳೆಯುತ್ತಿದೆ. ಲಾಭದಾಯಕವಲ್ಲವೆಂದು ಎಲ್ಲವನ್ನೂ ಖಾಸಗೀಕರಣ ಮಾಡಲಾಗುತ್ತಿದೆ. ಸರ್ಕಾರಿ ನೌಕರಿಗಳು ಇಲ್ಲವಾಗುತ್ತಿವೆ. ಬಡವರು ಬದುಕು ಚಿಂತಾಜನಕವಾಗಿದೆ. ಇಂತಹ ಸಮಸ್ಯೆ ಹಾಗೂ ಸವಾಲುಗಳನ್ನು ಎದುರಿಸಲು ಅಂಬೇಡ್ಕರ್ ಮಾರ್ಗ ಅಗತ್ಯವಾಗಿದೆ ಎಂದು ಹೇಳಿದರು.

ಇದೇ ವೇಳೆ ರಂಗಕರ್ಮಿಗಳಾದ ಪ್ರಕಾಶ್ ಶಣೈ, ಪ್ರೊ.ಎಸ್.ಆರ್.ರಮೇಶ್, ನಂದಾ ಹಳೆಮನೆ ಅವರನ್ನು ಸನ್ಮಾನಿಸಲಾಯಿತು. ಜೊತೆಗೆ ಪ್ರಸಕ್ತ ಸಾಲಿನ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ರಂಗಕರ್ಮಿ ಮೈಮ್ ರಮೇಶ್ ಅವರನ್ನು ಅಭಿನಂದಿಸಲಾಯಿತು.

ಪ್ರಗತಿಪರ ಚಿಂತಕ ಪ್ರೊ.ಕಾಳೇಗೌಡ ನಾಗವಾರ, ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಸಾಮಾಜಿಕ ಹೋರಾಟಗಾರ ಅಹಿಂದ ಜವರಪ್ಪ, ಸುಶೀಲ ಬಸು, ಸಮುದಾಯ ಕರ್ನಾಟಕದ ಅಧ್ಯಕ್ಷ ಹೆಚ್. ಜನಾರ್ಧನ್ (ಜನ್ನಿ), ಪ್ರಧಾನ ಕಾರ್ಯದರ್ಶಿ ಮನೋಜ್ ವಾಮಂಜೂರು ವೇದಿಕೆಯಲ್ಲಿದ್ದರು. ಇದಕ್ಕೂ ಮುನ್ನ ಮಹಾಲಿಂಗು, ಅಮ್ಮರಾಮಚಂದ್ರ, ಭುವತಾರಿಣಿ, ರಮೇಶ್ ತಾಯೂರು ಹಾಗೂ ತಂಡದವರು ‘ಜನಾಶಯ ಗೀತ ಗಾಯನ’ ನಡೆಸಿಕೊಟ್ಟರು. ಅಂತಿಮವಾಗಿ ಪಿ.ಲಂಕೇಶ್ ಅವರ ‘ಕಲ್ಲು ಕರಗುವ ಸಮಯ’ ಕಥೆ ಆಧರಿತ ನಾಟಕವು ಕೆ.ಆರ್.ಸುಮತಿ ನಿರ್ದೇಶನದಲ್ಲಿ ‘ಜನಮನ ಸಾಂಸ್ಕೃತಿಕ ಸಂಘಟನೆ’ ಕಲಾವಿದರಿಂದ ಪ್ರದರ್ಶನಗೊಂಡಿತು.

ದೇಶದ 750 ಜಿಲ್ಲೆಗಳಲ್ಲಿ ಡಯಾಲಿಸಿಸ್ ಕೇಂದ್ರ ಸ್ಥಾಪನೆ

ಸಂಸದ ಡಾ. ಸಿ.ಎನ್. ಮಂಜುನಾಥ್ ಮಾಹಿತಿ


ಕರ್ನಾಟಕ ರಾಜ್ಯ ಯುರಾಲಜಿ ಅಸೋಸಿಯೇಷನ್‌ನ 30ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ 3 ದಿನಗಳ ಕಾರ್ಯಾಗಾರವನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಉದ್ಘಾಟಿಸಿದರು.

ಮೈಸೂರು,ನ.2(ಎಂಟಿವೈ)– ಕೇಂದ್ರ ಸರ್ಕಾರ ನ್ಯಾಷನಲ್ ಹೆಲ್ತ್ ಮಿಷನ್(ಎನ್‌ಹೆಚ್‌ಎಂ) ಅಡಿಯಲ್ಲಿ ದೇಶದ 750 ಜಿಲ್ಲೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ಸ್ಥಾಪನೆ ಮಾಡುತ್ತಿದ್ದು, ಇದರಿಂದ ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವವರಿಗೆ ಅನುಕೂಲವಾಗಲಿದೆ ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯ ಡಾ.ಸಿ.ಎನ್.ಮಂಜುನಾಥ್ ತಿಳಿಸಿದ್ದಾರೆ.

ಮೈಸೂರಿನ ಹೆಬ್ಬಾಳ್ ಬಡಾವಣೆಯಲ್ಲಿರುವ ನಾರ್ಥ್ ಅವೆನ್ಯೂ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಯುರಾಲಜಿ ಅಸೋಸಿಯೇಷನ್‌ನ 30ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ 3 ದಿನಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ, ಅವರು, ವೈದ್ಯರು ರೋಗಿಯನ್ನು ಪರೀಕ್ಷಿಸಿದ ಮೇಲೆ ತೆಗೆದುಕೊಳ್ಳುವ ನಿರ್ಧಾರಗಳು ಬಹಳ ಮುಖ್ಯವಾಗಿರುತ್ತವೆ. ರೋಗಿಯ ಕಾಯಿಲೆ ಸ್ವರೂಪಕ್ಕಿಂತ ರೋಗಿಗೆ ನೀಡುವ ಚಿಕಿತ್ಸೆಯ ಸ್ವರೂಪ ಹೆಚ್ಚಾಗಿರಬಾರದು. ಹೆಚ್ಚುತ್ತಿರುವ ವೈದ್ಯಕೀಯ ತಾಂತ್ರಿಕತೆ ಹಾಗೂ ಔಷಧ ಮಾರುಕಟ್ಟೆಯ ಮಧ್ಯೆ ಸಿಲುಕಿ ವೈದ್ಯರು ಚಿಕಿತ್ಸೆ ನೀಡಬಾರದು. ಕಿಡ್ನಿ ಶಸ್ತ್ರಚಿಕಿತ್ಸೆ ಹಾಗೂ ಕಿಡ್ನಿ ವೈಫಲ್ಯದ ಅರಿವಿನ ಬಗ್ಗೆ ಗ್ರಾಮೀಣ ಮತ್ತು ನಗರವಾಸಿಗಳಲ್ಲಿ ಹೆಚ್ಚಿನ ವ್ಯತ್ಯಾಸ ಕಂಡು ಬರುತ್ತಿದ್ದು, ಸರ್ಕಾರ ಇದರ ಬಗ್ಗೆ ಗಮನ ಹರಿಸಬೇಕು. ಈ ಎರಡು ರೋಗ ಲಕ್ಷಣಗಳನ್ನು ಅಸಂಕ್ರಾಮಿಕ ರೋಗವೆಂದು ಘೋಷಿಸಬೇಕು ಎಂದು ಮನವಿ ಮಾಡಿದರು.

ದೇಶದಲ್ಲಿ 50 ಕೋಟಿ ಜನರನ್ನು ಸಕ್ಕರೆ ಕಾಯಿಲೆ ಮತ್ತು ರಕ್ತದೊತ್ತಡ ಪರೀಕ್ಷೆಗೆ ಒಳಪಡಿಸಲಾಗಿದ್ದು, ಅವರಲ್ಲಿ 28 ಲಕ್ಷ ರೋಗಿಗಳಿಗೆ ಡಯಾಲಿಸಿಸ್ ನಡೆಯುತ್ತಿದೆ. 3.2 ಕೋಟಿ ಡಯಾಲಿಸಿಸ್ ಸೆಷನ್‌ಗಳು ನಡೆಯುತ್ತಿವೆ. ಸಕ್ಕರೆ ಕಾಯಿಲೆ ಮತ್ತು ಅಧಿಕ ರಕ್ತದೊತ್ತಡ ಕಿಡ್ನಿ ವೈಫಲ್ಯಕ್ಕೆ ಮುಖ್ಯ ಕಾರಣವಾಗಿದ್ದು, ವೈದ್ಯರ ಸಲಹೆ ಮೇರೆಗೆ ಈ ಎರಡು ರೋಗಗಳನ್ನು ಹತೋಟಿಯಲ್ಲಿಟ್ಟುಕೊಂಡರೆ ಕಿಡ್ನಿ ವೈಫಲ್ಯವನ್ನು ತಡೆಗಟ್ಟಬಹುದು. ಆಂಜಿಯೋಗ್ರಾಂಗೆ ಒಳಪಡುವ ಶೇ.40 ರಿಂದ 50ರಷ್ಟು ರೋಗಿಗಳಿಗೆ ಹೃದಯ ಸಂಬಂಧಿ ಕಾಯಿಲೆ ಇದ್ದರೆ, ಇದರಲ್ಲಿ ಶೇ.20ರಷ್ಟು ಜನರು ಕಿಡ್ನಿ ವೈಫಲ್ಯದಿಂದ ಬಳಲುತ್ತಿರುತ್ತಾರೆ. ಶೇ.50 ರಿಂದ ಶೇ.60ರಷ್ಟು ಕಿಡ್ನಿ ವೈಫಲ್ಯವಿರುವ ರೋಗಿಗಳು ಹೃದಯ ಸಂಬಂಧಿತ ಕಾಯಿಲೆಗೆ ತುತ್ತಾಗುತ್ತಾರೆ. ಬದಲಾದ ಜೀವನ ಶೈಲಿಯಿಂದ ಕಾಯಿಲೆಗಳು ಹೆಚ್ಚಾಗುತ್ತಿರುವುದರಿಂದ ವೈದ್ಯರು ಹಾಗೂ ಎಲ್ಲಾ ಆಸ್ಪತ್ರೆಗಳು ಅಂಗಾಂಗಗಳ ದಾನಕ್ಕೆ ಪ್ರೋತ್ಸಾಹಿಸಬೇಕು. ಎಲ್ಲಾ ವೈದ್ಯಕೀಯ ಕಾಲೇಜುಗಳು ಅಂಗಕಸಿ ಕೇಂದ್ರ ಇಲ್ಲದಿದ್ದರೂ ಸಹ ಅಂಗಾಂಗ ರಟ್ರೈಮಲ್ ಯೂನಿಟ್‌ಗಳನ್ನು ಹೊಂದುವುದು ಉತ್ತಮ ಎಂದು ಅಭಿಪ್ರಾಯಪಟ್ಟರಲ್ಲದೆ, ಸರ್ಕಾರ ರಾಜ್ಯೋತ್ಸವ ಪ್ರಶಸ್ತಿ ನೀಡುವಾಗ ಹೆಚ್ಚಿನ ವೈದ್ಯರನ್ನು ಪರಿಗಣಿಸಬೇಕೆಂದು ಸಲಹೆ ನೀಡಿದರು.

ಸಮಾರಂಭದಲ್ಲಿ ಮೈಸೂರು ಮೆಡಿಕಲ್ ಕಾಲೇಜಿನ ಡೀನ್ ಹಾಗೂ ನಿರ್ದೇಶಕರಾದ ಡಾ.ಕೆ.ಆರ್. ದಾಕ್ಷಾಯಿಣಿ, ಕರ್ನಾಟಕ ರಾಜ್ಯ ಯುರಾಲಜಿ ಅಸೋಸಿಯೇಷನ್‌ನ ಅಧ್ಯಕ್ಷ ಡಾ. ಶ್ರೀಕಾಂತ್ ಮೆಹರ್‌ವಾಡೆ, ಡಾ. ರಂಗನಾಥ್ ಎಂ.ಎಸ್., ಡಾ. ಕಿರಣ್‌ಕುಮಾರ್, ಡಾ. ಸಚಿನ್ ಧಾರವಾಡಕರ್, ಡಾ. ಆರ್.ಬಿ.ನರ್ಲಿ, ಡಾ. ಚಂದ್ರಮೋಹನ್‌ರೆಡ್ಡಿ, ನೆಫ್ರೋಲಜಿ ಸಂಸ್ಥೆಯ ನಿರ್ದೇಶಕರಾದ ಡಾ. ಶಿವಲಿಂಗಯ್ಯ, ಮೈಸೂರು ನೆಫ್ರೋಲಜಿ ಸಂಸ್ಥೆಯ ಮುಖ್ಯಸ್ಥರಾದ ಡಾ. ಜೆ.ಬಿ.ನರೇಂದ್ರ, ಡಾ. ದಯಾನಂದ, ಡಾ. ಪ್ರಸಾದ್ ಹೆಚ್.ಎಲ್., ಹಿರಿಯತಜ್ಞ ವೈದ್ಯರಾದ ಡಾ. ಪ್ರಕಾಶ್‌ಪ್ರಭು, ಡಾ. ಮಾದಪ್ಪ, ಡಾ. ಅಮೃತ್‌ರಾಜ್‌ಗೌಡ ಉಪಸ್ಥಿತರಿದ್ದರು.

ಆಸ್ಟ್ರೇಲಿಯಾ ವಿರುದ್ಧ ಭಾರತಕ್ಕೆ 5 ವಿಕೆಟ್ ಗೆಲುವು

ಟಿ20 ಸರಣಿಯಲ್ಲಿ ಉಭಯ ತಂಡಗಳೂ ಸಮಬಲ



ಹೋಬಾರ್ಟ್, ನ.2(ವಿವಿಹೆಚ್)– ಇಲ್ಲಿನ ಬೆಲ್ಲೆರಿವ್ ಓವಲ್ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಟಿ20 ಸರಣಿಯ ಮೂರನೇ ಪಂದ್ಯದಲ್ಲಿ ಟೀಂ ಇಂಡಿಯಾ 5 ವಿಕೆಟ್‌ಗಳಿಂದ ಗೆದ್ದುಕೊಂಡು, ಸರಣಿಯನ್ನು 1–1 ರಿಂದ ಸಮಬಲಗೊಳಿಸಿದೆ.

ವಾಸ್ತವವಾಗಿ ಉಭಯ ತಂಡಗಳ ನಡುವಿನ ಮೊದಲ ಪಂದ್ಯ ಮಳೆಯಿಂದ ರದ್ದಾಗಿತ್ತು. ಆ ಬಳಿಕ ಮೆಲ್ಬೋರ್ನ್‌ನಲ್ಲಿ ನಡೆದ ಎರಡನೇ ಟಿ20 ಪಂದ್ಯವನ್ನು ಆತಿಥೇಯ ಆಸ್ಟ್ರೇಲಿಯಾ ಗೆದ್ದುಕೊಂಡಿತ್ತು. ಇದೀಗ ಇಂದು ನಡೆದ ಮೂರನೇ ಟಿ20 ಪಂದ್ಯವನ್ನು ಗೆದ್ದುಕೊಳ್ಳುವ ಮೂಲಕ ಸೂರ್ಯಕುಮಾರ್ ಪಡೆ ಟಿ20 ಸರಣಿಯಲ್ಲಿ ತನ್ನ ಗೆಲುವಿನ ಖಾತೆ ತೆರೆದಿದೆ.

ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ 186 ರನ್ ಕಲೆ ಹಾಕಿತು. ಈ ಗುರಿ ಬೆನ್ನಟ್ಟಿದ ಟೀಂ ಇಂಡಿಯಾ ಇನ್ನು 9 ಎಸೆತಗಳು ಬಾಕಿ ಇರುವಂತೆಯೇ 5 ವಿಕೆಟ್‌ಗಳನ್ನು ಕಳೆದುಕೊಂಡು ಗೆಲುವಿನ ನಗೆ ಬೀರಿತು.

ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ಪರ ಸ್ಫೋಟಕ ಇನ್ನಿಂಗ್ಸ್ ಆಡಿದ ಟಿಮ್ ಡೇವಿಡ್ 38 ಎಸೆತಗಳಲ್ಲಿ 74 ರನ್ ಬಾರಿಸಿದರೆ, ಮಾರ್ಕಸ್ ಸ್ಟೋಯಿನಿಸ್ ಕೂಡ 39 ಎಸೆತಗಳಲ್ಲಿ 64 ರನ್‌ಗಳ ಉಪಯುಕ್ತ ಆಟವಾಡಿದರು. ಈ ಜೋಡಿಯ ಬಲದಿಂದ ಆಸ್ಟ್ರೇಲಿಯಾ 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 186 ರನ್ ಗಳಿಸಿತು. ಭಾರತ ಪರ ಅದ್ಭುತ ಬೌಲಿಂಗ್ ಮಾಡಿದ ಅರ್ಷದೀಪ್ ಸಿಂಗ್ ತಮ್ಮ 4 ಓವರ್‌ಗಳಲ್ಲಿ 35 ರನ್ ನೀಡಿ ಪ್ರಮುಖ 3 ವಿಕೆಟ್ ಪಡೆದರು. ವರುಣ್ ಚಕ್ರವರ್ತಿ 2 ವಿಕೆಟ್ ಪಡೆದರೆ, ಶಿವಂ ದುಬೆ ಒಂದು ವಿಕೆಟ್ ಪಡೆದು ಮಿಂಚಿದರು.

187 ರನ್‌ಗಳ ಗುರಿ ಬೆನ್ನಟ್ಟಿದ ಭಾರತಕ್ಕೆ ಅಭಿಷೇಕ್ ಶರ್ಮಾ ಉತ್ತಮ ಆರಂಭ ನೀಡಿದರು. ಅವರು 25 ರನ್ ಗಳಿಸಿ ಪೆವಿಲಿಯನ್ ಸೇರಿದರು. ಶುಬ್ಮನ್ ಗಿಲ್ ಕೂಡ 15 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಾಯಕ ಸೂರ್ಯಕುಮಾರ್ ಯಾದವ್ 24 ರನ್‌ಗಳಿಗೆ ಸುಸ್ತಾದರೆ, ತಿಲಕ್ ವರ್ಮಾ ಅವರ ಆಟವು 29 ರನ್, ಅಕ್ಷರ್ ಪಟೇಲ್ ಬ್ಯಾಟಿಂಗ್ 17 ರನ್‌ಗಳಿಗೆ ಅಂತ್ಯವಾಯಿತು.

ಆದಾಗ್ಯೂ ಕೊನೆಯಲ್ಲಿ ಭರ್ಜರಿ ಬ್ಯಾಟಿಂಗ್ ಮೂಲಕ ಮ್ಯಾಚ್ ವಿನ್ನಿಂಗ್ ಇನ್ನಿಂಗ್ಸ್ ಆಡಿದ ವಾಷಿಂಗ್ಟನ್ ಸುಂದರ್ ಕೇವಲ 23 ಎಸೆತಗಳಲ್ಲಿ ಮೂರು ಬೌಂಡರಿ ಮತ್ತು ನಾಲ್ಕು ಸಿಕ್ಸರ್‌ಗಳೊಂದಿಗೆ ಅಜೇಯ 49 ರನ್ ಬಾರಿಸಿ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು. ಅವರಿಗೆ ವಿಕೆಟ್ ಕೀಪರ್ ಜಿತೇಶ್ ಶರ್ಮಾ ಕೂಡ 13 ಎಸೆತಗಳಲ್ಲಿ ಅಜೇಯ 22 ರನ್ ಬಾರಿಸಿ, ಆಸೀಸ್ ನೆಲದಲ್ಲಿ ದಾಖಲೆಯ ಗೆಲುವು ಸಾಧಿಸಿದರು. ಆಸೀಸ್ ಪರ ನಥಲ್ ಎಲಿಸ್ 3 ವಿಕೆಟ್, ಬಾರ್ಟ್ಲೆಟ್ ಮತ್ತು ಸ್ಟೋಯ್ನಿಸ್ ತಲಾ ಒಂದೊಂದು ವಿಕೆಟ್ ಪಡೆದರು. ಉತ್ತಮ ಬೌಲಿಂಗ್ ಪ್ರದರ್ಶನ ತೋರಿದ ಅರ್ಶ್‌ದೀಪ್ ಸಿಂಗ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಅಮೃತ ವಿಶ್ವವಿದ್ಯಾಪೀಠಂನಲ್ಲಿ ಕನ್ನಡ ರಾಜ್ಯೋತ್ಸವ



ಅಮೃತ ವಿಶ್ವವಿದ್ಯಾಪೀಠಂನಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಆರ್.ಜೆ.ಸುನೀಲ್ ಉದ್ಘಾಟಿಸಿದರು.

ಮೈಸೂರು,ನ.2(ಎಸ್‌ಪಿಎನ್)– ಮೈಸೂರು ಬೋಗಾದಿಯಲ್ಲಿರುವ ಅಮೃತ ವಿಶ್ವವಿದ್ಯಾಪೀಠಂನಲ್ಲಿ ಕನ್ನಡ ರಾಜ್ಯೋತ್ಸವವನ್ನು ಅದ್ಧೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಆರ್.ಜೆ.ಸುನೀಲ್ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಅನ್ಯ ಭಾಷೆಗಳನ್ನು ಕಲಿಯುವುದು ಅವಶ್ಯಕ. ಆದರೆ, ಎಷ್ಟೇ ಭಾಷೆಗಳನ್ನು ಕಲಿತರೂ, ನಾವು ಎಂದಿಗೂ ನಮ್ಮ ಮಾತೃಭಾಷೆಗೆ ಪ್ರಾಮುಖ್ಯತೆ ನೀಡಬೇಕು ಎಂದ ಅವರು ಇಂದಿನ ಯುವ ಪೀಳಿಗೆ ಕನ್ನಡದಿಂದ ದೂರವಾಗುತ್ತಿರುವ ಬಗ್ಗೆ ವಿಷಾದ ವ್ಯಕ್ತಪಡಿಸಿದರು.

ಕನ್ನಡ ಬಳಕೆಗೆ ಮನೆಯೇ ಮೊದಲ ಪಾಠಶಾಲೆಯಾಗಬೇಕು. ಅಂತೆಯೇ ಕನ್ನಡ ನಾಡು–ನುಡಿಯ ಬಗ್ಗೆ ಮಕ್ಕಳಲ್ಲಿ ಅಭಿಮಾನ ಬೆಳೆಸಲು ಶಿಕ್ಷಕರು ಹಾಗೂ ಶಾಲಾ–ಕಾಲೇಜುಗಳು ಕೈಜೋಡಿಸಬೇಕು ಎಂದು ಕರೆ ಕೊಟ್ಟರು.

ಬ್ರಹ್ಮಚಾರಿ ನಿಷ್ಕಾಮಾಮೃತ ಚೈತನ್ಯ ಮಾತನಾಡಿ, ಮಾತೃಭಾಷೆ ಕುರಿತು ನಮ್ಮಲ್ಲಿ ಪ್ರೀತಿ ಏಕೆ ಕಮ್ಮಿಯಾಗುತ್ತಿದೆ ಎಂದು ಆತ್ಮಾವಲೋಕನ ಮಾಡಿಕೊಳ್ಳಬೇಕು. ನಮ್ಮ ಸಂಸ್ಕೃತಿ, ಸಂಸ್ಕಾರ ಮತ್ತು ಮೌಲ್ಯಗಳ ಮೂಲವೇ ಮಾತೃಭಾಷೆ. ಆದ್ದರಿಂದ ಅದನ್ನು ಕೀಳಾಗಿ ಕಾಣದೇ ಅಭಿಮಾನದಿಂದ ಬಳಸಬೇಕು ಎಂದು ಕರೆ ನೀಡಿದರು.

ಕನ್ನಡ ರಾಜ್ಯೋತ್ಸವದ ಅಂಗವಾಗಿ ಕಾಲೇಜಿನ ವಿದ್ಯಾರ್ಥಿಗಳಿಂದ ಸಂಗೀತ ಹಾಗೂ ನೃತ್ಯ ಪ್ರದರ್ಶನ ನಡೆಯಿತು. ಕೆಂಪು, ಹಳದಿ ಬಣ್ಣದ ಉಡುಪುಗಳನ್ನು ತೊಟ್ಟಿದ್ದ ವಿದ್ಯಾರ್ಥಿಗಳ ಸಂಭ್ರಮ ಕಾಲೇಜು ಆವರಣದಲ್ಲಿ ಕಳೆತಂದಿತ್ತು.

ಅಮೃತ ವಿಶ್ವವಿದ್ಯಾಪೀಠಂ ಮೈಸೂರು ಕ್ಯಾಂಪಸ್‌ನ ನಿರ್ದೇಶಕ ಅನಂತಾನಂದ ಚೈತನ್ಯ, ಪ್ರಾಂಶುಪಾಲರಾದ ಪ್ರೊ. ಜಿ ರವೀಂದ್ರನಾಥ್, ಅಸೋಸಿಯೇಟ್ ಡೀನ್ ಪ್ರೊ. ಶೇಖರ್ ಬಾಬು ಹಾಗೂ ಕಾಲೇಜಿನ ಶೈಕ್ಷಣಿಕ ಸಂಯೋಜಕ ಡಾ. ರೇಖಾ ಭಟ್ ಉಪಸ್ಥಿತರಿದ್ದರು.

'ಆಯುರ್ವೇದದಿಂದ ಅಲೋಪತಿಯವರೆಗೆ' ಕೃತಿ ಬಿಡುಗಡೆ



ಡಾ.ಎಚ್.ಆರ್.ಮಣಿಕರ್ಣಿಕಾ ರಚಿತ 'ಆಯುರ್ವೇದದಿಂದ ಅಲೋಪತಿಯವರೆಗೆ' ಕೃತಿಯನ್ನು ಮೈಸೂರು ಜಿಲ್ಲಾ ಆಯುಷ್ ಅಧಿಕಾರಿ ಡಾ.ಸಿ.ರೇಣುಕಾದೇವಿ ಬಿಡುಗಡೆಗೊಳಿಸಿದರು.

ಮೈಸೂರು,ನ.2(ಎಸ್‌ಪಿಎನ್)– ಮೈಸೂರು ಜೆಎಲ್‌ಬಿ ರಸ್ತೆಯ ಐಡಿಯಲ್ ಜಾವಾ ಸಭಾಂಗಣದಲ್ಲಿ ಜಿಲ್ಲಾ ಕಸಾಪ ಹಾಗೂ ಹಿಮಾಲಯ ಪ್ರತಿಷ್ಠಾನ ಸಹಯೋಗದೊಂದಿಗೆ ಏರ್ಪಡಿಸಿದ್ದ ಹಿರಿಯ ನೇತ್ರ ತಜ್ಞೆ ಡಾ.ಹೆಚ್.ಆರ್.ಮಣಿಕರ್ಣಿಕಾ ರಚಿತ 'ಆಯುರ್ವೇದದಿಂದ ಅಲೋಪತಿಯವರೆಗೆ' ಕೃತಿಯನ್ನು ಮೈಸೂರು ಜಿಲ್ಲಾ ಆಯುಷ್ ಅಧಿಕಾರಿ ಡಾ.ಸಿ.ರೇಣುಕಾದೇವಿ ಭಾನುವಾರ ಬಿಡುಗಡೆಗೊಳಿಸಿದರು.

ಬಳಿಕ ಮಾತನಾಡಿದ ಅವರು, ಆಯುಷ್ ಇಲಾಖೆ ಎಂಬುದು ಎಷ್ಟೇ ಜನರಿಗೆ ಗೊತ್ತಿಲ್ಲ. ಮೈಸೂರು ಜಿಲ್ಲೆಯಲ್ಲೆ ಆಯುಷ್ ಇಲಾಖೆಗೆ ಸೇರಿದ 20 'ಆಯುಷ್ಮಾನ್ ಕ್ಷೇಮ ಕೇಂದ್ರ'ಗಳು ಕಾರ್ಯ ನಿರ್ವಹಿಸುತ್ತಿದೆ. ಈ ಕೇಂದ್ರದ ಮುಖಾಂತರ ಜನರಿಗೆ ಆಯುರ್ವೇದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಡಾ.ಹೆಚ್.ಆರ್.ಮಣಿಕರ್ಣಿಕಾ ರಚಿತ 'ಆಯುರ್ವೇದದಿಂದ ಅಲೋಪತಿಯವರೆಗೆ' ಪುಸ್ತಕದಲ್ಲಿ ವೈದಕೀಯ ನೀತಿ ಸಂಹಿತೆ, ಆಯುರ್ವೇದ, ಯೋಗ, ಪ್ರಾಣಾಯಾಮ, ಪ್ರಕೃತಿ ಚಿಕಿತ್ಸೆ ಭಾಗವಾಗಿ ಮಣ್ಣಿನ ಸ್ನಾನ, ನೀರಿನ ಚಿಕಿತ್ಸೆ, ಅಂಗಮರ್ದನ, ಸೂಜಿ ಚಿಕಿತ್ಸೆ, ಅಯಸ್ಕಾಂತ ಚಿಕಿತ್ಸೆ, ಬಣ್ಣ ಚಿಕಿತ್ಸೆ ಸೂರ್ಯ ಸ್ನಾನ, ನೈಸರ್ಗಿಕವಾಗಿ ರೋಗ ನಿರೋಧಕ ಶಕ್ತಿ ಹೆಚ್ಚಿಸುವ ವಿಧಾನ, ಉಪವಾಸ ಇವೆ. ಮುಂದುವರೆದು ಮನೆಮದ್ದು, ಹೋಮಿಯೋಪತಿ, ಸಿದ್ಧ ವೈದ್ಯಪದ್ಧತಿ, ಯುನಾನಿ, ನಾಟಿ ಔಷಧಿ ಸತ್ಯಾಸತ್ಯತೆ, ಮೂಢನಂಬಿಕೆಗಳು, ಅದರಿಂದಾಗುವ ದುಷ್ಪರಿಣಾಮಗಳು, ಆಯುಷ್ ಇಲಾಖೆ ಹಾಗೂ ಅಲೋಪತಿ ಶೀರ್ಷಿಕೆಯಡಿ ಆಯುರ್ವೇದ ಕುರಿತು ಲೇಖನಗಳನ್ನು ಬರೆದಿರುವುದು ಸಂತೋಷದ ಸಂಗತಿ ಎಂದರು.

ಭಾರತೀಯ ವೈದ್ಯ ಪದ್ಧತಿ ಚಿಕಿತ್ಸೆ ಕುರಿತು ಜನರಲ್ಲಿ ಹೆಚ್ಚು ಜಾಗೃತಿ ಮೂಡಿಸಬೇಕು. ರೋಗ ಬಂದಾದ ಮೇಲೆ ಚಿಕಿತ್ಸೆ ಪಡೆಯುವ ಬದಲು ರೋಗ ಬರದಂತೆ ತಡೆಯಲು ಆಯುರ್ವೇದ ಚಿಕಿತ್ಸೆ ಪಡೆದುಕೊಳ್ಳಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಈ ವೇಳೆ ಮೈಸೂರು ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ದೇವರಾಜು ಪಿ.ಚಿಕ್ಕಹಳ್ಳಿ(ದೇಚಿ), ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿಪ್ರಸನ್ನಕುಮಾರ್, ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ್ ಉಪಸ್ಥಿತರಿದ್ದರು. ಹೆಚ್.ಸಿ.ಧನಂಜಯ, ಸಿ.ಎಚ್.ವೆಂಕಟೇಶ್ ಪ್ರಾರ್ಥಿಸಿದರು. ಹಿರಿಯ ಶಿಕ್ಷಕ ಎಚ್.ಎಲ್.ಸತೀಶ್ ಸ್ವಾಗತಿಸಿದರು.

SAD DEMISE



A ONKARAPPA, B.A., B.L.

15/03/1933 to 01/11/2025

- Ex-President: The Mysore Chamber of Commerce & Industry, Mysore
- Ex-President: The Mysore Merchants Co-operative Bank Ltd., Mysore
- Ex-President: The Grain Merchants Association, Mysore
- Ex-President: Taralabalu Samagama, Mysore
- Founder: Omkar Industries, Mysore
- Founder: A.V. Kenchappa & Sons, Mysore

"Forever in our lives, your light continues to guide us"

Deeply mourned by your loving family